ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಮೇ 24 ಬುಧವಾರ 2023

ಸಂಪುಟ: 44 | ಸಂಚಿಕೆ: 38 | ಪುಟಗಳು: 10

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ: Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ/ಜಾಹೀರಾತಿಗಾಗಿ – ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹ 4

ಐದು ವರ್ಷ ಸಿದ್ದರಾಮಯ್ಯನವರೇ ಮುಖ್ಯಮಂತ್ರಿ; ಎಂ.ಬಿ.ಪಾಟೀಲ್ ಹೇಳಿಕೆಗೆ ವರಿಷ್ಠರ ವಾರ್ನಿಂಗ್...!

ಯಾರೂ ಬಾಯ್ಬಿಡಬೇಡಿ



ರಣದೀಪ್‌ಸಿಂಗ್ ಸುರ್ಜೆವಾಲ

ಬೆಂಗಳೂರು, ಮೇ 23 (ಕೆಎಂಶಿ)– ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನಡುವಿನ ಅಧಿಕಾರ ಹಂಚಿಕೆಯ ಬಗ್ಗೆ ಸಚಿವ, ಪಕ್ಷದ ಶಾಸಕರು ಸಾರ್ವಜನಿಕವಾಗಿ ಹೇಳಿಕೆ ನೀಡಕೂಡದು. ಒಂದು ವೇಳೆ ಹೇಳಿಕೆ ನೀಡಿದರೆ, ಅಂಥವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವ ಎಚ್ಚರಿಕೆಯನ್ನು ಕಾಂಗ್ರೆಸ್ ವರಿಷ್ಠರು ನೀಡಿದ್ದಾರೆ.

ಸಚಿವ ಎಂ.ಬಿ.ಪಾಟೀಲ್ ಮೈಸೂರಿನಲ್ಲಿ ಸಿದ್ದರಾಮಯ್ಯ ಅವರೇ ಮುಂದಿನ ಐದು ವರ್ಷಗಳ ಕಾಲ ಮುಖ್ಯಮಂತ್ರಿಯಾಗಿ ಕಾರ್ಯ ನಿರ್ವಹಿಸಲಿದ್ದಾರೆ ಎಂದು ನೀಡಿರುವ ಹೇಳಿಕೆ ಪಕ್ಷ ಮತ್ತು ಸರ್ಕಾರದಲ್ಲಿ ಭಾರೀ ವಿವಾದವನ್ನೇ ಎಬ್ಬಿಸಿದೆ. ಸಚಿವರ ಹೇಳಿಕೆ ಬಗ್ಗೆ ಸ್ವತಃ ಶಿವಕುಮಾರ್ ಅವರೇ ಮುಖ್ಯಮಂತ್ರಿ ಬಳಿ, ದೆಹಲಿಯಲ್ಲಿ ನಡೆದಿರುವ ಮಾತುಕತೆಯ ಬಗ್ಗೆ ಯಾರೂ ಚಕಾರ ಎತ್ತಬಾರದು. ನಮ್ಮಿಬ್ಬರ ನಡುವೆ ಹುಳಿ ಹಿಂಡುವ ಕೆಲಸ ಆಗ ಬಾರದು. ಏನೇ ಇದ್ದರೂ ಮುಖಾಮುಖಿ ಚರ್ಚೆ ಮಾಡೋಣ. ಇಂತಹ ಹೇಳಿಕೆಗಳನ್ನು ನೀಡಬಾರದು ಎಂದು ನಿಮ್ಮವರಿಗೆ ಎಚ್ಚರಿಸಿ ಎಂದಿದ್ದಾರೆ. ಇದರ ಬೆನ್ನಲ್ಲೇ ರಾಜ್ಯ ಉಸ್ತುವಾರಿ ಹೊಣೆ ಹೊತ್ತಿರುವ ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪ್‌ಸಿಂಗ್ ಸುರ್ಜೆವಾಲ ಅವರು, ಅಧಿಕಾರ ಹಂಚಿಕೆ ಸೂತ್ರದ ಬಗ್ಗೆ ಯಾರು ಚರ್ಚಿಸದಂತೆ ಖಡಕ್ ಎಚ್ಚರಿಕೆ ನೀಡಿದ್ದಾರೆ. ನಟ ಶಿವ ರಾಜ್‌ಕುಮಾರ್ ಅವರ ಮನೆಗೆ ಭೇಟಿ ನೀಡಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಸುರ್ಜೆವಾಲ, ಯಾರು ಅನಗತ್ಯ ಹೇಳಿಕೆ ನೀಡ ಬಾರದು. ಒಳ್ಳೆಯ ಆಡಳಿತ ನಡೆಸುವುದಷ್ಟೇ ನಮ್ಮ ಆದ್ಯತೆ. ಇದರ ಕಡೆಗೆ ಗಮನ ಕೊಡಿ. ಇದರ ಹೊರತಾಗಿ ಒಬ್ಬರನ್ನೊಬ್ಬರು ಎತ್ತಿಕಟ್ಟುವ ಕೆಲಸ ಮಾಡಬೇಡಿ. ಪಕ್ಷದ ಸಚಿವರು, ಶಾಸಕರು ನೀಡುವ ಹೇಳಿಕೆಗಳನ್ನು ಎಐಸಿಸಿ ಗಮನಿಸುತ್ತದೆ. ಯಾವುದೇ ತೀರ್ಮಾನಗಳನ್ನು ಪಕ್ಷದ ಉನ್ನತ ಘಟಕವೇ ತೆಗೆದುಕೊಳ್ಳುತ್ತದೆ. ಇಂತಹ ಅಧಿಕಾರವನ್ನು ಯಾರ ಕೈಗೂ ನೀಡಿಲ್ಲ ಎಂದು ಖಾರವಾಗಿ ತಿಳಿಸಿದ್ದಾರೆ. ಎಂ.ಬಿ.ಪಾಟೀಲ್ ಹೇಳಿಕೆ ಪಕ್ಷದಲ್ಲಿ ಆಂತರಿಕವಾಗಿ ಭಾರೀ ಚರ್ಚೆಗೆ ಗ್ರಾಸವಾಗಿರುವುದಲ್ಲದೆ, ಕೆಲವರು ಬಹಿರಂಗವಾಗಿ ಅವರ ಹೇಳಿಕೆ ಟೀಕಿಸಿದ್ದಾರೆ. ಅದರಲ್ಲೂ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸಹೋದರ ಸಂಸದ ಡಿ.ಕೆ.ಸುರೇಶ್ ಅವರು, ನಾನು ಎಂ.ಬಿ.ಪಾಟೀಲ್ ಅವರಿಗೆ ತೀಕ್ಷ್ಣವಾದ ಎಚ್ಚರಿಕೆ ಕೊಡಬಲ್ಲೆ. ಆದರೆ, ಈಗ ಅದು ಬೇಡ. ಅವರ ಹೇಳಿಕೆ ಬಗ್ಗೆ ಹೆಚ್ಚಿನ ಮಾಹಿತಿ ಅಗತ್ಯವಿದ್ದರೆ, ಸುರ್ಜೆವಾಲ ಅವರನ್ನು ಕೇಳಲಿ. ಆನಂತರ ಹೇಳಿಕೆ ನೀಡಲಿ ಎಂದಿದ್ದಾರೆ. ನಿನ್ನೆ ನೀಡಿದ ಹೇಳಿಕೆಯನ್ನು ಎಂ.ಬಿ. ಪಾಟೀಲ್ ಅವರು ಇಂದೂ ಸಮರ್ಥನೆ ಮಾಡಿಕೊಂಡಿದ್ದು,

▶ 6ನೇ ಪುಟಕ್ಕೆ

ಎರಡು ವರ್ಷಗಳ ಬಳಿಕ ಡಿ.ಕೆ.ಶಿವಕುಮಾರ್ ಮುಂದಿನ 8 ವರ್ಷ ರಾಜ್ಯದ ಮುಖ್ಯಮಂತ್ರಿ

ಜ್ಯೋತಿಷಿ ಭವಿಷ್ಯ



ಬಿ.ಬಿ.ಆರಾಧ್ಯ



ಡಿ.ಕೆ.ಶಿವಕುಮಾರ್

ಬೆಂಗಳೂರು, ಮೇ 23– ಎರಡು ವರ್ಷಗಳ ಬಳಿಕ ಎಂಟು ವರ್ಷಗಳ ಕಾಲ ಡಿ.ಕೆ ಶಿವಕುಮಾರ್ ಮುಖ್ಯಮಂತ್ರಿ ಆಗಿರುತ್ತಾರೆ ಎಂದು ಜ್ಯೋತಿಷಿ ಬಿ.ಬಿ.ಆರಾಧ್ಯ ಭವಿಷ್ಯ ನುಡಿದಿದ್ದಾರೆ. ಮುಖ್ಯಮಂತ್ರಿಯಾಗಿ ಸಿದ್ದರಾಮಯ್ಯ ಅಧಿಕಾರ ವಹಿಸಿಕೊಂಡಿದ್ದರೂ, ಐದು ವರ್ಷಗಳ ಕಾಲ ಆಡಳಿತ ನಡೆಸುವುದಿಲ್ಲ. ಲೋಕಸಭಾ ಚುನಾವಣೆಯ ಬಳಿಕ ಉಪ ಮುಖ್ಯಮಂತ್ರಿಯಾಗಿರುವ ಡಿ.ಕೆ.ಶಿವಕುಮಾರ್ ಸಿಎಂ ಆಗಿ ಅಧಿಕಾರ ವಹಿಸಿಕೊಳ್ಳುತ್ತಾರೆ. ಈ ಬಗ್ಗೆ ಹೈಕಮಾಂಡ್ ವಲಯದಲ್ಲಿ ಈಗಾಗಲೇ ಮಾತುಕತೆ ನಡೆದಿದೆ ಎಂಬ ಮಾತುಗಳು ರಾಜಕೀಯ ವಲಯದಲ್ಲಿ ಹೆಚ್ಚು ಚರ್ಚೆಯಲ್ಲಿವೆ. ಇದೀಗ ಜ್ಯೋತಿಷಿಯೊಬ್ಬರು ಭವಿಷ್ಯ ನುಡಿದಿದ್ದು, ಡಿ.ಕೆ.ಶಿವಕುಮಾರ್ ಸಿಎಂ ಆಗಲಿದ್ದಾರೆ ಎಂದು ಹೇಳಿದ್ದಾರೆ. ಡಿಸಿಎಂ ಆಗಿ ಸದ್ಯ ಅಧಿಕಾರ ವಹಿಸಿಕೊಂಡಿರುವ ಡಿಕೆಶಿ ಅವರಿಗೆ ನಿಯೋಜನೆಯಾಗಿರುವ ವಿಧಾನಸೌಧದ ಕೊಠಡಿ ಸಂಖ್ಯೆ 336ರಲ್ಲಿ ಮುಂದಿನ ಗುರುವಾರ ಪೂಜೆ ನೆರವೇರಲಿದೆ. ಜಾತಕ ಫಲದ ಪ್ರಕಾರ ಮುಹೂರ್ತ ನೀಡಿರುವ ಜ್ಯೋತಿಷಿ ಬಿಬಿ ಆರಾಧ್ಯ, ಅಭಿಜಿನ್ ಲಗ್ನದಲ್ಲಿ ಪೂಜೆ ನೆರವೇರಿಸಲು ಸೂಚನೆ ನೀಡಿದ್ದಾರೆ. ಸಿಎಂ ಸಿದ್ದರಾಮಯ್ಯ ಸದ್ಯ ವಾಸ್ತವ್ಯ ಹೂಡಿರುವ ಸರ್ಕಾರಿ ನಿವಾಸವನ್ನು ವಾಸ್ತವ್ಯಕ್ಕೆ ಆಯ್ಕೆ ಮಾಡಿಕೊಳ್ಳುವಂತೆ ಡಿಕೆಶಿಗೆ ಜ್ಯೋತಿಷಿ ಬಿ.ಬಿ.ಆರಾಧ್ಯ ಸಲಹೆ ನೀಡಿದ್ದಾರೆ. ಅಲ್ಲದೆ ಎರಡು ವರ್ಷಗಳ ಬಳಿಕ ರಾಜ್ಯದ ಮುಖ್ಯಮಂತ್ರಿಯಾಗಿ ಅಧಿಕಾರ ವಹಿಸಿಕೊಂಡು ಎಂಟು ವರ್ಷಗಳ ಕಾಲ ಆಡಳಿತ ನಡೆಸುತ್ತೀರಿ ಎಂದು ಹೇಳಿದ್ದಾರೆ.

ಏನು ಬೇಕಾದರೂ ಹೇಳಿಕೊಳ್ಳಲಿ..!

ಬೆಂಗಳೂರು, ಮೇ 23–ಸಿದ್ದರಾಮಯ್ಯ ಅವರೇ ಮುಂದಿನ ಐದು ವರ್ಷವೂ ಮುಖ್ಯಮಂತ್ರಿಯಾಗಿ ಮುಂದುವರೆಯಲಿದ್ದಾರೆ ಎಂಬ ಎಂ.ಬಿ. ಪಾಟೀಲ್ ಹೇಳಿಕೆಗೆ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಪ್ರತಿಕ್ರಿಯೆ ನೀಡಿದ್ದು, ಯಾರಾದರೂ ಏನು ಬೇಕಾದರೂ ಹೇಳಿಕೊಳ್ಳಲಿ. ನಾನು ಆ ಬಗ್ಗೆ ಏನೂ ಮಾತಾಡುವುದಿಲ್ಲ ಎಂದಿದ್ದಾರೆ. ಅಧಿಕಾರ ಮತ್ತಿತರ ಪಕ್ಷದ ವಿಚಾರಗಳನ್ನು ನೋಡಿಕೊಳ್ಳಲು ಎಐಸಿಸಿ ಇದೆ. ಕಾಂಗ್ರೆಸ್ ರಾಷ್ಟ್ರೀಯ ಮುಖಂಡರು ಇದ್ದಾರೆ. ರಾಜ್ಯದ ಸರ್ವತೋಮುಖ ಅಭಿವೃದ್ಧಿಗೆ ಮಾತ್ರ ನಮ್ಮ ಆದ್ಯತೆ ಎಂದರು.

ಮುಂಗಾರು ಆರಂಭವಾಗ್ತಿದೆ; ಅಗತ್ಯ ಎಲ್ಲಾ ಮುನ್ನೆಚ್ಚರಿಕಾ ಕ್ರಮ ಕೈಗೊಳ್ಳಿ

- ಇದು ಎಚ್ಚರಿಕೆ; ಎಚ್ಚೆತ್ತುಕೊಳ್ಳದಿದ್ದರೆ ಕಠಿಣ ಕ್ರಮ
- ಜಿಲ್ಲಾಧಿಕಾರಿ, ಜಿಪಂ ಸಿಇಓಗಳಿಗೆ ಸಿಎಂ ಸಿದ್ದರಾಮಯ್ಯ ತಾಕೀತು



ಬೆಂಗಳೂರು, ಮೇ 23(ಕೆಎಂಶಿ)–ರಾಜ್ಯದಲ್ಲಿ ಮುಂಗಾರು ಶುರುವಾಗುತ್ತಿದ್ದು, ರೈತರ ಬೆಳೆ ರಕ್ಷಣೆಗೆ ಮುಂಜಾಗ್ರತಾ ಕ್ರಮ ವಹಿಸಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಜಿಲ್ಲಾಧಿಕಾರಿಗಳು ಮತ್ತು ಜಿಲ್ಲಾ ಪಂಚಾಯ್ತಿ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ.

ವಿಧಾನಸೌಧದಲ್ಲಿ ನಡೆದ ಜಿಲ್ಲಾಧಿಕಾರಿಗಳು ಮತ್ತು ಜಿಲ್ಲಾ ಪಂಚಾಯ್ತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳ ವಿಡಿಯೋ ಸಂವಾದದಲ್ಲಿ ಮಾತನಾಡಿದ ಅವರು, ನಾನು ಕೇವಲ ಸೂಚನೆ ಕೊಡೋದಿಲ್ಲ. ಎಚ್ಚರಿಕೆ ಕೊಡುತ್ತಿದ್ದೇನೆ. ಸೂಚನೆಗಳನ್ನು ಪರಿಣಾಮಕಾರಿಯಾಗಿ ಜಾರಿ ಮಾಡದಿದ್ದರೆ ಕಠಿಣ ಕ್ರಮ ಎದುರಿಸಲು ಸಿದ್ಧರಾಗಿ ಎಂದು ಎಚ್ಚರಿಕೆ ನೀಡಿದರು. ರಾಜ್ಯದ ಕೆಲವು ಭಾಗದಲ್ಲಿ ಈಗಾಗಲೇ ಮಳೆ ಪ್ರಾರಂಭವಾಗಿದ್ದು, ಬಿತ್ತನೆಯೂ ಕೆಲವೆಡೆ ಶುರುವಾಗಿದೆ. ಜೂನ್‌ನಲ್ಲಿ ಮುಂಗಾರು ಪ್ರಾರಂಭವಾಗುತ್ತದೆ. ಏಪ್ರಿಲ್ ತಿಂಗಳಿನಲ್ಲಿಯೇ ಮುಂಗಾರು ಪೂರ್ವ ಮಳೆ ಪ್ರಾರಂಭವಾಗಿದೆ. ಭಾರೀ ಮಳೆ, ಗಾಳಿಯಿಂದ ಮರಗಳು ಬಿದ್ದು ಹೋಗಿವೆ. ಸಿಡಿಲು, ಆಲಿಕಲ್ಲು ಮಳೆಯಿಂದ ಪ್ರಾಣ ಕಳೆದುಕೊಂಡಿದ್ದಾರೆ. ಅನಾಹುತಗಳಾಗಿವೆ. ಇಂತಹ ಅನಾಹುತಗಳನ್ನು ತಡೆಗಟ್ಟಲು ಮುನ್ನೆಚ್ಚರಿಕೆ ತೆಗೆದುಕೊಳ್ಳಬೇಕು ಎಂದು ನಿರ್ದೇಶನ ನೀಡಿದರು. ನಿಮ್ಮ ಬಳಿ ಅನುದಾನ ಲಭ್ಯವಿದೆ. ಅಗತ್ಯವಿದ್ದರೆ ಕೇಳಬೇಕು. ಪರಿಹಾರ ಕ್ರಮ ಕೈಗೊಳ್ಳಲು ತೊಂದರೆ ಇಲ್ಲ. ಕೃಷಿ ಅಧಿಕಾರಿಗಳು ಬಿತ್ತನೆ ಚಟುವಟಿಕೆಗೆ ಅಗತ್ಯವಿರುವ ಬೀಜ, ಗೊಬ್ಬರ, ಕೀಟನಾಶಕಗಳನ್ನು ಒದಗಿಸಬೇಕು. ಹಾವೇರಿ ಗೋಲಿಬಾರ್‌ನಂತಹ ಘಟನೆ ಮರುಕಳಿಸಬಾರದು ಎಂದು ಖಡಕ್ ಸೂಚನೆ ನೀಡಿದರು.



ಮಳೆ ಬಂದು ಮರಗಳು ಬಿದ್ದುಹೋದರೆ, ಕೂಡಲೇ ತೆರವುಗೊಳಿಸಬೇಕು. ವಿದ್ಯುತ್ ಕಂಬಗಳು ಬಿದ್ದು ಹೋದರೆ, ಟ್ರಾನ್ಸ್‌ಫಾರ್ಮರ್ ಹಾಳಾಗಿದ್ದರೆ, ಸೇತುವೆಗಳು ಹಾಳಾಗಿದ್ದರೆ, ಶಾಲಾ ಕೊಠಡಿಗಳು ಶಿಥಿಲವಾಗಿದ್ದರೆ ಈಗಲೇ ಅನಾಹುತ ತಪ್ಪಿಸಲು ಅಗತ್ಯ ಕ್ರಮ ಕೈಗೊಳ್ಳಬೇಕು. ಮುನ್ನೆಚ್ಚರಿಕೆ ತೆಗೆದುಕೊಂಡರೆ ಅನಾಹುತಗಳನ್ನು ತಪ್ಪಿಸಲು ಸಾಧ್ಯವಾಗುತ್ತದೆ.

▶ 8ನೇ ಪುಟಕ್ಕೆ

ಕೇಂದ್ರ ಲೋಕಸೇವಾ ಆಯೋಗದ ಪರೀಕ್ಷಾ ಫಲಿತಾಂಶ ಪ್ರಕಟ

ಮೈಸೂರಿನ ಸೌರಭ್, ಪೂಜಾ, ಡಾ.ಭಾನುಪ್ರಕಾಶ್‌ಗೆ ರ‍್ಯಾಂಕ್



ಸೌರಭ್



ಪೂಜಾ



ಡಾ.ಭಾನುಪ್ರಕಾಶ್

ಮೈಸೂರು, ಮೇ 23(ಎಸ್‌ಬಿಡಿ)– ಕೇಂದ್ರ ಲೋಕ ಸೇವಾ ಆಯೋಗ (ಯುಪಿಎಸ್‌ಸಿ)ದ 2022ನೇ ಸಾಲಿನ ಪರೀಕ್ಷಾ ಫಲಿತಾಂಶ ಪ್ರಕಟವಾಗಿದ್ದು, ಮೈಸೂರಿನ ಮೂವರು ರ‍್ಯಾಂಕ್ ಪಡೆದು ಸಾಧನೆ ಮಾಡಿದ್ದಾರೆ. ಮೈಸೂರಿನ ವಿಜಯನಗರದ ಕೆ.ಸೌರಭ್ 260, ಕುವೆಂಪು ನಗರದ ಎಂ. ಪೂಜಾ 390 ಹಾಗೂ ಕೆ.ಆರ್. ನಗರ ತಾಲೂಕಿನ ಡಾ. ಜೆ. ಭಾನುಪ್ರಕಾಶ್ 448ನೇ ರ‍್ಯಾಂಕ್ ಪಡೆಯುವ ಮೂಲಕ ನಾಗರಿಕ ಸೇವೆಗೆ ಸಜ್ಜಾಗಿದ್ದಾರೆ.



ರಾಷ್ಟ್ರ ಮಟ್ಟದಲ್ಲಿ ಪ್ರಥಮ ರ‍್ಯಾಂಕ್ ಗಳಿಸಿರುವ ನೊಯಿಡಾದ ಇಶಿತಾ ಕಿಶೋರ್

ಐಎಫ್‌ಎಸ್ ತರಬೇತಿಯಲ್ಲೇ ಸಾಧನೆ: ಉತ್ತರ ಖಂಡದ ಡೆಹರಾಡೂನ್‌ನಲ್ಲಿ ಇಂಡಿಯನ್ ಫಾರೆಸ್ಟ್ ಸರ್ವೀಸ್(ಐಎಫ್‌ಎಸ್)

▶ 8ನೇ ಪುಟಕ್ಕೆ

ದಾವಣಗೆರೆಯ ಅವಿನಾಶ್ ರಾಜ್ಯಕ್ಕೆ ಪ್ರಥಮ; ಕರ್ನಾಟಕದಿಂದ 26 ಅಭ್ಯರ್ಥಿಗಳು ಆಯ್ಕೆ



ಬೆಂಗಳೂರು, ಮೇ 23– ಕೇಂದ್ರ ಲೋಕ ಸೇವಾ ಆಯೋಗವು (ಯುಪಿಎಸ್‌ಸಿ) 2022ನೇ ಸಾಲಿನ ನಾಗರಿಕ ಸೇವಾ ಪರೀಕ್ಷೆ ಫಲಿತಾಂಶ ಪ್ರಕಟಿಸಿದ್ದು ದಾವಣಗೆರೆಯ ಅವಿನಾಶ್ ರಾಜ್ಯಕ್ಕೆ ಪ್ರಥಮ ರ‍್ಯಾಂಕ್ ಬಂದಿದ್ದಾರೆ. ಆಯ್ಕೆಯಾಗಿರುವ ಒಟ್ಟು 933 ಅಭ್ಯರ್ಥಿಗಳ ಪೈಕಿ ಕರ್ನಾಟಕದ 26 ಅಭ್ಯರ್ಥಿಗಳಿದ್ದಾರೆ. ಮೊದಲ ಪ್ರಯತ್ನದಲ್ಲಿಯೇ ದಾವಣಗೆರೆ ಮೂಲದ ಅವಿನಾಶ್ ವಿ. 31ನೇ ರ‍್ಯಾಂಕ್ ಪಡೆದು ರಾಜ್ಯಕ್ಕೆ ಮೊದಲಿಗರಾಗಿ ಹೊರ ಹೊಮ್ಮಿದ್ದಾರೆ. ಅವಿನಾಶ್ ಬೆಂಗಳೂರಿನ ರಾಷ್ಟ್ರೀಯ ಕಾನೂನು ಕಾಲೇಜಿನ ವಿದ್ಯಾರ್ಥಿಯಾಗಿದ್ದಾರೆ. ಇನ್ನುಳಿದಂತೆ ವಿಜಯಪುರ ಜಿಲ್ಲೆಯ ಮುದ್ದೇಬಿಹಾಳ ತಾಲೂಕಿನ ಸರೂರ ತಾಂಡಾದವರಾದ ಶೃತಿ ಯರಗಟ್ಟಿ 362ನೇ ರ‍್ಯಾಂಕ್, ಬಿ.ವಿ.ಶ್ರೀದೇವಿಗೆ 525ನೇ ರ‍್ಯಾಂಕ್, ಆದಿನಾಥ್ ಪದ್ಮಣ್ಣಗೆ 566ನೇ ರ‍್ಯಾಂಕ್, ಐಎನ್ ಮೇಘನಾ 617ನೇ ರ‍್ಯಾಂಕ್ ಪಡೆದಿದ್ದಾರೆ.

ಪೊಲೀಸ್ ಅಧಿಕಾರಿಗಳಿಗೆ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತರಾಟೆ

ರಾಜ್ಯದಲ್ಲಿ ಪೊಲೀಸ್ ಇಲಾಖೆ ಕೇಸರೀಕರಣ ಮಾಡಲು ಅವಕಾಶ ನೀಡಲ್ಲ

- ಮಂಗಳೂರು, ವಿಜಯಪುರ, ಬಾಗಲಕೋಟೆಯಲ್ಲಿ ಕೇಸರಿ ಹಾಕಿಕೊಂಡು ಇಲಾಖೆಗೆ ಅವಮಾನ
- ಪಿಎಸ್‌ಐ ನೇಮಕಾತಿಯಲ್ಲಿ ಎಡಿಜಿಪಿಯಿಂದ ಓಎಂಆರ್ ಪೇಪರ್ ತಿದ್ದಿ ಭ್ರಷ್ಟಾಚಾರ
- ನಮ್ಮ ಸರ್ಕಾರದಲ್ಲಿ ಎಲ್ಲವೂ ಕ್ಲೀನ್ ಆಗಬೇಕು; ಜನರಿಗೆ ಪ್ರಾಮಾಣಿಕವಾಗಿ ಸೇವೆ ಸಲ್ಲಿಸಿ



ಬೆಂಗಳೂರು, ಮೇ 23(ಕೆಎಂಶಿ)–ರಾಜ್ಯದಲ್ಲಿ ಪೊಲೀಸ್ ಇಲಾಖೆಯನ್ನು ಕೇಸರಿಕರಣ ಮಾಡಲು ಹೊರಟಿದ್ದೀರಾ ನೀವು? ನಮ್ಮ ಸರ್ಕಾರದಲ್ಲಿ ಇದಕ್ಕೆ ಅವಕಾಶ ಕೊಡೊಲ್ಲ ಎಂದು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಪೊಲೀಸ್ ಅಧಿಕಾರಿಗಳನ್ನು ತರಾಟೆ ತೆಗೆದುಕೊಂಡರು

ಉನ್ನತ ಮಟ್ಟದ ಪೊಲೀಸ್ ಅಧಿಕಾರಿಗಳ ಸಭೆಯಲ್ಲಿ ಮಾತನಾಡಿದ ಅವರು, ಮಂಗಳೂರು, ವಿಜಯಪುರ, ಬಾಗಲಕೋಟದಲ್ಲಿ ನೀವು ಹೇಗೆ ಕೇಸರಿ ಬಟ್ಟೆ ಹಾಕೊಂಡು ಇಲಾಖೆಗೆ ಅವಮಾನ ಮಾಡಿದ್ದೀರಾ ಅಂತಾ ಗೊತ್ತಿದೆ. ಈ ಸಭೆಗೂ ಕೇಸರಿ ಶಾಲು ಹಾಕಿಕೊಂಡು ಬರಬೇಕಾಗಿತ್ತು ಎಂದು ಖಾರವಾಗಿ ಪ್ರಶ್ನಿಸಿದ್ದಾರೆ. ದೇಶದ ಬಗ್ಗೆ ಗೌರವ ಇದ್ದರೆ ರಾಷ್ಟ್ರಧ್ವಜ ಹಾಕಿಕೊಂಡು ಕೆಲಸ ಮಾಡಬೇಕಿತ್ತು. ನಮ್ಮ ಸರ್ಕಾರದಲ್ಲಿ ಪೊಲೀಸ್ ಇಲಾಖೆಯನ್ನು ಕೇಸರಿಕರಣ ಮಾಡಲು ನಾವು

▶ 6ನೇ ಪುಟಕ್ಕೆ

ರಾಷ್ಟ್ರೀಯ ಸ್ಪೋರ್ಟ್ಸ್ ಡ್ಯಾನ್ಸ್ ಚಾಂಪಿಯನ್‌ಶಿಪ್ ಸಿಗ್ನೇಚರ್ ಡ್ಯಾನ್ಸ್ ಕಂಪನಿಗೆ 9 ಚಿನ್ನದ ಪದಕ



ಮೈಸೂರು, ಮೇ 23– ಸ್ಪೋರ್ಟ್ಸ್ ಡ್ಯಾನ್ಸ್ ಫೆಡರೇಶನ್ ಆಫ್ ಇಂಡಿಯಾ ವತಿಯಿಂದ ಆಂಧ್ರ ಪ್ರದೇಶದ ವಿಶಾಖಪಟ್ಟಣದ ಮಿರಾಕಲ್ ಕಾಲೇಜ್ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ 8ನೇ ರಾಷ್ಟ್ರೀಯ ಸ್ಪೋರ್ಟ್ಸ್ ಡ್ಯಾನ್ಸ್ ಚಾಂಪಿಯನ್‌ಶಿಪ್‌ನಲ್ಲಿ ಕರ್ನಾಟಕ ರಾಜ್ಯ ತಂಡವನ್ನು ಪ್ರತಿನಿಧಿಸಿದ ಮೈಸೂರಿನ ಸಿಗ್ನೇಚರ್ ಡ್ಯಾನ್ಸ್ ಕಂಪನಿ 9 ಚಿನ್ನದ ಪದಕ, 3 ಬೆಳ್ಳಿ ಪದಕ, ಒಂದು ಕಂಚಿನ ಪದಕ ಸೇರಿದಂತೆ ಒಟ್ಟಾರೆ 13 ಪದಕಗಳನ್ನು ಪಡೆದು ರಾಜ್ಯಕ್ಕೆ ಕೀರ್ತಿ ತಂದಿದ್ದಾರೆ.

ಶಾಸ್ತ್ರೀಯ, ಜಾನಪದ, ಪಾಶ್ಚಾತ್ಯ, ಹಿಪ್ ಹಾಪ್ ವಿಭಾಗಗಳಲ್ಲಿ ಭಾಗವಹಿಸಿದ ಸಿಗ್ನೇಚರ್ ತಂಡದ ಹರ್ಷಿತ್‌ಕುಮಾರ್, ಶಶಾಂಕ್, ಎನ್.ಚರಿತ್, ಧೀರಜ್ ತಲಾ ಎರಡು ಚಿನ್ನದ ಪದಕ ಪಡೆದರು. ಸನಿಹ ಶೆಟ್ಟಿ 1 ಚಿನ್ನ, 2 ಬೆಳ್ಳಿ ಪದಕ ಪಡೆದರು. ಉಳಿದಂತೆ ಚಂದನ, ಅಂಕಿತ್ ಗಿರೀಶ್, ಪ್ರತಿ ವೈಯಕ್ತಿಕ ವಿಭಾಗದಲ್ಲಿ ಚಿನ್ನದ ಪದಕ ಗಳಿಸಿದರೆ, ನಿಶ್ಚಲ್ ರಾಮಚಂದ್ರ, ವಿನಿಶಾ ಜೈನ್, ಕುಶಾಲ್‌ಕುಮಾರ್, ಮಾನ್ಯ ಪೊನ್ನಮ್ಮ, ಅಭಿಶೇಕ್‌ಗೌಡ, ಡಿಂಪಲ್, ಪೂರ್ವ್ ಡೋಬೇಕರ್, ಯಶಿಕ ಎಂ.ರಾಕೇಶ್, ಅಪೂರ್ವ ಡಿ.ಐ, ನಿಹಾರಿಕ ಬಿ ತಂಡ ವಿಭಾಗದಲ್ಲಿ ಚಿನ್ನದ ಪದಕ ಪಡೆದರು.

ಪಂದ್ಯಾವಳಿಯಲ್ಲಿ ಕರ್ನಾಟಕ ಸಮಗ್ರ ಚಾಂಪಿಯನ್‌ಶಿಪ್ ಪ್ರಶಸ್ತಿ ಪಡೆಯಿತು. ಮಹಾರಾಷ್ಟ್ರ ದ್ವಿತೀಯ ಹಾಗೂ ಪಶ್ಚಿಮ ಬಂಗಾಳ ತೃತೀಯ ಸ್ಥಾನ ಪಡೆಯಿತು. ಸಿಗ್ನೇಚರ್ ಡ್ಯಾನ್ಸ್ ಕಂಪನಿ ತಂಡಕ್ಕೆ ಡ್ಯಾನ್ಸ್ ಕರ್ನಾಟಕ ಡ್ಯಾನ್ಸ್ ಶೋ ವಿಜೇತ ರಾಹುಲ್ ರಾವ್ ತರಬೇತಿ ನೀಡಿದರು. ಸಹ ತರಬೇತುದಾರ ಪೃಥ್ವಿ ನಾಯಕ್ ಹಾಗೂ ಲೋಕೇಶ್ ಉರ್ಬೈಲ್ ತಂಡದ ಉಸ್ತುವಾರಿ ವಹಿಸಿದ್ದರು.

ಚುನಾವಣಾಪೂರ್ವ ಭರವಸೆ ಈಡೇರಿಸುವ ಘೋಷಣೆ ಹಿನ್ನೆಲೆ

ನುಡಿದಂತೆ ನಡೆದ ಕಾಂಗ್ರೆಸ್ ಸರ್ಕಾರ

ಮೈಸೂರು, ಮೇ 23–ಕರ್ನಾಟಕ ರಾಜ್ಯದಲ್ಲಿ ಸ್ಪಷ್ಟ ಬಹುಮತದೊಂದಿಗೆ ಅಧಿಕಾರಕ್ಕೆ ಬಂದಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನೇತೃತ್ವದ ಕಾಂಗ್ರೆಸ್ ಸರ್ಕಾರ ಚುನಾವಣಾ ಪ್ರಣಾಳಿಕೆಯಲ್ಲಿ ನೀಡಿರುವ 5 ಗ್ಯಾರಂಟಿಗಳನ್ನು ಈಡೇರಿಸುವ ಮೂಲಕ ನುಡಿದಂತೆ ನಡೆದಿದೆ ಎಂದು ಮಹಿಳಾ ಕಾಂಗ್ರೆಸ್ ರಾಜ್ಯ ಪ್ರಧಾನ ಕಾರ್ಯದರ್ಶಿ ರೇಖಾ ಶ್ರೀನಿವಾಸ್ ಹೇಳಿದರು.



ರೇಖಾ ಶ್ರೀನಿವಾಸ್

ಮಾಧ್ಯಮ ಹೇಳಿಕೆ ನೀಡಿರುವ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅಮರು ಕರ್ನಾಟಕ ರಾಜ್ಯದ ಜನತೆಗೆ ಚುನಾವಣಾಪೂರ್ವ ನೀಡಿದ್ದ 5 ಗ್ಯಾರಂಟಿಗಳನ್ನು ಸಚಿವ ಸಂಪುಟದ ಪ್ರಥಮ ಸಭೆಯಲ್ಲಿಯೇ ಅದಕ್ಕೆ ಅನುಮೋದನೆ ನೀಡುವ ಮೂಲಕ ನುಡಿದಂತೆ ನಡೆದ ಸರ್ಕಾರ ಎಂಬ ಕೀರ್ತಿಗೆ ಪಾತ್ರರಾಗಿದ್ದಾರೆ ಎಂದಿದ್ದಾರೆ.

ರಾಜ್ಯದಲ್ಲಿ ಗೃಹ ಜ್ಯೋತಿ ಯೋಜನೆ ಮೂಲಕ ಪ್ರತಿ ಮನೆಗೂ ಬೆಳಕು ಕಲ್ಪಿಸುವ ಉದ್ದೇಶದಿಂದ ಪ್ರತಿ ಮನೆಗೆ 200 ಯೂನಿಟ್ ವಿದ್ಯುತ್ ನೀಡಲು ಸಂಪುಟ ಸಭೆಯಲ್ಲಿ ಅನುಮೋದನೆ ನೀಡಲಾಗಿದೆ. ಅದೇ ರೀತಿ ಮಹಿಳೆಯರಿಗೆ ಸರ್ಕಾರಿ ಸಾರಿಗೆ ಬಸ್ಸುಗಳಲ್ಲಿ ಉಚಿತ ಪ್ರಯಾಣ ಸೌಲಭ್ಯ ಒದಗಿಸಲು ಸಹ ತೀರ್ಮಾನಿಸಲಾಗಿದೆ. ಹಾಗೆಯೇ ಕರ್ನಾಟಕ ರಾಜ್ಯವನ್ನು ಹಸಿವು ಮುಕ್ತ ಮಾಡುವ ಸಂಕಲ್ಪ ದೊಂದಿಗೆ ಈಗಾಗಲೇ ಜಾರಿಯಲ್ಲಿರುವ ಅನ್ನಭಾಗ್ಯ ಯೋಜನೆಯಡಿ ಪ್ರತಿ ವ್ಯಕ್ತಿಗೆ 10 ಕೆಜಿ ಅಕ್ಕಿ ನೀಡಲು ಅನುಮೋದನೆ ನೀಡಲಾಗಿದೆ. ನಿರುದ್ಯೋಗಿ ಯುವ ಜನರಿಗೆ ಸಹಾಯ ಹಸ್ತ ನೀಡುವ ಸಲುವಾಗಿ ಯುವನಿಧಿ ಯೋಜನೆಯಡಿ ಪದವೀಧರ ನಿರುದ್ಯೋಗಿಗಳಿಗೆ ಮಾಸಿಕ 3 ಸಾವಿರ ಹಾಗೂ ಡಿಪ್ಲೊಮಾ ಪದವೀಧರ ನಿರುದ್ಯೋಗಿಗಳಿಗೆ 2 ವರ್ಷದವರೆಗೆ 1500 ರೂಗಳ ನಿರುದ್ಯೋಗಿ ಭತ್ಯವನ್ನು ನೀಡಲು ಅನುಮೋದನೆ ಕಲ್ಪಿಸುವ ಜೊತೆಗೆ ಕುಟುಂಬ ನಿರ್ವಹಣೆಗೆ ಆರ್ಥಿಕ ಬೆಂಬಲ ನೀಡಲು ಗೃಹ ಲಕ್ಷ್ಮೀ ಯೋಜನೆಯಡಿ ಮನೆಯ ಯಜಮಾನಿಗೆ ಪ್ರತಿ ತಿಂಗಳು 2 ಸಾವಿರ ಸಹಾಯ ಧನ ನೀಡಲು ಅನುಮೋದನೆ ನೀಡಿ ಐತಿಹಾಸಿಕ ನಿರ್ಧಾರವನ್ನು ತೆಗೆದು ಕೊಂಡಿದ್ದಾರೆ ಎಂದು ರೇಖಾ ಶ್ಲಾಘಿಸಿದ್ದಾರೆ.

ಎಂಟು ಲಕ್ಷ ಮೊತ್ತದ 2000 ರೂ. ನೋಟುಗಳನ್ನು ಹುಂಡಿಗೆ ಹಾಕಿದ ಭಕ್ತ!



ಶಿಮ್ಲಾ, ಮೇ 23– ಭಾರತೀಯ ರಿಸರ್ವ್ ಬ್ಯಾಂಕ್ (ಆರ್‌ಬಿಐ) 2000 ರೂ. ಮುಖಬೆಲೆಯ ನೋಟುಗಳನ್ನು ಹಿಂಪಡೆಯುವ ನಿರ್ಧಾರವನ್ನು ಮೇ 19ರಂದು ಘೋಷಿಸಿದ್ದು ಆ ನೋಟುಗಳನ್ನು ಬದಲಿಸಿಕೊಳ್ಳುವ ಪ್ರಕ್ರಿಯೆ ಮಂಗಳವಾರ ಆರಂಭಗೊಂಡಿದೆ. ಆದರೆ, ಈ ಮಧ್ಯೆ ಭಕ್ತಾದಿ ಒಬ್ಬರು ದೇವಸ್ಥಾನದ ಕಾಣಿಕೆ ಹುಂಡಿಗೆ ಬರೋಬ್ಬರಿ 8 ಲಕ್ಷ ರೂಪಾಯಿ ದೇಣಿಗೆ ಹಾಕುವ ಮೂಲಕ ಸುದ್ದಿಯಾಗಿರುವ ಘಟನೆ ಹಿಮಾಚಲಪ್ರದೇಶದ ಕಂಗ್ರಾ ಜಿಲ್ಲೆಯಲ್ಲಿ ನಡೆದಿದೆ.

8 ಲಕ್ಷ ಕಾಣಿಕೆ: ಕಂಗ್ರಾದಲ್ಲಿರುವ ಮಾ ಜ್ವಾಲಾದೇವಿ ದೇವಸ್ಥಾನದ ಕಾಣಿಕೆ ಹುಂಡಿಗೆ ವ್ಯಕ್ತಿ ಒಬ್ಬರು 2,000 ಸಾವಿರ ರೂ. ಮುಖಬೆಲೆಯ 400 ನೋಟುಗಳನ್ನು ಹಾಕಿದ್ದಾರೆ. ಅಂದರೆ 8 ಲಕ್ಷ ರೂ. ಹಣವನ್ನು ದೇವಸ್ಥಾನದ ಹುಂಡಿಗೆ ಹಾಕಿದ್ದಾರೆ.

ಈ ಕುರಿತು ಪ್ರತಿಕ್ರಿಯಿಸಿರುವ ದೇವಸ್ಥಾನದ ಆಡಳಿತ ಮಂಡಳಿ ಸದಸ್ಯ ಸುರೇಶ್ ಕುಮಾರ್ ದೇವಾಲಯಕ್ಕೆ ಭೇಟಿ ನೀಡುವ ಭಕ್ತರು ಆಗಾಗ್ಗೆ ಇಂತಹ ಕಾಣಿಕೆಗಳನ್ನು ನೀಡುತ್ತಿರುತ್ತಾರೆ. ಹುಂಡಿಯಲ್ಲಿ ದೊರೆಕಿರುವ ಹಣವನ್ನು ಸಂಪೂರ್ಣವಾಗಿ ಭಕ್ತರ ಸೌಲಭ್ಯಕ್ಕೆ ಬಳಸಲಾಗುವುದು ಎಂದು ತಿಳಿಸಿದ್ದಾರೆ.

ಜಿಲ್ಲಾ ಡಿಸಿಪಿ ನಿಪುನ್ ಜಿಂದಾಲ್ ಈ ಕುರಿತು ಮಾತನಾಡಿ, ತಮಗೆ ಯಾವುದೇ ದೂರು ದಾಖಲಾಗಿಲ್ಲ. ದೇವಾಲಯದ ಪ್ರದೇಶದ ಸುತ್ತ ಅಳವಡಿಸಿರುವ ಸಿಸಿಟಿವಿ ಕ್ಯಾಮರಾಗಳನ್ನು ಪರಿಶೀಲಿಸಿ ಅಧಿಕಾರಿಗಳಿಂದ ಮಾಹಿತಿ ಪಡೆಯಲಾಗುವುದು ಎಂದರು.

ಕಳವಾಗಿದ್ದ 8 ಲಕ್ಷ ರೂ. ಮೌಲ್ಯದ 40 ಮೊಬೈಲ್ ಫೋನ್ ಪತ್ತೆ

ಮೈಸೂರು, ಮೇ 23(ಆರ್‌ಕೆ)– ಜಿಲ್ಲೆಯ ವಿವಿಧ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಕಳುವಾಗಿದ್ದ 8 ಲಕ್ಷ ರೂ. ಮೌಲ್ಯದ 40 ಮೊಬೈಲ್ ಫೋನ್‌ಗಳನ್ನು ಜಿಲ್ಲಾ ಸೆನ್ ಠಾಣೆ ಪೊಲೀಸರು ಪತ್ತೆ ಮಾಡಿದ್ದಾರೆ.

ಮೊಬೈಲ್ ಕಳ್ಳತನ ಪ್ರಕರಣಗಳ ಪತ್ತೆಗಾಗಿ ರಚಿಸಲಾಗಿದ್ದ ಸೆನ್ ಠಾಣೆ ಸಬ್ ಇನ್ಸ್‌ಪೆಕ್ಟರ್ ಪುರುಷೋತ್ತಮ್ ನೇತೃತ್ವದ ತಂಡದ ಸಿಬ್ಬಂದಿ, ಕಳೆದ ಎರಡು ತಿಂಗಳಲ್ಲಿ ಕಳುವಾಗಿದ್ದ ವಿವಿಧ ಕಂಪನಿಯ 40 ಮೊಬೈಲ್ ಫೋನ್‌ಗಳನ್ನು ಪತ್ತೆ ಮಾಡಿ ಆರೋಪಿಯನ್ನು ಬಂಧಿಸಲಾಗಿದೆ ಎಂದು ಎಸ್ಪಿ ಸೀಮಾ ಲಾಟ್ಕರ್ ತಿಳಿಸಿದ್ದಾರೆ.

ಬೈಕ್ ಕಳ್ಳನ ಸೆರೆ: ಪಿರಿಯಾಪಟ್ಟಣ ತಾಲೂಕು, ಕಗ್ಗುಂಡಿಯ ತಂಬಾಕು ಮಂಡಳಿ ಬಳಿ ನಿಲ್ಲಿಸಿದ್ದ ಫ್ಯಾಷನ್ ಪ್ಲಸ್ ಬೈಕ್ ಕಳವು ಮಾಡಿದ್ದ ಆರೋಪಿಯನ್ನು ಬಂಧಿಸಲಾಗಿದೆ. ಆತ ಈ ಹಿಂದೆ 8 ಲಕ್ಷ ರೂ. ಮೌಲ್ಯದ 6 ಬೈಕ್‌ಗಳು ಹಾಗೂ ಒಂದು ಟ್ರಾಕ್ಟರ್ ಅನ್ನು ಕಳವು ಮಾಡಿದ್ದಾಗಿ ವಿಚಾರಣೆ ವೇಳೆ ತಿಳಿದಿದೆ ಎಂದು ಎಸ್ಪಿ ತಿಳಿಸಿದ್ದಾರೆ.



ಮೈಸೂರಿನ ಲಯನ್ಸ್ ಕ್ಲಬ್ ಆಫ್ ಮೈಸೂರು ಅಂಬಾಸಿಡರ್ ಸಂಸ್ಥೆ ವತಿಯಿಂದ ಮೇ 25ರಿಂದ 31ರವರೆಗೆ ಕಾಂಬೋಡಿಯಲ್ಲಿ ನಡೆಯುವ ಸೌತ್ ಈಸ್ಟ್ ಏಷ್ಯಾ ಅಂತಾರಾಷ್ಟ್ರೀಯ ಯುವ ಯೋಗ ಸ್ಪರ್ಧೆಯಲ್ಲಿ ಭಾಗವಹಿಸುವ ಮೈಸೂರಿನ SGS ಅಂತಾರಾಷ್ಟ್ರೀಯ ಯೋಗ ಫೌಂಡೇಶನ್‌ನ 24 ಯೋಗಪಟುಗಳಿಗೆ 10 ಸಾವಿರ ಮೌಲ್ಯದ ಯೋಗ ಮ್ಯಾಟ್‌ಗಳನ್ನು ನೀಡಿ, ಪ್ರೋತ್ಸಾಹ ನೀಡಲಾಯಿತು. ಈ ವೇಳೆ ಸಂಸ್ಥೆ ಅಧ್ಯಕ್ಷ ಲಯನ್ ಮಕಾಳ ಶಿವಕುಮಾರ್, ಖಜಾಂಚಿ ಲಯನ್ ಮಹದೇವ ಪ್ರಸಾದ್, ಕಾರ್ಯದರ್ಶಿ ವೆಂಕಟೇಶ್ ಹಾಗೂ ಯೋಗಪಟುಗಳು ಹಾಜರಿದ್ದರು.

ಮೈಸೂರು ತಾಲೂಕಿನಾದ್ಯಂತ ವಾಡಿಕೆಗಿಂತ ಹೆಚ್ಚು ಮಳೆ

ಕೃಷಿ ಚಟುವಟಿಕೆ ಬಿರುಸು, ಬಿತ್ತನೆ ಕಾರ್ಯಕ್ಕೆ ಚಾಲನೆ





ಮೈಸೂರು, ಮೇ 23(ಎಂಟಿವೈ)– ಮೈಸೂರು ತಾಲೂಕಿನಾದ್ಯಂತ ಮೇ ತಿಂಗಳಲ್ಲಿ ವಾಡಿಕೆಗಿಂತ ಶೇ.45ರಷ್ಟು ಮಳೆ ಹೆಚ್ಚಾಗಿದ್ದು, ಕೃಷಿ ಚಟುವಟಿಕೆ ಉತ್ತಮವಾಗಿ ಸಾಗಿದೆ ಎಂದು ತಾಲೂಕು ಸಹಾಯಕ ಕೃಷಿ ನಿರ್ದೇಶಕಿ ಡಾ.ಹೆಚ್.ಬಿ.ಮಧುಲತಾ ತಿಳಿಸಿದ್ದಾರೆ.

ತಾಲೂಕಿನ ವರುಣ, ಕಸಬಾ, ಜಯಪುರ ಹಾಗೂ ಇಲವಾಲ ಹೋಬಳಿಯ ಕೆಲವು ಗ್ರಾಮಗಳಲ್ಲಿ ಕೃಷಿ ಚಟುವಟಿಕೆ ಮಾಡುತ್ತಿರುವ ಹೊಲಗಳಿಗೆ ಭೇಟಿ ನೀಡಿ ಪರಿಶೀಲಿಸಿದ ಬಳಿಕ ಮಾಹಿತಿ ನೀಡಿದರು.

ತಾಲೂಕಿನಾದ್ಯಂತ ಮೇ 23ರವರೆಗೆ ಸಾಕಷ್ಟು ಮಳೆಯಾಗಿದ್ದೂ, ರೈತರು ಕೃಷಿ ಚಟುವಟಿಕೆಯಲ್ಲಿ ತಲ್ಲೀನರಾಗಿದ್ದಾರೆ. ತಾಲೂಕಿನಾದ್ಯಂತ ಬಿತ್ತನೆ ಕಾರ್ಯಗಳು ಅಚ್ಚುಕಟ್ಟಾಗಿ ನಡೆಯುತ್ತಿವೆ. ಏಪ್ರಿಲ್ ತಿಂಗಳಿನಲ್ಲಿ ವಾಡಿಕೆ ಮಳೆ 64 ಮಿಮೀ ಆಗಬೇಕಿತ್ತು. ಆದರೆ, 33.9 ಮಿ.ಮೀ ಮಾತ್ರ ಆಗಿತ್ತು. ಮೇ 23ರವರೆಗೆ ವಾಡಿಕೆ ಮಳೆ 89 ಮಿಮೀ ಆಗಬೇಕಾಗಿತ್ತು ಆದರೆ, 156 ಮಿಮೀ ಆಗಿದೆ. ಈ ತಿಂಗಳಲ್ಲಿ ಶೇ. 120ರಷ್ಟು ಮಳೆಯಾಗಿದೆ. ಇದರಿಂದ ರೈತರು ಭೂಮಿ ಸಿದ್ಧತೆ ಮಾಡಿಕೊಂಡು ಬಿತ್ತನೆ ಕಾರ್ಯಗಳಲ್ಲಿ ತೊಡಗಿದ್ದಾರೆ ಎಂದು ತಿಳಿಸಿದರು.

ಮೈಸೂರು ತಾಲೂಕಿನ ನಾಲ್ಕು ಹೋಬಳಿ ವ್ಯಾಪ್ತಿಯಲ್ಲೂ ಈ ಬಾರಿ 400 ಹೆಕ್ಟೇರ್‌ನಲ್ಲಿ ಹೈಬ್ರೀಡ್ ಜೋಳ ಬಿತ್ತನೆ ಮಾಡುವ ಗುರಿ ಹೊಂದಲಾಗಿದ್ದು, ಈಗಾಗಲೇ 250 ಹೆಕ್ಟೇರ್ ಬಿತ್ತನೆ ಮಾಡಲಾಗಿದೆ. 1050 ಹೆಕ್ಟೇರ್ ಪ್ರದೇಶದಲ್ಲಿ ಮುಸುಕಿನ ಜೋಳ ಬಿತ್ತನೆ ಮಾಡುವ ಗುರಿ ಇತ್ತು. ಈಗಾಗಲೇ 412 ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆ ಕಾರ್ಯ ಮುಗಿದಿದೆ. 600 ಹೆಕ್ಟೇರ್‌ನಲ್ಲಿ ಈಗಾಗಲೇ 82 ಹೆಕ್ಟೇರ್ ತೊಗರಿ ಬಿತ್ತನೆ ಮಾಡಲಾಗಿದೆ. 700 ಹೆಕ್ಟೇರ್ ಪ್ರದೇಶದಲ್ಲಿ 733 ಹೆಕ್ಟೇರ್‌ನಲ್ಲಿ ಉದ್ದು, 1045 ಹೆಕ್ಟೇರ್ ಪ್ರದೇಶದಲ್ಲಿ ಹೆಸರು ಕಾಳು ಬಿತ್ತನೆ ಕಾರ್ಯ ಆಗಿದೆ. 7650 ಹೆಕ್ಟೇರ್ ಪ್ರದೇಶದಲ್ಲಿ ಅಲಸಂದೆ ಬಿತ್ತನೆ ಗುರಿ ಹೊಂದಲಾಗಿತ್ತು. ಈಗಾಗಲೇ 9695 ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆಯಾಗಿದೆ. 535 ಹೆಕ್ಟೇರ್‌ನಲ್ಲಿ ಅವರೆಕಾಳು ಬಿತ್ತನೆ ಗುರಿ ಇತ್ತು. ಈಗಾಗಲೇ 222 ಹೆಕ್ಟೇರ್ ಬಿತ್ತನೆ ಕಾರ್ಯ ಮುಗಿದಿದೆ. 210 ಹೆಕ್ಟೇರ್‌ನಲ್ಲಿ ಎಳ್ಳು ಬಿತ್ತನೆ ಕಾರ್ಯ ಮುಗಿದಿದೆ. ಹತ್ತಿ 1530 ಹೆಕ್ಟೇರ್ ಬಿತ್ತನೆ ಗುರಿ ಹೊಂದಿದ್ದೂ, ಇಲ್ಲಿಯವರೆಗೆ 1147 ಹೆಕ್ಟೇರ್ ಹಾಗೂ ಹೊಸ ಕಬ್ಬು ಬಿತ್ತನೆ 1390 ಹೆಕ್ಟೇರ್ ಗುರಿ ಹೊಂದಿದ್ದೂ, ಈಗಾಗಲೇ 275 ಹೆಕ್ಟೇರ್ ಬಿತ್ತನೆಯಾಗಿದೆ ಎಂದು ಡಾ.ಹೆಚ್.ಬಿ.ಮಧುಲತಾ ವಿವರಿಸಿದರು.

ಬಿತ್ತನೆ ಬೀಜ ವಿತರಣೆ: ತಾಲೂಕಿನ ನಾಲ್ಕೂ ಹೋಬಳಿಗಳ ರೈತ ಸಂಪರ್ಕ ಕೇಂದ್ರಗಳ ಮೂಲಕ ಪ.ಜಾತಿ ಮತ್ತು ಪ.ಪಂ ವರ್ಗಗಳ ರೈತರಿಗೆ ಶೇ.75 ಹಾಗೂ ಇತರೆ ವರ್ಗಗಳ ರೈತರಿಗೆ ಶೇ.50 ಸಹಾಯಧನದಲ್ಲಿ ಗುಣಮಟ್ಟದ ಬಿತ್ತನೆ ಬೀಜಗಳಾದ ಹೆಸರು, ಉದ್ದು, ಅಲಸಂದೆ, ಮುಸುಕಿನ ಜೋಳ ಮುಂತಾದ ಬಿತ್ತನೆ ಬೀಜಗಳನ್ನು ವಿತರಣೆ ಮಾಡುತ್ತಿದೆ. ಈ ಕೇಂದ್ರಗಳಲ್ಲಿ ಬಿತ್ತನೆ ಬೀಜಗಳ ದಾಸ್ತಾನು ಇದೆ. ರೈತರು ಇದರ ಸದುಪಯೋಗ ಪಡೆದುಕೊಳ್ಳುವಂತೆ ಸಲಹೆ ನೀಡಿದ್ದಾರೆ.

ರಸಗೊಬ್ಬರ ದಾಸ್ತಾನು: ಮುಂಗಾರು ಹಂಗಾಮಿಗೆ ಮೈಸೂರು ತಾಲೂಕಿಗೆ ಅಗತ್ಯವಾದ ರಸಗೊಬ್ಬರ ದಾಸ್ತಾನು ಮಾಡಲಾಗಿದೆ. ರೈತರು ಅಗತ್ಯಕ್ಕೆ ಅನುಗುಣವಾಗಿ ರಸಗೊಬ್ಬರ ಪಡೆಯಬಹುದಾಗಿದೆ. ಮಾಸಾಂತ್ಯದಲ್ಲಿ ಪ್ರತಿ ಹೋಬಳಿ ಮಟ್ಟದಲ್ಲಿಯೂ ಕೃಷಿ ಪರಿಕರ ಮಾರಾಟಗಾರರ ಸಭೆ ಏರ್ಪಡಿಸಲಾಗಿದೆ. ಆ ಸಭೆಯಲ್ಲಿ ರೈತರಿಗೆ ಅಗತ್ಯವಾದ ಪರಿಕರಗಳ ದಾಸ್ತಾನು ಹಾಗೂ ನ್ಯಾಯಯುತವಾದ ವಿತರಣಾ ಕ್ರಮಗಳ ಬಗ್ಗೆ ಚರ್ಚಿಸಿ, ರೈತಸ್ನೇಹಿಯಾಗಿ ಕಾರ್ಯ ನಿರ್ವಹಿಸಲು ಮಾರಾಟಗಾರರಿಗೆ ಸೂಚಿಸಲಾಗುವುದು. ರೈತರೂ ಸಹ ಈ ಸಭೆಯಲ್ಲಿ ಭಾಗವಹಿಸಿ, ತಮ್ಮ ಕುಂದು ಕೊರತೆ ಹೇಳಿಕೊಳ್ಳಬಹುದು ಎಂದರು.

ಕೆವೈಸಿ ನೋಂದಣಿ ಅಭಿಯಾನ

ಪ್ರಧಾನ ಮಂತ್ರಿ ಕಿಸಾನ್ ಸಮ್ಮಾನ್ ನಿಧಿ (ಪಿ.ಎಂ.ಕಿಸಾನ್) ಯೋಜನೆಯಡಿ ನೋಂದಾಯಿಸಿಕೊಂಡಿರುವ ಎಲ್ಲಾ ರೈತ ಫಲಾನುಭವಿಗಳೂ ಕಡ್ಡಾಯವಾಗಿ ತಮ್ಮ ಆಧಾರ್ ಸಂಖ್ಯೆ ಹಾಗೂ ನೋಂದಾಯಿತ ಮೊಬೈಲ್ ಸಂಖ್ಯೆ ಮೂಲಕ ಈ ಕೆವೈಸಿ ಪ್ರಕ್ರಿಯೆಯನ್ನು ಪೂರ್ಣಗೊಳಿಸಿಕೊಳ್ಳಬೇಕು. ಇಲ್ಲದಿದ್ದರೆ ಪ್ರತಿ 4 ತಿಂಗಳಿಗೊಮ್ಮೆ ಖಾತೆಗೆ ಜಮೆಯಾಗುವ 2 ಸಾವಿರ ರೂ. ಸ್ಥಗಿತಗೊಳ್ಳುತ್ತದೆ. ಎಲ್ಲಾ ಹೋಬಳಿಯ ಕೃಷಿ ಅಧಿಕಾರಿಗಳು, ತಾಂತ್ರಿಕ ವ್ಯವಸ್ಥಾಪಕರ ತಂಡಗಳನ್ನು ರಚಿಸಿಕೊಂಡು ಪ್ರತಿ ದಿನ ಬೆಳಗ್ಗೆ 7 ಗಂಟೆಯಿಂದಲೇ ನಿಗದಿತ ಗ್ರಾಮಕ್ಕೆ ತೆರಳಿ ಕೆವೈಸಿ ಅಭಿಯಾನ ನಡೆಸುತ್ತಿದ್ದಾರೆ. ಇಲಾಖೆಯ ಅಧಿಕಾರಿಗಳು ಬಂದಾಗ ರೈತರು ಕೆವೈಸಿ ಪ್ರಕ್ರಿಯೆಯನ್ನು ಪೂರ್ಣಗೊಳಿಸಿಕೊಳ್ಳಬೇಕು. ಹೆಚ್ಚಿನ ಮಾಹಿತಿಗಾಗಿ ಹೋಬಳಿಯ ಕೃಷಿ ಅಧಿಕಾರಿಗಳು ಅಥವಾ ಸಹಾಯಕ ತಾಂತ್ರಿಕ ವ್ಯವಸ್ಥಾಪಕರನ್ನು ಸಂಪರ್ಕಿಸಲು ಡಾ.ಹೆಚ್.ಬಿ.ಮಧುಲತಾ ಸಲಹೆ ನೀಡಿದರು.

ಮಲೇರಿಯಾ ಮುಕ್ತ ಮೈಸೂರು

29, 30ರಂದು ತಜ್ಞರ ತಂಡದ ಪ್ರವಾಸ

ಮೈಸೂರು,ಮೇ 23(ಪಿಎಂ)– 'ಮೈಸೂರು' ಜಿಲ್ಲೆಯು 'ಮಲೇರಿಯಾ ಮುಕ್ತ ಜಿಲ್ಲೆ'ಯಾಗಿ ಹೊರಹೊಮ್ಮಿರುವ ಹಿನ್ನೆಲೆಯಲ್ಲಿ ಅಧಿಕೃತ ಘೋಷಣೆ ಸಂಬಂಧ ಮೌಲ್ಯಮಾಪನ ನಡೆಸಲು ತಜ್ಞರ ತಂಡದ ಜಿಲ್ಲಾ ಪ್ರವಾಸಕ್ಕೆ ಇದೇ 29 ಮತ್ತು 30ರಂದು ದಿನಾಂಕ ನಿಗದಿಯಾಗಿದೆ.

ಕೇಂದ್ರ ಮತ್ತು ರಾಜ್ಯ ಸರ್ಕಾರದ ಪ್ರತಿನಿಧಿಗಳನ್ನು ಒಳಗೊಂಡ ಒಟ್ಟು 6 ತಜ್ಞರ ತಂಡದ ಮೈಸೂರು ಜಿಲ್ಲಾ ಪ್ರವಾಸಕ್ಕೆ ಈ ಹಿಂದೆ ಮೇ 23ರಿಂದ 25ರವರೆಗೆ ತಾತ್ಕಾಲಿಕ ದಿನಾಂಕ ನಿಗದಿಯಾಗಿತ್ತು. ಇದೀಗ ಮೇ 29 ಮತ್ತು 30ರ ದಿನಾಂಕ ಅಧಿಕೃತಗೊಂಡಿದೆ. 'ಇಂಡಿಪೆಂಡೆಂಟ್ ಅಸೆಸ್‌ಮೆಂಟ್ ಕಮಿಟಿ' ಎಂದು ಕರೆಯುವ ಈ ತಜ್ಞರ ತಂಡವು ಜಿಲ್ಲೆಯಲ್ಲಿ ಮಲೇರಿಯಾ ಸ್ಥಿತಿಗತಿಗಳ ಬಗ್ಗೆ ಮೌಲ್ಯಮಾಪನ ನಡೆಸಿ, ವರದಿ ಸಿದ್ಧಪಡಿಸಿ, ಕೇಂದ್ರ ಸರ್ಕಾರಕ್ಕೆ ಸಲ್ಲಿಸಲಿದೆ.

'ಮೈಸೂರು ಮಿತ್ರ'ನೊಂದಿಗೆ ಮಾತನಾಡಿದ ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿ ಡಾ.ಎಸ್.ಚಿದಂಬರ, ಈಗ ಎರಡು ದಿನಗಳ ಜೊತೆಗೆ ಅಗತ್ಯವಿದ್ದರೆ ಮೇ 30ರ ಬಳಿಕವೂ ಮೌಲ್ಯಮಾಪನ ಪ್ರಕ್ರಿಯೆ ಮುಂದುವರೆಸುವ ಸಾಧ್ಯತೆ ಇದೆ ಎಂದರು.

'ಮಲೇರಿಯಾ ಮುಕ್ತ ಮೈಸೂರು ಜಿಲ್ಲೆ: ಅಧಿಕೃತ ಘೋಷಣೆ ಬಾಕಿ' ಶೀರ್ಷಿಕೆಯಡಿ ಮೇ 20ರಂದು 'ಮೈಸೂರು ಮಿತ್ರ'ನಲ್ಲಿ ವಿಶೇಷ ವರದಿ ಪ್ರಕಟವಾಗಿದ್ದನ್ನು ಇಲ್ಲಿ ಸ್ಮರಿಸಬಹುದು.

ರಂಗಶಿಕ್ಷಣ ತರಬೇತಿಗೆ ಅರ್ಹರಿಂದ ಅರ್ಜಿ ಆಹ್ವಾನ

ಮೈಸೂರು, ಮೇ 23– ರಂಗಾಯಣದ ವತಿಯಿಂದ 2023–24ನೇ ಸಾಲಿನ 1 ವರ್ಷದ ರಂಗಶಿಕ್ಷಣ ತರಬೇತಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿಯನ್ನು ಆಹ್ವಾನಿಸಲಾಗಿದೆ. ರಂಗತರಬೇತಿ ಕೋರ್ಸ್‌ಗೆ ಸೇರಬಯಸುವ ವಿದ್ಯಾರ್ಥಿಗಳು ರಂಗಭೂಮಿಯ ಪ್ರಾಥಮಿಕ ಅನುಭವ ಹೊಂದಿರಬೇಕು. ಕನಿಷ್ಠ ದ್ವಿತೀಯ ಪಿಯುಸಿ (10+2) ಅಥವಾ ತತ್ಸಮಾನ ಪರೀಕ್ಷೆ ತೇರ್ಗಡೆ ಹೊಂದಿರಬೇಕು. ವಯೋಮಿತಿ ಅರ್ಜಿ ಸಲ್ಲಿಸಲು ನಿಗದಿಗೊಳಿಸಿದ ಕಡೆಯ ದಿನಾಂಕಕ್ಕೆ 18 ವರ್ಷಗಳು ತುಂಬಿದ ಮತ್ತು 28 ವರ್ಷಗಳು ತುಂಬಿರದ ಅಭ್ಯರ್ಥಿಗಳಾಗಿರಬೇಕು. ಆಯ್ಕೆಯಾದ ವಿದ್ಯಾರ್ಥಿಗಳಿಗೆ ನಿಯಮಾನುಸಾರ ರಂಗಾಯಣದಿಂದಲೇ ವಸತಿ ವ್ಯವಸ್ಥೆ ಕಲ್ಪಿಸಲಾಗುವುದು ಮತ್ತು ಮಾಹೆಯಾನ 5,000 ರೂ. ವಿದ್ಯಾರ್ಥಿವೇತನ ಪಾವತಿಸಲಾಗುವುದು.

ಭಾರತೀಯ ರಂಗಶಿಕ್ಷಣ ಕೇಂದ್ರಕ್ಕೆ ಸೇರಬಯಸುವವರು http://rangayanamysore.karnataka.gov.inನಲ್ಲಿ ಅರ್ಜಿ ಡೌನ್‌ಲೋಡ್ ಮಾಡಿಕೊಂಡು ಅಥವಾ ರಂಗಾಯಣದ ಕಚೇರಿಯಲ್ಲಿ ಕೆಲಸದ ದಿನಗಳ ಕಚೇರಿ ಅವಧಿಯಲ್ಲಿ ಖುದ್ದಾಗಿ ಪಡೆದು ಅಗತ್ಯ ದಾಖಲೆಗಳೊಂದಿಗೆ ಭರ್ತಿ ಮಾಡಿದ ಅರ್ಜಿಯನ್ನು ಅರ್ಜಿ ಶುಲ್ಕ ಸಾಮಾನ್ಯ ವರ್ಗ 230 ರೂ., ಪ.ಜಾ, ಪ.ವರ್ಗ ಮತ್ತು ಪ್ರವರ್ಗ–1 ಅಭ್ಯರ್ಥಿಗಳಿಗೆ 180 ರೂ.ಗಳು (ರಂಗಕೈಪಿಡಿ ಶುಲ್ಕ 30 ರೂ., ಒಳಗೊಂಡಂತೆ) ಡಿ.ಡಿ.ಯನ್ನು ಉಪನಿರ್ದೇಶಕರು, ರಂಗಾಯಣ, ಮೈಸೂರು ಇವರ ಹೆಸರಿನಲ್ಲಿ ಪಡೆದು ರಂಗಾಯಣದ ವಿಳಾಸಕ್ಕೆ ಜೂ.5ರ ಸಂಜೆ 5.30ರೊಳಗೆ ತಲುಪುವಂತೆ ಅಂಚೆ ಮೂಲಕ ಕಳುಹಿಸಬಹುದು. ಸಂದರ್ಶನದ ದಿನಾಂಕವನ್ನು ಪತ್ರ ಮುಖೇನ ತಿಳಿಸಲಾಗುವುದು. ಮಾಹಿತಿಗೆ ದೂ.ಸಂ:0821–2512639, 9448938661, 9148827720, 8867514311.

ವಿಜ್ಞಾನ, ಖಗೋಳ ವಿದ್ಯಮಾನ ಬಗ್ಗೆ ಮಕ್ಕಳಲ್ಲಿ ಆಸಕ್ತಿ ಮೂಡಿಸಿ

ಕಾಸ್ಮೋಸ್ ಸಹ ಯೋಜನಾಧಿಕಾರಿ ಅಮೋಘವರ್ಷ ಅಭಿಮತ

ಮೈಸೂರು, ಮೇ 23(ಸಿಎನ್)– ಅಮಾವಾಸ್ಯೆ, ಹುಣ್ಣಿಮೆ, ಗ್ರಹಣಗಳ ಬಗ್ಗೆ ಜನರಿಗೆ ಬೇರೆಯೇ ಅಭಿಪ್ರಾಯವಿದೆ. ಆದರೆ ಅದು ಪ್ರಾಕೃತಿಕವಾಗಿ ನಡೆಯುವ ಒಂದು ಕ್ರಿಯೆ ಎಂಬುದನ್ನು, ಖಗೋಳ ವಿದ್ಯಮಾನಗಳ ಮೂಲಕ ಹೋಗಲಾಡಿಸಿ, ಮೌಢ್ಯ ಚರಣೆ ಬಿಟ್ಟು ವೈಜ್ಞಾನಿಕ ಮನೋಭಾವ ಮೂಡಿಸಬೇಕಿದೆ. ಬಹುಮುಖ್ಯವಾಗಿ ಮಕ್ಕಳಲ್ಲಿ ವಿಜ್ಞಾನದ ಬಗ್ಗೆ ಆಸಕ್ತಿ ಮೂಡಬೇಕು ಎಂಬ ಸದುದ್ದೇಶವಿದೆ ಎಂದು ಕಾಸ್ಮೋಸ್ ಸಹ ಯೋಜನಾಧಿಕಾರಿ ಅಮೋಘ ವರ್ಷ ತಿಳಿಸಿದರು.

ಮೈಸೂರು ವಿಶ್ವವಿದ್ಯಾನಿಲಯದ ವಿಜ್ಞಾನ ಭವನದ ಆವರಣದಲ್ಲಿ ಕಾಸ್ಮೋಸ್ ಹಾಗೂ ಭಾರತೀಯ ಆಕಾಶ ಖಭೌತ ಸಂಸ್ಥೆ, ಮೈವಿವಿ ಸಹಯೋಗದಲ್ಲಿ ಮಂಗಳವಾರ ಆಯೋಜಿಸಲಾಗಿದ್ದ ಆಕಾಶ ವೀಕ್ಷಣೆ ಚಟುವಟಿಕೆಗೂ ಮುನ್ನ ಅವರು ಮಾತನಾಡಿದರು.

ವಿಶೇಷವಾಗಿ ಮಕ್ಕಳಲ್ಲಿ ವಿಜ್ಞಾನದ ಕುರಿತು ಆಸಕ್ತಿ ಹೆಚ್ಚಿಸುವ ಕೆಲಸವನ್ನು ನಮ್ಮ ಸಂಸ್ಥೆ ಮಾಡುತ್ತಾ ಬಂದಿದೆ. ಕಳೆದ ಹಲವು ವರ್ಷಗಳಿಂದ ಸಾವಿರಾರು ವಿದ್ಯಾರ್ಥಿಗಳಿಗೆ ವಿಜ್ಞಾನದ ಕುರಿತು ವಿಷಯಗಳನ್ನು ತಿಳಿಸುತ್ತಾ ಬಂದಿದ್ದು, ವಿದ್ಯಾರ್ಥಿಗಳಿಗೆ ಆಕಾಶಕಾಯಗಳ ಕುರಿತು ಪರಿಚಯಿಸುವ ಯೋಜನೆಯಡಿಯಲ್ಲಿ ಕಾರ್ಯಕ್ರಮ ಹಮ್ಮಿಕೊಳ್ಳುತ್ತಿದ್ದೇವೆ ಎಂದರು.



ವಿಶ್ವದ ಮೊದಲ ಎಲ್‌ಇಡಿ ತಾರಾಲಯ

"ರಾಜ್ಯ ಹಾಗೂ ಕೇಂದ್ರ ಸರ್ಕಾರದ ಹಲವು ತಾರಾಲಯಗಳಿವೆ. ಜೊತೆಗೆ ರಾಜ್ಯದ ಮಂಗಳೂರಿನಲ್ಲಿ ಖಾಸಗಿ ತಾರಾಲಯ ನಡೆಸುತ್ತಿದ್ದಾರೆ. ಆದರೆ ಸರ್ಕಾರ ನಡೆಸಲಿರುವ ವಿಶ್ವದ ಮೊದಲ ಎಲ್‌ಇಡಿ ತಾರಾಲಯ ಇದಾಗಿದೆ. ಇನ್ನು ದೊಡ್ಡ ಪ್ರಯತ್ನಕ್ಕೆ ಕೈ ಹಾಕಿರುವುದರಿಂದ ಕೊಂಚ ತಡವಾಗಿದೆ. ಎಲ್‌ಇಡಿ ತಾರಾಲಯ ನಿರ್ಮಾಣ ಬಳಿಕ ನಿಮಗೆ ಸ್ಪಷ್ಟ ಚಿತ್ರಣ ಸಿಗಲಿದೆ. –ಅಮೋಘವರ್ಷ

ನಂತರ ಆಕಾಶ ವೀಕ್ಷಣೆ ಮಹತ್ವ ಹಾಗೂ ವಿಶೇಷತೆಯನ್ನು ವಿದ್ಯಾರ್ಥಿಗಳಿಗೆ ವಿವರಿಸುತ್ತಾ, ದೂರದರ್ಶಕ ಹೇಗೆ ವಿನ್ಯಾಸ ಮಾಡಲಾಗಿದೆ, ಮಾನವನ ಕಣ್ಣುಗಳಿಗಿಂತ ಎಷ್ಟು ಹೆಚ್ಚಿನ ಸಾಮರ್ಥ್ಯ ಹೊಂದಿದೆ, ಹೇಗೆ ಬಳಸಬೇಕು ಎಂಬಿತ್ಯಾದಿ ವಿಷಯಗಳ ಕುರಿತು ವಿಸ್ತೃತ ವಿವರಣೆ ನೀಡಲಾಯಿತು.

ಮಂಗಳ ಹಾಗೂ ಶುಕ್ರನ ನಡುವೆ ರೇಖಾಚಂದ್ರ ಹಾದುಹೋದ ವಿಸ್ಮಯದ ಕ್ಷಣವನ್ನು, ವಿದ್ಯಾರ್ಥಿಗಳು ದೂರದರ್ಶಕದ ಮೂಲಕ ವೀಕ್ಷಿಸಿ ಸಂತಸಪಟ್ಟರು. ಈ ಸಂದರ್ಭದಲ್ಲಿ ಕಾಸ್ಮೋಸ್ ಸಹ ಯೋಜನಾಧಿಕಾರಿ ಪುನೀತ್ ಆರ್. ಹಾಗೂ ಶಾಲಾ ವಿದ್ಯಾರ್ಥಿಗಳು, ಪೋಷಕರು ಭಾಗಿಯಾಗಿದ್ದರು.

ಮೈಸೂರಲ್ಲಿ ಎಲ್‌ಇಡಿ ತಾರಾಲಯ

ಚಾಮುಂಡಿಬೆಟ್ಟದ ತಪ್ಪಲಿನಲ್ಲಿರುವ ಮೈಸೂರು ವಿಶ್ವವಿದ್ಯಾನಿಲಯ ಜಾಗದ 3 ಎಕರೆ ಪ್ರದೇಶದಲ್ಲಿ 15 ಮೀಟರ್ ವ್ಯಾಸದ ಬೃಹತ್ ಎಲ್‌ಇಡಿ ತಾರಾಲಯ ನಿರ್ಮಾಣವಾಗಲಿದೆ. ಕೇಂದ್ರ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಅವರ ಸಂಸದೀಯ ನಿಧಿ, ಕೇಂದ್ರ ವಿಜ್ಞಾನ ತಂತ್ರಜ್ಞಾನ ಇಲಾಖೆ ಹಾಗೂ ಕೇಂದ್ರ ಅಣುಶಕ್ತಿ ಇಲಾಖೆಯಿಂದ ಧನ ಸಹಾಯವಾಗಿದ್ದು, ಮೈವಿವಿ ನೀಡಿದ 3 ಎಕರೆ ಪ್ರದೇಶದಲ್ಲಿ ತಾರಾಲಯ ತಲೆ ಎತ್ತಲಿದೆ. ಅತ್ಯಾಧುನಿಕ ತಂತ್ರಜ್ಞಾನದ 8ಕೆ ಗುಣಮಟ್ಟದ ಎಲ್‌ಇಡಿ ತಾರಾಲಯದ ಕಾಮಗಾರಿ 2024ರ ಹೊತ್ತಿಗೆ ಪೂರ್ಣವಾಗಿ ಲೋಕಾರ್ಪಣೆಗೊಳ್ಳಲಿದೆ.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

24.5.2023 ಬುಧವಾರ, ಮಳೆ ನಕ್ಷತ್ರ: ಕೃತ್ತಿಕ, 11.05.2023 ರಿಂದ 24.05.2023
ಶ್ರೀ ಶೋಭಕೃತ್ ನಾಮ ಸಂವತ್ಸರ, ಉತ್ತರಾಯಣ, ಗ್ರೀಷ್ಮ ಋತು, ಜ್ಯೇಷ್ಠ ಮಾಸ,
ಶುಕ್ಲ ಪಕ್ಷ, ತಿಥಿ: ಪಂಚಮಿ, ನಕ್ಷತ್ರ: ಪುನರ್ವಸು, ರಾಹುಕಾಲ: ಮಧ್ಯಾಹ್ನ 12ರಿಂದ 1.30ರವರೆಗೆ

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ನಮ್ಮ ನದಿಗಳು, ಲೇಖನ–ಎ.ಆರ್.ರಘುರಾಂ, ಪ್ರಸ್ತುತಿ–ಬಿ.ದಿಗ್ವಿಯ್, 6.40 ಪದಸಂಸ್ಕೃತಿ–ಕನ್ನಡ ಪದಗಳ ಬಳಕೆ–ಕಲಿಕೆಯ ವಿಶಿಷ್ಟ ಬಾನುಲಿ ಸರಣಿ ಪ್ರಸ್ತುತಿ–ಡಾ.ಟಿ.ವಿ.ವೆಂಕಟಾಚಲಶಾಸ್ತ್ರಿ, 9.00 ವೃತ್ತಿ ಮಾರ್ಗದರ್ಶನ–ಇಂಜಿನಿಯರಿಂಗ್ ಡಿಪ್ಲೋಮಾ ವಿಷಯಗಳಲ್ಲಿರುವ ಅಧ್ಯಯನ ಮತ್ತು ವೃತ್ತಿಪರ ಅವಕಾಶಗಳು ಕುರಿತು ಡಾ.ಕೆ.ಎಸ್.ಭಕ್ತವತ್ಸಲ ಅವರೊಂದಿಗೆ ಮಾತುಕತೆ, 10.00 ಹಿಂದೂಸ್ಥಾನಿ ಸಂಗೀತ–ಬ್ರಿಜ್ ನಾರಾಯಣ್–ಸರೋಡ್ ವಾದನ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ **ಮಧ್ಯಾಹ್ನ:** 12.30 ದೇವರನಾಮ, 1.20 ಭಾವಗೀತೆ, 1.30 ಸಂದೇಶ ಆಧಾರಿತ ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 3.00 ಲಯ ಸಂಭ್ರಮ "ಪಾಶ್ಚಾತ್ಯಲಯ ವಾದ್ಯಗಳ ಪರಿಚಯ" ಪ್ರಸ್ತುತಿ–ಹೆಚ್.ಎಲ್.ಶಿವಶಂಕರಸ್ವಾಮಿ, 4.00 ಮಹಿಳಾರಂಗ–ಸ್ತ್ರೀ ಚೇತನ. ಭಾಗವಹಿಸುವವರು–ಶಮಾ, 4.45 ಹಿಂದಿ ಪಾಠ–ಮಧುಬಾಲಾ ಅಗರ್‌ವಾಲ್, 5.05 ಸಂದೇಶ ಆಧಾರಿತ ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 6.50 ಕೃಷಿರಂಗ– ಕಿಸಾನ್‌ವಾಣಿ–ಕಾಡಂಚಿನಲ್ಲಿ ವಿವಿಧ ಕೃಷಿ ಮಾಡುತ್ತಿರುವ ನಂಜನಗೂಡು ತಾಲೂಕು ಮಡುವಿನಹಳ್ಳಿ ಎಂ.ಬಿ.ಬಸವರಾಜು ಅವರೊಂದಿಗೆ ಸಂದರ್ಶನ, 10.00 ಜನಪದ ಸಂಗೀತ–ಜಿ.ಗುರುರಾಜ್ ಮತ್ತು ಸಂಗಡಿಗರು, 10.30 ಸವಿನೆನಪು

■ **ಜೆಎಸ್‌ಎಸ್ ಮೈಸೂರ್ ಅರ್ಬನ್ ಹಾತ್, ಮೈಸೂರು:** ಗುಜರಾತ್ ಹ್ಯಾಂಡಿಕ್ರಾಫ್ಟ್ ಉತ್ಸವ. ಸ್ಥಳ ಅರ್ಬನ್ ಹಾತ್ ಆವರಣ, ಹೆಬ್ಬಾಳು ಕೈಗಾರಿಕ ಪ್ರದೇಶ, ರಿಂಗ್ ರೋಡ್. ಬೆಳಗ್ಗೆ 10 ರಿಂದ ರಾತ್ರಿ 8 ಗಂಟೆವರೆಗೆ.

■ **ಸರ್ಕಾರಿ ಶುಶ್ರೂಷಾ ಮಹಾವಿದ್ಯಾಲಯ:** ಪ್ರಥಮ ವರ್ಷದ ನರ್ಸಿಂಗ್ ವಿದ್ಯಾರ್ಥಿಗಳ ಪ್ರತಿಜ್ಞಾ ವಿಧಿ ಸ್ವೀಕಾರ ಕಾರ್ಯಕ್ರಮ, ಅಧ್ಯಕ್ಷತೆ: ಎಂಎಂಸಿ ಮತ್ತು ಆರ್‌ಐ ಡೀನ್ ಮತ್ತು ನಿರ್ದೇಶಕಿ ಡಾ.ಕೆ.ಆರ್. ದಾಕ್ಷಾಯಿಣಿ, ಮುಖ್ಯ ಅತಿಥಿಗಳು: ಎಂಎಂಸಿ ಮತ್ತು ಆರ್‌ಐ ಮುಖ್ಯ ಆಡಳಿತಾಧಿಕಾರಿ ಗೌರವ್ ಕುಮಾರ್ ಶೆಟ್ಟಿ, ಕೃಷ್ಣರಾಜೇಂದ್ರ ಆಸ್ಪತ್ರೆ ವೈದ್ಯಕೀಯ ಅಧೀಕ್ಷಕ ಡಾ.ಬಿ.ಎಲ್.ನಂಜುಂಡಸ್ವಾಮಿ, ಚೆಲುವಾಂಬ ಆಸ್ಪತ್ರೆ ವೈದ್ಯಕೀಯ ಅಧೀಕ್ಷಕ ಡಾ.ರಾಜೇಂದ್ರಕುಮಾರ್, ಪಿಕೆಟಿಬಿ ಮತ್ತು ಸಿಡಿ ಆಸ್ಪತ್ರೆ ವೈದ್ಯಕೀಯ ಅಧೀಕ್ಷಕ ಡಾ.ಪ್ರಶಾಂತ್, ಕೃಷ್ಣರಾಜೇಂದ್ರ ಆಸ್ಪತ್ರೆ ಸ್ಥಾನೀಯ ವೈದ್ಯಾಧಿಕಾರಿ ಡಾ.ಎಂ.ಎಸ್. ರಾಜೇಶ್‌ಕುಮಾರ್, ಸನ್ಮಾನಿತರು: ಹೊಳೆನರಸೀಪುರ ಸರ್ಕಾರಿ ಶುಶ್ರೂಷಾ ಮಹಾವಿದ್ಯಾಲಯ ನಿವೃತ್ತ ಪ್ರಾಂಶುಪಾಲರಾದ ಡಾ.ಕೆ.ಪಿ.ದಾಕ್ಷಾಯಿಣಿ, ಕೃಷ್ಣರಾಜೇಂದ್ರ ಆಸ್ಪತ್ರೆ ಸಹಾಯಕ ಆಡಳಿತಾಧಿಕಾರಿ ಕೆ.ಎಂ.ಚಂದ್ರಕಲಾ, ಸರ್ಕಾರಿ ಶುಶ್ರೂಷಾ ಶಾಲೆ ಪ್ರಾಂಶುಪಾಲ ಪಿ.ರುದ್ರಪ್ಪ, ಸ್ಥಳ: ಅಮೃತೋತ್ಸವ ಭವನ, ಜೆ.ಕೆ.ಮೈದಾನ, ಬೆಳಗ್ಗೆ 10ಕ್ಕೆ.

■ **ಗೃಹ ಶೋಭೆ:** ಟ್ರೇಡ್ ಫೇರ್. ಸ್ಥಳ: ಮಹಾರಾಜ ಕಾಲೇಜು ಮೈದಾನ. ಬೆಳಗ್ಗೆ 11ರಿಂದ ರಾತ್ರಿ 9 ರವರೆಗೆ.

■ **ಶರಣ ಸಾಹಿತ್ಯ ಪರಿಷತ್ತು, ಮೈಸೂರು ನಗರ ಘಟಕ :** ದತ್ತಿ ಕಾರ್ಯಕ್ರಮ ಮತ್ತು ಸ್ಮರಣೀಯರು ಕೃತಿ ಲೋಕಾರ್ಪಣೆ, ಸಾನ್ನಿಧ್ಯ : ಶ್ರೀ ಕುಂದೂರು ಮಠದ ಡಾ. ಶರತ್‌ಚಂದ್ರ ಸ್ವಾಮಿಗಳು, ಉದ್ಘಾಟನೆ : ಕನ್ನಡ ಪುಸ್ತಕ ಪ್ರಾಧಿಕಾರದ ಮಾಜಿ ಅಧ್ಯಕ್ಷ ಡಾ.ನಂದೀಶ ಎಸ್.ಎಂ.ಹಂಚೆ, ಸ್ಮರಣೀಯರು ಕೃತಿ ಲೋಕಾರ್ಪಣೆ: ಸಂಸ್ಕೃತ ವಿದ್ವಾಂಸ ಡಾ.ಹೆಚ್.ವಿ.ನಾಗರಾಜರಾವ್, ಉಪಸ್ಥಿತರು: ಕೃತಿಕಾರ ನಗರ್ಲೆ ಶಿವಕುಮಾರ, ಅಧ್ಯಕ್ಷತೆ: ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಮ.ಗು.ಸದಾನಂದಯ್ಯ, ಸ್ಥಳ: ಶ್ರೀ ರಾಜೇಂದ್ರ ಭವನ, ಜೆಎಸ್‌ಎಸ್ ಆಸ್ಪತ್ರೆ ಆವರಣ, ಸಂಜೆ 5ಕ್ಕೆ.

■ **ಶ್ರೀ ರಾಘವೇಂದ್ರಸ್ವಾಮಿ ಸೇವಾ ಸಮಿತಿ:** ವಿದ್ವಾನ್ ಮುಕುಂದಾಚಾರ್ಯ ಪಾಚ್ಚಾಪುರ, ಮುಂಬೈ ಅವರಿಂದ ಭಗವದ್ಗೀತೆ ಪ್ರವಚನ–9ನೇ ಅಧ್ಯಾಯ, ಸ್ಥಳ: ಶ್ರೀ ರಾಯರ ಮಠ, ಜಯಲಕ್ಷ್ಮಿಪುರಂ, ಸಂಜೆ 5ಕ್ಕೆ.

■ **ರಂಗಾಯಣ:** ಭಾರತೀಯ ರಂಗ ಶಿಕ್ಷಣ ಕೇಂದ್ರದ ಪ್ರಶಿಕ್ಷಣಾರ್ಥಿಗಳಿಂದ ಕಲವಿಂಕ ನಾಟಕ ಪ್ರದರ್ಶನ, ನಿರ್ದೇಶನ: ಎಸ್.ರಾಮನಾಥ, ಸಂಗೀತ: ಅಮಿತ್ ರೆಡ್ಡಿ, ಸುಬ್ರಹ್ಮಣ್ಯ, ಸ್ಥಳ: ಭೂಮಿಗೀತ, ಸಂಜೆ 5ಕ್ಕೆ.

■ **ಶ್ರೀ ರಾಘವೇಂದ್ರ ಸ್ವಾಮಿಗಳ ಬೃಂದಾವನ ಸನ್ನಿಧಾನ:** ಶ್ರೀ ರಾಘವೇಂದ್ರ ಸ್ವಾಮಿಗಳ 76ನೇ ಬೃಂದಾವನ ಪ್ರತಿಷ್ಠಾಪನಾ ವರ್ಧಂತ್ಯುತ್ಸವ. ಧಾರವಾಡದ ಪಂಡಿತ ಶ್ರೀ ಕಪಿಲಾಚಾರ್ಯ ಹಲಗಲಿ ಅವರಿಂದ 'ಶ್ರೀಮದ್ಭಾಗವತ' ಪ್ರವಚನ. ಸ್ಥಳ: ತತ್ವಜ್ಞಾನ ಮಂದಿರ, ಮಠದ ಆವರಣ, ಕೃಷ್ಣಮೂರ್ತಿಪುರಂ. ಸಂಜೆ 6ಕ್ಕೆ.

■ **ಶ್ರೀ ಉತ್ತರಾದಿ ಮಠ, ರೋಗಮೋಚನ ಶ್ರೀ ಧನ್ವಂತರಿ ಸನ್ನಿಧಾನ :** ವಿದ್ವಾನ್ ಮುಕುಂದಾಚಾರ್ಯ ಪಾಚ್ಚಾಪುರ, ಮುಂಬೈ ಅವರಿಂದ ಭಗವದ್ಗೀತೆ ಪ್ರವಚನ– 9ನೇ ಅಧ್ಯಾಯ, ಸ್ಥಳ: ರೋಗಮೋಚನ ಶ್ರೀ ಧನ್ವಂತರಿ ಸನ್ನಿಧಾನ, ಶ್ರೀ ಉತ್ತರಾದಿ ಮಠ, ಅಗ್ರಹಾರ, ಸಂಜೆ 6.30ಕ್ಕೆ.

ಮೈಸೂರು–ಬೆಂಗಳೂರು ದಶಪಥ ಹೆದ್ದಾರಿ ರಿಂಗ್ ರೋಡ್ ಜಂಕ್ಷನ್ ಮತ್ತಷ್ಟು ಸುವಿಶಾಲ





ಮೈಸೂರು, ಮೇ 23 (ಆರ್‌ಕೆ)–ಮೈಸೂರಿನ ಮಣಿಪಾಲ್ ಆಸ್ಪತ್ರೆ ಬಳಿ, ರಿಂಗ್ ರೋಡ್ ಸಿಗ್ನಲ್ ಲೈಟ್ ಜಂಕ್ಷನ್ ಬಳಿ ಉಂಟಾಗುತ್ತಿದ್ದ ಟ್ರಾಫಿಕ್ ಜಾಮ್ ಸಮಸ್ಯೆಗೆ ಕಡೆಗೂ ತಾತ್ಕಾಲಿಕ ಪರಿಹಾರ ಸಿಕ್ಕಿದೆ.

ಮೈಸೂರು ನಗರ ಪೊಲೀಸ್ ಆಯುಕ್ತ ಬಿ.ರಮೇಶ್, ಅಪರಾಧ ಮತ್ತು ಸಂಚಾರ ವಿಭಾಗದ ಡಿಸಿಪಿ ಎಸ್.ಜಾಹ್ನವಿ ಅವರ ನಿರ್ದೇಶನದಂತೆ ಸಂಚಾರ ವಿಭಾಗದ ಎಸಿಪಿ ಪರಶುರಾಮಪ್ಪ ಅವರು, ಎನ್.ಆರ್.ಸಂಚಾರ ಪೊಲೀಸರು ಮೈಸೂರು ಮಹಾನಗರಪಾಲಿಕೆ ನೆರವಿನಿಂದ ಮೈಸೂರು–ಬೆಂಗಳೂರು ಹೆದ್ದಾರಿಯ ರಿಂಗ್ ರೋಡ್ ಜಂಕ್ಷನ್ ಅನ್ನು ಸುಧಾರಿಸಿದ್ದಾರೆ.

ಈ ಸಿಗ್ನಲ್ ಲೈಟ್ ಸರ್ಕಲ್ ಮಧ್ಯದಲ್ಲೇ ಇದ್ದ ಕಂಬಗಳನ್ನು ಸುಮಾರು 15 ಅಡಿ ದೂರಕ್ಕೆ ಸ್ಥಳಾಂತರಿಸಿರುವುದಲ್ಲದೇ, ವೃತ್ತದಲ್ಲಿನ ನಾಲ್ಕೂ ರಸ್ತೆಗಳಲ್ಲಿನ ರಸ್ತೆ ವಿಭಜಕಗಳ ಅಗಲ ಕಡಿತಗೊಳಿಸಲಾಗಿದ್ದು, ಇದೀಗ ಸರ್ಕಲ್ ಅಗಲವಾಗಿರುವುದರಿಂದ ನಾಲ್ಕೂ ಕಡೆಯಿಂದ ಏಕಕಾಲದಲ್ಲಿ ಐದೈದು ವಾಹನಗಳು ಚಲಿಸಬಹುದಾಗಿದೆ.

ಬೆಂಗಳೂರು ಕಡೆಯಿಂದ, ರಾಯಲ್ ಇನ್ ಜಂಕ್ಷನ್‌ನಿಂದ ಮೈಸೂರು ಕಡೆಯಿಂದ ದೇವೇಗೌಡ ಸರ್ಕಲ್ ಕಡೆಯಿಂದ ಬರುವ ವಾಹನಗಳು ಗ್ರೀನ್ ಸಿಗ್ನಲ್ ಬಂದಾಗ ಮಣಿಪಾಲ್ ಆಸ್ಪತ್ರೆ ಜಂಕ್ಷನ್ ಬಳಿ ಯಾವುದೇ ಅಡೆ–ತಡೆಯಿಲ್ಲದೇ ಈಗ ಸರಾಗವಾಗಿ ಮುಂದೆ ಸಾಗಬಹುದಾಗಿದೆ.

ವೃತ್ತದಲ್ಲಿ ರಸ್ತೆ ವಿಭಜಕಗಳು ಅಗಲವಾಗಿದ್ದು, ಸಿಗ್ನಲ್ ಲೈಟ್ ಕಂಬಗಳು ಸರ್ಕಲ್ ಮಧ್ಯೆ ಇದ್ದುದರಿಂದ ಕೇವಲ ಎರಡೆರಡೇ ವಾಹನಗಳು ಸಾಗಬೇಕಿತ್ತು. ಅದರಿಂದ ಗ್ರೀನ್ ಸಿಗ್ನಲ್ ಬಂದಾಗ ಮುಂದೆ ಇದ್ದ ಕೆಲವೇ ವಾಹನಗಳು ಮುಂದೆ ಹೋಗಲು ಸಾಧ್ಯವಾಗುತ್ತಿತ್ತು.

ಇಲ್ಲೀಗ ವಾಹನ ಸಂಚಾರ ಸುಗಮ; ಎನ್.ಆರ್.ಸಂಚಾರ ಪೊಲೀಸರಿಂದ ಅತ್ಯಂತ ಶ್ಲಾಘನೀಯ ಕಾರ್ಯ

ಅದರಲ್ಲೂ ಶನಿವಾರ, ಭಾನುವಾರ, ಸರ್ಕಾರಿ ರಜಾ ದಿನಗಳು, ಹಬ್ಬ–ಹರಿದಿನ, ನಿರಂತರ ನಾಲ್ಕೈದು ದಿನ ನಿರಂತರ ರಜೆ ಬಂದಾಗ ಹಾಗೂ ಪ್ರಮುಖ ಸಮಯದಲ್ಲಿ ಮೈಸೂರು–ಬೆಂಗಳೂರು ಹೆದ್ದಾರಿ ಹಾಗೂ ಉಳಿದ ಎರಡೂ ಕಡೆ ರಿಂಗ್ ರಸ್ತೆಯಲ್ಲಿ ಸುಮಾರು 400 ಮೀಟರ್‌ಗಳವರೆಗೂ ವಾಹನಗಳು ಸಾಲಾಗಿ ನಿಂತು ಗಂಟೆಗಟ್ಟಲೆ ಟ್ರಾಫಿಕ್ ಜಾಮ್ ಆಗುತ್ತಿತ್ತು.

ಎಕ್ಸ್‌ಪ್ರೆಸ್ ವೇ ನಿರ್ಮಾಣವಾದ ನಂತರವಂತೂ ಈ ಮಾರ್ಗದಲ್ಲಿ ಅತ್ಯಧಿಕ ವಾಹನಗಳು ಸಂಚರಿಸಲಾರಂಭವಾದ ನಂತರ ಮಣಿಪಾಲ್ ಆಸ್ಪತ್ರೆ ಜಂಕ್ಷನ್‌ನಲ್ಲಿ ಟ್ರಾಫಿಕ್ ಜಾಮ್ ಕಿರಿಕಿರಿಯಿಂದ ವಾಹನ ಸವಾರರು ತೀವ್ರ ತೊಂದರೆ ಅನುಭವಿಸುತ್ತಿದ್ದರಲ್ಲದೆ, ಸಂಚಾರ ಪೊಲೀಸರೂ ಹೆಣಗಾಡಬೇಕಾಗಿತ್ತು.

ಬೆಂಗಳೂರಿನಿಂದ ಶೀಘ್ರ ಮೈಸೂರು ತಲುಪಿದರೂ, ಕಿರಿದಾಗಿದ್ದ ಮಣಿಪಾಲ್ ಆಸ್ಪತ್ರೆ ಸಿಗ್ನಲ್ ಲೈಟ್ ಜಂಕ್ಷನ್ ದಾಟಲು ಕನಿಷ್ಠ 20 ನಿಮಿಷ ಬೇಕಾಗಿತ್ತಲ್ಲದೆ, ರೆಡ್ ಸಿಗ್ನಲ್ ಬರುತ್ತದೆ ಎಂದು ನಾ ಮುಂದು–ತಾ ಮುಂದು ಎಂದು ಮುಂದೆ ಸಾಗುವ ಭರದಲ್ಲಿ ವಾಹನಗಳು ಪರಸ್ಪರ ಉಜ್ಜಿಕೊಂಡು, ಜಗಳ ಕಾಯುವ ವಾಹನ ಚಾಲಕರಿಂದ ಸರ್ಕಲ್‌ನಲ್ಲಿ ಮತ್ತಷ್ಟು ಟ್ರಾಫಿಕ್ ಜಾಮ್ ಕಿರಿಕಿರಿ ಉಂಟಾಗುತ್ತಿತ್ತು. ದಸರಾ ಮಹೋತ್ಸವ ಸಂದರ್ಭದಲ್ಲಂತೂ ಹೆಚ್ಚಿನ ಸಂಖ್ಯೆಯ ಪ್ರವಾಸಿಗರು ಬಂದು ಹೋಗುತ್ತಿದ್ದರಿಂದ ಈ ಜಂಕ್ಷನ್ ದಾಟುವುದೇ ಒಂದು ತ್ರಾಸವಾಗುತ್ತಿದ್ದುದನ್ನು ಇಲ್ಲಿ ಸ್ಮರಿಸಬಹುದಾಗಿದೆ.

ಇದೀಗ ಜಂಕ್ಷನ್ ಅಗಲವಾಗಿದ್ದು, ವಿಭಜಕಗಳ ಅಗಲ ಕಡಿಮೆ ಮಾಡಿ ಸಿಗ್ನಲ್ ಲೈಟ್ ಕಂಬಗಳನ್ನು ಬದಿಗೆ ಸರಿಸಿರುವ ಕಾರಣ ವಾಹನಗಳು ಯಾವುದೇ ತಡೆಯಿಲ್ಲದೇ ಸರಾಗವಾಗಿ ಹಾಗೂ ವೇಗವಾಗಿ ಮುಂದೆ ಸಾಗುವಂತಾಗಿದ್ದು, ಟ್ರಾಫಿಕ್ ಜಾಮ್ ಸಮಸ್ಯೆ ಬಗೆಹರಿದಂತಾಗಿದೆ.

ಮೈಸೂರು–ಬೆಂಗಳೂರು ದಶಪಥ ಎಕ್ಸ್‌ಪ್ರೆಸ್ ಕಾರಿಡಾರ್ ನಿರ್ಮಾಣ ಕಾಮಗಾರಿ ಜೊತೆಯಲ್ಲೇ ಉದ್ದೇಶಿತ ಮಣಿಪಾಲ್ ಆಸ್ಪತ್ರೆ ಬಳಿಯ ರಿಂಗ್ ರೋಡ್ ಜಂಕ್ಷನ್‌ನಲ್ಲಿ ಫ್ಲೈ ಓವರ್ ಅಥವಾ ಗ್ರೇಡ್ ಸೆಪರೇಟರ್ ನಿರ್ಮಿಸಲಾಗುತ್ತದೆ ಎಂದು ಘೋಷಿಸಿದ್ದರಿಂದ ಈವರೆಗೆ ಜಂಕ್ಷನ್‌ನಿಂದ ಉಂಟಾಗುತ್ತಿದ್ದ ಟ್ರಾಫಿಕ್ ಸಮಸ್ಯೆಯನ್ನು ಅನುಭವಿಸಬೇಕಾಯಿತು.

ದಶಪಥ ಹೆದ್ದಾರಿ ಕಾಮಗಾರಿ ಪೂರ್ಣಗೊಂಡು ಪ್ರಧಾನಿ ನರೇಂದ್ರ ಮೋದಿ ಅವರು ಉದ್ಘಾಟನೆ ಮಾಡಿದರಾದರೂ, ಫ್ಲೈ ಓವರ್ ಯೋಜನೆ ಬಗ್ಗೆ ಯಾವುದೇ ಸುಳಿವು ಸಿಗದ ಕಾರಣ, ಎನ್.ಆರ್. ಸಂಚಾರ ಠಾಣೆ ಪೊಲೀಸರೇ ಹಿರಿಯ ಅಧಿಕಾರಿಗಳ ಗಮನ ಸೆಳೆದು ಮೈಸೂರು ನಗರಪಾಲಿಕೆ ಸಹಾಯ ಪಡೆದು ಸರ್ಕಲ್ ಅನ್ನು ಅಗಲೀಕರಣಗೊಳಿಸಿರುವುದು ಶ್ಲಾಘನೀಯ. ಇದೀಗ ವಾಹನ ಚಾಲಕರು, ಸವಾರರು ನಿಟ್ಟುಸಿರು ಬಿಡುತ್ತಿದ್ದು, ಸಂಚಾರ ಪೊಲೀಸರ ಕಾರ್ಯವನ್ನು ಪ್ರಶಂಸಿಸುತ್ತಿದ್ದಾರೆ. ಸಿಗ್ನಲ್‌ಗಾಗಿ ಕಾಯುತ್ತಿದ್ದ ಅಷ್ಟೂ ವಾಹನಗಳು ರೆಡ್ ಸಿಗ್ನಲ್ ಬರುವಷ್ಟರಲ್ಲಿ ಪಾಸಾಗುತ್ತಿರುವುದರಿಂದ ಎಲ್ಲರೂ ಖುಷಿಯಾಗಿ ಸಂಚರಿಸುವಂತಾಗಿದೆ.

ಪ್ರೋತ್ಸಾಹ ಧನಕ್ಕಾಗಿ ಅರ್ಜಿ ಆಹ್ವಾನ

ಮೈಸೂರು,ಮೇ 23–2022–23ನೇ ಸಾಲಿನಲ್ಲಿ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿ ಪರೀಕ್ಷೆಯಲ್ಲಿ ಮೈಸೂರು ನಗರ ವ್ಯಾಪ್ತಿಯ ಕುರುಹಿನಶೆಟ್ಟಿ ಜನಾಂಗದ ವಿದ್ಯಾರ್ಥಿ, ವಿದ್ಯಾರ್ಥಿನಿಯರಿಗೆ ಪ್ರೋತ್ಸಾಹಧನ ನೀಡಲು ಕುರುಹಿನಶೆಟ್ಟಿ ಶ್ರೀರಾಮ ಸೇವಾ ಸಂಘ ಅರ್ಜಿ ಆಹ್ವಾನಿಸಿದೆ. ಶೇ.80ಕ್ಕಿಂತ ಹೆಚ್ಚು ಅಂಕ ಪಡೆದವರು ಮಾತ್ರ ಜೂನ್ 15ರೊಳಗೆ ಕೆ.ಆರ್.ಮೊಹಲ್ಲಾ, ಮಾಧ್ವಾಚಾರ್ಯ ರಸ್ತೆ, ಕುರುಹಿನಶೆಟ್ಟಿ ಶ್ರೀರಾಮ ಸೇವಾ ಸಂಘಕ್ಕೆ ಅರ್ಜಿ ಸಲ್ಲಿಸುವುದು. ಮಾಹಿತಿಗೆ ಮೊ.9964180018 ಸಂಪರ್ಕಿಸಿ.

ವಿದ್ಯಾರ್ಥಿನಿಲಯಕ್ಕೆ ಅರ್ಜಿ: ಬೋಗಾದಿ 2ನೇ ಹಂತ, 1ನೇ ಮೇನ್, 1ನೇ ಕ್ರಾಸ್‌ನಲ್ಲಿರುವ ಜೆಎಸ್‌ಎಸ್ ಮಕ್ಕಳ ವಿದ್ಯಾರ್ಥಿನಿಲಯಕ್ಕೆ ಅರ್ಜಿ ಆಹ್ವಾನಿಸಿದ್ದು, 5ರಿಂದ 10ನೇ ತರಗತಿವರೆಗೆ ವ್ಯಾಸಂಗ ಮಾಡುವ ವಿದ್ಯಾರ್ಥಿಗಳು ಅರ್ಜಿಯನ್ನು ಜೆಎಸ್‌ಎಸ್ ವಿದ್ಯಾಪೀಠದಲ್ಲಿ, ವಿದ್ಯಾರ್ಥಿನಿಲಯದಲ್ಲಿ ನೇರವಾಗಿ ಅಥವಾ ದೂರವಾಣಿಯಲ್ಲಿ ಸಂಪರ್ಕಿಸಿ ಇ–ಮೇಲ್ ಹಾಗೂ ವಾಟ್ಸ್ ಅಪ್ ಮೂಲಕವೂ ಪಡೆದುಕೊಳ್ಳಬಹುದು. ಹೆಚ್ಚಿನ ಮಾಹಿತಿಗೆ ಮೊ. 9741452271, 9972014655 ಸಂಪರ್ಕಿಸಬಹುದು.

ಯು.ಟಿ.ಖಾದರ್ ಸ್ಪೀಕರ್ ಖಚಿತ

ಬೆಂಗಳೂರು, ಮೇ 23(ಕೆಎಂಶಿ)–



ರಾಜ್ಯ ವಿಧಾನಸಭೆಯ ನೂತನ ಸಭಾಧ್ಯಕ್ಷರಾಗಿ ಮಾಜಿ ಸಚಿವ ಯು.ಟಿ. ಖಾದರ್ ಅವಿರೋಧವಾಗಿ ಆಯ್ಕೆಯಾಗುವುದು ಖಚಿತವಾಗಿದೆ. ಸಭಾಧ್ಯಕ್ಷ ಸ್ಥಾನಕ್ಕೆ ನಾಮಪತ್ರ ಸಲ್ಲಿಸಲು ಕಡೆಯ ದಿನವಾದ ಮಂಗಳವಾರ ಖಾದರ್ ಮಾತ್ರ ನಾಮಪತ್ರ ಸಲ್ಲಿಸಿದ್ದಾರೆ.

ಹಂಗಾಮಿ ಸ್ಪೀಕರ್ ಆರ್.ವಿ.ದೇಶಪಾಂಡೆ ಅವರು ಸಭಾಧ್ಯಕ್ಷರ ಸ್ಥಾನದ ಚುನಾವಣೆ ನಡೆಸಿಕೊಡಲಿದ್ದಾರೆ. ಖಾದರ್ ಮಾತ್ರ ಚುನಾವಣಾ ಕಣದಲ್ಲಿರುವುದರಿಂದ ಅವರ ಆಯ್ಕೆ ಖಚಿತ. ವಿಧಾನಸಭೆಯ ಇತಿಹಾಸದಲ್ಲೇ ಮುಸ್ಲಿಂ ಸಮುದಾಯದವರಿಗೆ ಇದೇ ಮೊದಲ ಬಾರಿಗೆ ಉನ್ನತ ಹುದ್ದೆ ದೊರೆಯುತ್ತಿದೆ. ಸಚಿವ ಸ್ಥಾನ ಬಯಸಿದ್ದ ಖಾದರ್, ಕಾಂಗ್ರೆಸ್ ವರಿಷ್ಠರ ಆಣತಿಯಂತೆ ಈ ಸ್ಥಾನಕ್ಕೇರಲು ನಿರ್ಧರಿಸಿದ್ದಾರೆ. ಕಾಂಗ್ರೆಸ್‌ನ ಹಿರಿಯ ಸದಸ್ಯರಾದ ಆರ್.ವಿ.ದೇಶಪಾಂಡೆ, ಹೆಚ್.ಕೆ.ಪಾಟೀಲ್, ಟಿ.ಬಿ.ಜಯಚಂದ್ರ ಸೇರಿದಂತೆ ಹಿರಿಯರಲ್ಲಿ ಒಬ್ಬರನ್ನು ಈ ಸ್ಥಾನಕ್ಕೆ ತರಲು ದೆಹಲಿ ನಾಯಕರು ಕಸರತ್ತು ನಡೆಸಿದ್ದರು. ಆದರೆ, ಯಾವುದೇ ನಾಯಕರು ಅಧ್ಯಕ್ಷ ಸ್ಥಾನ ವಹಿಸಿಕೊಳ್ಳಲು ಮುಂದಾಗದ ಹಿನ್ನೆಲೆಯಲ್ಲಿ ಎಐಸಿಸಿ ವರಿಷ್ಠರಾದ ಕೆ.ಸಿ.ವೇಣುಗೋಪಾಲ್ ಹಾಗೂ ರಣದೀಪ್‌ಸಿಂಗ್ ಸುರ್ಜೇವಾಲ ಅವರು ಖಾದರ್ ಅವರನ್ನು ಸಂಪರ್ಕಿಸಿ ಈ ಸ್ಥಾನ ವಹಿಸಿಕೊಳ್ಳುವಂತೆ ಸಲಹೆ ಮಾಡಿದರು. ವರಿಷ್ಠರ ಸಲಹೆಯಂತೆ ಖಾದರ್, ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ಜತೆಗೂಡಿ ವಿಧಾನಸಭಾ ಕಾರ್ಯದರ್ಶಿ ಅವರಿಗೆ ನಾಮಪತ್ರ ಸಲ್ಲಿಸಿದರು.

ಭಾರತದಲ್ಲಿ ಯಾವುದಕ್ಕೂ ಕೊರತೆಯಿಲ್ಲ; ಆಟೋಮೊಬೈಲ್ ಕ್ಷೇತ್ರದಲ್ಲಿ 3ನೇ ಸ್ಥಾನ



ಸಿಡ್ನಿ, ಮೇ 23– ಆರ್ಥಿಕತೆಯಲ್ಲಿ ಭಾರತ ಅಭಿವೃದ್ಧಿ ಪಥದಲ್ಲಿ ಸಾಗುತ್ತಿದೆ. ಆಟೋ ಮೊಬೈಲ್ ಕ್ಷೇತ್ರದಲ್ಲಿ ಭಾರತ ಇಡೀ ಜಗತ್ತಿನಲ್ಲಿಯೇ ಮೂರನೇ ಸ್ಥಾನದಲ್ಲಿದ್ದು, ಇಡೀ ಜಗತ್ತು ಈಗ ಭಾರತದತ್ತ ತಿರುಗಿ ನೋಡುತ್ತಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ.

ಸಿಡ್ನಿಯ ಖುಡೋಸ್ ಬ್ಯಾಂಕ್ ಅರೆನಾ ಸ್ಟೇಡಿಯಂ ತುಂಬಾ ಕಿಕ್ಕಿರಿದು ತುಂಬಿದ ಅನಿವಾಸಿ ಭಾರತೀಯರನ್ನುದ್ದೇಶಿಸಿ ಮಾತನಾಡಿದ ಪ್ರದಾನಿ ಮೋದಿ, ಭಾರತದಲ್ಲಿ ಸಾಮರ್ಥ್ಯ, ಸಂಪನ್ಮೂಲಕ್ಕೆ ಕೊರತೆ ಇಲ್ಲ, ಭಾರತ ಟ್ಯಾಲೆಂಟ್ ಫ್ಯಾಕ್ಟರಿ ಆಗಿದೆ ಎಂದರು.


ಜಾಗತಿಕ ಆರ್ಥಿಕತೆಯಲ್ಲಿ ಮುಂಚೂಣಿ ರಾಷ್ಟ್ರವೆಂದು ಐಎಂಎಫ್ ಪರಿಗಣಿಸಿದೆ. ಇಂದು ಹಲವಾರು ದೇಶಗಳಲ್ಲಿ ಬ್ಯಾಂಕಿಂಗ್ ವ್ಯವಸ್ಥೆ ತೊಂದರೆಯಲ್ಲಿದೆ ಆದರೆ ಭಾರತದ ಬ್ಯಾಂಕ್‌ಗಳ ಬಲವನ್ನು ಎಲ್ಲೆಡೆ ಪ್ರಶಂಸಿಸಲಾಗುತ್ತಿದೆ: 100 ವರ್ಷಗಳಿಗೊಮ್ಮೆ ಎದುರಾಗುವ ಆರ್ಥಿಕ ಬಿಕ್ಕಟ್ಟಿನ ಮಧ್ಯೆ ಭಾರತ ಕಳೆದ ವರ್ಷ ದಾಖಲೆಯ ರಫ್ತು ಮಾಡಿದೆ. ನಮ್ಮ ವಿದೇಶೀ ವಿನಿಮಯ ಹೊಸ ಎತ್ತರಕ್ಕೆ ಏರುತ್ತಿದೆ. ಜಾಗತಿಕ ಒಳಿತಿಗಾಗಿ ಭಾರತ ಹೇಗೆ ಕೆಲಸ ಮಾಡುತ್ತಿದೆ ಎಂಬುದಕ್ಕೆ ನಮ್ಮ ಡಿಜಿಟಲ್ ತಂತ್ರ ಜ್ಞಾನದ ಪಾಲಿದೆ. ಭಾರತದ ಫಿನ್‌ಟೆಕ್ ಕ್ರಾಂತಿಯ ಬಗ್ಗೆ ನಿಮಗೆ ಚೆನ್ನಾಗಿ ತಿಳಿದಿದೆ ಎಂದರು.

2014ರಲ್ಲಿ ಇಲ್ಲಿಗೆ ಬಂದಾಗ ಮತ್ತೆ ಬರುವುದಾಗಿ ಭರವಸೆ ನೀಡಿದ್ದೆ. ಅದರಂತೆ ಈಗ ಮತ್ತೊಮ್ಮೆ ಸಿಡ್ನಿಯಲ್ಲಿದ್ದೇನೆ. ಈ ಹಿಂದೆ, ಭಾರತ ಮತ್ತು ಆಸ್ಟ್ರೇಲಿಯಾ ಸಂಬಂಧವನ್ನು ಕಾಮನ್‌ವೆಲ್ತ್, ಕ್ರಿಕೆಟ್ ಮತ್ತು ಕರಿಗಳಿಂದ ವ್ಯಾಖ್ಯಾನಿಸಲಾಗುತಿತ್ತು. ನಂತರ 'ಪ್ರಜಾಪ್ರಭುತ್ವ ಅನಿವಾಸಿ ಭಾರತೀಯರು ಮತ್ತು ದೋಸ್ತಿಯಿಂದ ವ್ಯಾಖ್ಯಾನಿಸಲಾಗಿದೆ ಎಂದರು. ಸಂಬಂಧವು ಇಂಧನ, ಆರ್ಥಿಕತೆ ಮತ್ತು ಶಿಕ್ಷಣದ ಮೇಲೆ ಅವಲಂಬಿತವಾಗಿದ್ದರೂ ಉಭಯ ದೇಶಗಳ ಸಂಬಂಧವು ಇದನ್ನು ಮೀರಿದೆ ಅದು ಪರಸ್ಪರ ನಂಬಿಕೆ ಮತ್ತು ಪರಸ್ಪರ ಗೌರವವಾಗಿದೆ ಎಂದರು. ಇದಕ್ಕೂ ಮುನ್ನಾ ವೇದ ಮಂತ್ರಗಳ ಜಯಘೋಷದೊಂದಿಗೆ ಪ್ರಧಾನಿ ಮೋದಿ ಅವರನ್ನು ಸಾಂಪ್ರದಾಯಿಕವಾಗಿ ಸ್ವಾಗತಿಸಲಾಯಿತು.

ಮೇ 28ರಂದು ಓಟದ ಸ್ಪರ್ಧೆ

ಮೈಸೂರು, ಮೇ 23(ಸಿಎನ್)–ಜಿಲ್ಲಾ ಮಾಸ್ಟರ್ ಅಥ್ಲೆಟಿಕ್ಸ್ ಹಾಗೂ ಜಿಲ್ಲಾ ಅಥ್ಲೆಟಿಕ್ಸ್ ಅಸೋಸಿಯೇಷನ್ ಆಶ್ರಯದಲ್ಲಿ ಮೇ 28ರಂದು 'ಆರ್.ಎಂ.ಎಂ ವಿಜಯಲಕ್ಷ್ಮಿ ನಾರಾಯಣಸಿಂಗ್ ಮೆಮೋರಿಯಲ್ ರೋಡ್‌ರೇಸ್ ಆರೋಗ್ಯಕ್ಕಾಗಿ ಓಟ ಅಥ್ಲೆಟಿಕ್ ಸಂಭ್ರಮ' ಓಟದ ಸ್ಪರ್ಧೆ ಆಯೋಜಿಸಲಾಗಿದೆ. ವಿವಿಧ ವಯೋಮಿತಿಯ ಕ್ರೀಡಾಪಟುಗಳು ಪಾಲ್ಗೊಳ್ಳಲಿದ್ದು, ಪ್ರವೇಶ ಸಂಪೂರ್ಣ ಉಚಿತ. ಆಸಕ್ತರು ಆನ್‌ಲೈನ್ ಮೂಲಕ ನೋಂದಾಯಿಸಿಕೊಳ್ಳಲು ಅವಕಾಶವಿದ್ದು, ಹೆಚ್ಚಿನ ವಿವರಗಳಿಗೆ ಪಿ.ಜಿ.ಸತ್ಯನಾರಾಯಣ–9901841314 ಅಥವಾ ಶ್ರೀಕಾಂತ್–9731808008 ಅವರನ್ನು ಸಂಪರ್ಕಿಸಬಹುದು.

ಮಾಜಿ ಸ್ಪೀಕರ್ ಮನೋಹರ್ ಜೋಶಿ ಆಸ್ಪತ್ರೆಗೆ ದಾಖಲು



ಮುಂಬೈ: ಲೋಕಸಭೆ ಮಾಜಿ ಸ್ಪೀಕರ್ ಮತ್ತು ಮಹಾರಾಷ್ಟ್ರದ ಮಾಜಿ ಮುಖ್ಯಮಂತ್ರಿ ಮನೋಹರ್ ಜಿ.ಜೋಶಿ ವಯೋಸಹಜ ಆರೋಗ್ಯ ಸಮಸ್ಯೆಗಳಿಂದ ಖಾಸಗಿ ಆಸ್ಪತ್ರೆಗೆ ದಾಖಲಾಗಿದ್ದಾರೆ ಎಂದು ಪಕ್ಷದ ಮೂಲಗಳು ತಿಳಿಸಿವೆ. ಜೋಶಿ (86) ಅವರನ್ನು ಮಾಹಿಮ್‌ನ ಹಿಂದೂಜಾ ಆಸ್ಪತ್ರೆಗೆ ದಾಖಲಿಸಲಾಗಿದ್ದು, ಐಸಿಯುನಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ. ಮಾಜಿ ಸಿಎಂ ಮತ್ತು ಶಿವಸೇನೆ (ಯುಬಿಟಿ) ಅಧ್ಯಕ್ಷ ಉದ್ಧವ್ ಠಾಕ್ರೆ, ಪತ್ನಿ ರಶ್ಮಿ ಮತ್ತು ಇತರ ಕುಟುಂಬ ಸದಸ್ಯರು ಮತ್ತು ಪಕ್ಷದ ಮುಖಂಡರು ಜೋಶಿಯವರ ಆರೋಗ್ಯ ವಿಚಾರಿಸಲು ಆಸ್ಪತ್ರೆಗೆ ಧಾವಿಸಿದರು. ಜೋಶಿ 4 ವರ್ಷಗಳ ಕಾಲ ಶಿವಸೇನೆ ಮುಖ್ಯಮಂತ್ರಿಯಾಗಿದ್ದರು. ದಿವಂಗತ ಪ್ರಧಾನಿ ವಾಜಪೇಯಿ ಅವರ ಅಧಿಕಾರಾವಧಿಯಲ್ಲಿ ಲೋಕಸಭೆ ಸ್ಪೀಕರ್ ಆಗಿ (2002–2004) ಸೇವೆ ಸಲ್ಲಿಸಿದ್ದರು.

ಪಿಎಚ್.ಡಿ ಪದವಿ



ಮೈಸೂರು, ಮೇ 23–ಡಾ. ಉಮಾಕಾಂತ್ ಅವರ ಮಾರ್ಗದರ್ಶನದಲ್ಲಿ ಜಿ.ಆರ್. ಅರುಣಾ ಅವರು ರೇಷ್ಮೆ ವಿಜ್ಞಾನ ವಿಷಯದಲ್ಲಿ ಸಂಶೋಧನೆ ನಡೆಸಿ ಸಾದರಪಡಿಸಿದ ಮಹಾಪ್ರಬಂಧವನ್ನು ಮೈಸೂರು ವಿವಿ ಪಿಎಚ್.ಡಿ ಪದವಿಗೆ ಅಂಗೀಕರಿಸಿದೆ.

ಸಿಎಂ ಭೇಟಿಯಾಗಿ ಶುಭ ಹಾರೈಸಿದ ವೃಕ್ಷಮಾತೆ ಸಾಲು ಮರದ ತಿಮ್ಮಕ್ಕ



ಬೆಂಗಳೂರು: ನಾಡೋಜ ಹಾಗೂ ಪದ್ಮಶ್ರೀ ಪ್ರಶಸ್ತಿಗೆ ಭಾಜನರಾಗಿರುವ ವೃಕ್ಷಮಾತೆ ಸಾಲು ಮರದ ತಿಮ್ಮಕ್ಕ ಅವರು ಮಂಗಳವಾರ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿದರು. ಈ ಕುರಿತು ಟ್ವೀಟ್ ಮಾಡಿರುವ ಮುಖ್ಯಮಂತ್ರಿ, ನಾಡಿನಲ್ಲಿ ಮಳೆ, ಬೆಳೆ ಸಮೃದ್ಧವಾಗಲಿ. ಉತ್ತಮ ಆಡಳಿತ ನಡೆಸುವಂತಾಗಲಿ ಎಂದು ತಿಮ್ಮಕ್ಕ ಅವರು ಶುಭ ಹಾರೈಸಿದ್ದಾರೆ ಎಂದು ತಿಳಿಸಿದ್ದಾರೆ. ನಿಮ್ಮ ಆರೋಗ್ಯ ಚೆನ್ನಾಗಿ ನೋಡಿಕೊಳ್ಳಿ, ಸರ್ಕಾರ ನಿಮ್ಮ ಬಗ್ಗೆ ಕಾಳಜಿ ವಹಿಸುತ್ತದೆ ಎಂದು ಸಿದ್ದರಾಮಯ್ಯ ಅವರು ತಿಮ್ಮಕ್ಕ ಅವರಿಗೆ ತಿಳಿಸಿದ್ದಾರೆ.

ನಿಧನ



ಇವರು ದಿನಾಂಕ 23.05.2023 ಮಂಗಳವಾರ ದೈವಾಧೀನರಾಗಿದ್ದು, ತತ್ಸಂಬಂಧ ಮೃತರ ಅಂತ್ಯ ಕ್ರಿಯೆಯನ್ನು 24.05.2023 ಬುಧವಾರ ನಗರದ ಗೋಕುಲಂನಲ್ಲಿರುವ ಚಿರಶಾಂತಿ ಧಾಮದಲ್ಲಿ ಬೆಳಗ್ಗೆ 10.00 ಗಂಟೆಗೆ ನೆರವೇರಿಸಲಾಗುವುದು. ಇವರು ನಗರದ ಜಯಲಕ್ಷ್ಮಿಪುರಂನ ನಿವಾಸಿ.

ದುಃಖತಪ್ತರು: ಕುಟುಂಬವರ್ಗದವರು

ಟಿ.ಹೊನ್ನಪ್ಪ (ನಿವೃತ್ತ ರೈಲ್ವೇ ನೌಕರರು) (86 ವರ್ಷ)

ಮೈಸೂರು ಮಿತ್ರ ಓದುಗರ ಗಮನಕ್ಕೆ

ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.

–ಜಾಹೀರಾತು ವ್ಯವಸ್ಥಾಪಕರು

ನಕ್ಕರೆ ಅದೇ ಸ್ವರ್ಗ

ಮಾಸ್ಟರ್ : ಮಕ್ಕಳೇ, ಇಂದು ನಾನು ಹೇಳುವ ಪಾಠ ಬಹಳ ಮಹತ್ವದ್ದು. ಆದ್ದರಿಂದ ನೀವೆಲ್ಲರೂ ಲಕ್ಷ್ಯಕೊಟ್ಟು ಕೇಳಬೇಕು.

ವಿದ್ಯಾರ್ಥಿಯೋರ್ವ : ಸಾರ್ ನಿಮ್ಮ ಆ ಮಹತ್ವದ ಪಾಠವನ್ನು ನಾವು 'ಲಕ್ಷ' ಕೊಟ್ಟು ಕೇಳಬೇಕೆ...!?

ಮೈಸೂರು ಮಿತ್ರ
ಬುಧವಾರ, 24 ಮೇ 2023
ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)
ಸಂಪಾದಕ: ಎಂ.ಗೋವಿಂದೇಗೌಡ M.A.

ಅಮೃತವಾಹಿನಿ.........

ಮನುಷ್ಯರು ಹುಟ್ಟಿನಿಂದಲೇ ಮಹಾನ್ ವ್ಯಕ್ತಿಗಳಾಗಿರುವುದಿಲ್ಲ. ತಮ್ಮ ಕರ್ಮ ಫಲದಿಂದ ಮಹಾನ್ ವ್ಯಕ್ತಿಗಳಾಗುತ್ತಾರೆ. – ಭಗವಾನ್ ಮಹಾವೀರ

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಕಾಗುಣಿತ ಬಾರದವನಿಗೆ ಕಾವ್ಯದ ಗೊಡವೆ ಏಕೆ?

ನಿಮ್ಮ ಪತ್ರಗಳು

ಸರಳತೆ ಮೆರೆದ ಶಾಸಕ ದರ್ಶನ್ ಪುಟ್ಟಣ್ಣಯ್ಯ

ಮಾನ್ಯರೆ,



ಮೇಲುಕೋಟೆ ವಿಧಾನಸಭಾ ಕ್ಷೇತ್ರದ ಸರ್ವೋದಯ ಕರ್ನಾಟಕ ಪಕ್ಷದ ನೂತನ ಶಾಸಕ ದರ್ಶನ್ ಪುಟ್ಟಣ್ಣಯ್ಯ ಅವರು ಸರಳತೆಗೆ ನಾಂದಿ ಹಾಡಿರುವ ಕ್ರಮ ಶ್ಲಾಘನೀಯ. ಮುಖ್ಯಮಂತ್ರಿ ಹಾಗೂ ಉಪ ಮುಖ್ಯಮಂತ್ರಿಗಳ ಪ್ರಮಾಣ ವಚನ ಸಮಾರಂಭಕ್ಕೆ ರೈಲಿನಲ್ಲಿ ಪ್ರಯಾಣ ಬೆಳೆಸಿದ್ದ ಸಂಗತಿ ಎಲ್ಲರ ಗಮನ ಸೆಳೆದಿತ್ತು.

ದರ್ಶನ್ ಪುಟ್ಟಣ್ಣಯ್ಯ ಅವರು ಮೊದಲ ಅಧಿವೇಶನದಲ್ಲಿ ಭಾಗವಹಿಸಲು ಸೋಮವಾರ ಬೆಳಿಗ್ಗೆ ಚಾಮುಂಡಿ ಎಕ್ಸ್‌ಪ್ರೆಸ್ ರೈಲಿನಲ್ಲಿ ಪ್ರಯಾಣ ಬೆಳೆಸಿ ಎಲ್ಲರೂ ಹುಬ್ಬೇರಿಸುವಂತೆ ಮಾಡಿದ್ದಾರೆ. ಸರಕಾರಿ ಶಾಲೆಗಳ ಸುಧಾರಣೆ, ಆರೋಗ್ಯ ಕ್ಷೇತ್ರಕ್ಕೆ ಒತ್ತು ನೀಡುವುದು, ಮತ್ತು ರೈತ ಬೆಳೆದ ಬೆಳೆಗೆ ಬೆಂಬಲ ಬೆಲೆ ಘೋಷಣೆ ಮಾಡಿಸಲು ಹೋರಾಟ ಮಾಡುವ ಅವರ ನಿರ್ಧಾರ ಅಭಿನಂದನೀಯ. ಮುಂದಿನ ದಿನಗಳಲ್ಲೂ ಸಾಮಾನ್ಯರಂತೆ ಜನರ ಜೊತೆ ಬೆರೆತು ಅವರ ಕಷ್ಟ–ಸಂಕಷ್ಟಗಳಲ್ಲಿ ಭಾಗಿಯಾಗಿ ಮಾದರಿ ಶಾಸಕರಾಗಿ ಹೆಸರು ಗಳಿಸಲಿ.

–ಬೆಸಗರಹಳ್ಳಿ ರವಿ ಪ್ರಸಾದ್, ಕೆ.ಸಿ. ನಗರ, ಮೈಸೂರು.

ಆಯುರ್ವೇದ ಆಸ್ಪತ್ರೆಗೆ ಜನರೇಟರ್ ಕಲ್ಪಿಸಿ

ಮಾನ್ಯರೆ,



ಬಡವರ ಪಾಲಿಗೆ ಆಶಾಕಿರಣ ಹಾಗೂ ಆಧಾರವಾಗಿರುವ ಮೈಸೂರು ಆಯುರ್ವೇದ ಆಸ್ಪತ್ರೆಯು ಎಲ್ಲಾ ವರ್ಗಕ್ಕೂ ಉಚಿತ ಆರೋಗ್ಯ ಸೇವೆ ನೀಡುವಂತಹ ಆಸ್ಪತ್ರೆಯಾಗಿದೆ.

ಇಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಎಲ್ಲಾ ವೈದ್ಯಾಧಿಕಾರಿಗಳು, ಸಿಬ್ಬಂದಿ ವರ್ಗದವರು ರೋಗಿಗಳ ಶುಶ್ರೂಷೆ ಮಾಡುವ ರೀತಿಯು ಅವರ ಮನಸ್ಥೈರ್ಯವನ್ನು ಹೆಚ್ಚಿಸುತ್ತದೆ. ಇಲ್ಲಿ ಲಂಚದ ಹಣಕ್ಕಾಗಿ ಬೇಡಿಕೆಯಿಡುವ ವಾತಾವರಣವೇ ಇಲ್ಲವೆನಿಸುತ್ತದೆ. ಇಂತಹ ಆಸ್ಪತ್ರೆಯಲ್ಲಿ ಚಿಕಿತ್ಸೆಯನ್ನು ಪಡೆದಿರುವ ನಾನು ಆಸ್ಪತ್ರೆ ಎಲ್ಲಾ ವರ್ಗದ ಸಿಬ್ಬಂದಿಗೂ ಹೃದಯಪೂರ್ವಕ ಧನ್ಯವಾದಗಳನ್ನು ಅರ್ಪಿಸುತ್ತೇನೆ.

ಈ ಆಸ್ಪತ್ರೆಯಲ್ಲಿ ಒಂದೇ ಒಂದು ಕೊರತೆ ಎಂದರೆ ಕರೆಂಟ್ ಕೈಕೊಟ್ಟರೆ ಜನರೇಟರ್ ಸೌಲಭ್ಯವಿಲ್ಲ. ಕರೆಂಟ್ ಹೋದಾಗ ಪೂರ್ಣ ಆಸ್ಪತ್ರೆಯ ಕಾರ್ಯ ಚಟುವಟಿಕೆ ಸ್ಥಗಿತಗೊಂಡು ರೋಗಿಗಳು ಪರದಾಡುವ ಸ್ಥಿತಿಗೆ ಬರುತ್ತಾರೆ. ಈ ವಿಷಯದ ಬಗ್ಗೆ ಗಮನಹರಿಸಿ ಆಸ್ಪತ್ರೆಗೆ ಜನರೇಟರ್ ಸೌಲಭ್ಯವನ್ನು ಒದಗಿಸಿಕೊಡಬೇಕಾಗಿ ಈ ಮೂಲಕ ಮನವಿ.

–ಎನ್.ಆರ್. ವಿಜಯಕುಮಾರ್, ಮಾನಸೀನಗರ, ಮೈಸೂರು.

ಸಿದ್ದರಾಮಯ್ಯ ಮುಖ್ಯಮಂತ್ರಿಗಳು–2.0

ಮಾನ್ಯರೆ,

ಕರ್ನಾಟಕ ವಿಧಾನಸಭೆಗೆ ಇತ್ತೀಚೆಗೆ ನಡೆದ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ ಅಭೂತಪೂರ್ವ ಗೆಲುವು ಸಾಧಿಸಿದ್ದು, 135 ಸ್ಥಾನ ಗಳಿಸುವಲ್ಲಿ ಸಿದ್ದರಾಮಯ್ಯ ಮತ್ತು ಡಿ.ಕೆ. ಶಿವಕುಮಾರ್ ಅವರ ಪಾತ್ರ ಬಹಳ ದೊಡ್ಡದಾಗಿದೆ.

ಸಿದ್ದರಾಮಯ್ಯನವರು ಎರಡನೇ ಬಾರಿಗೆ ಮುಖ್ಯಮಂತ್ರಿಯಾಗಿದ್ದು, ಇದು ಮೈಸೂರು ಮತ್ತು ಚಾಮರಾಜನಗರದ ಜಿಲ್ಲಾ ಜನತೆಗೆ ಸಂತೋಷದ ಸಂಗತಿ. ಈ ಹಿಂದೆ ಮುಖ್ಯಮಂತ್ರಿಯಾಗಿದ್ದಾಗ ನಮ್ಮ ಚಾಮರಾಜನಗರ ಜಿಲ್ಲೆಗೆ 14 ಬಾರಿ ಭೇಟಿ ನೀಡಿ ದಾಖಲೆ ನಿರ್ಮಿಸಿದ್ದರು. ಸಾವಿರಾರು ಕೋಟಿ ಅನುದಾನ ನೀಡಿ ಹಿಂದುಳಿದ ಜಿಲ್ಲೆ ಹಣೆಪಟ್ಟಿಯನ್ನು ತೊಡೆದು ಹಾಕುವಲ್ಲಿ ಮೊದಲಿಗರು ಎಂದರೆ ತಪ್ಪಾಗಲಾರದು. ಇಂತಹ ಮೇರು ಸಮಾಜವಾದಿ ರಾಜಕಾರಣಿ ಎರಡನೇ ಬಾರಿ ದಿಗ್ವಿಜಯ ಸಾಧಿಸಿರುವುದರಿಂದ ಮೈಸೂರು–ಚಾಮರಾಜನಗರ ಜಿಲ್ಲೆಗಳ ಸರ್ವಾಂಗೀಣ ಅಭಿವೃದ್ಧಿಗೆ ಅನುಕೂಲವಾಗಲಿದೆ.

ಚಾಮರಾಜನಗರ ಜಿಲ್ಲೆಗೆ ಈಗಾಗಲೇ ನೂತನ ತರಕಾರಿ ಮಾರುಕಟ್ಟೆ, ಹೈಟೆಕ್ ಸರ್ಕಾರಿ ಬಸ್ ನಿಲ್ದಾಣ, ಬದನಗುಪ್ಪೆ ಕೈಗಾರಿಕಾ ಪ್ರದೇಶದಲ್ಲಿ ಮತ್ತಷ್ಟು ಕೈಗಾರಿಕೆಗಳ ನಿರ್ಮಾಣ. ಕಾವೇರಿ ಕುಡಿಯುವ ನೀರು ಎರಡನೇ ಹಂತ, ಕೆರೆಗಳಿಗೆ ನೀರು ತುಂಬಿಸುವುದು, ಎಲ್ಲಾ ರಸ್ತೆಗಳ ಡಾಂಬರೀಕರಣ, ಇಎಸ್ಐ ಆಸ್ಪತ್ರೆ, ನಗರಸಭೆಯ ನೂತನ ಕಟ್ಟಡ ನಿರ್ಮಾಣ, ಜಿಲ್ಲಾ ಕೇಂದ್ರದಲ್ಲಿ ಮತ್ತಷ್ಟು ಜೋಡಿ ರಸ್ತೆಗಳನ್ನು ಮಾಡಿ ವಾಹನ ಸಂಚಾರ ಮತ್ತು ಪಾರ್ಕಿಂಗ್ ದಟ್ಟಣೆ ನಿವಾರಿಸುವುದು, ಜಿಲ್ಲೆಯಲ್ಲಿ ಮತ್ತಷ್ಟು ಶಾಲಾ ಕಾಲೇಜುಗಳನ್ನು ಸ್ಥಾಪಿಸುವುದು, ಪ್ರವಾಸೋದ್ಯಮಕ್ಕೆ ಮತ್ತಷ್ಟು ಉತ್ತೇಜನ ಕೊಡುವುದು. ಜಿಲ್ಲಾ ಕೇಂದ್ರ ಸಂಪರ್ಕಿಸುವ ಎಲ್ಲಾ ತಾಲೂಕು ರಸ್ತೆಗಳ ಉನ್ನತೀಕರಣಗೊಳಿಸುವುದಕ್ಕೆ ಕಾರಣಕರ್ತರಾಗಿದ್ದಾರೆ.

ಅವರು ಈಗ ಮತ್ತೆ ಐದು ವರ್ಷ ಸುಭದ್ರ ಸರ್ಕಾರವನ್ನು ಕೊಡಲಿ ಮತ್ತು ರಾಜ್ಯಕ್ಕೆ ಉತ್ತಮ ಆಡಳಿತವನ್ನು ನೀಡಲಿ. ಚಾಮರಾಜನಗರ ಜಿಲ್ಲೆಯನ್ನು ಮಾದರಿ ಜಿಲ್ಲೆಯನ್ನಾಗಿ ಮಾಡಲಿ ಎಂದು ಆಶಿಸುತ್ತೇನೆ.

–ಸಿ.ವೈ. ಶೈಲೇಂದ್ರ, ಸಂಪಿಗೆ ರಸ್ತೆ, ಚಾಮರಾಜನಗರ.

ಕಸ ತೆರವುಗೊಳಿಸಿ



ಮಾನ್ಯರೆ,

ಮೈಸೂರಿನ ನಾಯ್ಡುನಗರ 3ನೇ ಹಂತ, ಅಲ್‌ಕ್ಯೂಬಾ ಮಸೀದಿ ಎದುರು ಕಸದ ರಾಶಿಯಿಂದ ದುರ್ವಾಸನೆ ಬೀರುತ್ತಿದ್ದು, ಸೊಳ್ಳೆಗಳು ಹೆಚ್ಚಾಗಿವೆ. ಇದರಿಂದ ಇಲ್ಲಿನ ನಿವಾಸಿಗಳು ಪ್ರತಿನಿತ್ಯ ಮೂಗು ಮುಚ್ಚಿಕೊಂಡು ಓಡಾಡುವಂತಾಗಿದೆ. ಇದರ ಬಗ್ಗೆ ನಗರ ಪಾಲಿಕೆ ಅಧಿಕಾರಿಗಳಿಗೆ ದೂರು ನೀಡಿದರೂ ಯಾವುದೇ ಪ್ರಯೋಜನವಾಗಿಲ್ಲ. ಆದ್ದರಿಂದ ಕೂಡಲೇ ಇತ್ತ ಗಮನಹರಿಸಿ ಕಸ ತೆರವು ಮಾಡಬೇಕೆಂದು ಮನವಿ.

–ನಾಯ್ಡುನಗರ ನಿವಾಸಿಗಳು, ಮೈಸೂರು.


ಸಕಾಲಿಕ



ಆರ್.ಪಿ.ಜಗದೀಶ್
ಹಿರಿಯ ಪತ್ರಕರ್ತರು
ಮೊ: 9845048051

ಸಿದ್ದು–ಡಿಕೆಶಿ ಜೋಡಿ ಸರ್ಕಾರಕ್ಕೆ ಬಾಲಗ್ರಹ











ಗುಂಪುಗಾರಿಕೆ ಹಾಗೂ ಅತೃಪ್ತಿ ಹೊಸ ಸರ್ಕಾರದ ಬೆನ್ನಿಗೆ ಅಂಟಿದ ಬಳುವಳಿ. ಜೊತೆಗೆ ನಿಚ್ಚಳ ಬಹುಮತ ವರವಾಗುವ ಬದಲು ಶಾಪವಾದಂತಿದೆ. ಏಕೆಂದರೆ ಸಂಪುಟ ವಿಸ್ತರಣೆಯೇ ದೊಡ್ಡ ಸವಾಲಾಗಿದೆ.

ಸುಲಭವಾಗಿ ಹಮ್ಮು–ಬಿಮ್ಮು ಬಿಡದ ಸಿದ್ದರಾಮಯ್ಯ ಹಾಗೂ ಡಿಸಿಎಂ ಡಿ.ಕೆ.ಶಿವಕುಮಾರ್ ಪರಸ್ಪರ ಸೋಲುವ ಜಾಯಮಾನದವರಲ್ಲ. ಹೀಗಾಗಿಯೇ ಸಂಪುಟ ರಚನೆ ದಿನ ಕಳೆದಷ್ಟೂ ಬಿಡಿಸಲಾಗದಷ್ಟು ಕಗ್ಗಂಟಾಗಿ ಪರಿಣಮಿಸಿದೆ.

ಇವರಿಬ್ಬರ ಹಠ–ಛಲದ ನಡುವೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹಾಗೂ ಹೈಕಮಾಂಡ್‌ಗೆ ದಾರಿಯೇ ಕಾಣದಂತಾಗಿದೆ. ಸಂಪುಟ ರಚನೆಗಾಗಿ ದೆಹಲಿಗೆ ಈ ಇಬ್ಬರೂ ಹೋಗಿದ್ದು ಜಂಟಿಯಾಗಿ. ಬಂದದ್ದು ಮಾತ್ರ ಒಂಟಿಯಾಗಿ; ಏನಿದರರ್ಥ. ಪಕ್ಷದಲ್ಲಿ ಎಲ್ಲವೂ ನೆಟ್ಟಗಿದ್ದರೆ ಏಕೆ ಈ ವಿಳಂಬ?

ಹೊಸ ಸರ್ಕಾರಕ್ಕೆ ಅಧಿಕಾರ ಸ್ವೀಕರಿಸಿದ 'ಶಾಯಿ' ಇನ್ನೂ ಮಾಸಿಲ್ಲ. ಆಗಲೇ ಅಪಸ್ವರದ ಮಾತು ಸಲ್ಲದು. ಆದರೆ ನಡೆಯುತ್ತಿರುವುದೇನು? ಮತದಾರ ಪ್ರಭುಗಳು, ಕಾರ್ಯಕರ್ತರು, ಶಾಸಕರ ಮುಖದಲ್ಲಿ ಖುಷಿ ಕಾಣುತ್ತಿದೆಯೇ? ನೀವೇ ಹೇಳಿ?

ಸುಮಾರು 28 ಮಂದಿ ಭಾವಿ ಸಚಿವರ ಪಟ್ಟಿಯೊಂದಿಗೆ ದೆಹಲಿಗೆ ತೆರಳಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಡಿಸಿಎಂ ಡಿ.ಕೆ.ಶಿವಕುಮಾರ್ ಬರುವಾಗ ಎಂಟು ಮಂದಿ ಸಚಿವರ ಪಟ್ಟಿಯೊಂದಿಗೆ ಬಂದರು. ಅದರಲ್ಲೂ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಪುತ್ರ ಪ್ರಿಯಾಂಕ ಖರ್ಗೆ ಹಾಗೂ ಜಮೀರ್ ಅಹಮದ್‌ಗೆ ಇಷ್ಟು ತರಾತುರಿಯಲ್ಲಿ ಸಚಿವ ಸ್ಥಾನ ನೀಡುವ ಅಗತ್ಯವೇನಿತ್ತು?

ಸಂಪುಟ ವಿಸ್ತರಣೆ ವಿಚಾರದಲ್ಲಿ ಮುಖ್ಯಮಂತ್ರಿ ಮತ್ತು ಉಪ ಮುಖ್ಯಮಂತ್ರಿ ನಡುವೆ ಕಣ್ಣುಮುಚ್ಚಾಲೆ ಆಟ ನಡೆಯುತ್ತಿದೆ. ಹಿರಿಯರು ಜನಾಭಿಪ್ರಾಯಕ್ಕೆ ಅಂಜಿ ಕಾದು ನೋಡುತ್ತಾ ಮೌನಕ್ಕೆ ಶರಣಾಗಿದ್ದಾರೆ. ಆರಂಭದಲ್ಲಿಯೇ ಹೀಗಾದರೆ ಮುಂದೇನು ಎಂಬುದು ಪ್ರಶ್ನಾರ್ಥಕವಾಗಿದೆ.

ಇಬ್ಬರೂ ತಮ್ಮ ತಮ್ಮ ಆಪ್ತರ ತೃಪ್ತಿಪಡಿಸಲು ಹೆಣಗಾಡುತ್ತಿದ್ದಾರೆ. ಆದರೆ ಗೆದ್ದ ಹಿರಿಯ ಶಾಸಕರ ಸಂಖ್ಯೆ ಇವರ 'ಕೈ' ಕಟ್ಟಿಹಾಕಿದೆ. ಒಂದು ರೀತಿಯಲ್ಲಿ ಮುಖ್ಯಮಂತ್ರಿ ಮತ್ತು ಉಪಮುಖ್ಯಮಂತ್ರಿ ಅಸಹಾಯಕರಾಗಿದ್ದಾರೆ. ಯಾವ ಮಾನದಂಡದ ಆಧಾರದ ಮೇಲೆ ಸಚಿವರನ್ನು ಆಯ್ಕೆ ಮಾಡುವುದು ಎನ್ನುವುದೇ ತಲೆನೋವಾಗಿದೆ.

ಪಕ್ಷದೊಳಗೆ ನಡೆಯುತ್ತಿರುವ ವಿದ್ಯಮಾನಗಳು, ಸಚಿವ ಆಕಾಂಕ್ಷಿಗಳ ಒತ್ತಡ ನೋಡಿದರೆ ಯಾವುದಕ್ಕೂ 'ಸೈ' ಎನ್ನುವಂತೆ ಸಚಿವ ಸ್ಥಾನಕ್ಕೆ ಹಠ ಬಿದ್ದಿದ್ದಾರೆ. ಜೊತೆಗೆ ಪಕ್ಷದ ನಾಯಕರೂ ಇದರ ಸದುಪಯೋಗ ಪಡೆಯುವಂತೆ ಕಾಣುತ್ತಿದೆ. ಇನ್ನು ಸರ್ಕಾರ ಕಣ್ಣೇ ಬಿಟ್ಟಿಲ್ಲ. ಆಗಲೇ ಹಣ ದಾಹಕ್ಕೆ ಜೋತು ಬಿದ್ದಂತಿದೆ.

ಖರ್ಗೆ ಪುತ್ರ ಪ್ರಿಯಾಂಕ ಖರ್ಗೆ, ಅಪ್ಪನ ಆಶೀರ್ವಾದದಿಂದ ಸಚಿವರಾದರು. ಇನ್ನು ಜಮೀರ್‌ಗೆ ಸಿದ್ದರಾಮಯ್ಯನವರೇ 'God Father'. ಎಲ್ಲಾ ವಿಚಾರದಲ್ಲಿ ಪಳಗಿದ 'ಕೈ' ಆಗಿರುವ ಜಮೀರ್, ನಾಯಕರ ಒಲಿಸಿಕೊಳ್ಳುವಲ್ಲಿ ನಿಸ್ಸೀಮರು. ಇಲ್ಲದಿದ್ದಲ್ಲಿ ಇಷ್ಟು ಕಡಿಮೆ ಸಮಯದಲ್ಲಿ ಜೆಡಿಎಸ್ ಪಕ್ಷದಿಂದ ಹಾರಿ ಕಾಂಗ್ರೆಸ್ ಸೇರಿ ಮುಖ್ಯಮಂತ್ರಿಗಳಿಗೆ ಆಪ್ತರಾಗಲು ಸಾಧ್ಯವೇ? ಇದೆಲ್ಲ ಮಹಿಮೆ.

> ಸುಲಭವಾಗಿ ಹಮ್ಮು–ಬಿಮ್ಮು ಬಿಡದ ಸಿದ್ದರಾಮಯ್ಯ ಹಾಗೂ ಡಿಸಿಎಂ ಡಿ.ಕೆ.ಶಿವಕುಮಾರ್ ಪರಸ್ಪರ ಸೋಲುವ ಜಾಯಮಾನದವರಲ್ಲ. ಹೀಗಾಗಿಯೇ ಸಂಪುಟ ರಚನೆ ದಿನ ಕಳೆದಷ್ಟೂ ಬಿಡಿಸಲಾಗದಷ್ಟು ಕಗ್ಗಂಟಾಗಿ ಪರಿಣಮಿಸಿದೆ. ಇವರಿಬ್ಬರ ಹಠ–ಛಲದ ನಡುವೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹಾಗೂ ಹೈಕಮಾಂಡ್‌ಗೆ ದಾರಿಯೇ ಕಾಣದಂತಾಗಿದೆ. ಸಂಪುಟ ರಚನೆಗಾಗಿ ದೆಹಲಿಗೆ ಈ ಇಬ್ಬರೂ ಹೋಗಿದ್ದು ಜಂಟಿಯಾಗಿ. ಬಂದದ್ದು ಮಾತ್ರ ಒಂಟಿಯಾಗಿ; ಏನಿದರರ್ಥ. ಪಕ್ಷದಲ್ಲಿ ಎಲ್ಲವೂ ನೆಟ್ಟಗಿದ್ದರೆ ಏಕೆ ಈ ವಿಳಂಬ?

ಇನ್ನು ಉರಿಯುತ್ತಿರುವ ಕೆಂಡಕ್ಕೆ ಸೀಮೆಎಣ್ಣೆ ಸುರಿದ ಹಾಗೆ ಮುಂದಿನ ಐದು ವರ್ಷ 'ಸಿದ್ದು' ಮುಖ್ಯಮಂತ್ರಿ ಎಂದು ಸಚಿವ ಎಂ.ಬಿ.ಪಾಟೀಲ್ ಹೇಳಿರುವುದು ಡಿ.ಕೆ.ಶಿವಕುಮಾರ್ ಪಾಳೆಯದಲ್ಲಿ ಜೇನುಗೂಡಿಗೆ ಕಲ್ಲು ಹೊಡೆದಂತಾಗಿದೆ. ಪತ್ನಿ ಕೊಟ್ಟ ಗಿಫ್ಟ್ ವಾಚ್ ನೋಡಿ ಮುಖ್ಯಮಂತ್ರಿ ಬೀಗುತ್ತಿದ್ದಾಗ ಅದಕ್ಕೆ ಡಿ.ಕೆ.ಶಿವಕುಮಾರ್ ಸಂತೋಷ ವ್ಯಕ್ತಪಡಿಸಿದ್ದಾರೆ. ಇವರಿಬ್ಬರ ಮಾತುಕತೆ ನಡುವೆ ಬಾಯಿ ಹಾಕಿದ ಎಂ.ಬಿ.ಪಾಟೀಲ್‌ಗೆ Don't Distrub ಎಂದು ಗದರಿದಂತೆ ಮಾತಾಡಿದ್ದ ಡಿಸಿಎಂ ಹುದ್ದೆಗೆ ಶೋಭೆ ತರುವಂತಹದ್ದಲ್ಲ. ಇದು ಇಬ್ಬರ ಸ್ನೇಹ ಸಮರಕ್ಕೆ ಸಾಕ್ಷಿಯಾಗಿದೆ.

ಇನ್ನು ಚುನಾವಣೆ ಸಂದರ್ಭದಲ್ಲಿ ನಾಡಿನ ಜನತೆಗೆ ನೀಡಿದ್ದ ಭರವಸೆಯಂತೆ, ಬಡವರಿಗೆ ತಲಾ ಹತ್ತು ಕೆ.ಜಿ. ಅಕ್ಕಿ, ಮನೆ ಒಡತಿಗೆ ತಿಂಗಳ ಖರ್ಚಿಗೆ ಎರಡು ಸಾವಿರ ರೂ., ಉಚಿತ ಬಸ್ ಪಾಸ್, ನಿರುದ್ಯೋಗಿಗಳಿಗೆ ತಿಂಗಳಿಗೆ 3 ಸಾವಿರ ರೂ., ಡಿಪ್ಲೊಮಾ ಪದವೀಧರ ನಿರುದ್ಯೋಗಿಗಳಿಗೆ ಮಾಸಿಕ 1500 ರೂ., ಇಂದಿರಾ ಕ್ಯಾಂಟೀನ್ ಸ್ವಾಗತಾರ್ಹ. ಆದರೆ ಆರಂಭದಲ್ಲಿ ನಾನಾ ರಗಳೆಗಳು ಜನರಿಗೆ ಅಪಶಕುನದಂತಿವೆ.

ಲಲಿತ್ ಮಹಲ್‌ಗೂ ಜಯಲಕ್ಷ್ಮಿ ವಿಲಾಸ್ ಮ್ಯಾನ್ಷನ್ ಸ್ಥಿತಿ!

ಎನ್.ಕೆ.ಎ. ಬಲ್ಲಾಳ್
ಐಟಿಡಿಸಿ ನಿವೃತ್ತ ಹಿರಿಯ ಉಪಾಧ್ಯಕ್ಷರು



ಬಲ್ಲಾಳ್

ಸಾಂಸ್ಕೃತಿಕ ರಾಜಧಾನಿ ಮೈಸೂರಿನ ಹೆಮ್ಮೆಯಾಗಿರುವ ಲಲಿತ್ ಮಹಲ್ ಹೋಟೆಲ್ ತನ್ನ ವೈಭವವನ್ನು ಕಳೆದುಕೊಳ್ಳುತ್ತಿದೆಯಾ? ಸದ್ಯದ ಪರಿಸ್ಥಿತಿಯನ್ನು ನೋಡಿದರೆ ಹಾಗೆಯೇ ಅನ್ನಿಸುತ್ತದೆ ಎಂದು ಭಾರತೀಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮದ ನಿವೃತ್ತ ಹಿರಿಯ ಉಪಾಧ್ಯಕ್ಷರಾದ ಎನ್.ಕೆ.ಎ.ಬಲ್ಲಾಳ್ ವಿಷಾದ ವ್ಯಕ್ತಪಡಿಸಿದ್ದಾರೆ.

ಸುಮಾರು ದಶಕಕ್ಕೂ ಹೆಚ್ಚು ಕಾಲ ನಿರ್ವಹಣೆ ಮಾಡಿದ್ದ ಭಾರತೀಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮವು (ಐಟಿಡಿಸಿ) ನಂತರ ಹೋಟೆಲ್ ಅನ್ನು ರಾಜ್ಯ ಸರ್ಕಾರಕ್ಕೆ ಹಸ್ತಾಂತರಿಸಿದಾಗ ಇದು ಸುಸ್ಥಿತಿಯಲ್ಲಿತ್ತು. ಆಗ ಒಂದು ಕರಾರು ಆಗಿತ್ತು. ಈ ಹೋಟೆಲ್ ಅನ್ನು ಕೆಲಕಾಲ ನಿರ್ವಹಣೆ ಮಾಡುವುದು. ನಂತರ ಖಾಸಗಿ ಪರಿಣಿತ ಹೋಟೆಲ್ ಉದ್ಯಮ ಸಂಸ್ಥೆಗೆ ಟೆಂಡರ್ ಮೂಲಕ ಹಸ್ತಾಂತರ ಮಾಡಿ ಆ ಮೂಲಕ ನಿರ್ವಹಣೆ ಮಾಡುವುದು.

ರಾಜ್ಯ ಸರ್ಕಾರ, ತನ್ನ ಜಾಣ್ಮೆ ಮೆರೆಸಿ ಲಲಿತ ಮಹಲ್ ಹೋಟೆಲ್ ನಿರ್ವಹಣೆಯನ್ನು ಜಂಗಲ್ ಲಾಡ್ಜಸ್ ಮತ್ತು ರೆಸಾರ್ಟ್ಸ್‌ಗೆ ಒಪ್ಪಿಸಿ ಕೈತೊಳೆದುಕೊಂಡಿತು. ಟೆಂಡರ್ ಪ್ರಕ್ರಿಯೆ ನಂತರ ಪೂರ್ಣ ಪ್ರಮಾಣದಲ್ಲಿ ಹೋಟೆಲ್ ನಿರ್ವಹಣೆಯನ್ನು ಹೊಸ ಗುತ್ತಿಗೆದಾರರು ಸಿಗುವವರೆಗೂ ಇದು ತಾತ್ಕಾಲಿಕ ವ್ಯವಸ್ಥೆ ಮಾತ್ರ ಎಂದು ಕಡ್ಡಾಯವಾಗಿ ತಿಳಿಸಲಾಗಿತ್ತು. ಈಗಾಗಲೇ ವರ್ಷಗಳೇ ಕಳೆದಿವೆ. ಚಿನ್ನದ ಮೊಟ್ಟೆ ಇಡುವ ಕೋಳಿಯಂತೆ ಲಲಿತ್ ಮಹಲ್ ಹೋಟೆಲ್ ಜಂಗಲ್ ಲಾಡ್ಜಸ್ ಮತ್ತು ರೆಸಾರ್ಟ್ಸ್‌ಗೆ ಲಾಭ ತಂದುಕೊಡುತ್ತಲೇ ಇದೆ. ಇದೇ ಕಾರಣಕ್ಕೆ ಟೆಂಡರ್ ಪ್ರಕ್ರಿಯೆ ವಿಷಯದಲ್ಲಿ ಸರ್ಕಾರದ ಮೇಲೆ ಯಾವುದೇ ರೀತಿಯ ಒತ್ತಡ ಹಾಕದೇ ಸುಮ್ಮನಿದೆ.





ಲಲಿತ ಮಹಲ್ ಹೋಟೆಲ್‌ನ ಚಿತ್ರಕಲೆ ಪೇಯಿಂಟ್ ಮಾಸುತ್ತಿರುವುದು. ಬಲಚಿತ್ರದಲ್ಲಿ ಜಯಲಕ್ಷ್ಮಿ ವಿಲಾಸ ಮ್ಯಾನ್ಷನ್‌ನ ಮೇಲ್ಛಾವಣಿಯ ಒಂದು ಭಾಗ ಕುಸಿದು ಬಿದ್ದಿದ್ದು, ಅದಕ್ಕೆ ತಾತ್ಕಾಲಿಕ ಹೊದಿಕೆ ಅಳವಡಿಸಲಾಗಿದೆ.

ಈಗ ಮೈಸೂರಿನ ಪಾರಂಪರಿಕ ಹೋಟೆಲ್ ಅನ್ನು ತಾತ್ಕಾಲಿಕ ಹಾಗೂ ಗುತ್ತಿಗೆ ಆಧಾರದ ಸಿಬ್ಬಂದಿ ನಿರ್ವಹಣೆ ಮಾಡುತ್ತಿದ್ದಾರೆ. ಕೇವಲ 13ರಿಂದ 15 ಖಾಯಂ ಸಿಬ್ಬಂದಿ ಮಾತ್ರ ಸಂಸ್ಥೆ ಜಂಗಲ್ ಲಾಡ್ಜಸ್ ಮತ್ತು ರೆಸಾರ್ಟ್ಸ್‌ಗೆ ಸೇರಿದವರಾಗಿದ್ದಾರೆ. ಒಂದು ವೇಳೆ ಯಾವುದಾದರೂ ದೊಡ್ಡ ಸಮಾರಂಭ, ಪಾರ್ಟಿ ನಡೆದಾಗ ಇತರೆ ಲಾಡ್ಜ್‌ಗಳಿಂದ ಸಿಬ್ಬಂದಿಯನ್ನು ಕರೆ ತಂದು ನಿರ್ವಹಣೆ ಮಾಡಿ, ಕಳುಹಿಸಿಕೊಡಲಾಗುತ್ತದೆ. ಯೋಚಿಸಿ, ವಿಶ್ವದರ್ಜೆ ಮಟ್ಟದ ಪಾರಂಪರಿಕ ಹೋಟೆಲ್ ಅನ್ನು ಗುತ್ತಿಗೆ ಸಿಬ್ಬಂದಿ ನಿರ್ವಹಣೆ ಮಾಡುತ್ತಿದ್ದಾರೆ ಎಂದರೆ ಪರಿಸ್ಥಿತಿ ಹೇಗಿರಬೇಡ?

ಇಲ್ಲಿಗೆ ಕೆಲಸಕ್ಕೆ ಅಥವಾ ತರಬೇತಿಗೆ ಬರುವ ಸಿಬ್ಬಂದಿ ಈ ಐಷಾರಾಮಿ ಹೋಟೆಲ್‌ನಲ್ಲಿ ಚಪ್ಪಲಿ ಹಾಕಿಕೊಂಡು ಓಡಾಡಿಕೊಂಡಿರುತ್ತಾರೆ. ಇದರಿಂದ ಈ ಹೋಟೆಲ್ ಈಗ ಕೇವಲ "ಸರ್ಕಾರಿ ವಿಶ್ರಾಂತಿ ಗೃಹ" ಎಂಬಂತಾಗಿದೆ. ಇದರ ಪರಿಣಾಮ. ಈ ಪ್ರತಿಷ್ಠಿತ ಹೋಟೆಲ್ ತನ್ನ ಹಿರಿಮೆ ಕಳೆದುಕೊಳ್ಳುತ್ತಿದೆ. ನನ್ನ ಸ್ನೇಹಿತರೊಬ್ಬರು ಇತ್ತೀಚೆಗೆ ಈ ಹೋಟೆಲ್‌ಗೆ ಹೋಗಿದ್ದರು. ಅಲ್ಲಿನ ಸಾರ್ವಜನಿಕ ವಲಯವನ್ನು ತಮ್ಮ ಕ್ಯಾಮರಾದಲ್ಲಿ ಸೆರೆ ಹಿಡಿದು ತಂದಿದ್ದರು. (ಚಿತ್ರಗಳನ್ನು ನೋಡಿ)



ಈಗ ವಿಧಾನಸೌಧದಲ್ಲಿ ರಾಜ್ಯದ ಆಡಳಿತ ಚುಕ್ಕಾಣಿ ಹಿಡಿದಿರುವವರು ಮೈಸೂರಿಗರು ಎಂಬುದು ನಮಗೆ ಗೊತ್ತಿದೆ. ಈ ಹೋಟೆಲ್‌ನ ಗುಣಮಟ್ಟವನ್ನು ಉನ್ನತ ದರ್ಜೆಗೇರಿಸಿ, ಹೈದರಾಬಾದ್‌ನ ಫಲಕ್ನುಮಾ ಪ್ಯಾಲೇಸ್ ಹೋಟೆಲ್‌ಗೆ ಇದನ್ನೂ ಸರಿಸಮನಾಗಿ ಅಭಿವೃದ್ಧಿಪಡಿಸುವ ಮನಸ್ಸು ಮಾಡುವ ಆಸಕ್ತಿ ತೋರುತ್ತಾರೆಂದು ನನಗಂತೂ ಗೊತ್ತಿಲ್ಲ.

ಒಂದಂತೂ ಸ್ಪಷ್ಟ ಈ ಹೋಟೆಲ್ ಅನ್ನು ಯಾವುದಾದರೂ ಖ್ಯಾತ ಪಾರಂಪರಿಕ ಹೋಟೆಲ್‌ಗಳ ಸಮೂಹಕ್ಕೆ ನಿರ್ವಹಣೆಗೆ ಒಪ್ಪಿಸದಿದ್ದರೆ, ಲ್ಯಾನ್ಸ್‌ಡೌನ್ ಬಿಲ್ಡಿಂಗ್ ಅಥವಾ ದೇವರಾಜ ಮಾರುಕಟ್ಟೆ ಇಲ್ಲವೇ ಮಾನಸ ಗಂಗೋತ್ರಿ ಕ್ಯಾಂಪಸ್‌ನಲ್ಲಿರುವ ಜಯಲಕ್ಷ್ಮಿ ವಿಲಾಸ್ ಮ್ಯಾನ್ಷನ್ ಕಟ್ಟಡಕ್ಕೆ ಆದಂತಹ ಗತಿಯೇ ಇದಕ್ಕೂ ಬರಲಿದೆ.

2021ರಲ್ಲಿ ನಿರಂತರ ಮಳೆ ಹಾಗೂ ನೀರು ಸೋರಿಕೆಯಿಂದಾಗಿ ಈ ಐಷಾರಾಮಿ ಕಟ್ಟಡ ದುರ್ಬಲಗೊಂಡು ಎರಡು ಮೂರು ಕಡೆ ಚಾವಣಿ ಕುಸಿದು ಬಿದ್ದಿದೆ. ಸೂಕ್ತ ಸಂಪನ್ಮೂಲ ಲಭ್ಯವಿಲ್ಲದೇ, ಕಟ್ಟಡದ ಸರಿಯಾದ ನಿರ್ವಹಣೆ ಇಲ್ಲದ ಕಾರಣ ಸಂಪೂರ್ಣ ಸೊರಗಿದೆ.

ಅಮೂಲ್ಯ ಹಾಗೂ ಅಪರೂಪದ ಕಲಾಕೃತಿಗಳನ್ನು ತನ್ನ ಒಡಲಲ್ಲಿ ಇಟ್ಟುಕೊಂಡಿರುವ ಜಯಲಕ್ಷ್ಮಿ ವಿಲಾಸ್ ಮ್ಯಾನ್ಷನ್ ಯಾವ ಸ್ಥಿತಿಯಲ್ಲಿದೆ ಎಂಬುದು ಎಲ್ಲರಿಗೂ ಗೊತ್ತಿದೆ. ಇದರ ಮೇಲ್ಛಾವಣಿ ಕಳಚಿಬಿದ್ದಿದೆ. ಅದನ್ನು ತಾತ್ಕಾಲಿಕವಾಗಿ ತೇಪೆ ಹಚ್ಚಲಾಗಿದ್ದು, ಭಾರೀ ಪ್ರಮಾಣದಲ್ಲಿ ಹಾನಿಯಾಗಿದೆ.

ದಾನಿಗಳು ಹಾಗೂ ಇನ್ಫೋಸಿಸ್ ಪ್ರತಿಷ್ಠಾನದ ಅಧ್ಯಕ್ಷರೂ ಆಗಿರುವ ಸುಧಾಮೂರ್ತಿ 2001ರಲ್ಲಿ 1.17 ಕೋಟಿ ರೂಪಾಯಿ ಖರ್ಚು ಮಾಡಿ ಇದನ್ನು ನವೀಕರಣ ಮಾಡಿಸಿದ ನಂತರ ಇದೇ ಕಟ್ಟಡವನ್ನು ಮೈಸೂರು ವಿಶ್ವವಿದ್ಯಾಲಯದ ಸುಪರ್ದಿಗೆ ಒಪ್ಪಿಸಲಾಯಿತು. ಆದರೆ ನಿರ್ವಹಣೆ ಇಲ್ಲದೇ, ಜಯಲಕ್ಷ್ಮಿ ವಿಲಾಸ್ ಹೀನಾಯ ಸ್ಥಿತಿಯಲ್ಲಿದೆ.

ಮೈಸೂರು ವಿಶ್ವವಿದ್ಯಾಲಯದ ಜನಪದ ಮ್ಯೂಸಿಯಂ ಇರುವ ಈ ಕಟ್ಟಡದ ಕೆಲವು ಭಾಗ ಕುಸಿದಿದೆ. ಇದನ್ನು ಕಂಡ ಪಾರಂಪರಿಕ ಕಟ್ಟಡ ತಜ್ಞರ ಸಮಿತಿ ಮೈಸೂರು ವಿಶ್ವವಿದ್ಯಾಲಯದ ಹಿಂದಿನ ಉಪ ಕುಲಪತಿ ಪ್ರೊ.ಜಿ.ಹೇಮಂತಕುಮಾರ್‌ಗೆ ಪತ್ರ ಬರೆದು ಈ ಪಾರಂಪರಿಕ ಕಟ್ಟಡವನ್ನು ಸುಸ್ಥಿತಿಯಲ್ಲಿ ಇಟ್ಟುಕೊಳ್ಳಲು ನವೀಕರಣ ಮಾಡಿಸುವಂತೆ ಸೂಚಿಸಿತ್ತು.

ಕರ್ನಾಟಕ ಸರ್ಕಾರ ಹಾಗೂ ಜಂಗಲ್ ಲಾಡ್ಜಸ್ ಮತ್ತು ರೆಸಾರ್ಟ್ಸ್‌ಗೆ ಲಲಿತ್ ಮಹಲ್ ಹೋಟೆಲ್‌ನಂಥ ಪಾರಂಪರಿಕ ಹಾಗೂ ಐಷಾರಾಮಿ ಕಟ್ಟಡವನ್ನು ನಿರ್ವಹಣೆ ಮಾಡಲು ಅನುದಾನವೂ ಇಲ್ಲ, ಅನುಭವವೂ ಇಲ್ಲ. ಲಲಿತ್ ಮಹಲ್ ಹೋಟೆಲ್ ಈ ಹಿಂದಿನಂತೆ ವೈಭವೋಪೇತವಾಗಿ ಕಾಣುವಂತೆ ಮಾಡಬೇಕಾದರೆ 50 ರಿಂದ 70 ಕೋಟಿ ರೂಪಾಯಿಗಳ ಅಗತ್ಯವಿದೆ. ಟೆರೇಸ್ ಗಾರ್ಡನ್, ಕಾರಂಜಿಗಳು, ಮಹಾರಾಜ, ಮಹಾರಾಣಿ ವಿಶೇಷ ಕೊಠಡಿಗಳಿಗೆ ಜೀವಕಳೆ ತುಂಬಲು ಪರಿಣತಿ ಮತ್ತು ಹಣ ಬೇಕಾಗುತ್ತದೆ. ಯಾರಾದರೂ ಉತ್ತಮ ನಿರ್ಧಾರ ಕೈಗೊಂಡು ಸೂಕ್ತ ಕ್ರಮ ಕೈಗೊಳ್ಳುವ ವಿಶ್ವಾಸ ಹೊಂದಿದ್ದೇನೆ. ಇದಕ್ಕಾಗಿ ಪ್ರಾರ್ಥಿಸುತ್ತೇನೆ.

ನನಗೆ ಮತ್ತೊಂದು ಚಿಂತೆ ಕಾಡುತ್ತಿದೆ. ಯಾವುದೇ ಪರಿಣತಿ, ಅನುಭವ ಇಲ್ಲದವರಿಗೆ ಈ ಪಾರಂಪರಿಕ ಹೋಟೆಲ್ ನಿರ್ವಹಣೆ ಕೊಟ್ಟು ಬಿಡುವ ನಿರ್ಧಾರಕ್ಕೆ ಸರ್ಕಾರ ಬಂದು ಬಿಟ್ಟರೆ ಎಲ್ಲವೂ ನೀರಿನಲ್ಲಿ ಹೋಮದಂತಾಗಿ ಬಿಡುತ್ತೇನೋ ಎಂಬ ಆತಂಕ ಇದೆ. ಈ ರೀತಿ ಆಗುವುದು ಬೇಡ. ಏಕೆಂದರೆ ನಮ್ಮ ಮೈಸೂರಿಗೆ ಈ ಒಂದು ಸುಂದರ ಹೋಟೆಲ್ ಉಳಿಯಬೇಕಿದೆ.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com

ಮಂಗಳವಾರ ವಿಜಯೇಂದ್ರ ಸೇರಿ 27 ಶಾಸಕರು ಪ್ರಮಾಣವಚನ ಸ್ವೀಕಾರ

- ಇಷ್ಟ ದೇವರು, ಸಂವಿಧಾನ, ಕ್ಷೇತ್ರದ ಜನತೆ ಹೀಗೆ ಬಯಸಿದಂತೆ ಪ್ರಮಾಣ
- ಇನ್ನು 16 ಶಾಸಕರು ಪ್ರಮಾಣ ಬಾಕಿ; ಪ್ರತಿಜ್ಞೆ ಮಾಡಿದವರಿಗೆ ಮಾತ್ರ ಸ್ಪೀಕರ್ ಚುನಾವಣೆಯಲ್ಲಿ ಮತ ಹಾಕಲು ಅವಕಾಶ



ವಿಧಾನಸೌಧದಲ್ಲಿ ತಮ್ಮನ್ನು ಅಭಿನಂದಿಸಿದ ಶಾಸಕ ವಿಜಯೇಂದ್ರರನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಬೆನ್ನು ತಟ್ಟಿ, ಶುಭ ಕೋರಿದರು.

ಬೆಂಗಳೂರು, ಮೇ 23(ಕೆಎಂಶಿ)–ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರ ಪುತ್ರ ಬಿ.ಎಸ್.ವಿಜಯೇಂದ್ರ ವಿಧಾನಸಭಾ ಸದಸ್ಯರಾಗಿ ಪ್ರಮಾಣ ವಚನ ಸ್ವೀಕರಿಸಿದರು.

ಹದಿನಾರನೇ ವಿಧಾನಸಭೆಯ ಮೊದಲ ವಿಶೇಷ ಅಧಿವೇಶನದ 2ನೇ ದಿನವಾದ ಮಂಗಳವಾರ ಬೆಳಗ್ಗೆ ಸದನ ಸಮಾವೇಶಗೊಂಡಾಗ ಸಭಾಧ್ಯಕ್ಷರಾದ ಆರ್.ವಿ.ದೇಶಪಾಂಡೆ ಅವರು ಸಂಪ್ರದಾಯದಂತೆ ನೂತನ ಸದಸ್ಯರ ಪ್ರಮಾಣವಚನಕ್ಕೆ ಅವಕಾಶ ಮಾಡಿಕೊಟ್ಟರು. ಶಿಕಾರಿಪುರ ಕ್ಷೇತ್ರದ ಶಾಸಕ ಬಿ.ವೈ.ವಿಜಯೇಂದ್ರ ಅವರು, ತಮ್ಮ ಕ್ಷೇತ್ರದ ಆರಾಧ್ಯದೈವ ಹುಚ್ಚರಾಯಸ್ವಾಮಿ ಹಾಗೂ ಸತ್ಯನಿಷ್ಠೆ ಹೆಸರಿನಲ್ಲಿ ಪ್ರಮಾಣವಚನ ಸ್ವೀಕಾರ ಮಾಡಿದರು.

ಉಡುಪಿ ಕ್ಷೇತ್ರದ ಶಾಸಕ ಯಶ್‌ಪಾಲ್ ಸುವರ್ಣ ಅವರು, ಉಡುಪಿ ಶ್ರೀಕೃಷ್ಣ, ಶ್ರೀ ವಿಭುದೇಶ ಸ್ವಾಮೀಜಿ, ಗೋಮಾತೆ ಹೆಸರಿನಲ್ಲಿ ಪ್ರಮಾಣವಚನ ಸ್ವೀಕರಿಸಿದರು. ಕ್ಷೇತ್ರದ ಜನತೆ, ಬಸವೇಶ್ವರ, ಜಗನ್ಮಾತೆ, ಸಂವಿಧಾನ, ಭಗವಂತ, ಸತ್ಯ ನಿಷ್ಠೆ ಹೆಸರಿನಲ್ಲಿ ನೂತನ ಶಾಸಕರು ಪ್ರಮಾಣ ವಚನ ಸ್ವೀಕರಿಸಿದರು. ಮೊದಲಿಗೆ ಶಾಸಕ ಹರೀಶ್ ಪೂಂಜಾ ಅವರು ಪ್ರಭು ಶ್ರೀರಾಮಚಂದ್ರ ಹೆಸರಿನಲ್ಲಿ ಪ್ರಮಾಣ ಮಾಡಿ ಸತ್ಯ ನಿಷ್ಠೆ ಹೆಸರಿನಲ್ಲಿ ಪ್ರತಿಜ್ಞೆ ಮಾಡುವ ಮೂಲಕ ಪ್ರಮಾಣವಚನ ಸ್ವೀಕರಿಸಿದರು. ಲಕ್ಷ್ಮಿ ಹೆಬ್ಬಾಳ್ಕರ್ ಅವರು ಜಗಜ್ಯೋತಿ ಬಸವಣ್ಣ, ಮಹೇಶ್ ಟೆಂಗಿನಕಾಯಿ ಅವರು, ಮಹಾಕೂಟೇಶ್ವರ ಹೆಸರಿನಲ್ಲಿ, ಶಿವಾಜಿನಗರ ಕ್ಷೇತ್ರದ ಶಾಸಕ ರಿಜ್ವಾನ್ ಅರ್ಷದ್ ಅವರು ಸಂವಿಧಾನ ಹಾಗೂ ಸತ್ಯನಿಷ್ಠೆ ಹೆಸರಿನಲ್ಲಿ ಪ್ರಮಾಣವಚನ ಸ್ವೀಕರಿಸಿದರೆ, ಬಸವಕಲ್ಯಾಣ ಶಾಸಕ ಶರಣ ಸಲಗಾರ ಅವರು, ಶಿವಾಚಾರ್ಯರ ಆಶೀರ್ವಾದದೊಂದಿಗೆ ಛತ್ರಪತಿ ಶಿವಾಜಿ ಮಹಾರಾಜ್ ಹಾಗೂ ವಿಶ್ವ ಗುರು ಬಸವಣ್ಣ ಅವರ ಹೆಸರಿನಲ್ಲಿ ಪ್ರಮಾಣವಚನ ಸ್ವೀಕಾರ ಮಾಡಿದರು.

ಎನ್.ಟಿ.ಶ್ರೀನಿವಾಸ್ ಅವರು, ಸಂವಿಧಾನ, ಭಗವಂತ, ತಂದೆ–ತಾಯಿ ಹಾಗೂ ಸತ್ಯನಿಷ್ಠೆ ಹೆಸರಿನಲ್ಲಿ ಪ್ರಮಾಣವಚನ ಸ್ವೀಕರಿಸಿದರು. ಶಾಸಕ ಡಿ.ಸುಧಾಕರ್ ಅವರು ತೇರುಮಲ್ಲೇಶ್ವರ ಸ್ವಾಮಿ ಹಾಗೂ ಶ್ರೀನಿವಾಸಪುರ ಕ್ಷೇತ್ರದ ಶಾಸಕ ಜಿ.ಕೆ. ವೆಂಕಟಶಿವಾರೆಡ್ಡಿ ಅವರು ಶ್ರೀನಿವಾಸಪುರ ಕ್ಷೇತ್ರದ ಜನತೆಯ ಹೆಸರಿನಲ್ಲಿ ಪ್ರಮಾಣವಚನ ಸ್ವೀಕರಿಸಿದರು. ಒಟ್ಟು 27 ಶಾಸಕರು ವಿಧಾನಸಭೆಯ ಸದಸ್ಯರಾಗಿ ಪ್ರಮಾಣವಚನ ಸ್ವೀಕಾರ ಮಾಡಿದರು. ಪ್ರಮಾಣ ವಚನ ಸ್ವೀಕರಿಸಿದ ಸದಸ್ಯರೆಲ್ಲರೂ ಸಭಾಧ್ಯಕ್ಷರಿಗೆ ವಂದಿಸಿ ಶಾಸನಸಭೆಯ ಪುಸ್ತಕದಲ್ಲಿ ಸಹಿ ಮಾಡಿದರು. ಬಳಿಕ ಪಕ್ಷಬೇಧ ಮರೆತು ಶಾಸಕರು ಪರಸ್ಪರ ಒಬ್ಬರನ್ನೊಬ್ಬರು ಹಸ್ತಲಾಘವ ಮಾಡಿ ಅಭಿನಂದಿಸಿದರು. ಬಳಿಕ ಸಭಾಧ್ಯಕ್ಷರು ಮಾತನಾಡಿ ವಿಧಾನಸಭೆಗೆ ಚುನಾಯಿತ ರಾಗಿರುವ 16 ಮಂದಿ ಇದುವರೆಗೆ ಪ್ರಮಾಣ ವಚನ ಸ್ವೀಕರಿಸಿಲ್ಲ. ಒಂದು ವೇಳೆ ಪ್ರಮಾಣ ವಚನ ಸ್ವೀಕರಿಸದಿದ್ದರೆ, ನಾಳೆ ಸದನ ದಲ್ಲಿ ನಡೆಯುವ ಸಭಾಧ್ಯಕ್ಷರ ಚುನಾವಣೆಯಲ್ಲಿ ಭಾಗವಹಿಸಲು ಅವಕಾಶವಿರುವುದಿಲ್ಲ ಎಂದು ಪ್ರಕಟಿಸಿದರು. ಪ್ರಮಾಣ ವಚನ ಸ್ವೀಕರಿಸದಿರುವವರು ಸಭಾಧ್ಯಕ್ಷರ ಕಚೇರಿಯಲ್ಲಿ ಪ್ರತಿಜ್ಞಾವಿಧಿ ತೆಗೆದುಕೊಳ್ಳಬಹುದು ಎಂದು ಹೇಳಿ ಸದನದ ಕಲಾಪವನ್ನು ಮುಂದೂಡಿದರು.

ಮಳೆ ಅವಾಂತರ ನಿಭಾಯಿಸಲು ಸನ್ನದ್ಧರಾಗಿ

ನಿರ್ಲಕ್ಷಿಸಿದರೆ ಅಧಿಕಾರಿಗಳ ವಿರುದ್ಧ ಎಫ್‌ಐಆರ್: ಜಿಲ್ಲಾಧಿಕಾರಿ ಡಾ.ಕೆ.ವಿ.ರಾಜೇಂದ್ರ ಎಚ್ಚರಿಕೆ



ಮೈಸೂರು ಡಿಸಿ ಕಚೇರಿಯಲ್ಲಿ ಜಿಲ್ಲಾಧಿಕಾರಿ ಡಾ.ಕೆ.ವಿ.ರಾಜೇಂದ್ರ ಮಾನ್ಸೂನ್ ಸಿದ್ಧತೆ ಕುರಿತು ಅಧಿಕಾರಿಗಳ ಸಭೆ ನಡೆಸಿದರು.

ಮೈಸೂರು, ಮೇ 23(ಎಂಕೆ)– ಪೂರ್ವ ಮುಂಗಾರು ಮಳೆ ಆರಂಭವಾಗಿದ್ದು, ಕ್ಲಿಷ್ಟಕರ ಪರಿಸ್ಥಿತಿ ನಿಭಾಯಿಸಲು ಜಿಲ್ಲಾ ಹಾಗೂ ತಾಲೂಕು ಹಂತದ ಅಧಿಕಾರಿ–ಸಿಬ್ಬಂದಿಗಳು ಸನ್ನದ್ಧರಾಗಿರಬೇಕು ಎಂದು ಜಿಲ್ಲಾಧಿಕಾರಿ ಡಾ.ಕೆ.ವಿ.ರಾಜೇಂದ್ರ ಹೇಳಿದರು.

ಜಿಲ್ಲಾಧಿಕಾರಿ ಕಚೇರಿಯಲ್ಲಿ ಮಂಗಳವಾರ ನಡೆದ ಮಾನ್ಸೂನ್ ಸಿದ್ದತೆ ಕುರಿತ ಸಭೆಯಲ್ಲಿ ಮಾತನಾಡಿದ ಅವರು, ಮುಖ್ಯಮಂತ್ರಿಗಳ ತವರು ಜಿಲ್ಲೆಯಲ್ಲಿ ನಾವುಗಳು ಕಾರ್ಯನಿರ್ವಹಿಸುತ್ತಿದ್ದು, ಬಹಳ ಎಚ್ಚರಿಕೆಯಿಂದ ಕಾರ್ಯ ನಿರ್ವಹಿಸಬೇಕಾಗಿದೆ. ಕರ್ತವ್ಯ ನಿರ್ಲಕ್ಷಿಸುವ ಅಧಿಕಾರಿಗಳ ವಿರುದ್ಧ ಎಫ್‌ಐಆರ್ ದಾಖಲಿಸಬೇಕಾಗುತ್ತದೆ. ಆದ್ದರಿಂದ ಅದಕ್ಕೆ ಅವಕಾಶ ಮಾಡಿಕೊಡದೆ ಕಾರ್ಯನಿರ್ವಹಿಸಿ ಎಂದು ಎಚ್ಚರಿಕೆ ನೀಡಿದರು.

ಈ ಹಿಂದೆ ತೊಂದರೆಗೊಳಗಾಗಿದ್ದ ಪ್ರದೇಶಗಳನ್ನು ಗುರುತಿಸಿ ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕು. ಕಾಳಜಿ ಕೇಂದ್ರಗಳನ್ನು ತೆರೆಯುವುದು. ಅಗತ್ಯವಿದ್ದಲ್ಲಿ ಜನರ ಸ್ಥಳಾಂತರಕ್ಕೆ ಸಿದ್ಧರಾಗಿರಬೇಕು. ಅಪಾಯಕಾರಿ ಮರಗಳು ಹಾಗೂ ವಿದ್ಯುತ್ ಕಂಬಗಳನ್ನು ಗುರುತಿಸಿ ತೆರವುಗೊಳಿಸುವುದು. ರಸ್ತೆಯಲ್ಲಿ ನೀರು ನಿಲ್ಲದಂತೆ ನೋಡಿಕೊಳ್ಳುವುದರ ಜೊತೆಗೆ ಶಿಥಿಲಾವಸ್ಥೆಯಲ್ಲಿರುವ ಮನೆಗಳು, ಶಾಲಾ ಕಟ್ಟಡಗಳಿಂದ ಯಾವುದೇ ತೊಂದರೆಯಾಗದಂತೆ ಎಚ್ಚರವಹಿಸಿ ಎಂದರು.

ಕಂಟ್ರೋಲ್ ರೂಂ: ತಾಲೂಕು ಹಂತದಲ್ಲಿ ಕಂಟ್ರೋಲ್ ರೂಂ ತೆರೆದು ದಿನ 24 ಗಂಟೆಯೂ ಕಾರ್ಯ ನಿರ್ವಹಿಸಬೇಕು. ಯಾವುದೇ ಜೀವಹಾನಿ ಪ್ರಕರಣಗಳಿಗೆ 48 ಗಂಟೆಯೊಳಗೆ ಪರಿಹಾರ ಪಾವತಿಸಲು ವಿಳಂಬವಾಗಬಾರದು ಹಾಗೂ ಈಗಾಗಲೇ ತಾಲೂಕು ಮಟ್ಟದಲ್ಲಿರುವ ವಿಪತ್ತು ನಿರ್ವಹಣಾ ತಂಡಗಳನ್ನು ಸಕ್ರಿಯಗೊಳಿಸಿ ಎಂದರು.

ಕೆರೆ ದಂಡೆಗಳನ್ನು ಪರೀಕ್ಷಿಸಿ ಎಲ್ಲಾದರು ಸೋರಿಕೆ ಇದ್ದರೆ ತಕ್ಷಣ ಸರಿಪಡಿಸಿ. ಕೆರೆಗಳ ಅಕ್ಕಪಕ್ಕದ ತಗ್ಗು ಪ್ರದೇಶಗಳಲ್ಲಿ ಇರುವ ಮನೆಗಳಿಗೆ ತೊಂದರೆಯಾಗದಂತೆ ನೋಡಿಕೊಳ್ಳುವುದು ಮುಖ್ಯವಾಗಿದೆ. ಬೆಳೆ ಹಾನಿಗೊಳಗಾದ ರೈತರಿಗೆ ತಕ್ಷಣ ಪರಿಹಾರ ನೀಡಲು ತಮ್ಮಲ್ಲಿ ಸಾಕಷ್ಟು ಹಣ ಇದ್ದು ಜಾಯಿಂಟ್ ಸರ್ವೆ ವರದಿ ಪಡೆದು ಪರಿಹಾರ ಪಾವತಿಸಲು ಕ್ರಮ ಕೈಗೊಳ್ಳಿ ಎಂದು ತಿಳಿಸಿದರು.

ಅಗ್ನಿಶಾಮಕ ಇಲಾಖೆ ಅಧಿಕಾರಿಗಳು ಸಹ ಬೋಟ್, ಮುಳುಗು ತಜ್ಞರು ಹಾಗೂ ಅಗತ್ಯ ಪರಿಕರಗಳೊಂದಿಗೆ ಪರಿಸ್ಥಿತಿ ನಿಭಾಯಿಸಲು ಸಿದ್ದರಿರಬೇಕು ಹಾಗೂ ಸಿಡಿಲು ಬಡಿದಾಗ ರಕ್ಷಿಸಿಕೊಳ್ಳಲು ಜಾಗೃತಿ ಮೂಡಿಸುವಂತೆ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಡಾ.ಕೆ.ವಿ. ರಾಜೇಂದ್ರ ಸೂಚಿಸಿದರು.

ನಗರ ಪಾಲಿಕೆ ಆಯುಕ್ತ ಲಕ್ಷ್ಮೀಕಾಂತ ರೆಡ್ಡಿ ಮಾತನಾಡಿ, ಮೈಸೂರು ನಗರದ 65 ವಾರ್ಡ್‌ಗಳ ಪೈಕಿ 6 ವಾರ್ಡ್‌ಗಳಲ್ಲಿ ಕೆಲವು ಕಡೆ ಸಮಸ್ಯೆಗಳಿದ್ದು ತಕ್ಷಣಕ್ಕೆ ಪರಿಹರಿಸಲಾಗಿದೆ ಎಂದರು. ಜಿಪಂ ಸಿಇಓ ಪೂರ್ಣಿಮಾ, ಅಪರ ಜಿಲ್ಲಾಧಿಕಾರಿ ಕವಿತ ರಾಜಾರಾಂ, ಜಿಲ್ಲಾ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ನಂದಿನಿ, ಉಪ ವಿಭಾಗಾಧಿಕಾರಿ ಕಮಲಾಬಾಯಿ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

ಉತ್ತಮ ಆಡಳಿತ ನೀಡಲು ನಮ್ಮೊಂದಿಗೆ ಕೈಜೋಡಿಸಿ

ಬೆಂಗಳೂರು, ಮೇ 23(ಕೆಎಂಶಿ)– ಜನರ ಆಶೋತ್ತರಗಳನ್ನು ಈಡೇರಿಸಲು, ಉತ್ತಮ ಆಡಳಿತ ನೀಡಲು ಅಧಿಕಾರಿಗಳು ಕೈಜೋಡಿಸಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.



ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಪ್ರಧಾನ ಕಾರ್ಯದರ್ಶಿಗಳು ಹಾಗೂ ಕಾರ್ಯದರ್ಶಿಗಳೊಂದಿಗೆ ಸಭೆ ನಡೆಸಿ ಮಾತನಾಡಿದ ಅವರು, ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಜನರೇ ಪ್ರಭುಗಳು. ಅವರು ನಮ್ಮನ್ನು ಆರಿಸಿ ಕಳುಹಿಸಿದ್ದಾರೆ. ಅವರ ಪ್ರತಿನಿಧಿಗಳಾಗಿ ಇಲ್ಲಿಗೆ ಬಂದಿದ್ದೇವೆ. ಅವರ ಆಶೋತ್ತರಗಳಿಗೆ ಸ್ಪಂದಿಸುವುದು ಜನಪ್ರತಿನಿಧಿಗಳ ಕರ್ತವ್ಯ ಎಂದರು.

ಜನರ ನಿರೀಕ್ಷೆಗೆ ಅನುಗುಣವಾಗಿ ಎಲ್ಲರೂ ಕೆಲಸ ಮಾಡಬೇಕಾಗುತ್ತದೆ. ಸುಭದ್ರ ಸರ್ಕಾರ ಇಲ್ಲದಾಗ ಜನರ ಆಶೋತ್ತರಗಳನ್ನು ಈಡೇರಿಸಲು ಆಗುವುದಿಲ್ಲ. ಜನರ ಆಶೋತ್ತರಗಳನ್ನು ಅನುಷ್ಠಾನಕ್ಕೆ ತರುವ ಮೂಲಕ ಅವರಿಗೆ ಸ್ಪಂದಿಸಬೇಕೆನ್ನುವ ಬಯಕೆ ಸರ್ಕಾರದ್ದು. ಉತ್ತಮ ಸರ್ಕಾರದ ನಿರೀಕ್ಷೆ, ಕಿರಿಕಿರಿ ಮಾಡದ ಸರ್ಕಾರ, ಚುರುಕಾಗಿರುವ ಸರ್ಕಾರ, ಭಿನ್ನ ಸರ್ಕಾರದ ಅಗತ್ಯವಿದೆ ಎಂದು ಜನ ಬಯಸಿದ್ದಾರೆ ಎಂದು ಹೇಳಿದರು.

ಹಿಂದಿನ ಸರ್ಕಾರದ ಅವಧಿಯಲ್ಲಿ ಅಭಿವೃದ್ಧಿ ಕೆಲಸಗಳು ನಿಂತು ಹೋಗಿದೆ, ಭ್ರಷ್ಟಾಚಾರವಿದೆ ಎಂಬ ಭಾವನೆ ಜನರಲ್ಲಿತ್ತು. ಈ ಭಾವನೆಯನ್ನು ಹೋಗಲಾಡಿಸಲು ಅಧಿಕಾರಿಗಳು ಸರ್ಕಾರದೊಂದಿಗೆ ಕೈಜೋಡಿಸಬೇಕು. ಗುಣಮಟ್ಟದ ಕಾಮಗಾರಿಗಳಾಗಬೇಕು, ಕಾಲಮಿತಿಯಲ್ಲೇ ಕೆಲಸಗಳಾಗಬೇಕು. ಕಣ್ಣು ಮುಚ್ಚಿಕೊಂಡು ಸಹಿ ಹಾಕದೇ ಜನರ ಹಣವನ್ನು ಸರಿಯಾದ ರೀತಿಯಲ್ಲಿ ವೆಚ್ಚ ಮಾಡಬೇಕು. ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಗಳನ್ನು ಅರ್ಹರಿಗೆ ತಲುಪಿಸಬೇಕು. ಇವುಗಳನ್ನು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು ಮೇಲ್ವಿಚಾರಣೆ ಮಾಡಬೇಕು. ಕ್ಷೇತ್ರಗಳಿಗೆ ಕಾಲಕಾಲಕ್ಕೆ ಭೇಟಿ ನೀಡುವುದಲ್ಲದೇ ಕಚೇರಿಗಳಿಗೆ ಅನಿರೀಕ್ಷಿತ ಭೇಟಿಯನ್ನೂ ನೀಡಬೇಕು. ಹಿರಿಯ ಅಧಿಕಾರಿಗಳು ನಿಯಮಗಳನ್ನು ಪಾಲಿಸಬೇಕು. ಯೋಜನೆಗಳ ಕ್ಷಿಪ್ರ ಅನುಷ್ಠಾನವಾದರೆ ಜನರಿಗೆ ಪ್ರಯೋಜನವಾಗುತ್ತದೆ. ಜನರಿಗೆ ಕೊಟ್ಟ ಮಾತನ್ನು ಉಳಿಸಿಕೊಳ್ಳಬೇಕೆನ್ನುವುದು ಸರ್ಕಾರದ ಉದ್ದೇಶ.

ಜನರ ಕಷ್ಟಗಳಿಗೆ ಸ್ಪಂದಿಸುವವರೇ ಮನುಷ್ಯರು ಎಂದು ಅರ್ಥಮಾಡಿ ಕೊಂಡು ಜನರ ನಿರೀಕ್ಷೆಗಳಿಗೆ ಸ್ಪಂದಿಸಬೇಕೆಂದು ಬಯಸುತ್ತೇವೆ ಎಂದು ತಿಳಿಸಿದರು.

ಸೋತಿದ್ದರೂ ನನ್ನ ಸೇವಾ ಕಾರ್ಯ ಮುಂದುವರೆಯಲಿದೆ: ಸಂದೇಶ್ ಸ್ವಾಮಿ

ಮೈಸೂರು, ಮೇ 23(ಎಸ್‌ಬಿಡಿ)– ಚುನಾವಣೆಯಲ್ಲಿ ಸೋತಿದ್ದರೂ ಶಾಸಕರ ರೀತಿಯಲ್ಲೇ ಸಾರ್ವಜನಿಕರ ಸೇವೆ ಮಾಡುತ್ತೇನೆ ಎಂದು ನರಸಿಂಹರಾಜ ವಿಧಾನಸಭಾ ಕ್ಷೇತ್ರದ ಪರಾಜಿತ ಬಿಜೆಪಿ ಅಭ್ಯರ್ಥಿ ಸಂದೇಶ್ ಸ್ವಾಮಿ ಹೇಳಿದ್ದಾರೆ.

ಮೂರು ಚುನಾವಣೆಗಳಲ್ಲಿ ನಾನು ಸೋತಿದ್ದೇನೆ. ಆದರೆ ನಾನು ಶಾಸಕನಾಗಬೇಕೆಂಬ ಉದ್ದೇಶದಿಂದ ಕ್ಷೇತ್ರದ ಜನ ಹೆಚ್ಚು ಮತ ನೀಡಿ ಆಶೀರ್ವದಿಸಿದ್ದಾರೆ. ಅವರಿಗಾಗಿ ನಾನು ಶಾಸಕನ ರೀತಿಯಲ್ಲೇ ಕೆಲಸ ಮಾಡುತ್ತೇನೆ. ಚುನಾವಣೆಯಲ್ಲಿ ಗೆದ್ದವರು ವಿಧಾನಸಭೆಯಲ್ಲಿ ಮಾತನಾಡಬಹುದು. ಅದನ್ನು ಹೊರತುಪಡಿಸಿ ಅಧಿಕಾರಿಗಳು ಹಾಗೂ ಸರ್ಕಾರದ ಗಮನ ಸೆಳೆದು ಕ್ಷೇತ್ರದ ಅಭಿವೃದ್ಧಿಗೆ ಶ್ರಮಿಸುವ ಅವಕಾಶ ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಎಲ್ಲರಿಗೂ ಇದೆ ಎಂದಿದ್ದಾರೆ.

ಮೂರು ಬಾರಿ ನಗರ ಪಾಲಿಕೆ ಸದಸ್ಯನಾಗಿ ಗಾಯಂತ್ರಿಪುರಂ ವಾರ್ಡ್ ಅಭಿವೃದ್ಧಿಗೆ ಶಕ್ತಿಮೀರಿ ಶ್ರಮಿಸಿದೆ. ಮೇಯರ್ ಆಗಿ ಇಡೀ ಮೈಸೂರು ನಗರದ ಅಭಿವೃದ್ಧಿಗಾಗಿ ಕೆಲಸ ಮಾಡಿದೆ. ಪರಿಣಾಮ ನಗರದ ಯಾವ ಕ್ಷೇತ್ರದಿಂದಾರೂ ಸ್ಪರ್ಧಿಸುವಂತೆ ಜೆಡಿಎಸ್ ನಾಯಕ ಹೆಚ್.ಡಿ.ರೇವಣ್ಣನವರು ಹೇಳಿದಾಗ ನಾನು ಅಭಿವೃದ್ಧಿಯಿಂದ ವಂಚಿತವಾಗಿರುವ ನರಸಿಂಹರಾಜ ಕ್ಷೇತ್ರವನ್ನೇ ಆಯ್ಕೆ ಮಾಡಿಕೊಂಡೆ. 2013ರ ಚುನಾವಣೆಯಲ್ಲಿ ಜೆಡಿಎಸ್‌ನಿಂದ ಸ್ಪರ್ಧಿಸಿದಾಗ 30 ಸಾವಿರ ಮತ ನೀಡಿ ಜನ ಉತ್ಸಾಹ ತುಂಬಿದರು. 2018ರಲ್ಲಿ ಬಿಜೆಪಿಯಿಂದ ಸ್ಪರ್ಧಿಸಿದಾಗ 44 ಸಾವಿರಕ್ಕೂ ಹೆಚ್ಚು ಮತಗಳು ದಕ್ಕಿದವು. ಕೇಂದ್ರ ಹಾಗೂ ರಾಜ್ಯದ ವರಿಷ್ಠರು 2023ರ ಚುನಾವಣೆಯಲ್ಲಿ ಮತ್ತೆ ಅವಕಾಶ ನೀಡಿದಾಗಲೂ 52 ಸಾವಿರಕ್ಕೂ ಹೆಚ್ಚು ಜನ ಮತ ನೀಡಿದ್ದಾರೆ. ಚುನಾವಣೆಯಿಂದ ಚುನಾವಣೆಗೆ ಜನಬೆಂಬಲ ಹೆಚ್ಚಾಗಿದೆ. ಹಾಗಾಗಿ ನಿರಂತರ ಸೋಲಾಯಿತೆಂದು ಜನರಿಂದ ವಿಮುಖನಾಗದೆ ಅವರ ಕಷ್ಟಸುಖದಲ್ಲಿ ಭಾಗಿಯಾಗುತ್ತೇನೆ ಎಂದು ತಿಳಿಸಿದ್ದಾರೆ.



ನರಸಿಂಹರಾಜ ಕ್ಷೇತ್ರದಲ್ಲಿ ಬಹುತೇಕ ಜನ ಯಾವುದೇ ಸೌಲಭ್ಯವಿಲ್ಲದ ರೆವಿನ್ಯೂ ಬಡಾವಣೆಗಳು ಹಾಗೂ ಸ್ಲಂಗಳಲ್ಲಿ ವಾಸಿಸುತ್ತಿದ್ದಾರೆ. ಮಾಹಿತಿ ಕೊರತೆಯಿಂದ ಸರ್ಕಾರಿ ಸೌಲಭ್ಯಗಳಿಂದಲೂ ವಂಚಿತರಾಗುತ್ತಿದ್ದಾರೆ. ಶಿಕ್ಷಣ, ಆರೋಗ್ಯ ಸೇವೆ ಸಮರ್ಪಕವಾಗಿ ಲಭ್ಯವಾಗಿಲ್ಲ. ಹಿಂದುಳಿದಿರುವ ಕ್ಷೇತ್ರವೆಂಬ ಹಣೆಪಟ್ಟಿ ಗಟ್ಟಿಯಾಗಿ ಉಳಿದಿದೆ. ಕ್ಷೇತ್ರದ ಸಂಪೂರ್ಣ ಚಿತ್ರಣ ನನಗೆ ತಿಳಿದಿದೆ. ಹಾಗಾಗಿ ಇತರೆ ಕ್ಷೇತ್ರಗಳಂತೆ ನರಸಿಂಹರಾಜ ಕ್ಷೇತ್ರವನ್ನೂ ಅಭಿವೃದ್ಧಿಪಡಿಸುವ ಏಕಮಾತ್ರ ಉದ್ದೇಶದಿಂದ ಚುನಾವಣೆಯಲ್ಲಿ ಸ್ಪರ್ಧಿಸಿದ್ದೆ. ಎಲ್ಲಾ ವರ್ಗದ ಜನರೂ ನನ್ನನ್ನು ಹರಸಿದ್ದಾರೆ. ನಾನು ಚುನಾವಣೆಯಲ್ಲಿ ಸೋತಿದ್ದೇನೆ ಹೊರತು ಜನರ ಪ್ರೀತಿ–ವಿಶ್ವಾಸ ಕಳೆದುಕೊಂಡಿಲ್ಲ. ಯಾವಾಗ ಬೇಕಾದರೂ ನನ್ನಿಂದ ಕೆಲಸ ಪಡೆಯುವ ಹಕ್ಕು ಜನರಿಗಿದೆ ಎಂದು ಹೇಳಿದ್ದಾರೆ.

ನರಸಿಂಹರಾಜ ಕ್ಷೇತ್ರದ ಬಿಜೆಪಿ ಕಾರ್ಯಕರ್ತರು ಅತ್ಯಂತ ಪ್ರಾಮಾಣಿಕರು, ಪಕ್ಷನಿಷ್ಠೆಯುಳ್ಳವರು. ಎಷ್ಟೆಲ್ಲಾ ಸವಾಲುಗಳು, ಅಡ್ಡಿ ಆತಂಕಗಳು ಎದುರಾದರೂ ಪಕ್ಷಕ್ಕಾಗಿ ದುಡಿದಿದ್ದಾರೆ. ಇದನ್ನು ಪಕ್ಷ ಗಮನಿಸಬೇಕಿತ್ತು. ಅಧಿಕಾರದಲ್ಲಿದ್ದಾಗ ಚುನಾವಣೆಯಲ್ಲಿ ಸೋತಿದ್ದ ನನಗಾಗಲೀ ಪ್ರಾಮಾಣಿಕ ಕಾರ್ಯಕರ್ತರಿಗಾಗಲೀ ಯಾವುದಾದರೂ ಸ್ಥಾನಮಾನ ನೀಡಿ, ಪಕ್ಷದ ಬಲವರ್ಧನೆಗೆ ಅವಕಾಶ ಮಾಡಿಕೊಡಬೇಕಿತ್ತು. ಆದರೆ ಸಿ ಗ್ರೇಡ್ ಕ್ಷೇತ್ರವೆಂದು ನಿರ್ಲಕ್ಷಿಸಲಾಯಿತು. ಮುಂದೆ ಹೀಗಾಗದಂತೆ ಎಚ್ಚರವಹಿಸಬೇಕು ಎಂದಿದ್ದಾರೆ.

ಡಾ.ಹೆಚ್.ಸಿ.ಮಹದೇವಪ್ಪರನ್ನು ಸಚಿವರನ್ನಾಗಿ ಮಾಡಿ



ಮೈಸೂರು,ಮೇ 23(ಪಿಎಂ)– ಈ ಬಾರಿಯ ವಿಧಾನಸಭಾ ಚುನಾವಣೆಯಲ್ಲಿ ದಲಿತ ಸಮುದಾಯ ಹೆಚ್ಚಿನ ಪ್ರಮಾಣದಲ್ಲಿ ಕಾಂಗ್ರೆಸ್ ಬೆಂಬಲಿಸಲು ಮಾಜಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪರ ಪರಿಶ್ರಮ ಕಾರಣ. ಹಾಗಾಗಿ ಮುಂದಿನ ಮಂತ್ರಿಮಂಡಲ ವಿಸ್ತರಣೆಯಲ್ಲಿ ಅವರಿಗೆ ಸಚಿವ ಸ್ಥಾನ ನೀಡಬೇಕೆಂದು ದಲಿತ ಸಂಘರ್ಷ ಸಮಿತಿಗಳ ಐಕ್ಯ ಹೋರಾಟ ಚಾಲನಾ ಸಮಿತಿ ಒತ್ತಾಯಿಸಿದೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಮಂಗಳವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಚಾಲನಾ ಸಮಿತಿ ಜಿಲ್ಲಾ ಸಂಚಾಲಕ ಮಲ್ಲೇಶ್ ಚುಂಚನಹಳ್ಳಿ, ಈ ಬಾರಿಯ ಚುನಾವಣೆಯಲ್ಲಿ ದಲಿತ ಸಂಘಟನೆಗಳು ಒಕ್ಕೊರಲಿನಿಂದ ಕಾಂಗ್ರೆಸ್ ಪರ ರಾಜ್ಯಾದ್ಯಂತ ಪ್ರತಿ ಹಳ್ಳಿಯ ಮನೆ ಮನೆಗಳಿಗೆ ಭೇಟಿ ನೀಡಿ ಪ್ರಚಾರ ಮಾಡಿದವು. ಇದಕ್ಕೆ ಪ್ರಮುಖ ಕಾರಣ ಡಾ.ಹೆಚ್.ಸಿ.ಮಹದೇವಪ್ಪ ಎಂದರು.

ಎಲ್ಲಾ ದಲಿತ ಸಂಘರ್ಷ ಸಮಿತಿಯ ಬಣಗಳನ್ನು ಒಂದುಗೂಡಿಸಿ ದಲಿತ ಸಂಘರ್ಷ ಸಮಿತಿಗಳ ಐಕ್ಯ ಹೋರಾಟ ಚಾಲನಾ ಸಮಿತಿ ರೂಪ ನೀಡಿ ಬಿಜೆಪಿ ದುರಾಡಳಿತ ಮತ್ತು ದಲಿತ ವಿರೋಧಿ ನೀತಿಗಳ ವಿರುದ್ಧ ಪ್ರಬಲ ಹೋರಾಟಕ್ಕೆ ಅಣಿ ಮಾಡಿದ ಕೀರ್ತಿ ಮಹದೇವಪ್ಪರಿಗೆ ಸಲ್ಲುತ್ತದೆ. ಕಳೆದ ಡಿಸೆಂಬರ್ 6ರಂದು ಬೆಂಗಳೂರಿನಲ್ಲಿ ದಲಿತ ಸಾಂಸ್ಕೃತಿಕ ಪ್ರತಿರೋಧ ಕಾರ್ಯಕ್ರಮ ಏರ್ಪಡಿಸಿ, ರಾಜ್ಯದ ಮೂಲೆ ಮೂಲೆಗಳಿಂದಲೂ ದಲಿತ ಸಮುದಾಯದವರನ್ನು ಸಮಾವೇಶಗೊಳಿಸಿ, ಚುನಾವಣೆಯಲ್ಲಿ ಬಿಜೆಪಿ ವಿರುದ್ಧ ಮತ್ತು ಕಾಂಗ್ರೆಸ್ ಪರ ಮತ ಚಲಾಯಿಸುವಂತೆ ಪ್ರೇರೇಪಿಸಲಾಯಿತು ಎಂದು ಹೇಳಿದರು.

ಇದರ ಪರಿಣಾಮ ಶೇ.80ರಷ್ಟು ದಲಿತರು ಕಾಂಗ್ರೆಸ್ ಪಕ್ಷಕ್ಕೆ ಮತ ನೀಡಿದರು. ಇದರಿಂದ ಕಾಂಗ್ರೆಸ್ ಬಹುಮತ ಪಡೆದು ಸರ್ಕಾರ ರಚಿಸಿತು. ಇದರಲ್ಲಿ ಡಾ. ಹೆಚ್.ಸಿ.ಮಹದೇವಪ್ಪನವರ ಪರಿಶ್ರಮ ಅಪಾರವಾಗಿದೆ. ಆದರೆ ಅವರಿಗೆ ಸಂಪುಟ ರಚನೆಯ ಮೊದಲ ಸುತ್ತಿನಲ್ಲೇ ಸಚಿವ ಸ್ಥಾನ ನೀಡದಿರುವುದು ಖಂಡನೀಯ. ಮುಂದಿನ ಮಂತ್ರಿ ಮಂಡಲ ವಿಸ್ತರಣೆ ವೇಳೆಯಲ್ಲೇ ಮಹದೇವಪ್ಪರಿಗೆ ಸಚಿವ ಸ್ಥಾನ ನೀಡಬೇಕು ಎಂದು ಒತ್ತಾಯಿಸಿದರು.

ದಲಿತ ಸಮುದಾಯವರು ಮುಖ್ಯಮಂತ್ರಿ ಆಗಬೇಕೆಂಬ ಆಕಾಂಕ್ಷೆ ನಮ್ಮಲ್ಲಿ ಇದ್ದೇ ಇದೆ ಎಂದು ಹೇಳಿದರು. ಚಾಲನಾ ಸಮಿತಿ ಮುಖಂಡರಾದ ಕೆ.ಮಣಿಯಯ್ಯ, ಕಾರ್ಯ ಬಸವಣ್ಣ, ಸೋಮಣ್ಣ ಬನ್ನಹಳ್ಳಿ, ಬಿ.ಆರ್.ಮಹದೇವಸ್ವಾಮಿ, ಮೆಲ್ಲಹಳ್ಳಿ ನಾರಾಯಣ ಗೋಷ್ಠಿಯಲ್ಲಿದ್ದರು.

ಯೋಗಾ ನರಸಿಂಹ ಸ್ವಾಮಿ ದೇವಸ್ಥಾನದಲ್ಲಿ 25ರಿಂದ ಕುಂಬಾಭಿಷೇಕ

ಮೈಸೂರು, ಮೇ 23– ಮೈಸೂರಿನ ಒಂದನೇ ಹಂತದ ಶ್ರೀ ಯೋಗಾನರಸಿಂಹಸ್ವಾಮಿ ದೇವಸ್ಥಾನದಲ್ಲಿ ಮೇ 25ರಿಂದ ಕುಂಭಾಭಿಷೇಕ ಮಹೋತ್ಸವ ಜರುಗಲಿದೆ. ಮೇ 25ರಂದು ಬೆಳಗ್ಗೆ 9ಕ್ಕೆ ಶ್ರೀ ಯೋಗಾನರಸಿಂಹಸ್ವಾಮಿಯವರಿಗೆ ಅಭಿಷೇಕ ಮತ್ತು ಲಕ್ಷಾರ್ಚನೆ ಹಾಗೂ ಮಹಿಳಾ ಸಂಘದವರಿಂದ ಲಲಿತಾ ಸಹಸ್ರನಾಮ, ಮೇ 26ರಂದು ಬೆಳಗ್ಗೆ 9ಕ್ಕೆ ಸಹಸ್ರ ಕಳಶಾಭಿಷೇಕ, ಸೌಂದರ್ಯ ಲಹರಿ ಪಾರಾಯಣ, ಮೇ 27ರಂದು ಕುಂಭಾಭಿಷೇಕ, ಅಖಂಡ ಮಹಾ ಸುದರ್ಶನ ಹೋಮ, ವಿಷ್ಣು ಸಹಸ್ರನಾಮ ಪಾರಾಯಣ ಮಧ್ಯಾಹ್ನ 12ಕ್ಕೆ ಪೂರ್ಣಾಹುತಿ, 12.30ಕ್ಕೆ ಅನ್ನ ಸಂತರ್ಪಣೆ ನೆರವೇರಲಿದೆ. ಈ ಎಲ್ಲಾ ಕೈಂಕರ್ಯಗಳೂ ಪ್ರೊ.ಡಾ.ಭಾಷ್ಯಂ ಸ್ವಾಮೀಜಿಯವರ ದಿವ್ಯ ನೇತೃತ್ವದಲ್ಲಿ ನೆರವೇರಲಿದೆ ಎಂದು ದೇವಸ್ಥಾನದ ವ್ಯವಸ್ಥಾಪಕ ಎನ್.ಶ್ರೀನಿವಾಸನ್ ತಿಳಿಸಿದ್ದಾರೆ.

ಜಿಲ್ಲಾಧಿಕಾರಿ ಡಾ.ರಾಜೇಂದ್ರ ಈಗ ಮುಡಾ ಅಧ್ಯಕ್ಷರು

ಮೈಸೂರು, ಮೇ 23– ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾಗಿ ಜಿಲ್ಲಾಧಿಕಾರಿ ಡಾ.ಕೆ.ವಿ. ರಾಜೇಂದ್ರ ಅವರು ಅಧಿಕಾರ ಸ್ವೀಕರಿಸಿದ್ದಾರೆ. ನಿಗಮ, ಮಂಡಳಿಗಳ ಪದಾಧಿಕಾರಿಗಳ ನಾಮನಿರ್ದೇಶನ ರದ್ದುಗೊಳಿಸಿರುವ ಹಿನ್ನೆಲೆಯಲ್ಲಿ ಮುಡಾ ಅಧ್ಯಕ್ಷರಾಗಿ ಅಧಿಕಾರ ಸ್ವೀಕರಿಸಿರುವ ಅವರು, ಪ್ರಾಧಿಕಾರದ ಕೆಲಸ ಕಾರ್ಯಗಳಿಗೆ ಸಂಬಂಧಪಟ್ಟ ವೈಯಕ್ತಿಕವಾಗಿ ನನ್ನ ಗಮನಕ್ಕೆ ತರಬೇಕಾದಂತಹ ಅರೆಸರ್ಕಾರಿ ಪತ್ರಗಳು, ಗೌಪ್ಯ ಪತ್ರಗಳು ಹಾಗೂ ಇತರೆ ದಾಖಲೆಗಳನ್ನು ಪ್ರಾಧಿಕಾರದ ಅಧ್ಯಕ್ಷರ ಕಚೇರಿಗೆ ಹಾಜರುಪಡಿಸುವಂತೆ ಸರ್ಕಾರದ ವಿವಿಧ ಇಲಾಖೆಗಳ ಮುಖ್ಯಸ್ಥರಿಗೆ ತಿಳಿಸಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯನವರ ಸೂಚನೆ ಮೇರೆಗೆ ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ಹಿಂದಿನ ಸರ್ಕಾರದಲ್ಲಿ ನೇಮಕ ಮಾಡಲಾಗಿದ್ದ ನಿಗಮ ಮಂಡಳಿ, ಸ್ವಾಯತ್ತ ಸಂಸ್ಥೆಗಳ ಎಲ್ಲಾ ಅಧ್ಯಕ್ಷರು, ನಿರ್ದೇಶಕರು, ಸದಸ್ಯರ ನಾಮನಿರ್ದೇಶನ ರದ್ದು ಮಾಡಿ ಆದೇಶಿಸಿದ್ದಾರೆ.



ಶಶಿಕಲಾಗೆ ಜೈಲಿನಲ್ಲಿ ಐಷಾರಾಮಿ ಸೌಲಭ್ಯ ಆರೋಪ

ಮುಖ್ಯ ಅಧೀಕ್ಷಕ ಕೃಷ್ಣಕುಮಾರ್ ವಿರುದ್ಧದ ಪ್ರಕರಣ ರದ್ದು

ಬೆಂಗಳೂರು: ತಮಿಳುನಾಡು ಮಾಜಿ ಮುಖ್ಯಮಂತ್ರಿ ಜೆ. ಜಯಲಲಿತಾ ಆಪ್ತೆ ವಿ.ಕೆ.ಶಶಿಕಲಾಗೆ ಜೈಲಿನಲ್ಲಿ ಐಷಾರಾಮಿ ಸೌಲಭ್ಯ ಕಲ್ಪಿಸಲು ಲಂಚ ಪಡೆದ ಆರೋಪ ದಲ್ಲಿ ಬೆಳಗಾವಿ ಕೇಂದ್ರ ಕಾರಾಗೃಹದ ಮುಖ್ಯ ಅಧೀಕ್ಷಕ ಕೃಷ್ಣಕುಮಾರ್, ಕರ್ನಾಟಕ ಕಾರಾಗೃಹ ಅಕಾಡೆಮಿಯ ಉಪ ನಿರ್ದೇಶಕಿ ಡಾ ಆರ್ ಅನಿತಾ ಮತ್ತು ಕರ್ನಾಟಕ ರಾಜ್ಯ ಕೈಗಾರಿಕಾ ಭದ್ರತಾ ಪಡೆಯ ಇನ್ಸ್‌ಪೆಕ್ಟರ್ ಗಜರಾಜ ವಿರುದ್ಧ ದಾಖಲಾಗಿದ್ದ ಕ್ರಿಮಿನಲ್ ಪ್ರಕರಣವನ್ನು ಹೈಕೋರ್ಟ್ ರದ್ದುಪಡಿಸಿದೆ.



ತಮ್ಮ ವಿರುದ್ಧ ಭ್ರಷ್ಟಾಚಾರ ನಿಗ್ರಹ ದಳ ಕೈಗೊಂಡಿದ್ದ ತನಿಖೆ (ಎಸಿಬಿ) ರದ್ದುಪಡಿಸುವಂತೆ ಕೋರಿ ಪೊಲೀಸ್ ಅಧಿಕಾರಿಗಳಾದ ಗಜರಾಜ ಮಾಕನೂರ್, ಡಾ.ಆರ್. ಅನಿತಾ ಮತ್ತು ಕೃಷ್ಣಕುಮಾರ್ ಮೂರು ಪ್ರತ್ಯೇಕ ಅರ್ಜಿಗಳನ್ನು ಸಲ್ಲಿಸಿದ್ದರು.

ಅರ್ಜಿಗಳ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಕೆ.ನಟರಾಜನ್ ಅವರ ಪೀಠ ಈ ಆದೇಶ ಮಾಡಿದೆ. ಕೃಷ್ಣಕುಮಾರ್ ವಿರುದ್ಧ ತನಿಖಾಧಿಕಾರಿಗಳು ಸಲ್ಲಿಸಿರುವ ದೋಷಾರೋಪ ಪಟ್ಟಿಯಲ್ಲಿ ಕೃಷ್ಣಕುಮಾರ್ ಅವರು ಲಂಚಕ್ಕೆ ಬೇಡಿಕೆಯಿಟ್ಟ ಮತ್ತು ಸ್ವೀಕರಿಸಿದ ಬಗ್ಗೆ ನೇರ–ನಿರ್ದಿಷ್ಟ ಆರೋಪಗಳು ಇಲ್ಲ. ಅವರ ವಿರುದ್ಧ ಇಲಾಖೆ ವಿಚಾರಣೆ ಇನ್ನೂ ಪೂರ್ಣಗೊಂಡಿಲ್ಲ ಮತ್ತು ದೋಷಿಯಾಗಿ ಸಾಬೀತಾಗಿಲ್ಲ.

ಹೀಗಿರುವಾಗ ಇದೇ ಆರೋಪದ ಸಂಬಂಧ ಡಾ.ಅನಿತಾ ವಿರುದ್ಧ ಪ್ರಕರಣಗಳನ್ನು ರಾಜ್ಯ ಸರ್ಕಾರ ಕೈಬಿಟ್ಟಿದೆ. ಆದರೆ, ಕೃಷ್ಣ ಕುಮಾರ್ ವಿರುದ್ಧದ ಪ್ರಕರಣ ಮುಂದುವರಿಸಲು ಸರ್ಕಾರ ತೀರ್ಮಾನಿಸಿದೆ. ಮತ್ತೊಂದೆಡೆ ಸತ್ಯನಾರಾಯಣ ವಿರುದ್ಧದ ಆರೋಪಗಳನ್ನು ಸರ್ಕಾರ ಕೈಬಿಡಲಾಗಿದೆ. ಹೀಗಿರುವಾಗ ಕೃಷ್ಣಕುಮಾರ್ ವಿರುದ್ಧದ 2021ರ ಡಿ.23ರಂದು ಪೂರ್ವಾನುಮತಿ ನೀಡಿರುವ ರಾಜ ಗೃಹ ಇಲಾಖೆ ಅಧೀನ ಕಾರ್ಯದರ್ಶಿಯ ಕ್ರಮ ವಿವೇಚನೆ ರಹಿತವಾಗಿದೆ. ಆದ್ದರಿಂದ ಕೃಷ್ಣಕುಮಾರ್ ವಿರುದ್ಧದ ಪ್ರಕರಣ ಮತ್ತು ಅವರ ವಿರುದ್ಧ ಕ್ರಮ ಜರುಗಿಸಲು ನೀಡಿರುವ ಪೂರ್ವಾನುಮತಿ ರದ್ದುಪಡಿಸಲು ಅರ್ಹವಾಗಿದೆ ಎಂದು ಆದೇಶಿಸಿದೆ.

ಮಕ್ಕಳನ್ನು ಸನ್ಮಾರ್ಗದಲ್ಲಿ ಬೆಳೆಸಲು ವಚನಗಳನ್ನು ಹೇಳಿಕೊಡಿ: ಡಾ.ಸುಧಾಮೂರ್ತಿ ಸಲಹೆ

ಇನ್ಫೋಸಿಸ್ ಪ್ರತಿಷ್ಠಾನದ ಸಂಸ್ಥಾಪಕಿಗೆ ಕದಳಿ ಪ್ರಶಸ್ತಿ ಪ್ರದಾನ

ಮೈಸೂರು,ಮೇ 23 (ಎಂಟಿವೈ)– ಮಕ್ಕಳನ್ನು ಸನ್ಮಾರ್ಗದಲ್ಲಿ ಬೆಳೆಸಬೇಕಾದರೆ ಪೋಷಕರು ಅಕ್ಕಮಹಾದೇವಿ, ಬಸವಣ್ಣನವರು ಸೇರಿದಂತೆ ಇನ್ನಿತರ ವಚನಕಾರರು ಬರೆದಿರುವ ಸರಳ ವಚನಗಳನ್ನು ಮಕ್ಕಳಿಗೆ ಹೇಳಿಕೊಡಲು ಮುಂದಾಗಬೇಕು ಎಂದು ಇನ್ಫೋಸಿಸ್ ಫೌಂಡೇಷನ್ ಸಂಸ್ಥಾಪಕಿ ಡಾ.ಸುಧಾಮೂರ್ತಿ ಸಲಹೆ ನೀಡಿದ್ದಾರೆ.

ಮೈಸೂರಿನ ಸರಸ್ವತಿಪುರಂನಲ್ಲಿರುವ ಜೆಎಸ್‌ಎಸ್ ಮಹಿಳಾ ಕಾಲೇಜಿನ ನವಜ್ಯೋತಿ ಸಭಾಂಗಣದಲ್ಲಿ ಮಂಗಳವಾರ ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್, ಕದಳಿ ಮಹಿಳಾ ವೇದಿಕೆ ಸಹಯೋಗದಲ್ಲಿ ಆಯೋಜಿಸಿದ್ದ ಅಕ್ಕ ಮಹಾದೇವಿ ಜಯಂತಿ ಕಾರ್ಯಕ್ರಮದಲ್ಲಿ ಕದಳಿ ಪ್ರಶಸ್ತಿ ಸ್ವೀಕರಿಸಿ ಮಾತನಾಡಿದರು.

ಅಕ್ಕಮಹಾದೇವಿ ಹಾಗೂ ಬಸವಣ್ಣನವರು ಸರಳವಾದ ಅನೇಕ ವಚನಗಳನ್ನು ರಚಿಸಿದ್ದಾರೆ. ವಚನಗಳ ಸಾರದಿಂದ ಬದುಕನ್ನು ಅರ್ಥಪೂರ್ಣವಾಗಿಸಬಹುದಾಗಿದೆ. ಅಲ್ಲದೆ, ಮಕ್ಕಳಿಗೆ ಮಹನೀಯರ ವಚನಗಳನ್ನು ಕೇಳಿಸಿದಾಗ ಹಾಗೂ ಅವುಗಳ ಅರ್ಥ ತಿಳಿಸಿದಾಗ ಮಕ್ಕಳನ್ನು ಸತ್ಪ್ರಜೆಗಳಾಗಿ ರೂಪಿಸಬಹುದು ಎಂದು ಅಭಿಪ್ರಾಯಪಟ್ಟರು.

ಕಠಿಣ ವಚನಕ್ಕಿಂತ ಸರಳ ವಚನಗಳನ್ನು ಕಲಿಸುವುದು ಉತ್ತಮ. ಅದು ಮಕ್ಕಳಿಗೆ ಅರ್ಥವಾಗದೆ ಹೋಗಬಹುದು. ಅವರಿಗೆ ತಿಳಿವಳಿಕೆ ಬಂದಾಗ ಅರ್ಥವಾಗುತ್ತದೆ. ಜೀವನದ ಫಿಲಾಸಫಿ (ತತ್ವಶಾಸ್ತ್ರ) ಅಡಕವಾಗಿರುವುದೇ ವಚನದಲ್ಲಿ. ಇದು ಬದುಕಿನ ನಿಷ್ಠೆ, ಸಂಸ್ಕಾರ ಮತ್ತು ಸಂಸ್ಕೃತಿ ಕಲಿಸುತ್ತದೆ. ಸಾಹಿತ್ಯ ಎಂದರೆ ಬರೀ ಶಬ್ದವಲ್ಲ. ದೇಶ ಎಂದರೆ ನೆಲವಷ್ಟೇ ಅಲ್ಲ. ಸಾಹಿತ್ಯ ಮತ್ತು ದೇಶ ಎಂದರೆ ಭಾವನೆಗಳು. ಮನುಷ್ಯರು ಮನುಷ್ಯರು ಸೇರಿಸುವ ಕೊಂಡಿ. ಅಂತಹ ಭಾವನೆ ತುಂಬಿರುವ ವಚನಗಳನ್ನು ಕಲಿಸಿ ಸಂಸ್ಕಾರ, ಸಂಸ್ಕೃತಿಯನ್ನು ಯುವ ಪೀಳಿಗೆ ವರ್ಗಾವಣೆ ಮಾಡಬೇಕು ಎಂದರು.



ಮೈಸೂರಿನ ಸರಸ್ವತಿಪುರಂನಲ್ಲಿರುವ ಜೆಎಸ್‌ಎಸ್ ಮಹಿಳಾ ಕಾಲೇಜಿನ ನವಜ್ಯೋತಿ ಸಭಾಂಗಣದಲ್ಲಿ ಮಂಗಳವಾರ ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್, ಕದಳಿ ಮಹಿಳಾ ವೇದಿಕೆ ಸಹಯೋಗದಲ್ಲಿ ನಡೆದ ಕಾರ್ಯಕ್ರಮದಲ್ಲಿ ಇನ್ಫೋಸಿಸ್ ಫೌಂಡೇಷನ್ ಸಂಸ್ಥಾಪಕಿ ಡಾ.ಸುಧಾಮೂರ್ತಿ ಅವರಿಗೆ ಕದಳಿ ಪ್ರಶಸ್ತಿ ಪ್ರದಾನ ಮಾಡಲಾಯಿತು.

> “ದುಡ್ಡು ಬಂದರೆ ಊರಿನವರೆಲ್ಲ ಬಳಗವಾಗುತ್ತದೆ. ಕುರೂಪಿಯೂ ಸುಂದರಿ ಆಗುತ್ತಾಳೆ. ಪ್ರತಿ ಮಾತಿಗೂ ಮನ್ನಣೆ ದೊರೆಯುತ್ತದೆ. ಆದರೆ, ಇದೆಲ್ಲ ವಾಸ್ತವವಲ್ಲ. ಇದು ಸುಳ್ಳು–ಪೊಳ್ಳು. ಸಾರ್ವಜನಿಕರ, ಪರರ ಹಣ ಬಂದಾಗ ಜವಾಬ್ದಾರಿ ಬರುತ್ತದೆ. ಅದನ್ನು ಸರಿಯಾಗಿ ಖರ್ಚು ಮಾಡಬೇಕು. ಹಣ ಪೋಲು ಮಾಡದೆ ಜನರ ಕಲ್ಯಾಣ, ಸಮಾಜದ ಒಳಿತಿಗೆ ಬಳಕೆ ಮಾಡಬೇಕು. ಇನ್‌ಫೋಸಿಸ್ ಹಣವನ್ನು ಖರ್ಚು ಮಾಡುವಾಗ ಜವಾಬ್ದಾರಿ ಹೆಚ್ಚಿರುತ್ತದೆ. ಅದು ನನ್ನ ಹಣ ಮಾತ್ರವಲ್ಲ. ಪರಧನ ಎಂದುಕೊಂಡಾಗ ಜವಾಬ್ದಾರಿ ಮತ್ತೂ ಹೆಚ್ಚು. ಸರಿಯಾದ ಮಾರ್ಗದಲ್ಲಿ ಖರ್ಚು ಮಾಡಬೇಕಾಗುತ್ತದೆ. ದೇವರ ಕೊಟ್ಟ ವಿಶ್ವಾಸದ ಧನ. –ಡಾ.ಸುಧಾಮೂರ್ತಿ

> “ಜೀವನದಲ್ಲಿ ಸಮಸ್ಯೆ, ಸವಾಲುಗಳು, ಗೊಂದಲ ಎದುರಾಗಿ ಧೈರ್ಯ ಕಳೆದುಕೊಂಡಾಗ ಪ್ರತಿಯೊಬ್ಬ ಮಹಿಳೆಯರು ಅಕ್ಕಮಹಾದೇವಿ ಅವರನ್ನು ಸ್ಮರಿಸಬೇಕು. ವಿವಿಧ ಸಮಸ್ಯೆಗಳನ್ನು ಎದುರಿಸಿ ನಿಂತ ಅವರ ವಚನ ನೆನಪು ಮಾಡಿಕೊಳ್ಳಿ, ಆಗ ಸಮಸ್ಯೆಗಳಿಗೆ ಪರಿಹಾರ, ಧೈರ್ಯ ಬರಲಿದೆ. ಧೈರ್ಯವೊಂದಿದ್ದರೆ ಮಹಿಳೆಯರು ಏನು ಬೇಕಾದರೂ ಸಾಧಿಸಬಹುದು. ಆ ಸಾಮರ್ಥ್ಯ ಅವಳಲ್ಲಿದೆ. ಆದರೆ, ಅಧೈರ್ಯವೇ ಮಹಿಳೆಯರ ದೊಡ್ಡ ಹಿನ್ನಡೆ. ಸಂಬಂಧಿಕರು, ಸಮಾಜ, ಮಕ್ಕಳು, ಮರಿಗಳು ಏನು ತಿಳಿದುಕೊಳ್ಳುತ್ತಾರೆ ಎಂಬ ಅಳುಕು ಅವರಲ್ಲಿ ಸದಾ ಕಾಡುತ್ತದೆ. ಆದರೆ, ನೈತಿಕವಾಗಿ ಮತ್ತು ಕಾನೂನಾತ್ಮಕವಾಗಿ ಸರಿಯಾಗಿದ್ದರೆ ಯಾವುದಕ್ಕೂ ಹೆದರು ಅಗತ್ಯವಿಲ್ಲ. ಹಿಡಿದ ಕೆಲಸದಲ್ಲಿ ಮುಂದುವರಿಬೇಕು. –ಡಾ.ಸುಧಾಮೂರ್ತಿ

800 ವರ್ಷಗಳ ಹಿಂದೆ ಒಬ್ಬ ಮಹಿಳೆ ತಾನು ತನ್ನ ಜೀವನದ ಗುರಿ ತಿಳಿದುಕೊಂಡು ಏಕಾಏಕಿಯಾಗಿ ಓಡಾಡಿ ಕಲ್ಯಾಣ ತಲುಪಿ ಅನುಭವ ಮಂಟಪದಲ್ಲಿ ವಚನ ಬರೆದು, ಹೇಳಿದ ಮಾತುಗಳು ಈ ಕಾಲಕ್ಕೂ ಪ್ರಸ್ತುತವಾಗಿವೆ. ದಿಟ್ಟತನದಿಂದ ಅನ್ಯಾಯವನ್ನು ಎದುರಿಸಿ ಶ್ರೇಷ್ಠವಾದ ಸಾಹಿತ್ಯ ನೀಡಿದ್ದಾರೆ. ಮಹಿಳಾ ಜೀವನದ ಗುರಿ ತಿಳಿದುಕೊಂಡವರು ಅಕ್ಕಮಹಾದೇವಿ. ಅನ್ಯಾಯವನ್ನು ಎದುರಿಸಿದ ದಿಟ್ಟ ಮಹಿಳೆ ಅವರು. ಮಹಿಳಾ ಪ್ರಾತಿನಿಧ್ಯವಿಲ್ಲದ ಸಂದರ್ಭದಲ್ಲೇ ಅನುಭವ ಮಂಟಪದಲ್ಲಿ ವಚನ, ಮಾತುಗಳ ಮೂಲಕ ಬೆರಗುಗೊಳಿಸಿದವರು. ಸಾಹಿತ್ಯ ದೃಷ್ಟಿಯಲ್ಲಿ ಅವರ ವಚನ ಸಾಹಿತ್ಯ ಶ್ರೇಷ್ಠ ಎನಿಸಿಕೊಂಡಿದೆ. ಬೇರೆಯವರ 2 ವಚನ, ಅಕ್ಕಮಹಾದೇವಿಯವರ 1 ವಚನಕ್ಕೆ ಸಮ ಎಂದು ಹಿರಿಯರು ಹೇಳಿದ್ದಾರೆ. ಅದು ಅವರ ಪ್ರೌಢಿಮೆ, ಸಾಹಿತ್ಯ ಕೃಷಿಗೆ ಸಾಕ್ಷಿಯಾಗಿದೆ. ಅಕ್ಕಮಹಾದೇವಿಯವರ ವಚನಗಳು ವಿಫುಲ ಶಬ್ದ ಬಂಡಾರ ಹೊಂದಿರುವ ಸರಳ ಸಾಹಿತ್ಯ ಎಂದರು.

50 ವರ್ಷಗಳ ಹಿಂದೆ ತಿಪ್ಪೇಸ್ವಾಮಿ ಅವರ ಕದಳಿ ಕರ್ಪೂರ ಓದಿದೆ. ಅನಂತರ ಕದಳಿ, ಕಲ್ಯಾಣ ತನಕ ಹೋಗಿ ಬಂದೆ. ಅಕ್ಕನನ್ನು ತಿಳಿಯುವ ಪ್ರಯತ್ನ ಮಾಡಿದೆ. ಶ್ರೀಶೈಲಕ್ಕೆ ಹೋಗಲಾಗಲಿಲ್ಲ. 17ನೇ ವಯಸ್ಸಲ್ಲಿ 2 ಸಾವಿರ ವಚನಗಳನ್ನು ಕಲಿತಿದ್ದೆ. 44ನೇ ವಯಸ್ಸಿನಲ್ಲಿ ವಚನಗಳ ಅರ್ಥ ತಿಳಿದುಕೊಂಡೆ. 50ನೇ ವಯಸ್ಸಿನಲ್ಲಿ ಅನುಷ್ಠಾನಕ್ಕೆ ತಂದಿದ್ದೇನೆ ಎಂದು ವಿವರಿಸಿದರು.

ಸುತ್ತೂರು ಮಠದ ಶ್ರೀಗಳು ಗುರುಸ್ಥಾನದಲ್ಲಿದ್ದಾರೆ. ಕರುನಾಡು ಜನರ ಬಗ್ಗೆ ತಾಯಿ ಮಕ್ಕಳ ಸಂಬಂಧ ಇದೆ. ಅಧ್ಯಾತ್ಮದ ಜತೆಗೆ ಅನಾಥರಿಗೂ ದಾರಿದೀಪವಾಗಿದ್ದಾರೆ. ಬಸವಣ್ಣರಂತೆ ಸಮಾಜಕ್ಕೆ ದಾರಿ ತೋರುತ್ತಿದ್ದಾರೆ. ಗುರು ಮಠಗಳಿಗೆ ಕಾಣಿಕೆ ಸಲ್ಲಿಸುವುದು ನಮ ಕುಟುಂಬದ ಪದ್ಧತಿ. ಈ ವರ್ಷ ಸುತ್ತೂರು ಮಠಕ್ಕೆ ಸಲ್ಲಿಸುತ್ತಿದ್ದೇನೆ ಎಂದರು.

ವ್ಹೀಲ್‌ಚೇರ್ ವಿತರಣೆ: ಕದಳಿ ಮಹಿಳಾ ವೇದಿಕೆ ಸದಸ್ಯೆ ನೀಲಾಂಬಿಕೆ ಅವರು ವಿಶೇಷ ಚೇತನ ವಿದ್ಯಾರ್ಥಿನಿಗೆ ವ್ಹೀಲ್ ಚೇರ್ ನೀಡಿದರು. ರಾಧಾ ಮಲ್ಲಪ್ಪ ಅವರು ಸಂಗೀತ ಕ್ಷೇತ್ರದ ಸಾಧಕರನ್ನು ಗೌರವಿಸಲು ತಮ್ಮ ತಾಯಿ ಹೆಸರಿನಲ್ಲಿ 2 ಲಕ್ಷ ರೂ. ದತ್ತಿ ನೀಡಿದರು. ಸುತ್ತೂರು ಕ್ಷೇತ್ರದ ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಸಾನಿಧ್ಯ ವಹಿಸಿದ್ದರು. ವಿಶ್ರಾಂತ ಕುಲಪತಿ ಡಾ.ಎಸ್. ಇಂದುಮತಿ, ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಮ.ಗು.ಸದಾನಂದಯ್ಯ, ಕದಳಿ ಮಹಿಳಾ ವೇದಿಕೆ ಅಧ್ಯಕ್ಷೆ ಶಾರದಾ ಶಿವಲಿಂಗಸ್ವಾಮಿ, ಜಿಲ್ಲಾ ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಹೆಳವರಹುಂಡಿ ಸಿದ್ದಪ್ಪ ಇದ್ದರು.

ಮೈಸೂರು ಮಿತ್ರ

ಬುಧವಾರ 24 ಮೇ 2023

ವಿವಿಧ ಇಲಾಖೆ ಕಾರ್ಯವೈಖರಿ ಬಗ್ಗೆ ಸರ್ಕಾರಕ್ಕೆ ವರದಿ



ಮಂಡ್ಯ, ಮೇ 23– ಕರ್ನಾಟಕ ಆಡಳಿತ ಸುಧಾರಣಾ ಆಯೋಗ–2 ವಿವಿಧ ಇಲಾಖೆಗಳಿಗೆ ಭೇಟಿ ನೀಡಿ, ಇಲಾಖೆಗಳ ಕಾರ್ಯವೈಖರಿಗಳ ಬಗ್ಗೆ ತಿಳಿದು ಆಡಳಿತ ಸುಧಾರಿಸಲು ಬೇಕಿರುವ ಅಗತ್ಯತೆಗಳ ಬಗ್ಗೆ ಸರ್ಕಾರಕ್ಕೆ 5 ವರದಿ ಸಲ್ಲಿಸಿದೆ ಎಂದು ಕರ್ನಾಟಕ ಆಡಳಿತ ಸುಧಾರಣಾ ಆಯೋಗ–2ರ ಅಧ್ಯಕ್ಷ ಟಿ.ಎಂ.ವಿಜಯ್ ಭಾಸ್ಕರ್ ತಿಳಿಸಿದರು.

ನಗರದ ವಾಣಿಜ್ಯ ತೆರಿಗೆ ಇಲಾಖೆಗೆ ಭೇಟಿ ನೀಡಿ ಅಧಿಕಾರಿಗಳು, ಸಿಬ್ಬಂದಿಗಳಿಂದ ಮಾಹಿತಿ ಪಡೆದ ನಂತರ ಮಾತನಾಡಿದ ಅವರು, ಆಯೋಗವು ಈಗಾಗಲೇ 23 ಇಲಾಖೆಗಳಿಗೆ ಭೇಟಿ ನೀಡಿ, ಕಾರ್ಯವೈಖರಿ ಪರಿಶೀಲಿಸಿ ಅವರಿಂದ ಸಮಸ್ಯೆಗಳು ಹಾಗೂ ಸಲಹೆ ಸೂಚನೆಗಳನ್ನು ಸ್ವೀಕರಿಸಿ, ಅಧ್ಯಯನ ನಡೆಸಿ ಅನೇಕ ಶಿಫಾರಸ್ಸು ಮಾಡಿದೆ. ಇನ್ನೂ 16 ಇಲಾಖೆಗಳಿಗೆ ಆಯೋಗ ಭೇಟಿ ನೀಡಿ ಅಧ್ಯಯನ ನಡೆಸಿ ಸರ್ಕಾರಕ್ಕೆ ವರದಿ ನೀಡುವುದು ಬಾಕಿ ಇದೆ ಎಂದರು.

ಈ ವೇಳೆ ಆಯೋಗದ ಸಲಹೆಗಾರರಾದ ನಿವೃತ್ತ ಐಎಎಸ್ ಅಧಿಕಾರಿ ಪ್ರಸನ್ನ ಕುಮಾರ್, ವಾಣಿಜ್ಯ ತೆರಿಗೆ ಇಲಾಖೆ ಉಪ ಆಯುಕ್ತ ಬಾಲಸುಬ್ರಹ್ಮಣ್ಯ, ಸಹಾಯಕ ಆಯುಕ್ತ ಜಿ.ಹೆಚ್. ಪ್ರಸನ್ನ ಕುಮಾರ್, ಕಲ್ಯಾಣ್ ಕುಮಾರ್, ವಾಣಿಜ್ಯ ತೆರಿಗೆ ಅಧಿಕಾರಿ ಮಹದೇವ, ನಾಗೇಂದ್ರ ಚಂದ್ರಶೇಖರ್ ಉಪಸ್ಥಿತರಿದ್ದರು.

ಎಸ್‌ಟಿಜಿಯಲ್ಲಿ 'ವಸುದೈವ ಕುಟುಂಬಕಂ' ಬಗ್ಗೆ ಜಾಗೃತಿ

ಚಿನಕುರಳಿ, ಮೇ 23– ಇಲ್ಲಿನ ಎಸ್‌ಟಿಜಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಜಿ–20 ಶೃಂಗಸಭೆಯ ಘೋಷವಾಕ್ಯವಾದ 'ವಸುದೈವ ಕುಟುಂಬಕಂ' ಬಗ್ಗೆ ವಿದ್ಯಾರ್ಥಿಗಳಿಗೆ ಜಾಗೃತಿ ಮೂಡಿಸಲು ರಸಪ್ರಶ್ನೆ, ಚರ್ಚಾ ಸ್ಪರ್ಧೆ, ಉಪನ್ಯಾಸ, ಪೆನ್ಸಿಲ್ ಸ್ಕೆಚ್ ಸ್ಪರ್ಧೆಗಳನ್ನು ಆಯೋಜಿಸಲಾಗಿತ್ತು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಸಂಸ್ಥೆ ಆಡಳಿತಾಧಿಕಾರಿ ನಿವೇದಿತಾ ನಾಗೇಶ್, ಆಧುನಿಕ ಪ್ರಪಂಚದಲ್ಲಿ ಸಾಕಷ್ಟು ತೊಂದರೆಗಳಿವೆ. ಅವುಗಳಿಗೆ ಪರಿಹಾರವನ್ನು ನಾವುಗಳೇ ಹುಡುಕಿಕೊಳ್ಳಬೇಕು. ಸರ್ಕಾರದ ವಿಚಾರಗಳು ಮತ್ತು ಯೋಜನೆಗಳು ಪ್ರತಿಯೊಬ್ಬ ನಾಗರಿಕನಿಗೂ ತಲುಪಬೇಕಾಗಿದೆ. ಈ ನಿಟ್ಟಿನಲ್ಲಿ ಯುವ ಸಮುದಾಯ ಎಚ್ಚೆತ್ತುಕೊಳ್ಳಬೇಕು. ಯುವ ಸಮುದಾಯ ಸಮಾಜದ ಬದಲಾವಣೆಗೆ ನೆರವಾಗುವ ಮೂಲಕ ರಾಷ್ಟ್ರದ ಉನ್ನತೀಕರಣಕ್ಕೆ ಶ್ರಮಿಸಬೇಕು ಎಂದರು.

ಉಪಪ್ರಾಂಶುಪಾಲ ಡಾ.ನಿಶಾಂತ್ ಎ.ನಾಯ್ಡು ಮಾತನಾಡಿ, ಅಂತಾರಾಷ್ಟ್ರೀಯ ಮಟ್ಟದ ಜಿ–20 ಕಾರ್ಯಕ್ರಮ ಭಾರತದಲ್ಲಿ ನಡೆಯುತ್ತಿರುವುದು ಪ್ರತಿಯೊಬ್ಬ ಭಾರತೀಯ ಹೆಮ್ಮೆ ಪಡುವ ವಿಚಾರ. ಇಡೀ ವಿಶ್ವ ನಮ್ಮನ್ನು ತಿರುಗಿ ನೋಡುವಂತಹ ಹೆಚ್ಚುಗಾರಿಕೆ ನಮ್ಮದಾಗಿದೆ. ದೇಶದ ಆರ್ಥಿಕತೆ, ಅಂತಾರಾಷ್ಟ್ರೀಯ ಮಟ್ಟದಲ್ಲಿ ವ್ಯವಹಾರ ಹಾಗೂ ಜಿಡಿಪಿ ಒಳಗೊಂಡಂತೆ ಇನ್ನು ಹತ್ತಾರು ವಿಷಯಗಳನ್ನು ಈ ಕಾರ್ಯಕ್ರಮದಲ್ಲಿ ಕಾಣಬಹುದಾಗಿದೆ. ಇಂತಹ ಚರ್ಚೆ ಕೇವಲ ಒಂದು ಸಭೆಗೆ ಮಾತ್ರ ಸೀಮಿತವಾಗದೆ ಪ್ರತಿಯೊಬ್ಬ ವಿದ್ಯಾರ್ಥಿ ಕೂಡ ಜವಾಬ್ದಾರಿಯುತವಾಗಿ ಅನುಸರಿಸಬೇಕಾಗಿದೆ ಎಂದು ಸಲಹೆ ನೀಡಿದರು. ಈ ವೇಳೆ ಸಸ್ಯಶಾಸ್ತ್ರ ವಿಭಾಗದ ಪ್ರಾಧ್ಯಾಪಕರು ಮತ್ತು ಮುಖ್ಯಸ್ಥರಾದ ಕೀರ್ತನ, ಅರ್ಥಶಾಸ್ತ್ರ ವಿಭಾಗದ ಪ್ರಾಧ್ಯಾಪಕರು, ಮುಖ್ಯಸ್ಥರಾದ ತನ್ಜೀಯ ಕೌಸರ್ ಉಪಸ್ಥಿತರಿದ್ದರು.

ನನ್ನ ಗೆಲುವು ಕ್ಷೇತ್ರದ ಮತದಾರರಿಗೆ ಅರ್ಪಣೆ

ಕೃತಜ್ಞತಾ ಸಭೆಯಲ್ಲಿ ಶಾಸಕ ಎನ್.ಚಲುವರಾಯಸ್ವಾಮಿ



ನಾಗಮಂಗಲ, ಮೇ 23– ನನ್ನ ಗೆಲುವನ್ನು ಮದ್ದೂರು ತಾಲೂಕಿನ ಕೊಪ್ಪ ಹೋಬಳಿ ಸೇರಿದಂತೆ ನಾಗಮಂಗಲ ಕ್ಷೇತ್ರದ ಮತದಾರರಿಗೆ ಅರ್ಪಿಸುವೆ ಎಂದು ನೂತನ ಶಾಸಕ ಎನ್.ಚಲುವರಾಯಸ್ವಾಮಿ ತಿಳಿಸಿದರು.

ತಾಲೂಕಿನ ಬೆಳ್ಳೂರು ಕ್ರಾಸ್ ಹಾಗೂ ಪಟ್ಟಣದ ಬ್ಲಾಕ್ ಕಾಂಗ್ರೆಸ್ ಕಚೇರಿಯಲ್ಲಿ ಆಯೋಜಿಸಿದ್ದ ಕೃತಜ್ಞತಾ ಸಭೆಯಲ್ಲಿ ಮಾತನಾಡಿದ ಅವರು, ಕ್ಷೇತ್ರದ ಮುಖಂಡರು ಹಾಗೂ ಕಾರ್ಯಕರ್ತರು ಶ್ರಮಿಸಿದ ಫಲವಾಗಿ ಚುನಾವಣೆಯಲ್ಲಿ ನಾನು ಗೆಲುವು ಸಾಧಿಸಿದ್ದೇನೆ. ನನ್ನ ಗೆಲುವನ್ನು ಪ್ರತಿಯೊಬ್ಬ ಕಾರ್ಯಕರ್ತನಿಗೆ ಹಾಗೂ ಮತದಾರರಿಗೆ ಅರ್ಪಿಸುತ್ತೇನೆ. ರಾಜ್ಯದಲ್ಲಿ ಮತ್ತೊಮ್ಮೆ ಅಧಿಕಾರಕ್ಕೇರಲು ಬಿಜೆಪಿಯವರು ತಮ್ಮ ರಾಷ್ಟ್ರೀಯ ನಾಯಕರಿಂದ ರಾಜ್ಯಾದ್ಯಂತ ಪ್ರಚಾರ ನಡೆಸಿದರು. ಜೆಡಿಎಸ್‌ನವರು ಕೂಡ ಪಂಚರತ್ನ ಯಾತ್ರೆ ಎಂದು ಇಡೀ ರಾಜ್ಯ ಸುತ್ತಿದರು. ಆದರೆ ನಮ್ಮ ಪಕ್ಷದ ಯಾವ ನಾಯಕರು ಅವರ ರೀತಿ ಮಾಡದಿದ್ದರೂ, ನಮ್ಮ ಕಾರ್ಯಕರ್ತರು ಹಾಗೂ ಮುಖಂಡರು ಶ್ರಮಿಸುವ ಮೂಲಕ 135 ಸ್ಥಾನಗಳಲ್ಲಿ ಕಾಂಗ್ರೆಸ್‌ಗೆ ಗೆಲುವು ತಂದುಕೊಟ್ಟಿದ್ದಾರೆ ಎಂದರು.

ಈ ಬಾರಿ 150 ಸ್ಥಾನ ಬರಬೇಕಿತ್ತು. ಆದರೆ ನಮ್ಮ ಕೆಲ ತಪ್ಪುಗಳಿಂದ 135 ಸ್ಥಾನಗಳಿಗೆ ತೃಪ್ತಿ ಪಡುವಂತಾಗಿದೆ. ಚುನಾವಣೆ ಸಂದರ್ಭ ಕೆಲವರು ನಮ್ಮ ಗ್ಯಾರಂಟಿಗಳನ್ನು ನಂಬುತ್ತಿರಲಿಲ್ಲ. ಆದರೆ ಈಗ ಅದರ ಪರಿಣಾಮ ತಿಳಿಯಲಿದೆ. ನಮ್ಮ ಪಕ್ಷದ ಮುಖಂಡರು, ಕಾರ್ಯಕರ್ತರಷ್ಟೇ ನನ್ನ ಗೆಲುವಿಗೆ ಕಾರಣವಲ್ಲ. ಜೊತೆಗೆ ತಾಲೂಕಿನ ಪ್ರತಿಯೊಬ್ಬ ಮತದಾರನು ಕೂಡ ಮುಖ್ಯವಾಗಿದ್ದಾನೆ. ಏಕೆಂದರೆ ರಾಜ್ಯದ ವಿವಿಧೆಡೆ ನೆಲೆಸಿರುವ ಕ್ಷೇತ್ರದ ಮತದಾರರು ಬಂದು ಮತಹಾಕುವ ಮೂಲಕ ನನ್ನ ಗೆಲುವಿಗೆ ಕಾರಣರಾಗಿದ್ದಾರೆ ಎಂದು ಹರ್ಷ ವ್ಯಕ್ತಪಡಿಸಿದರು.

ಚುನಾವಣೆಗೂ ಮುನ್ನಾ, ಮಳವಳ್ಳಿಯಲ್ಲಿ ಕಾಂಗ್ರೆಸ್ ಗೆಲುವು ಸಾಧಿಸಲಿದ್ದು, ಉಳಿದೆಲ್ಲಾ ಕ್ಷೇತ್ರಗಳಲ್ಲೂ ಜೆಡಿಎಸ್ ಗೆಲ್ಲಲಿದೆ ಎಂದು ಗುಪ್ತಚರ ಇಲಾಖೆ ವರದಿ ನೀಡಿತ್ತು. ಆದರೆ ಈ ಬಾರಿ 7 ಕ್ಷೇತ್ರಗಳಲ್ಲೂ ಕಾಂಗ್ರೆಸ್ ಗೆಲ್ಲಲಿದೆ ಎಂದು ನನಗೆ ನಂಬಿಕೆ ಇತ್ತು ಎಂದರು.

ಪಕ್ಷದ ಮುಖಂಡರು, ಕಾರ್ಯಕರ್ತರು ಚರ್ಚಿಸಿ ತೀರ್ಮಾನಿಸಿದ ನಂತರ ತಾಲೂಕು, ಹೋಬಳಿ ಹಾಗೂ ಗ್ರಾಪಂ ಮಟ್ಟದಲ್ಲಿ ಕಾರ್ಯಕರ್ತರ ಸಭೆ ಆಯೋಜಿಸಿ ಕೃತಜ್ಞತೆ ಸಲ್ಲಿಸುವ ಜೊತೆಗೆ ಗ್ರಾಪಂ ವ್ಯಾಪ್ತಿಯ ಸಮಸ್ಯೆಗಳ ಕುರಿತು ಸಭೆಯಲ್ಲಿ ಪಟ್ಟಿ ಮಾಡಿ ತಿಳಿಸಿದರೆ ಅಧಿಕಾರಿಗಳ ಜೊತೆ ಚರ್ಚಿಸಿ ಸಮಸ್ಯೆ ಬಗೆಹರಿಸಲಾಗುವುದು ಎಂದರು.

ಈ ವೇಳೆ ನೂರಾರು ಕಾರ್ಯಕರ್ತರು, ಮುಖಂಡರು ಶಾಸಕ ಚಲುವರಾಯಸ್ವಾಮಿಗೆ ಹಾರ, ಶಾಲು ಹಾಕಿ ಜೈಕಾರ ಕೂಗುವ ಮೂಲಕ ಅಭಿನಂದಿಸಿದರು. ಈ ಸಂದರ್ಭ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಎನ್.ಜೆ.ರಾಜೇಶ್, ಮುಖಂಡರಾದ ಸುನೀಲ್ ಲಕ್ಷ್ಮೀಕಾಂತ್, ರಾಜೇಗೌಡ, ನರಸಿಂಹಮೂರ್ತಿ, ಎಚ್.ಟಿ. ಕೃಷ್ಣೇಗೌಡ ಸೇರಿದಂತೆ ಮತ್ತಿತರಿದ್ದರು.

30 ತಿಂಗಳಿಂದ ಕೆಡಿಪಿ ಸಭೆ ನಡೆಯದಿರುವುದು ದುರಂತ

ನೂತನ ಶಾಸಕ ಎನ್.ಚಲುವರಾಯಸ್ವಾಮಿ ಬೇಸರ



ನಾಗಮಂಗಲ, ಮೇ 23– ಕ್ಷೇತ್ರದ ಈ ಹಿಂದಿನ ಶಾಸಕರು ಕಳೆದ 30 ತಿಂಗಳಿಂದ ಕೆಡಿಪಿ ಸಭೆ ನಡೆಸದಿರುವುದು ಈ ತಾಲೂಕಿನ ದುರಂತವೇ ಸರಿ ಎಂದು ಶಾಸಕ ಎನ್.ಚಲುವರಾಯಸ್ವಾಮಿ ಬೇಸರ ವ್ಯಕ್ತಪಡಿಸಿದರು.

ಪಟ್ಟಣದ ತಾಪಂ ಸಭಾಂಗಣದಲ್ಲಿ ಮಂಗಳವಾರ ನಡೆದ ವಿವಿಧ ಇಲಾಖೆಗಳ ತ್ರೈಮಾಸಿಕ ಪ್ರಗತಿ ಪರಿಶೀಲನಾ (ಕೆಡಿಪಿ) ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸರ್ಕಾರದ ಅನುದಾನದಲ್ಲಿ ನಡೆಯುವ ವಿವಿಧ ಇಲಾಖೆಗಳ ಅಭಿವೃದ್ಧಿ ಕೆಲಸಗಳನ್ನು ಪರಿಶೀಲಿಸುವ ಮತ್ತು ಪರಿಷ್ಕರಿಸುವ ಉದ್ದೇಶದಿಂದ ಕೆಡಿಪಿ ಸಭೆ ನಿಗದಿಪಡಿಸಲಾಗಿದೆ. ಇದೇ ಉದ್ದೇಶದಿಂದ ಶಾಸಕರ ಜೊತೆಗೆ ಸರ್ಕಾರ ನಾಮ ನಿರ್ದೇಶಿತ ಸದಸ್ಯರನ್ನು ನೇಮಿಸುತ್ತದೆ. ಅದರಂತೆ ಕಳೆದ ಬಿಜೆಪಿ ಸರ್ಕಾರ ಕೋವಿಡ್ ನಂತರ ಐವರು ಸದಸ್ಯರನ್ನು ನೇಮಿಸಿದೆ. ಆದರೆ ಅವರ ಅವಧಿಯಲ್ಲಿ ಒಂದೂ ಸಭೆ ನಡೆಯದಿರುವುದು ವಿಪರ್ಯಾಸ ಎಂದರು.

ನಮ್ಮಂತಹ ಜನಪ್ರತಿನಿಧಿಗಳಿಗೆ ನೀಡುವ 5 ವರ್ಷಗಳ ಅವಧಿ ಮುಂದಿನ ಅವಧಿಯ ಭವಿಷ್ಯ ನಿರ್ಧರಿಸುತ್ತದೆ. ಆದರೆ ಸಾರ್ವಜನಿಕ ಸೇವೆ ಹೆಸರಿನಲ್ಲಿ ಸರ್ಕಾರಿ ನೌಕರಿಯಲ್ಲಿರುವ ನಿಮಗೆ ನಿಮ್ಮ ಸೇವಾವಧಿಯ ವಯಸ್ಸು ಮುಗಿಯುವವರೆಗೆ ಇರುತ್ತದೆ. ಅದರ ಮಧ್ಯೆ ಅಮಾನತು ಅಥವಾ ವರ್ಗಾವಣೆಯಂತಹ ಕೆಲವು ತೊಂದರೆಯಾಗಬಹುದು. ಸರ್ಕಾರದ ಮುಖ್ಯ ಕಾರ್ಯದರ್ಶಿಯಿಂದ 'ಡಿ' ಗ್ರೂಪ್ ನೌಕರನವರೆಗೂ ತಮ್ಮದೇ ಆದ ಸೇವಾ ಮೌಲ್ಯ ಇರುತ್ತದೆ. ಆದ್ದರಿಂದ ಸಾರ್ವಜನಿಕ ಸೇವಾ ಕ್ಷೇತ್ರದಲ್ಲಿರುವ ನಿಮಗೆ ನಿಮ್ಮ ಹೊಣೆಗಾರಿಕೆ ಅರಿವಿರಲಿ ಎಂದು ಕಿವಿಮಾತು ಹೇಳಿದರು.

ವಿವಿಧ ಇಲಾಖೆಗಳಲ್ಲಿ ನಡೆಯುತ್ತಿರುವ ಕಾಮಗಾರಿಗಳನ್ನು ತಾತ್ಕಾಲಿಕವಾಗಿ ನಿಲ್ಲಿಸುವಂತೆ ಮತ್ತು ಸದರಿ ಕಾಮಗಾರಿಗೆ ಸಂಬಂಧಿಸಿದ ಯಾವುದೇ ಪ್ರಕ್ರಿಯೆ ನಡೆಸದಂತೆ ರಾಜ್ಯ ಸರ್ಕಾರ ಹೊರಡಿಸಿರುವ ಆದೇಶದ ಉಲ್ಲಂಘನೆಯಾದರೆ ಶಿಸ್ತು ಕ್ರಮ ಅನಿವಾರ್ಯ ಎಂದು ಅಧಿಕಾರಿಗಳಿಗೆ ತಾಕೀತು ಮಾಡಿದರು.

ತಾಲೂಕಿನ ವಿವಿಧ ಇಲಾಖೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಯಾವುದೇ ಅಧಿಕಾರಿ ಅಥವಾ ಸಿಬ್ಬಂದಿಗೆ ವರ್ಗಾವಣೆ ಭೀತಿ ಬೇಡ. ನನಗೆ ತಾಲೂಕಿನ ಅಭಿವೃದ್ಧಿ ಮುಖ್ಯ. ಅಭಿವೃದ್ಧಿ ಮತ್ತು ಗುಣಮಟ್ಟದ ವಿಷಯದಲ್ಲಿ ರಾಜಿ ಇಲ್ಲ. ನಾನು ನೀಡುವ ಟಾಸ್ಕ್ ಪೂರೈಸುವುದು ನಿಮ್ಮಗಳ ಕರ್ತವ್ಯ. ಅದರಲ್ಲೂ ಬೇಜವಾಬ್ದಾರಿ ತೋರಿದರೆ ಕೆಲವೊಂದು ಕ್ರಮ ಅನಿವಾರ್ಯ ಎಂದು ಎಚ್ಚರಿಸಿದರು. ಈ ವೇಳೆ ತಹಸೀಲ್ದಾರ್ ನಯೀಂ ಉನ್ನಿಸಾ, ತಾಪಂ ಇಓ ಚಂದ್ರಮೌಳಿ ಹಾಗೂ ಸಿಪಿಐಗಳಾದ ನಿರಂಜನ್ ಮತ್ತು ಅಶೋಕ್ ಕುಮಾರ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿ ವರ್ಗ ಹಾಜರಿದ್ದರು.

ಇಂದು ನೇರ ಸಂದರ್ಶನ

ಮಂಡ್ಯ ಮೇ 23– ಮೆ.ವಿದಾತ್ರಿ ಮೋಟಾರ್ಸ್ ಪ್ರೈ.ಲಿ ವತಿಯಿಂದ ಎಸ್‌ಎಸ್‌ಎಲ್‌ಸಿ, ಪಿಯುಸಿ, ಐಟಿಐ, ಡಿಪ್ಲೋಮಾ ಮತ್ತು ಯಾವುದೇ ಪದವಿಯಲ್ಲಿ ಉತ್ತೀರ್ಣರಾದ ಅಭ್ಯರ್ಥಿಗಳಿಗೆ ಮೇ 24 ರಂದು ಬೆಳಗ್ಗೆ 10 ಗಂಟೆಗೆ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದಲ್ಲಿ ನೇರ ಸಂದರ್ಶನ ಆಯೋಜಿಸಲಾಗಿದೆ. ಅಗತ್ಯ ದಾಖಲೆಗಳೊಂದಿಗೆ ಸಂದರ್ಶನದಲ್ಲಿ ಪಾಲ್ಗೊಳ್ಳಬಹುದು. ಮಾಹಿತಿಗೆ ದೂ.8217803781, 08232–295124 ಅನ್ನು ಸಂಪರ್ಕಿಸುವಂತೆ ಜಿಲ್ಲಾ ಉದ್ಯೋಗಾಧಿಕಾರಿ ಎನ್.ಆರ್ ವೇಣುಗೋಪಾಲ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಶಾಸಕರಾದ ಚಲುವರಾಯಸ್ವಾಮಿ, ನರೇಂದ್ರಸ್ವಾಮಿಗೆ ಮಂತ್ರಿ ಸ್ಥಾನ ನೀಡಿ



ಮಂಡ್ಯ, ಮೇ 23– ಈ ಬಾರಿಯ ಚುನಾವಣೆಯಲ್ಲಿ ಜಿಲ್ಲೆಯ 7 ಕ್ಷೇತ್ರಗಳ ಪೈಕಿ ಆರರಲ್ಲಿ ಹಾಗೂ ವರ್ಷದ ಹಿಂದೆ ನಡೆದ 2 ಪರಿಷತ್ ಚುನಾವಣೆಗಳಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳ ಗೆಲುವಿಗೆ ಕಾರಣರಾದ ಶಾಸಕರಾದ ಎನ್.ಚಲುವರಾಯಸ್ವಾಮಿ ಹಾಗೂ ಪಿ.ಎಂ.ನರೇಂದ್ರಸ್ವಾಮಿ ಅವರಿಗೆ ಸಚಿವ ಸ್ಥಾನ ನೀಡಬೇಕೆಂದು ಜಿಲ್ಲಾ ಕಾಂಗ್ರೆಸ್ ವಕ್ತಾರ ಎಂ.ಎಸ್. ಚಿದಂಬರ್ ಮನವಿ ಮಾಡಿದ್ದಾರೆ.

ಈ ಸಂಬಂಧ ಪತ್ರಿಕಾ ಹೇಳಿಕೆ ನೀಡಿರುವ ಅವರು, ಕಳೆದ ಚುನಾವಣೆಯಲ್ಲಿ ಜಿಲ್ಲೆಯಲ್ಲಿ ಏಳಕ್ಕೆ ಏಳು ಸ್ಥಾನವನ್ನು ಜೆಡಿಎಸ್ ಗೆದ್ದಿತ್ತು. ಬಳಿಕ ಜಿಲ್ಲೆಯಲ್ಲಿ ಎನ್.ಚಲುವರಾಯಸ್ವಾಮಿ ಹಾಗೂ ಪಿ.ಎಂ.ನರೇಂದ್ರಸ್ವಾಮಿ ಹಗಲಿರುಳು ಸಂಘಟನೆ ನಡೆಸಿ, ಪಕ್ಷ ಬಲಗೊಳಿಸಿದ್ದಾರೆ. ಡಿ.ಕೆ.ಶಿವಕುಮಾರ್ ನಾಯಕತ್ವದಲ್ಲಿ ಎನ್.ಚಲುವರಾಯ ಸ್ವಾಮಿ ಹಾಗೂ ಪಿ.ಎಂ.ನರೇಂದ್ರಸ್ವಾಮಿ ಮುಂದಾಳತ್ವದಲ್ಲಿ 6 ಕ್ಷೇತ್ರದಲ್ಲಿ ಕಾಂಗ್ರೆಸ್ ಗೆಲುವು ಸಾಧಿಸಿದ್ದು, ಇಬ್ಬರಿಗೆ ಸಚಿವ ಸ್ಥಾನ ನೀಡಬೇಕು ಎಂದು ಮನವಿ ಮಾಡಿದ್ದಾರೆ. ಮುಂಬರುವ ಜಿಪಂ, ತಾಪಂ, ಲೋಕಸಭೆ ಹಾಗೂ ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಕಾಂಗ್ರೆಸ್ ಅಧಿಪತ್ಯ ಸಾಧಿಸಬೇಕಿದೆ. ಜೆಡಿಎಸ್ ಭದ್ರಕೋಟೆ ಮತ್ತೆ ಕಾಂಗ್ರೆಸ್ ಭದ್ರಕೋಟೆಯಾಗುತ್ತಿದೆ. ಇದು ಹೀಗೆ ಮುಂದುವರೆಯಬೇಕೆಂದರೆ ಜಿಲ್ಲಾ ನಾಯಕರಿಗೆ ಅಧಿಕಾರದ ಅವಶ್ಯಕತೆ ಇದೆ. ಈ ನಿಟ್ಟಿನಲ್ಲಿ ಎನ್.ಚಲುವರಾಯಸ್ವಾಮಿ ಹಾಗೂ ಪಿ.ಎಂ.ನರೇಂದ್ರಸ್ವಾಮಿಗೆ ಮಂತ್ರಿ ಸ್ಥಾನ ನೀಡಿ ಎಂದು ಚಿದಂಬರ್ ಒತ್ತಾಯಿಸಿದ್ದಾರೆ.

ಮಹಿಳೆ ಮಾಂಗಲ್ಯ ಸರ ಅಪಹರಣ

ಮದ್ದೂರು, ಮೇ 23– ಹಾಡಹಗಲೇ ಬೈಕ್‌ನಲ್ಲಿ ಬಂದ ದುಷ್ಕರ್ಮಿಯೋರ್ವ ಮಹಿಳೆಯ ಮಾಂಗಲ್ಯ ಸರ ಕಿತ್ತುಕೊಂಡು ಪರಾರಿಯಾಗಿರುವ ಘಟನೆ ಪಟ್ಟಣದ ಲೀಲಾವತಿ ಬಡಾವಣೆಯಲ್ಲಿ ಮಂಗಳವಾರ ಮಧ್ಯಾಹ್ನ ಜರುಗಿದೆ.



ಲೀಲಾವತಿ ಬಡಾವಣೆ ನಿವಾಸಿ ಪುಟ್ಟತಾಯಮ್ಮ ಮಾಂಗಲ್ಯ ಸರ ಕಳೆದುಕೊಂಡವರು. ಈಕೆ ರಸ್ತೆ ಬದಿ ತನ್ನ ಸಂಬಂಧಿಕರ ಜೊತೆ ಮಾತನಾಡುತ್ತಿದ್ದ ವೇಳೆ ಬೈಕ್‌ನಲ್ಲಿ ಬಂದ ದುಷ್ಕರ್ಮಿ ಏಕಾಏಕಿ ಕತ್ತಿನಲ್ಲಿದ್ದ ಮಾಂಗಲ್ಯ ಸರ ಕೀಳಲು ಯತ್ನಿಸಿದ ವೇಳೆ ಪುಟ್ಟತಾಯಮ್ಮ ಬಲವಾಗಿ ಹಿಡಿದಿಟ್ಟುಕೊಂಡರಾದರೂ 20 ಗ್ರಾಂ ತೂಕದ ಒಂದು ಲಕ್ಷ ರೂ. ಮೌಲ್ಯದ ಒಂದು ಎಳೆ ಮಾಂಗಲ್ಯ ಸರ ಕಿತ್ತುಕೊಂಡು ಪರಾರಿಯಾಗಿದ್ದಾನೆ. ಈ ಸಂಬಂಧ ಪುಟ್ಟತಾಯಮ್ಮ ಸಂಬಂಧಿ ವಿ.ಕೆ.ಗಿರೀಶ್ ನೀಡಿದ ದೂರಿನ ಮೇರೆಗೆ ಮದ್ದೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

6ನೇ ತರಗತಿ ಪ್ರವೇಶಾತಿಗೆ ಅರ್ಜಿ ಆಹ್ವಾನ

ಮೈಸೂರು, ಮೇ 23– 2023ನೇ ಸಾಲಿನಲ್ಲಿ ಮೈಸೂರು ಜಿಲ್ಲೆಯಲ್ಲಿರುವ ಪ್ರತಿಷ್ಠಿತ ಶಾಲೆಗಳಲ್ಲಿ ಪರಿಶಿಷ್ಟ ಜಾತಿಯ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ 6ನೇ ತರಗತಿಗೆ ಪ್ರವೇಶ ಕಲ್ಪಿಸಲು ಅರ್ಹ ಪರಿಶಿಷ್ಟ ಜಾತಿಯ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಅರ್ಹ ವಿದ್ಯಾರ್ಥಿಗಳನ್ನು ಡಯಟ್ ಕೇಂದ್ರದ ಮುಖಾಂತರ ಪ್ರವೇಶ ಪರೀಕ್ಷೆಯನ್ನು ನಡೆಸಿ ನಂತರ ಆಯ್ಕೆ ಮಾಡಲಾಗುವುದು. ಆಯ್ಕೆಯಾದ ವಿದ್ಯಾರ್ಥಿಗಳಿಗೆ ವಿಜಯನಗರದ ಭಾರತೀಯ ವಿದ್ಯಾ ಭವನ ಹಿರಿಯ ಪ್ರಾಥಮಿಕ ಶಾಲೆ, ಲಷ್ಕರ್ ಮೊಹಲ್ಲಾದ ಗುಡ್ ಶೆಫರ್ಡ್ ಹಿರಿಯ ಪ್ರಾಥಮಿಕ ಶಾಲೆ, ಕೃಷ್ಣವಿಲಾಸ ರಸ್ತೆಯ ಅವಿಲಾ ಕಾನ್ವೆಂಟ್ ಹಿರಿಯ ಪ್ರಾಥಮಿಕ ಹಾಗೂ ಪ್ರೌಢಶಾಲೆ, ಹುಣಸೂರು ಬೈಪಾಸ್ ರೋಡ್‌ನ ಶಾಸ್ತ್ರಿ ಚಾರಿಟಬಲ್ ಟ್ರಸ್ಟ್, ಹುಣಸೂರಿನ ಸೇಂಟ್ ಜೋಸೆಫ್ ಹೈಸ್ಕೂಲ್, ತಾಂಡವಪುರದ ಕ್ರೈಸ್ಟ್ ಸ್ಕೂಲ್, ಕೆ.ಆರ್.ನಗರ ಚುಂಚನಕಟ್ಟೆಯ ಶ್ರೀ ಜಗದ್ಗುರು ಬಾಲಗಂಗಾಧರನಾಥ ಸ್ವಾಮೀಜಿ ಬಾಲಜಗತ್ ಶಾಲೆ ಹಾಗೂ ವಿಜಯನಗರ ನಾಲ್ಕನೇ ಹಂತದ ಎಸ್‌ವಿಇಐ ಹೈಸ್ಕೂಲ್ ಗಳಲ್ಲಿ ಪ್ರವೇಶಾತಿ ಕಲ್ಪಿಸಲಾಗುವುದು. ಆಸಕ್ತ ವಿದ್ಯಾರ್ಥಿಗಳು ಆಯಾ ತಾಲೂಕಿನ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿ ಹಾಗೂ ಜಂಟಿ ನಿರ್ದೇಶಕರ ಕಚೇರಿಯಿಂದ ಅರ್ಜಿ ನಮೂನೆ ಪಡೆದು ಮೇ 25 ರೊಳಗೆ ಅವಶ್ಯ ದೃಢೀಕೃತ ದಾಖಲೆಗಳೊಂದಿಗೆ ಜಂಟಿ ನಿರ್ದೇಶಕರ ಕಛೇರಿಗೆ ಅರ್ಜಿ ಸಲ್ಲಿಸಬೇಕೆಂದು ಪ್ರಕಟಣೆ ತಿಳಿಸಿದೆ.

ಒಂದನೇ ಪುಟದಿಂದ

ಯಾರೂ ಬಾಯ್ಬಿಡಬೇಡಿ

ಪಕ್ಷದ ವರಿಷ್ಠರು ಹೇಳಿರುವುದನ್ನೇ ನಾನು ಹೇಳಿದ್ದೇನೆ ಎಂದಿದ್ದಾರೆ. ಮುಖ್ಯಮಂತ್ರಿಯಾಗಿ ಸಿದ್ದ ರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನಮ್ಮ ನಾಯಕರು ಎಂದು ಹೇಳಿದ್ದಾರೆ. ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ.ಸಿ.ವೇಣುಗೋಪಾಲ್ ಪತ್ರಿಕಾ ಹೇಳಿಕೆಯಲ್ಲಿ ಹೇಳಿರುವುದನ್ನೇ ಹೇಳಿ ದ್ದೇನೆ ಎಂದು ಪುನರುಚ್ಚರಿಸಿದರು. ಪವರ್ ಶೇರಿಂಗ್ ಇಲ್ಲ. ಇದ್ದರೆ, ಜನರ ಜತೆ ಮಾತ್ರ ಎಂದು ವೇಣುಗೋಪಾಲ್ ಸ್ಪಷ್ಟವಾಗಿ ತಿಳಿ ಸಿದ್ದಾರೆ. ಅಧಿಕಾರ ಹಂಚಿಕೆಯ ಸಂಧಾನ ಸೂತ್ರ ನನಗೆ ಗೊತ್ತಿಲ್ಲ. ಅವರು ನೀಡಿದ ಹೇಳಿಕೆಯನ್ನಷ್ಟೇ ಪುನರುಚ್ಚರಿಸಿದ್ದೇನೆ ಎಂದು ಅವರು ಹೇಳಿದ್ದಾರೆ. ಡಿ.ಕೆ.ಶಿವಕುಮಾರ್ ಮಾತನಾಡಿ, ಯಾರು ಏನು ಬೇಕಾದರೂ ಹೇಳಿಕೊಳ್ಳಲಿ. ನಾನು ಆ ಬಗ್ಗೆ ಮಾತಾಡುವುದಿಲ್ಲ. ಅಧಿಕಾರ ಮತ್ತಿತರ ಪಕ್ಷದ ವಿಚಾರಗಳನ್ನು ನೋಡಿಕೊಳ್ಳಲು ಎಐಸಿಸಿ ಇದೆ. ಕಾಂಗ್ರೆಸ್ ರಾಷ್ಟ್ರೀಯ ಮುಖಂಡರು ಇದ್ದಾರೆ. ರಾಜ್ಯದ ಸರ್ವತೋಮುಖ ಅಭಿವೃದ್ಧಿಗೆ ಮಾತ್ರ ನಮ್ಮ ಆದ್ಯತೆ ಎಂದು ತಿಳಿಸಿದ್ದಾರೆ.

ಕೇಸರೀಕರಣ ಮಾಡಲು ಅವಕಾಶ ನೀಡಲ್ಲ

ಬಿಡೊಲ್ಲ ಎಂದರು. ಪಿಎಸ್‌ಐ ನೇಮಕಾತಿ ಅಕ್ರಮದಲ್ಲಿ ಒಬ್ಬ ಎಡಿಜಿಪಿ ಓಎಂಆರ್ ಪೇಪರ್ ತಿದ್ದುತ್ತಾರೆ ಅಂದರೆ ಇಲಾಖೆ ಎಷ್ಟು ಕೆಟ್ಟು ಹೋಗಿದೆ ನೋಡಿ. ಪ್ರಕರಣ ಬಯಲಿಗೆ ತಂದವರಿಗೆ ಕಿರುಕುಳ ನೀಡಿದ್ದೀರಾ. ಸಚಿವ ಪ್ರಿಯಾಂಕ ಖರ್ಗೆ ಅವರಿಗೆ ಕಾಟ ಕೊಟ್ಟಿದ್ದೀರಾ. ಇಡೀ ದೇಶದಲ್ಲಿ ಕರ್ನಾಟಕ ಪೊಲೀಸ್ ಇಲಾಖೆಗೆ ಒಳ್ಳೆಯ ಹೆಸರಿತ್ತು. ಆ ಗೌರವ, ಘನತೆಯನ್ನು ಹಾಳು ಮಾಡಿದ್ದೀರಾ ನೀವು. ಎಲ್ಲಿ ನೋಡಿದರೂ ಬರೀ ಕಾಸು, ಕಾಸು, ಕಾಸು ಎಂದು ತರಾಟೆಗೆ ತೆಗೆದುಕೊಂಡರು.

ನಮ್ಮ ಸರ್ಕಾರದಲ್ಲಿ ಎಲ್ಲವೂ ಕ್ಲೀನ್ ಆಗಬೇಕು. ಜನ ಈ ಸರ್ಕಾರದಿಂದ ಬಹುದೊಡ್ಡ ಬದಲಾವಣೆಯನ್ನು ನಿರೀಕ್ಷೆ ಮಾಡಿದ್ದಾರೆ. ಅದು ಪೊಲೀಸ್ ಇಲಾಖೆಯಿಂದಲೇ ಶುರು ಆಗಬೇಕು. ಈ ಸರ್ಕಾರದಿಂದ ಬದಲಾವಣೆ ಸಂದೇಶ ಜನರಿಗೆ ಹೋಗಬೇಕು. ನಿಮ್ಮಿಂದ ನಮಗೆ ನಯಾಪೈಸೆ ಹಣ ಬೇಕಿಲ್ಲ. ನೀವು ಯಾರಿಗೂ ಹಣ ಕೊಡೋದು ಬೇಡ. ಜನ ನರಳದಂತೆ ಉತ್ತಮವಾಗಿ ಕೆಲಸ ಮಾಡಿದರೆ ಅಷ್ಟೇ ಸಾಕು. ನಿಮ್ಮ ಹಿಂದಿನ ವರ್ತನೆ ನಮ್ಮ ಸರ್ಕಾರದಲ್ಲಿ ನಡೆಯೊಲ್ಲ. ಹಿಂದೆ ಪೇ ಸಿಎಂ ಅಭಿಯಾನ ಮಾಡಿದಾಗ ನನ್ನ ಮತ್ತು ಸಿದ್ದರಾಮಯ್ಯರ ಜೊತೆ ಹೇಗೆ ನಡೆದುಕೊಂಡಿದ್ದೀರಾ ಎಂಬುದು ಗೊತ್ತಿದೆ. ನಮ್ಮ ಮೇಲೆ ಕೇಸ್ ಹಾಕಿದ್ದೀರಿ. ನಮ್ಮ ಕಾರ್ಯಕರ್ತರ ಮೇಲೆ ಸುಳ್ಳು, ಸುಳ್ಳು ಸಾವಿರಾರು ಕೇಸ್ ಹಾಕಿ ತೊಂದರೆ ಕೊಟ್ಟಿದ್ದೀರಿ.

ನಮ್ಮನ್ನೇ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನೇ ಬಿಡದ ನೀವು ಇನ್ನು ಸಾಮಾನ್ಯ ಜನರನ್ನು ಬಿಡ್ತೀರಾ?ಆದರೆ ಎದುರು ಪಕ್ಷದ ವಿರುದ್ಧ ಮಾತ್ರ ಯಾವುದೇ ಕೇಸ್ ಹಾಕಲಿಲ್ಲ. ಅವರ ಜತೆ ಶಾಮೀಲಾಗಿ ಕುಣಿದಿರಿ. ಟಿಪ್ಪು ಸುಲ್ತಾನ್ ಅವರನ್ನು ಹೊಡೆದು ಹಾಕಿದಂತೆ ಸಿದ್ದರಾಮಯ್ಯ ಅವರನ್ನು ಹೊಡೆದು ಹಾಕಬೇಕು ಎಂದು ಕೊಲೆ ಮಾಡಲು ಕರೆ ನೀಡಿದ, ಪ್ರೇರಣೆ ನೀಡಿದವರ ವಿರುದ್ಧ ಯಾಕೆ ಕೇಸ್ ಹಾಕಲಿಲ್ಲ ನೀವು. ಅದು ಕ್ರೈಂ ಅಲ್ವಾ? ಎಂದು ಪ್ರಶ್ನಿಸಿದರು.

ನೀವು ಏನೇನೂ ಮಾಡಿದ್ದೀರಾ ಅಂತ ನಮ್ಮ ಬಳಿ ಸಾಕ್ಷಿ ಇವೆ. ನಾವು ಎಲ್ಲವನ್ನೂ ವಾಚ್ ಮಾಡಿದ್ದೇವೆ.ಇವೆಲ್ಲ ನಮ್ಮ ಸರ್ಕಾರದಲ್ಲಿ ನಡೆಯೊಲ್ಲ. ನೀವು ಬದಲಾಗಬೇಕು. ನಿಮ್ಮ ವರ್ತನೆ ಬದಲಾಗಬೇಕು. ಇಲ್ಲ ಅಂದ್ರೆ, ನಿಮ್ಮನ್ನೇ ಬದಲಾವಣೆ ಮಾಡಬೇಕಾಗುತ್ತದೆ. ನಾವು ದ್ವೇಷ ಸಾಧಿಸೋದಿಲ್ಲ. ಅದರಲ್ಲಿ ನಮಗೆ ನಂಬಿಕೆ ಇಲ್ಲ. ನೀವು ಬದಲಾಗಿ, ಹಳೆಯದು ಬಿಡಿ. ಹೊಸದಾಗಿ ಕೆಲಸ ಶುರು ಮಾಡಿ. ಜನರ ನೆಮ್ಮದಿ ಕಾಪಾಡಿ. ಪ್ರಾಮಾಣಿಕವಾಗಿ ಕೆಲಸ ಮಾಡಿದರೆ ನಾವು ನಿಮ್ಮ ಜೊತೆ ಇರುತ್ತೇವೆ. ಈ ಸರ್ಕಾರದ ಮೇಲೆ ಜನ ನಂಬಿಕೆ ಇಟ್ಟಿದ್ದಾರೆ. ಅದನ್ನು ಉಳಿಸಿಕೊಳ್ಳಿ. ಈ ಸರ್ಕಾರದಿಂದ ಬದಲಾವಣೆ ಆಗುತ್ತಿದೆ ಎಂಬ ಸಂದೇಶವನ್ನು ನಿಮ್ಮ ಕೆಲಸದ ಮೂಲಕ ಜನರಿಗೆ ನೀಡಿ ಎಂದು ತಾಕೀತು ಮಾಡಿದರು.

10ನೇ ಬಾರಿ ಫೈನಲ್ ಪ್ರವೇಶಿಸಿದ ಚೆನ್ನೈ

ಗುಜರಾತ್‌ಗೆ ಮತ್ತೊಂದು ಅವಕಾಶ



ಚೆನ್ನೈ, ಮೇ 23(ಸಿಎನ್)– ಋತುರಾಜ್ ಗಾಯಕ್ವಾಡ್ ಭರ್ಜರಿ ಅರ್ಧಶತಕ, ಬೌಲರ್‌ಗಳ ಕೈಚಳಕಕ್ಕೆ ಸಿಲುಕಿ ಕಕ್ಕಾಬಿಕ್ಕಿಯಾದ ಗುಜರಾತ್, ಚೆನ್ನೈ ವಿರುದ್ಧ 15 ರನ್‌ಗಳಿಂದ ಸೋಲು ಅನುಭವಿಸಿತು.

ಆ ಮೂಲಕ 4 ಬಾರಿಯ ಚಾಂಪಿಯನ್ ಚೆನ್ನೈ ಸೂಪರ್‌ಕಿಂಗ್ಸ್ 10ನೇ ಬಾರಿಗೆ ಐಪಿಎಲ್ ಫೈನಲ್ ತಲುಪಿದ ಸಾಧನೆ ಮಾಡಿದರೆ, ಅತ್ತ ಹಾಲಿ ಚಾಂಪಿಯನ್ ಗುಜರಾತ್ ಟೈಟನ್ಸ್ ಫೈನಲ್ ಪ್ರವೇಶಿಸಲು 2ನೇ ಕ್ವಾಲಿಫೈಯರ್‌ನಲ್ಲಿ ಸೆಣಸಬೇಕಿದೆ.

ಇಲ್ಲಿನ ಎಂ.ಚಿದಂಬರಂ ಕ್ರೀಡಾಂಗಣದಲ್ಲಿ ಪ್ಲೇಆಫ್ ಹಂತದ ಮೊದಲ ಕ್ವಾಲಿಫೈಯರ್ ಪಂದ್ಯದಲ್ಲಿ ಟಾಸ್ ಸೋತು ಬ್ಯಾಟಿಂಗ್ ಮಾಡಿದ ಚೆನ್ನೈ ಸೂಪರ್‌ಕಿಂಗ್ಸ್ ನಿಗದಿತ 20 ಓವರ್‌ಗಳಲ್ಲಿ 7 ವಿಕೆಟ್ ನಷ್ಟಕ್ಕೆ 172 ರನ್‌ಗಳ ಸವಾಲಿನ ಮೊತ್ತ ಪೇರಿಸಿತು.

173 ರನ್‌ಗಳ ಗುರಿ ಬೆನ್ನತ್ತಿದ ಗುಜರಾತ್ ಯಾವ ಹಂತದಲ್ಲೂ ನಿರಂತರ ಹೋರಾಟ ನೀಡಲು ಸಾಧ್ಯವಿಲ್ಲ, ವೃದ್ಧಿಮಾನ್ ಸಹಾ 12, ಡಸನ್ ಶನಕ 17, ರಶೀದ್ ಖಾನ್30, ಶುಭಮನ್ ಗಿಲ್ 42 ರನ್ ಗಳಿಸಿ ದರು. ಉಳಿದವರು ಹೆಚ್ಚು ಬ್ಯಾಟ್ ಬೀಸಲಿಲ್ಲ. ಚೆನ್ನೈ ಪರ ದೀಪಕ್‌ಚಾಹರ್, ಮಹೀಶ್ ತೀಕ್ಷ್ಣ, ರವೀಂದ್ರ ಜಡೇಜಾ, ಮತೀಶ್ ಪ್ರತಿರಣ ತಲಾ ಎರಡು ವಿಕೆಟ್ ಪಡೆದರು.

ಇದಕ್ಕೂ ಮೊದಲು ಬ್ಯಾಟ್ ಮಾಡಿದ ಚೆನ್ನೈ 20 ಓವರ್‌ಗಳಲ್ಲಿ 7 ವಿಕೆಟ್ ನಷ್ಟಕ್ಕೆ 172 ರನ್ ಗಳಿಸಿತು.

ಋತುರಾಜ್ ಗಾಯಕ್ವಾಡ್ 44 ಎಸೆತಗಳಲ್ಲಿ 1 ಸಿಕ್ಸರ್ ಹಾಗೂ 7 ಬೌಂಡರಿ ಒಳಗೊಂಡ 60 ರನ್ ಗಳಿಸಿದರು. ಕಾನ್ವೆ 34 ಎಸೆತಗಳಲ್ಲಿ 4 ಬೌಂಡರಿ ಒಳಗೊಂಡ 40 ರನ್, ಗಳಿಸಿದರು. ಗುಜರಾತ್ ಪರ ಮೊಹಮ್ಮದ್ ಶಮಿ, ಮೋಹಿತ್ ಶರ್ಮಾ ತಲಾ ಎರಡು ವಿಕೆಟ್ ಉರುಳಿಸಿದರೆ, ರಶೀದ್‌ಖಾನ್, ನಲ್ಕಂಡೆ, ನೂರ್‌ಅಹ್ಮದ್ ತಲಾ ಒಂದೊಂದು ವಿಕೆಟ್ ಪಡೆದರು. ಋತುರಾಜ್ ಗಾಯಕ್ವಾಡ್ ಪಂದ್ಯ ಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು.



ಲಕ್ನೋ V/S ಮುಂಬೈ
ಸ್ಥಳ: ಎಂ.ಎ. ಚಿದಂಬರಂ ಸ್ಟೇಡಿಯಂ, ಚೆನ್ನೈ
ಸಮಯ: ಸಂಜೆ 7.30

ಬಹಿರಂಗ ಹರಾಜು

ಮೈಸೂರು, ಮೇ 23– ಲಲಿತ್ ಮಹಲ್‌ನಲ್ಲಿರುವ ಆಡಳಿತ ತರಬೇತಿ ಸಂಸ್ಥೆಯ ಮಾಲೀಕತ್ವದ ಮಹೀಂದ್ರ ಬೊಲೆರೋ ವಾಹನವನ್ನು ಮೇ 30 ರಂದು ಮಧ್ಯಾಹ್ನ 12 ಗಂಟೆಗೆ ಸಂಸ್ಥೆಯ ಆವರಣದಲ್ಲಿ ಬಹಿರಂಗ ಹರಾಜು ಮೂಲಕ ವಿಲೇವಾರಿ ಮಾಡಲಾಗುವುದು. (ಠೇವಣಿ ಮೊತ್ತ 1500 ರೂ.) ಹರಾಜಿಗೆ ಇಟ್ಟಿರುವ ವಾಹನವನ್ನು ಮೇ 29 ರವರೆಗೆ ಪರಿವೀಕ್ಷಿಸಬಹುದಾಗಿರುತ್ತದೆ ಎಂದು ಆಡಳಿತ ತರಬೇತಿ ಸಂಸ್ಥೆಯ ಜಂಟಿ ನಿರ್ದೇಶಕರು (ಆಡಳಿತ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಉಚಿತ ಕ್ಯಾನ್ಸರ್ ತಪಾಸಣಾ ಶಿಬಿರ

ಮೈಸೂರು, ಮೇ 23–ಮೈಸೂರಿನ ಲಕ್ಷ್ಮೀಪುರಂನಲ್ಲಿರುವ ಪ್ರೀತಿ ಕ್ಯಾನ್ಸರ್ ಸೆಂಟರ್‌ನಲ್ಲಿ ಮೇ 25ರಂದು ಬೆಳಗ್ಗೆ 10ರಿಂದ ರಾತ್ರಿ 8ರವರೆಗೆ ಉಚಿತ ಕ್ಯಾನ್ಸರ್ ತಪಾಸಣಾ ಶಿಬಿರ ಹಮ್ಮಿಕೊಳ್ಳಲಾಗಿದೆ. ಹೆಚ್ಚಿನ ಮಾಹಿತಿಗೆ ದೂ. 0821–4259259 ಸಂಪರ್ಕಿಸಬಹುದು.

ಒಂದು ಸಾವಿರ ರೂ. ಮುಖಬೆಲೆಯ ನೋಟಿನ ಮರು ಪರಿಚಯ ಇಲ್ಲ

ಪೋಸ್ಟ್ ಆಫೀಸ್‌ನಲ್ಲಿ ನೋಟು ಬದಲಾವಣೆ ಇಲ್ಲ: ಆರ್‌ಬಿಐ ಸ್ಪಷ್ಟನೆ

ಮುಂಬೈ, ಮೇ 23– ದೇಶದಲ್ಲಿ 2 ಸಾವಿರ ಮುಖಬೆಲೆಯ ಗರಿಷ್ಠ ನೋಟು ಚಲಾವಣೆ ಹಿಂಪಡೆದ ಹಿನ್ನೆಲೆಯಲ್ಲಿ ಮತ್ತೆ 1 ಸಾವಿರ ರೂ. ಮುಖಬೆಲೆಯ ನೋಟುಗಳನ್ನು ಪರಿಚಯಿಸುವ ವಿಚಾರದ ಕುರಿತು ಇದೇ ಮೊದಲ ಬಾರಿಗೆ ಭಾರತೀಯ ರಿಸರ್ವ್ ಬ್ಯಾಂಕ್ ಮಹತ್ವದ ಹೇಳಿಕೆ ನೀಡಿದೆ.

2 ಸಾವಿರ ಮುಖಬೆಲೆಯ ಗರಿಷ್ಠ ನೋಟು ಚಲಾವಣೆ ಹಿಂಪಡೆದ ಹಿನ್ನೆಲೆಯಲ್ಲಿ ಇಂದಿನಿಂದ ಬ್ಯಾಂಕುಗಳಲ್ಲಿ ನೋಟುಗಳ ಬದಲಾವಣೆಗೆ ಆರಂಭವಾಗಿದೆ. ಈ ಹಿನ್ನಲೆಯಲ್ಲಿ ಆರ್‌ಬಿಐ ಮುಖ್ಯಸ್ಥ ಶಕ್ತಿಕಾಂತ್ ದಾಸ್ ಕೆಲ ಮಾಹಿತಿಗಳನ್ನು ಹಂಚಿಕೊಂಡಿದ್ದಾರೆ.

2000 ರೂಪಾಯಿ ಬೆಲೆಯ ನೋಟು ಹಿಂಪಡೆದ ನಿರ್ಧಾರದಿಂದ ದೇಶದ ಆರ್ಥಿಕತೆ ಮೇಲೆ ಅತ್ಯಂತ ಕನಿಷ್ಠ ಪರಿಣಾಮ ಬೀರುತ್ತದೆ. ಭಾರತೀಯ ಕರೆನ್ಸಿ ನಿರ್ವಹಣಾ ವ್ಯವಸ್ಥೆ ತುಂಬಾ ದೃಢವಾಗಿದೆ. ಡಾಲರ್ ವಿರುದ್ಧ ನಮ್ಮ ವಿನಿಮಯ ದರ ಬಲಿಷ್ಠವಾಗಿದೆ. ಚಲಾವಣೆಯಲ್ಲಿರುವ ನೋಟುಗಳಲ್ಲಿ ಕೇವಲ ಶೇ.10ಕ್ಕಿಂತ ಹೆಚ್ಚು ಮತ್ತು ವಹಿವಾಟುಗಳಲ್ಲಿ ಅವುಗಳನ್ನು ವ್ಯಾಪಕವಾಗಿ ಬಳಸಲಾಗಿಲ್ಲ ಎಂದು ಹೇಳಿದರು.

ಸಾವಿರ ರೂ ಮುಖ ಬೆಲೆಯ ನೋಟಿನ ಮರು ಪರಿಚಯ ಇಲ್ಲ; ಅಂತೆಯೇ ಹೆಚ್ಚಿನ ಮೌಲ್ಯದ ನೋಟು ಚಲಾವಣೆ ಹಿಂತೆಗೆದುಕೊಳ್ಳುವ ನಿರ್ಧಾರ ಆರ್‌ಬಿಐ ನೀತಿಯ ಭಾಗವಾಗಿದ್ದು, 2016ರ ನೋಟು ಅಮಾನ್ಯೀಕರಣದ ನಂತರ 1 ಸಾವಿರ ಬೆಲೆಯ ನೋಟು ಮರು ಪರಿಚಯ ಮಾಡುವ ಉದ್ದೇಶ ಇಲ್ಲ. ಸಾಮಾನ್ಯ ನಗದು ಠೇವಣಿ ನಿಯಮ ಅನುಸರಿಸಬೇಕು ಮತ್ತು ಠೇವಣಿ ನಿರ್ಣಯಿಸುವುದು ಇತರ ಏಜೆನ್ಸಿಗಳಿಗೆ ಬಿಟ್ಟದ್ದು ಎಂದು ಹೇಳಿದ ಅವರು ಬೇಡಿಕೆಯ ಟ್ರೆಂಡ್‌ಗಳ ಆಧಾರದ ಮೇಲೆ ಹೆಚ್ಚಿನ ಬ್ಯಾಂಕ್‌ಗಳು ತಮ್ಮ ಎಟಿಎಂಗಳನ್ನು ಮಾರ್ಪಡಿಸಿವೆ ಮತ್ತು 2000 ರೂಪಾಯಿಗಳ ನೋಟುಗಳನ್ನು ಹೆಚ್ಚು ನೀಡುತ್ತಿಲ್ಲ ಹೀಗಾಗಿ ಹಿಂಪಡೆಯಲಾಗಿದೆ ಎಂದರು.

ನೋಟುಗಳ ಸಾಕಷ್ಟು ದಾಸ್ತಾನಿದೆ: ಬ್ಯಾಂಕ್‌ಗಳು ಮತ್ತು ಆರ್‌ಬಿಐನಲ್ಲಿ ಲಭ್ಯವಿರುವ ಇತರ ಮುಖಬೆಲೆಯ ನೋಟುಗಳ ಸಾಕಷ್ಟು ಹೆಚ್ಚು ದಾಸ್ತಾನು ಇದೆ. 2000 ರೂ. ನೋಟುಗಳ ಸಂಗ್ರಹವನ್ನು ಮರುಪೂರ್ಣ ಮಾಡಲು ಬಳಸಬಹುದು. ಇಲ್ಲಿಯವರೆಗೆ, ವ್ಯವಸ್ಥೆಯಲ್ಲಿನ ನಗದು ವ್ಯವಹಾರಕ್ಕೆ ಸಂಬಂಧಿಸಿದಂತೆ ಆರ್‌ಬಿಐ ವ್ಯವಸ್ಥೆಯಲ್ಲಿನ ಲಿಕ್ವಿಡಿಟಿಯನ್ನು ಮೇಲ್ವಿಚಾರಣೆ ಮಾಡುತ್ತದೆ ಎಂದು ಅವರು ಮಾಹಿತಿ ಹಂಚಿಕೊಂಡಿದ್ದಾರೆ.

ಅಂಚೆ ಕಚೇರಿಗಳ ಮೂಲಕ ನೋಟು ಬದಲಾವಣೆ ಇಲ್ಲ: 2000 ರೂ ಮುಖಬೆಲೆಯ ನೋಟುಗಳ ವಿನಿಮಯ ಸೌಲಭ್ಯವು ಬ್ಯಾಂಕ್ ಶಾಖೆಗಳಲ್ಲಿ ಮಾತ್ರ ಲಭ್ಯವಿರುತ್ತದೆ ಮತ್ತು ಅಂಚೆ ಕಚೇರಿಗಳ ಮೂಲಕ ಮಾಡಲಾಗುವುದಿಲ್ಲ ಎಂದು ಆರ್‌ಬಿಐ ಸ್ಪಷ್ಟಪಡಿಸಿದೆ. ಬ್ಯಾಂಕ್‌ಗಳಲ್ಲಿ ಮಾತ್ರ ನೋಟು ವಿನಿಮಯ ಸೌಲಭ್ಯ ಲಭ್ಯವಿದೆ. 2000 ರೂಪಾಯಿ ನೋಟು ಕಾನೂನುಬದ್ಧ ಟೆಂಡರ್ ಆಗಿರುವುದರಿಂದ ಗ್ರಾಹಕರು ಠೇವಣಿ ಮಾಡಬಹುದು. ಸಾರ್ವಜನಿಕರು ಇಂದಿನಿಂದ ತಮ್ಮ 2000 ರೂಪಾಯಿಗಳನ್ನು ವಿನಿಮಯ ಮಾಡಿಕೊಳ್ಳಲು ಅಥವಾ ಠೇವಣಿ ಮಾಡಲು ಪ್ರಾರಂಭಿಸಬಹುದು. ಯಾವುದೇ ಬ್ಯಾಂಕ್‌ನಲ್ಲಿ ರೂ. 2000 ಬ್ಯಾಂಕ್ ನೋಟುಗಳನ್ನು ಇತರ ಮುಖಬೆಲೆಯ ನೋಟುಗಳಾಗಿ ವಿನಿಮಯ ಮಾಡಿಕೊಳ್ಳಬಹುದು. ಎಂದು ಆರ್‌ಬಿಐ ಹೇಳಿದೆ. ಸೆಪ್ಟೆಂಬರ್ 30ರಂದು 2000 ರೂಪಾಯಿ ನೋಟುಗಳ ವಿನಿಮಯದ ಅಂತಿಮ ದಿನಾಂಕದ ಕುರಿತು ಮಾತನಾಡಿದ ಆರ್‌ಬಿಐ ಗವರ್ನರ್ ಶಕ್ತಿಕಾಂತ ದಾಸ್, ಜನರು ಪ್ರಕ್ರಿಯೆಯನ್ನು ಗಂಭೀರವಾಗಿ ಪರಿಗಣಿಸಲು ದಿನಾಂಕವನ್ನು ನಿರ್ಧರಿಸಲಾಗಿದೆ ಎಂದು ಹೇಳಿದರು.

ಮಹಾರಾಷ್ಟ್ರದಲ್ಲಿ ಸಂಭವಿಸಿದ ಎರಡು ಪ್ರತ್ಯೇಕ ಅಪಘಾತದಲ್ಲಿ 11 ಮಂದಿ ದುರ್ಮರಣ

ಮುಂಬೈ, ಮೇ 23– ಮಹಾರಾಷ್ಟ್ರದ ಬುಲ್ಧಾನಾ ಹಾಗೂ ಅಮರಾವತಿ ಜಿಲ್ಲೆಗಳಲ್ಲಿ ಸಂಭವಿಸಿದ ಭೀಕರ ಅಪಘಾತದಲ್ಲಿ 11 ಮಂದಿ ಸಾವನ್ನಪ್ಪಿದ್ದು 17ಕ್ಕೂ ಹೆಚ್ಚು ಮಂದಿಗೆ ಗಾಯಗಳಾಗಿವೆ. ಮಂಗಳವಾರ ಬೆಳಗ್ಗೆ ಕಂಟೈನರ್ ಟ್ರಕ್‌ಗೆ ರಾಜ್ಯ ಸಾರಿಗೆ ಬಸ್ ಡಿಕ್ಕಿ ಹೊಡೆದು ಕನಿಷ್ಠ ಆರು ಜನರು ಸಾವನ್ನಪ್ಪಿದ್ದಾರೆ ಮತ್ತು 10 ಮಂದಿ ಗಾಯಗೊಂಡಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ಹಳೆಯ ಮುಂಬೈ–ನಾಗ್ಪುರ ಹೆದ್ದಾರಿಯಲ್ಲಿ ಸಿಂಧಖೇಡ್ ರಾಜಾ ಪಟ್ಟಣದ ಬಳಿ ಅಪಘಾತ ಸಂಭವಿಸಿದೆ. ಮಹಾರಾಷ್ಟ್ರ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಗೆ (MSRTC) ಸೇರಿದ ಬಸ್ ಪುಣೆಯಿಂದ (ಬುಲ್ಧಾನ) ಮೆಹ್ಕರ್ ಕಡೆಗೆ ಹೋಗುತ್ತಿದ್ದಾಗ ಟ್ರಕ್‌ಗೆ ಡಿಕ್ಕಿ ಹೊಡೆದಿದೆ ಎಂದು ಅಧಿಕಾರಿ ತಿಳಿಸಿದ್ದಾರೆ. ಮೃತಪಟ್ಟವರಲ್ಲಿ ನಾಲ್ವರು ಬಸ್ ಪ್ರಯಾಣಿಕರು ಮತ್ತು ಉಭಯ ವಾಹನಗಳ ಚಾಲಕರು ಸೇರಿದ್ದಾರೆ ಎಂದು ತಿಳಿದುಬಂದಿದೆ. ಇನ್ನು ಗಾಯಾಳುಗಳನ್ನು ಸಿಂಧಖೇಡ್ ರಾಜಾ ಪಟ್ಟಣದ ಆಸ್ಪತ್ರೆಗೆ ರವಾನಿಸಲಾಗಿದೆ.

ಅಮರಾವತಿಯಲ್ಲಿ ಒಂದೇ ಕುಟುಂಬದ ಐವರ ದುರ್ಮರಣ: ಮತ್ತೊಂದೆಡೆ ಮಹಾರಾಷ್ಟ್ರದ ಅಮರಾವತಿ ಜಿಲ್ಲೆಯಲ್ಲಿ ವೇಗವಾಗಿ ಬಂದ ಟ್ರಕ್ ಎಸ್‌ಯುವಿ ಕಾರಿಗೆ ಡಿಕ್ಕಿ ಹೊಡೆದ ಪರಿಣಾಮ ಕನಿಷ್ಠ ಐವರು ಸಾವನ್ನಪ್ಪಿದ್ದು ಏಳು ಮಂದಿ ಗಾಯಗೊಂಡಿದ್ದಾರೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಅಮರಾವತಿಯ ಖಲ್ಲಾರ್ ಪೊಲೀಸ್ ಠಾಣೆ ವ್ಯಾಪ್ತಿಯ ದರ್ಯಾಪುರ–ಅಂಜಂಗಾವ್ ರಸ್ತೆಯಲ್ಲಿ ಸೋಮವಾರ ರಾತ್ರಿ 11 ಗಂಟೆಗೆ ಅಪಘಾತ ಸಂಭವಿಸಿದೆ. ಮೃತರೆಲ್ಲರೂ ಒಂದೇ ಕುಟುಂಬಕ್ಕೆ ಸೇರಿದವರು ಎಂದು ತಿಳಿದುಬಂದಿದೆ. ಕೌಟುಂಬಿಕ ಕಾರ್ಯಕ್ರಮವೊಂದರಲ್ಲಿ ಭಾಗವಹಿಸಿ ದರ್ಯಾಪುರಕ್ಕೆ ಹಿಂತಿರುಗುತ್ತಿದ್ದರು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಮಡಿಕೇರಿಯಲ್ಲಿ ಮೇ 26, 27 ರಂದು ಮಾವು, ಹಲಸಿನ ಮೇಳ



ಮಡಿಕೇರಿ, ಮೇ 23– ಅತ್ಯಪ ರೂಪದ ವಿವಿಧ ಬಗೆಯ ಮಾವು ಮತ್ತು ಹಲಸಿನ ಹಣ್ಣಿನ ದ್ವಿತೀಯ ವರ್ಷದ 'ಮಾವು ಮತ್ತು ಹಲಸಿನ ಮೇಳ' ಜಿಲ್ಲಾ ಕೇಂದ್ರ ಮಡಿಕೇರಿಯ ಹಾಪ್‌ಕಾಮ್ಸ್ ಆವರಣದಲ್ಲಿ ಮೇ 26 ಮತ್ತು 27ರಂದು ನಡೆಯಲಿದೆ.

ಹಾಪ್‌ಕಾಮ್ಸ್ ಮಳಿಗೆಯ ಸಭಾಂಗಣದಲ್ಲಿ ಜಿಲ್ಲಾಧಿಕಾರಿ ಡಾ. ಬಿ.ಸಿ.ಸತೀಶ ಈ ಕುರಿತು ಮಾಹಿತಿ ನೀಡಿ, ಬೆಳೆಗಾರರಿಗೆ ತಾವು ಬೆಳೆದ ಹಣ್ಣುಗಳ ಮಾರಾಟಕ್ಕೆ ಅನುವು ಮಾಡಿಕೊಡುವ ಮತ್ತು ವಿವಿಧ ತಳಿಯ, ವಿಭಿನ್ನ ರುಚಿಯ ಮಾವು, ಹಲಸನ್ನು ಗ್ರಾಹಕರಿಗೆ ಪರಿಚಯಿಸುವ ಉದ್ದೇಶದಿಂದ ಮೇಳವನ್ನು ಆಯೋಜಿಸಲಾಗಿದೆ. ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ತೋಟಗಾರಿಕಾ ಇಲಾಖೆ ಮತ್ತು ಹಾಪ್‌ಕಾಮ್ಸ್ ವತಿಯಿಂದ ಆಯೋಜಿತ ಮೇಳವನ್ನು ಆರಂಭಿಕ ದಿನದಂದು ಬೆಳಗ್ಗೆ 10 ಗಂಟೆಗೆ ಜಿಲ್ಲೆಯ ಶಾಸಕರು, ಚುನಾಯಿತ ಜನಪ್ರತಿನಿಧಿಗಳು ಉದ್ಘಾಟಿಸಲಿದ್ದಾರೆ ಎಂದರು.

ಬೆಳೆಗಾರರು ವಿವಿಧ ಹಣ್ಣು ಹಂಪಲನ್ನು ಬೆಳೆಯುತ್ತಾರೆ. ಈ ಹಣ್ಣುಗಳಿಗೆ ಸೂಕ್ತ ಮಾರುಕಟ್ಟೆ ಒದಗಿಸುವ ಉದ್ದೇಶವು ಮೇಳದ್ದಾಗಿದೆ. ಈ ಬಾರಿ 20 ರಿಂದ 25 ಮಳಿಗೆಗಳಲ್ಲಿ 15 ರಿಂದ 20 ವಿವಿಧ ತಳಿಯ ಮಾವು ಮತ್ತು ಹಲಸಿನ ಹಣ್ಣಿನ ಪ್ರದರ್ಶನ ಮತ್ತು ಮಾರಾಟ ನಡೆಯಲಿದೆ. ಮೈಸೂರು, ರಾಮನಗರ, ಮಂಡ್ಯ, ಕೋಲಾರ, ಚಿಕ್ಕಬಳ್ಳಾಪುರ, ದೊಡ್ಡಬಳ್ಳಾಪುರದ ಮಾವಿನ ಕೃಷಿಕರು ತಮ್ಮ ಉತ್ಪನ್ನಗಳನ್ನು ಪ್ರದರ್ಶಿಸಲಿದ್ದಾರೆಂದು ವಿವರಿಸಿದರು.

ಗಮನ ಸೆಳೆಯಲಿರುವ ಹಲಸು: ಈ ಬಾರಿ ಪುತ್ತೂರು ಬಳಿಯ 'ನವನೀತ ನರ್ಸರಿ'ಯವರು ಹಲಸಿನ ಹಣ್ಣುಗಳ ಪ್ರದರ್ಶನದೊಂದಿಗೆ, ಅವುಗಳ ಗಿಡಗಳನ್ನು ಮಾರಾಟಕ್ಕೆ ಇಡಲಿದ್ದಾರೆ. ಇದು ಜಿಲ್ಲೆಯ ಬೆಳೆಗಾರರನ್ನು ಆಕರ್ಷಿಸಲಿದೆ ಎನ್ನುವ ವಿಶ್ವಾಸವನ್ನು ವ್ಯಕ್ತಪಡಿಸಿದರು. ಆನ್‌ಲೈನ್ ಮೂಲಕ ದೊಡ್ಡ ಪ್ರಮಾಣದಲ್ಲಿ ಹಣ್ಣಿನ ಬೇಡಿಕೆ ಇಡುವವರ ಮನೆ ಬಾಗಿಲಿಗೆ ಹಣ್ಣುಗಳನ್ನು ತಲುಪಿಸುವ ಚಿಂತನೆಗಳು ಇರುವುದಾಗಿ ಜಿಲ್ಲಾಧಿಕಾರಿಗಳು ಹೇಳಿದರು.

20 ಸಾವಿರ ಕೆ.ಜಿ. ಮಾರಾಟ: ಕಳೆದ ಸಾಲಿನಲ್ಲಿ ಮಾವು ಮೇಳದಲ್ಲಿ ಹಾಪ್‌ಕಾಮ್ಸ್ ಸೇರಿದಂತೆ 15 ಮಳಿಗೆಗಳನ್ನು ತೆರೆಯಲಾಗಿತ್ತು. ಹಾಪ್‌ಕಾಮ್ಸ್ ತನ್ನ ಮಳಿಗೆಯಲ್ಲಿ 2500 ಕೆ.ಜಿ. ಮಾವಿನ ಹಣ್ಣಿನ ವ್ಯಾಪಾರ ಮಾಡಿದ್ದು, ಒಟ್ಟಾಗಿ 20 ಸಾವಿರ ಕೆ.ಜಿಗೂ ಅಧಿಕ ಮಾವಿನ ಹಣ್ಣಿನ ಮಾರಾಟ ನಡೆದಿತ್ತು, ಈ ಬಾರಿ ಹೆಚ್ಚಿನ ವ್ಯಾಪಾರ ವಹಿವಾಟಿನ ನಿರೀಕ್ಷೆ ಇರುವುದಾಗಿ ಕೊಡಗು ಜಿಲ್ಲಾ ಹಾಪ್ ಕಾಮ್ಸ್ ಅಧ್ಯಕ್ಷ ಬಿದ್ದಾಟಂಡ ರಮೇಶ್ ತಿಳಿಸಿದರು. ಜಿಲ್ಲೆಯ ಬೆಳೆಗಾರರು ತಾವು ಬೆಳೆದ ಬಟರ್ ಫ್ರೂಟ್, ಲೀಚ್, ಸಪೋಟ ಸೇರಿದಂತೆ ಯಾವುದೇ ಹಣ್ಣನ್ನು ಮೇಳದಲ್ಲಿರಿಸಿ ಮಾರಾಟ ಮಾಡಲು ಅವಕಾಶವನ್ನು ನೀಡಲಾಗುತ್ತದೆ ಎಂದು ಹೇಳಿದರು.



ಸುದ್ದಿಗೋಷ್ಠಿಯಲ್ಲಿ ಜಿಲ್ಲಾಧಿಕಾರಿ ಡಾ. ಸತೀಶ್ ಮಾತನಾಡುತ್ತಿರುವುದು

ಸುದ್ದಿಗೋಷ್ಠಿಯಲ್ಲಿ ತೋಟಗಾರಿಕಾ ಇಲಾಖಾ ಉಪನಿರ್ದೇಶಕರಾದ ಹೆಚ್.ಆರ್, ನಾಯಕ್ ಉಪಸ್ಥಿತರಿದ್ದರು.

ಎ.ಎಸ್. ಪೊನ್ನಣ್ಣಗೆ ಸಚಿವ ಸ್ಥಾನಕ್ಕೆ ಆಗ್ರಹಿಸಲು ನಾಳೆ ಕೊಡವ ಸಮಾಜ, ಸಂಘ–ಸಂಸ್ಥೆಗಳ ಸಭೆ

ಮಡಿಕೇರಿ, ಮೇ 23– ವಿರಾಜಪೇಟೆ ವಿಧಾನಸಭಾ ಕ್ಷೇತ್ರದಿಂದ ನೂತನವಾಗಿ ಆಯ್ಕೆಯಾಗಿರುವ ಶಾಸಕ ಅಜ್ಜಿಕುಟ್ಟೀರ ಎಸ್. ಪೊನ್ನಣ್ಣ ಅವರಿಗೆ ಸಚಿವ ಸ್ಥಾನ ನೀಡಬೇಕು ಎಂಬ ಬೇಡಿಕೆಯನ್ನು ಮುಂದಿಟ್ಟು ಮೇ 25ರಂದು ಬೆಳಗೆ 10.30 ಗಂಟೆಗೆ ಅಖಿಲ ಕೊಡವ ಸಮಾಜದ ಸಭಾಂಗಣದಲ್ಲಿ ಕೊಡವ ಜನಾಂಗದ ವಿವಿಧ ಸಮಾಜ ಹಾಗೂ ಸಂಘ ಸಂಸ್ಥೆಗಳ ಸಭೆ ಕರೆಯಲಾಗಿದೆ ಎಂದು ಅಖಿಲ ಕೊಡವ ಸಮಾಜದ ಅಧ್ಯಕ್ಷ ಪರದಂಡ ಸುಬ್ರಮಣಿ ಕಾವೇರಪ್ಪ ಹಾಗೂ ಅಖಿಲ ಕೊಡವ ಸಮಾಜ ಯೂತ್ ವಿಂಗ್ ಅಧ್ಯಕ್ಷ ಚಮ್ಮಟೀರ ಪ್ರವೀಣ್ ಉತ್ತಪ್ಪ ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದ್ದಾರೆ.

ಕೊಡವ ಜನಾಂಗ ಚುನಾಯಿತ ಪ್ರತಿನಿಧಿಯೊಬ್ಬರಿಗೆ ಸುದೀರ್ಘ ಅವಧಿಯ ಬಳಿಕ ಸಚಿವ ಸ್ಥಾನ ದೊರಕುವ ಅವಕಾಶವಿದ್ದು, ನಾವೆಲ್ಲರೂ ಪಕ್ಷಭೇದ ಮರೆತು ಒತ್ತಾಯಿಸಬೇಕಿದೆ. ಈ ನಿಟ್ಟಿನಲ್ಲಿ ಜಿಲ್ಲೆಯಲ್ಲಿರುವ ಎಲ್ಲಾ ಕೊಡವ ಸಮಾಜ, ಹಾಗೂ ಕೊಡವ ಸಂಘ ಸಂಸ್ಥೆಗಳ ಪ್ರತಿನಿಧಿಗಳು ಇದನ್ನೇ ವೈಯಕ್ತಿಕ ಆಹ್ವಾನ ಎಂದು ಪರಿಗಣಿಸಿ ತಲಾ ಇಬ್ಬರಂತೆ ಸಭೆಗೆ ಆಗಮಿಸಿ ತಮ್ಮ ತಮ್ಮ ಸಲಹೆ ಸೂಚನೆಗಳನ್ನು ನೀಡಬೇಕಿದೆ ಎಂದಿದ್ದಾರೆ. ಇದು ಕೊಡವ ಜನಾಂಗಕ್ಕೆ ಸರ್ಕಾರದಲ್ಲಿ ಪ್ರಾತಿನಿಧ್ಯ ಹಾಗೂ ಕೊಡಗಿನ ಸರ್ವಾಂಗೀಣ ಅಭಿವೃದ್ಧಿಗೆ ಒತ್ತು ನೀಡಲು ಒಕ್ಕೊರಲಿನ ನಿರ್ಣಯದ ಸಭೆಯಾಗಿದೆ ಎಂದು ಕೊಡವ ಜನಾಂಗದ ಮಾತೃ ಸಂಸ್ಥೆಯಾಗಿರುವ ಅಖಿಲ ಕೊಡವ ಸಮಾಜ ಅಧ್ಯಕ್ಷ ಪರದಂಡ ಸುಬ್ರಮಣಿ ಕಾವೇರಪ್ಪ ಹಾಗೂ ಅಖಿಲ ಕೊಡವ ಸಮಾಜ ಯೂತ್ ವಿಂಗ್ ಅಧ್ಯಕ್ಷ ಚಮ್ಮಟೀರ ಪ್ರವೀಣ್ ಉತ್ತಪ್ಪ ಜಂಟಿ ಹೇಳಿಕೆಯಲ್ಲಿ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗೆ: 90084 96136 ಅಥವಾ 9880967573 ಸಂಪರ್ಕಿಸಲು ಕೋರಿದ್ದಾರೆ.



ವಿರಾಜಪೇಟೆ ವರದಿ: ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರದಲ್ಲಿದ್ದು ಜಿಲ್ಲೆಯ ಎರಡು ವಿಧಾನಸಭಾ ಕ್ಷೇತ್ರಗಳು ಕಾಂಗ್ರೆಸ್ ಪಾಲಾಗಿದೆ, ವಿರಾಜಪೇಟೆ ಶಾಸಕ ಎ.ಎಸ್. ಪೊನ್ನಣ್ಣ ಅವರಿಗೆ ಮಂತ್ರಿ ಸ್ಥಾನ ನೀಡಿ ಅವರನ್ನು ಜಿಲ್ಲೆಯ ಉಸ್ತುವಾರಿ ಸಚಿವರನ್ನಾಗಿ ಮಾಡಬೇಕೆಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಕೊಡಗು ಹೆಗ್ಗಡೆ ಅಭಿವೃದ್ಧಿ ಸಂಘ ಸಮಾಜದ ಅಧ್ಯಕ್ಷ ಪಡಿಞರಂಡ ಅಯ್ಯಪ್ಪ ಒತ್ತಾಯಿಸಿದರು

ವಿರಾಜಪೇಟೆ ಪ್ರೆಸ್‌ಕ್ಲಬ್‌ನಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಕಳೆದ 20 ವರ್ಷಗಳಿಂದ ಹೊರ ಜಿಲ್ಲೆಯವರೆ ಕೊಡಗಿನ ಉಸ್ತುವಾರಿ ಸಚಿವರಾಗುತ್ತಿದ್ದು ಜಿಲ್ಲೆಯಿಂದ ಶಾಸಕರಾಗಿ ಆಯ್ಕೆ ಆದವರಿಗೆ ಯಾವುದೇ ಸ್ಥಾನಮಾನ ದೊರೆತಿರಲಿಲ್ಲ. ಜಿಲ್ಲೆಯವರೇ ಆದ ವಿರಾಜಪೇಟೆ ಶಾಸಕ ಪೊನ್ನಣ್ಣ ಅವರಿಗೆ ಮಂತ್ರಿಸ್ಥಾನ ನೀಡಿ ಅವರನ್ನು ಉಸ್ತುವಾರಿ ಸಚಿವರನ್ನಾಗಿ ಮಾಡಿದರೆ ಜಿಲ್ಲೆಯ ಅಭಿವೃದ್ಧಿಗೆ ಸಹಕಾರಿಯಾಗಲಿದೆ ಎಂದರು.

ಕೊಡಗು ಜಿಲ್ಲಾ ಅಹಿಂದ ಒಕ್ಕೂಟದ ಅಧ್ಯಕ್ಷ ತೋರೆರ ಮುದ್ದಯ್ಯ ಮಾತನಾಡಿ, ಕೊಡಗಿನ 2 ಕ್ಷೇತ್ರಗಳಲ್ಲಿ ಕಾಂಗ್ರೆಸ್ ಪಕ್ಷ ಜಯಗಳಿಸಿದ್ದು ಇದೊಂದು ಚಾರಿತ್ರಿಕ ಮೈಲುಗಲ್ಲಾಗಿದೆ. ಜಿಲ್ಲೆಯ ಜ್ವಲಂತ ಸಮಸ್ಯೆಗಳಾದ ಜಮ್ಮಾ ಬಾಣೆ, ವನ್ಯಮೃಗಗಳ ಹಾವಳಿ, ಕೋವಿಯ ಹಕ್ಕು ಇತ್ಯಾದಿಗಳ ಬಗ್ಗೆ ಅರಿವಿರುವ ವಿರಾಜಪೇಟೆ ಶಾಸಕ ಎ.ಎಸ್ ಪೊನ್ನಣ್ಣ ಅವರಿಗೆ ಮಂತ್ರಿ ಸ್ಥಾನ ನೀಡಿ ಅವರನ್ನು ಉಸ್ತವಾರಿ ಸಚಿವರನ್ನಾಗಿ ಮಾಡುವಂತೆ ಆಗ್ರಹಿಸಿದರು.

ಇಂದು ಲೋಕಾಯುಕ್ತರಿಂದ ದೂರು ಅರ್ಜಿ ಸ್ವೀಕಾರ

ಮಡಿಕೇರಿ, ಮೇ 23– ಮಡಿಕೇರಿಯ ಲೋಕಾಯುಕ್ತ ಅಧಿಕಾರಿಗಳು ಮೇ, 24 ರಂದು ಬೆಳಗ್ಗೆ 11 ಗಂಟೆಯಿಂದ 1 ಗಂಟೆಯವರೆಗೆ ಕುಶಾಲನಗರದ ಲೋಕೋಪಯೋಗಿ ಪ್ರವಾಸಿ ಮಂದಿರದಲ್ಲಿ ಕರ್ನಾಟಕ ಲೋಕಾಯುಕ್ತ ಕಾಯಿದೆ ಯಡಿ ದೂರು ಅರ್ಜಿ ವಿತರಿಸಲಿದ್ದಾರೆ.

ಭರ್ತಿ ಮಾಡಿದ ಮತ್ತು ನೋಟರಿಯಿಂದ ಅಫಿಡವಿಟ್ ಮಾಡಿಸಿದ ಅರ್ಜಿಗಳನ್ನು ಸ್ವೀಕರಿಸಲಾಗುವುದು. ಸರ್ಕಾರಿ ಕಚೇರಿಗಳಲ್ಲಿ ಅಧಿಕೃತ ಕೆಲಸಗಳಲ್ಲಿ ವಿಳಂಬ ಹಾಗೂ ಇನ್ನಿತರೆ ತೊಂದರೆ ನೀಡುತ್ತಿರುವ ಸರ್ಕಾರಿ ಅಧಿಕಾರಿ/ನೌಕರರ ವಿರುದ್ಧ ಸಾರ್ವಜನಿಕರು ದೂರುಗಳನ್ನು ನಿಗದಿತ ಪತ್ರದಲ್ಲಿ ನೀಡಬಹುದಾಗಿದೆ. ಸಾರ್ವಜನಿಕರು ಈ ಅವಕಾಶವನ್ನು ಸದುಪಯೋಗಪಡಿಸಿಕೊಳ್ಳಲು ಕೋರಿದೆ. ಹೆಚ್ಚಿನ ವಿವರಗಳಿಗೆ ಮಡಿಕೇರಿ ಲೋಕಾಯುಕ್ತ ಪೊಲೀಸ್ ಕಚೇರಿ, ಗೌಳಿಬೀದಿ ಮಡಿಕೇರಿಯ ದೂ.ಸಂ.08272–295297 ಅನ್ನು ಸಂಪರ್ಕಿಸಬಹುದು ಎಂದು ಕರ್ನಾಟಕ ಲೋಕಾಯುಕ್ತ ಪೊಲೀಸ್ ಉಪಾಧೀಕ್ಷಕರು ತಿಳಿಸಿದ್ದಾರೆ.

ಮಳೆ ಹಾನಿ ಪ್ರದೇಶಗಳಿಗೆ ಶಾಸಕ ಡಾ.ಮಂಥರ್‌ಗೌಡ ಭೇಟಿ, ಪರಿಶೀಲನೆ



ಕುಶಾಲನಗರ, ಮೇ 23– ಸಮೀಪದ ಗುಡ್ಡೆಹೊಸೂರು ಗ್ರಾಮ ಪಂಚಾಯತಿ ವ್ಯಾಪ್ತಿಯ ಮಾದಪಟ್ಟಣ ಗ್ರಾಮಗಳಲ್ಲಿ ಮಳೆ ಹಾಗೂ ಬಿರುಗಾಳಿಗೆ ಸಿಲುಕಿ ಹಾನಿಗೊಂಡಿರುವ ಮನೆಗಳಿಗೆ ಶಾಸಕ ಡಾ.ಮಂಥರ್ ಗೌಡ ಭೇಟಿ ನೀಡಿ, ಪರಿಶೀಲನೆ ನಡೆಸಿ, ಸಾಂತ್ವನ ಹೇಳಿದರಲ್ಲದೆ, ಸರ್ಕಾರದಿಂದ ಪರಿಹಾರ ಕೊಡಿಸುವುದಾಗಿ ಭರವಸೆ ನೀಡಿದರು.

ಮಾದಪಟ್ಟಣ ಗ್ರಾಮದ ವೆಂಕಟಮ್ಮ, ವಿಶ್ವನಾಥ್, ಲಕ್ಷ್ಮಮ್ಮ ಹಾಗೂ ನಂಜರಾಯಪಟ್ಟಣ ಗ್ರಾಮದ ಪೊನ್ನಪ್ಪ, ನೆಲ್ಲಿಹುದಿಕೇರಿ ಗ್ರಾಮದ ಸೌಕತ್ ಹಾಗೂ ಕುಮಾರನ್ ಎಂಬುವವರ ಮನೆಗಳ ಮೇಲ್ಛಾವಣಿ ಸಂಪೂರ್ಣ ಹಾರಿ ಹೋಗಿದ್ದರಿಂದ ತುಂಬ ತೊಂದರೆ ಉಂಟಾಗಿದೆ.

ಮನೆಯೊಳಗಿದ್ದ ವಸ್ತುಗಳು, ದಿನಸಿ, ಬಟ್ಟೆ, ಹಾಸಿಗೆ ಹೊದಿಕೆಗಳು ಮಳೆಗೆ ಸಿಕ್ಕಿ ಹಾನಿಂಯಾಗಿವೆ. ಮಂಗಳವಾರ ಅಧಿಕಾರಿಗಳೊಂದಿಗೆ ಸಂತ್ರಸ್ತರ ಕುಟುಂಬಗಳಿಗೆ ಭೇಟಿ ನೀಡಿ ಶಾಸಕ ಮಂಥರ್ ಗೌಡ ಅವರು ಪರಿಶೀಲನೆ ನಡೆಸಿದರು. ಈ ಸಂದರ್ಭ ಸಂತ್ರಸ್ತ ಕುಟುಂಬ ಸದಸ್ಯರು ಕೂಡಲೇ ಪರಿಹಾರ ನೀಡಬೇಕು ಎಂದು ತಮ್ಮ ಅಳಲು ತೋಡಿಕೊಂಡರು. ಜನರ ಸಮಸ್ಯೆ ಆಲಿಸಿದ ಶಾಸಕರು ಮಳೆಗಾಳಿಯಿಂದ ಹಾನಿ ಆಗಿರುವ ಪ್ರತಿ ಮನೆಗಳಿಗೆ ಕಂದಾಯ ಇಲಾಖೆ ಅಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸಿ ವರದಿ ನೀಡುವಂತೆ ಸೂಚಿಸಿದರು. ಜೊತೆಗೆ ಮಳೆಗಾಳಿಗೆ ಸಂತ್ರಸ್ತರಾಗಿರುವ ಕುಟುಂಬಗಳಿಗೆ ತ್ವರಿತವಾಗಿ ಪರಿಹಾರ ನೀಡುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಈ ಸಂದರ್ಭ ತಹಶೀಲ್ದಾರ್ ಪ್ರಕಾಶ್, ಉಪತಹಸೀಲ್ದಾರ್ ಮಧುಸೂದನ್, ಕಂದಾಯ ನಿರೀಕ್ಷಕ ಸಂತೋಷ್, ಸಿಬ್ಬಂದಿಗಳಾದ ಗೌತಮ್, ಗುಡ್ಡೆಹೊಸೂರು ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಶ್ಯಾಮ್, ಕಾರ್ಯದರ್ಶಿ ಕುಮಾರಸ್ವಾಮಿ ಹಾಗೂ ಮುಖಂಡರಾದ ಕೆ.ಎಂ.ಲೋಕೇಶ್, ಕೆ.ಎಂ. ಲತೀಫ್, ಪ್ರಮೋದ್ ಮುತ್ತಪ್ಪ, ಜೋಸೆಫ್ ವಿಕ್ಟರ್ ಸೋನ್ಸ್, ಸತೀಶ್, ಶಿವಕುಮಾರ್, ಲಾರೆನ್ಸ್, ಚೇತನ್, ಟಿ.ಪಿ.ಹಮೀದ್, ಪಿ.ಬಿ. ಯತೀಶ್, ದಾಮೋದರ್ ಮತ್ತಿತರರು ಇದ್ದರು.

ಇಂದು ಕಾಳಿಕಾಂಭ ದೇವಿ ವಾರ್ಷಿಕೋತ್ಸವ

ನಾಪೋಕ್ಲು, ಮೇ 23– ಪಾಲೂರು ಗ್ರಾಮದ ಗ್ರಾಮದೇವತೆಯಾದ ಕಾಳಿಕಾಂಬ ತಾಯಿಯ ವಾರ್ಷಿಕೋತ್ಸವ ಮೇ 24ರಂದು ಬುಧವಾರ ನಡೆಯಲಿದೆ. ವಾರ್ಷಿಕೋತ್ಸವದ ಅಂಗವಾಗಿ ಬೆಳಗ್ಗೆ 11 ಗಂಟೆಗೆ ದೇವರ ಜಳಕ, 12.30ಕ್ಕೆ ಮಹಾಪೂಜೆ ಹಾಗೂ ಒಂದು ಗಂಟೆಗೆ ಅನ್ನ ಸಂತರ್ಪಣೆ ನಡೆಯಲಿದೆ. ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಉತ್ಸವ ದಲ್ಲಿ ಪಾಲ್ಗೊಳ್ಳುವಂತೆ ದೇವಾಲಯದ ಆಡಳಿತ ಮಂಡಳಿ ಸದಸ್ಯರು ಕೋರಿದ್ದಾರೆ.

ಮೇ 30, ಜಿಲ್ಲಾ ಅಭಿವೃದ್ಧಿ ಸಮನ್ವಯ ಸಮಿತಿ ಸಭೆ

ಮಡಿಕೇರಿ, ಮೇ 23– ಜಿಲ್ಲಾ ಅಭಿವೃದ್ಧಿ ಸಮನ್ವಯ ಮತ್ತು ಉಸ್ತುವಾರಿ ಸಮಿತಿ (ದಿಶಾ) ಸಭೆಯು ಸಂಸದರಾದ ಪ್ರತಾಪ್ ಸಿಂಹ ಅವರ ಅಧ್ಯಕ್ಷತೆಯಲ್ಲಿ ಕೊಡಗು ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಮೇ 30 ರಂದು ಬೆಳಗ್ಗೆ 10 ಗಂಟೆಗೆ ನಡೆಯಲಿದೆ ಎಂದು ಜಿಲ್ಲಾ ಅಭಿವೃದ್ಧಿ ಸಮನ್ವಯ ಮತ್ತು ಉಸ್ತುವಾರಿ ಸಮಿತಿಯ ಸದಸ್ಯ ಕಾರ್ಯದರ್ಶಿ ಹಾಗೂ ಜಿಲ್ಲಾಧಿಕಾರಿ ಡಾ.ಬಿ.ಸಿ.ಸತೀಶ ತಿಳಿಸಿದ್ದಾರೆ.

'ನನ್ನ ಜೀವನ, ನನ್ನ ಸ್ವಚ್ಛ ನಗರ' ಕಾರ್ಯಕ್ರಮಕ್ಕೆ ಚಾಲನೆ



ಕುಶಾಲನಗರ, ಮೇ 23– ಮರು ಬಳಕೆಗೆ ಯೋಗ್ಯವಾದ ವಸ್ತುಗಳನ್ನು ಕಸವನ್ನಾಗಿಸದೆ ಸಂಗ್ರಹಣಾ ಕೇಂದ್ರಕ್ಕೆ ನೀಡುವುದರ ಮೂಲಕ ಪಟ್ಟಣದ ಸ್ವಚ್ಛತೆಗೆ ಸಹಕರಿಸಬೇಕು ಎಂದು ಪುರಸಭೆ ಅಧ್ಯಕ್ಷ ಬಿ.ಜೈವರ್ಧನ್ ಹೇಳಿದರು.

ಪಟ್ಟಣದ ಕಾರ್ಯಪ್ಪ ವೃತ್ತದಲ್ಲಿ ಪುರಸಭೆ ವತಿಯಿಂದ ಸ್ವಚ್ಛ ಭಾರತ್ ಮಿಷನ್ ಯೋಜನೆಯಡಿ ಏರ್ಪಡಿಸಿದ್ದ 'ನನ್ನ ಜೀವನ, ನನ್ನ ಸ್ವಚ್ಛ ನಗರ' ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಕೆಲವು ಮನೆಗಳಲ್ಲಿ ಮರು ಬಳಕೆಗೆ ಬರುವ ಬಟ್ಟೆ, ಆಟಿಕೆ ವಸ್ತು, ಚಪ್ಪಲಿ, ದಿನಪತ್ರಿಕೆ, ಪುಸ್ತಕಗಳು, ಪ್ಲಾಸ್ಟಿಕ್ ಚೀಲಗಳು, ಎಲೆಕ್ಟ್ರಾನಿಕ್ ಹಾಗೂ ಇನ್ನಿತರೆ ವಸ್ತುಗಳನ್ನು ಕಸವನ್ನಾಗಿಸಿ ಬಿಸಾಡುತ್ತಾರೆ. ಇದರಿಂದ ಪಟ್ಟಣದ ಸ್ವಚ್ಛತೆ ಹಾಗೂ ಸೌಂದರ್ಯದ ಮೇಲೆ ದುಷ್ಪರಿಣಾಮ ಬೀರುತ್ತದೆ. ಹಾಗಾಗಿ ಸ್ವಚ್ಛತೆಯನ್ನು ಕಾಪಾಡುವುದು ನಮ್ಮೆಲ್ಲರ ಜವಾಬ್ದಾರಿ.ಈ ದಿಸೆಯಲ್ಲಿ ಸಂಗ್ರಹಣಾ ಕೇಂದ್ರವನ್ನು ತೆರೆಯಲಾಗಿದ್ದು, ಬೆಳಗ್ಗೆ 7 ಗಂಟೆಯಿಂದ ಮಧ್ಯಾಹ್ನ 1 ಗಂಟೆವರೆಗೆ ಕಾರ್ಯನಿರ್ವಹಿಸಲಿದೆ. ಜನತೆ ಇದರ ಪ್ರಯೋಜನ ಪಡೆಯಬೇಕು ಎಂದು ಮನವಿ ಮಾಡಿದರು.

ಆರೋಗ್ಯ ನಿರೀಕ್ಷಕ ಉದಯಕುಮಾರ್ ಮಾತನಾಡಿ, ಪಟ್ಟಣದ ಜನತೆ ಹಳೆಯ ವಸ್ತುಗಳನ್ನು ಬಿಸಾಡದೆ ಸಂಗ್ರಹಣಾ ಕೇಂದ್ರಕ್ಕೆ ದೇಣಿಗೆ ರೂಪದಲ್ಲಿ ನೀಡಬೇಕು ಎಂದರು. ಜೂನ್ 5ರವರೆಗೆ ಕೇಂದ್ರ ಕಾರ್ಯ ನಿರ್ವಹಿಸಲಿದ್ದು, ಅನುಪಯುಕ್ತ ವಸ್ತುಗಳನ್ನು ನೀಡಿ ಸಹಕಾರ ನೀಡಬೇಕು ಎಂದರು. ಈ ಸಂದರ್ಭ ಪುರಸಭೆ ಸದಸ್ಯರಾದ ಡಿ.ಕೆ.ತಿಮ್ಮಪ್ಪ, ವಿ.ಎಸ್.ಆನಂದ್ ಕುಮಾರ್, ಸುರೇಶ್, ಎಂ.ಕೆ.ದಿನೇಶ್, ಜಯಲಕ್ಷ್ಮಮ್ಮ ನಂಜುಂಡಸ್ವಾಮಿ ಸಿಬ್ಬಂದಿಗಳು ಇದ್ದರು.

ಚಾ.ನಗರ ವೈದ್ಯಕೀಯ ವಿಜ್ಞಾನ ಸಂಸ್ಥೆ ಡೀನ್ ವಜಾಗೆ ಆಗ್ರಹಿಸಿ

ನಾಳೆ ದಲಿತ ಸಂಘಟನೆಗಳಿಂದ ಪ್ರತಿಭಟನೆ



ಚಾಮರಾಜನಗರ, ಮೇ 23– ಬಾಬಾ ಸಾಹೇಬ್ ಡಾ.ಬಿ.ಆರ್.ಅಂಬೇಡ್ಕರ್ ಅವರನ್ನು ನಿಂದಿಸಿರುವ ಚಾಮರಾಜನಗರ ವೈದ್ಯಕೀಯ ವಿಜ್ಞಾನ ಸಂಸ್ಥೆಗಳ ಡೀನ್ ಮತ್ತು ನಿರ್ದೇಶಕ ಡಾ.ಜಿ.ಎಂ.ಸಂಜೀವ್‌ರೆಡ್ಡಿ ಅವರನ್ನು ಸೇವೆಯಿಂದ ವಜಾಗೊಳಿಸುವಂತೆ ದಲಿತ ಸಂಘಟನೆಗಳ ವತಿಯಿಂದ ಮೇ 25 ರಂದು ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ಮಹಾನಾಯಕ ರಕ್ಷಣಾ ವೇದಿಕೆ ರಾಜ್ಯ ಉಪಾಧ್ಯಕ್ಷ, ವಕೀಲ ಪ್ರಸನ್ನಕುಮಾರ್ ತಿಳಿಸಿದರು.

ನಗರದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಭವನದಲ್ಲಿ ಕರೆದಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಅಂದು ಬೆಳಗ್ಗೆ 9 ಗಂಟೆಗೆ ನಗರದ ಡಾ.ಬಿ.ಆರ್.ಅಂಬೇಡ್ಕರ್ ಭವನದಿಂದ ಜಿಲ್ಲಾಡಳಿತ ಭವನದವರೆಗೆ ಪ್ರತಿಭಟನಾ ಮೆರವಣಿಗೆ ನಡೆಯಲಿದೆ ಎಂದರು. ಡಾ. ಸಂಜೀವ್‌ರೆಡ್ಡಿ ಅವರ ಕಚೇರಿಗೆ ಕೆಲವು ವೈದ್ಯರು ಹೊರಗುತ್ತಿಗೆ ನೌಕರರ ಸಮಸ್ಯೆಗಳ ಬಗ್ಗೆ ಚರ್ಚಿಸಲು ಹೋಗಿದ್ದ ಸಂದರ್ಭದಲ್ಲಿ ಅಂಬೇಡ್ಕರ್‌ರನ್ನು ನಿಂದಿಸಿ ಅವಮಾನಿಸಿರುವುದು ಅತ್ಯಂತ ಖಂಡನೀಯ ಎಂದರು.

ನರ್ಸ್ ನೇಮಕಾತಿಯಲ್ಲಿ ದಲಿತ ವಿದ್ಯಾರ್ಥಿಗಳಿಗೆ ಮೋಸ ಮಾಡಿದ್ದಾರೆ. ಆಸ್ಪತ್ರೆಯ ಮುಂಭಾಗದಲ್ಲಿರುವ ಆಟೋ ನಿಲ್ದಾಣದಲ್ಲಿ ಅಂಬೇಡ್ಕರ್‌ರವರ ನಾಮಫಲಕ ಅಳವಡಿಸಲು ಅವಕಾಶ ನೀಡದೆ ಅಗೌರವ ತೋರಿಸಿದ್ದಾರೆ. ಪದೇಪದೆ ಅಂಬೇಡ್ಕರ್ ವಿರೋಧಿ ನಡೆ ಅನುಸರಿಸಿದ್ದಾರೆ. ಇಂತಹ ಅಧಿಕಾರಿಯನ್ನು ಸೇವೆಯಿಂದ ವಜಾಗೊಳಿಸಬೇಕು ಎಂದು ಪ್ರಸನ್ನ ಒತ್ತಾಯಿಸಿದರು. ಚಾಮರಾಜನಗರ ವೈದ್ಯಕೀಯ ವಿಜ್ಞಾನ ಸಂಸ್ಥೆಗಳ ಡೀನ್ ಮತ್ತು ನಿರ್ದೇಶಕ ಡಾ.ಜಿ.ಎಂ.ಸಂಜೀವ್‌ರೆಡ್ಡಿ ಅವರು, ವೈದ್ಯರು ಸೇರಿದಂತೆ 80 ಜನರ ವಿರುದ್ಧ ಹೂಡಿರುವ ಪ್ರಕರಣವನ್ನು ವಜಾಗೊಳಿಸಬೇಕು ಎಂದು ಪ್ರಸನ್ನಕುಮಾರ್ ಒತ್ತಾಯಿಸಿದರು. ಪತ್ರಿಕಾಗೋಷ್ಠಿಯಲ್ಲಿ ಕಾಂಗ್ರೆಸ್ ಮುಖಂಡ ನಲ್ಲೂರು ಮಹದೇವಸ್ವಾಮಿ, ಅಂಬೇಡ್ಕರ್ ಸೇನೆಯ ಅಧ್ಯಕ್ಷ ಗಣೇಶ್‌ಪ್ರಸಾದ್, ಜನ್ನೂರು–ಹೊಸೂರು ಪುಟ್ಟಬುದ್ಧಿ, ಕೆ.ನಾಗರಾಜು, ಸಿದ್ದಾರ್ಥ ಹಾಜರಿದ್ದರು.

ಸರ್ಕಾರಿ ನೌಕರಿ ನಿರೀಕ್ಷೆಯಲ್ಲಿ ಚಾಮರಾಜನಗರ ಆಕ್ಸಿಜನ್ ದುರಂತದ ಸಂತ್ರಸ್ತ ಕುಟುಂಬಸ್ಥರು

ಈಡೇರುವುದೇ ರಾಹುಲ್‌ಗಾಂಧಿ, ಡಿಕೆಶಿ ನೀಡಿದ್ದ ಭರವಸೆ?

● ಸಿದ್ದಲಿಂಗಸ್ವಾಮಿ

ಚಾಮರಾಜನಗರ, ಮೇ 23– ಕಾಂಗ್ರೆಸ್ ಸರ್ಕಾರ ರಾಜ್ಯದಲ್ಲಿ ಮತ್ತೆ ಅಧಿಕಾರಕ್ಕೆ ಬಂದರೆ ಚಾಮರಾಜ ನಗರದಲ್ಲಿ ಸಂಭವಿಸಿದ ಆಕ್ಸಿಜನ್ ದುರಂತದಲ್ಲಿ ಮೃತಪಟ್ಟವರ ಕುಟುಂಬದ ಓರ್ವ ಸದಸ್ಯನಿಗೆ ಸರ್ಕಾರಿ ನೌಕರಿ ನೀಡುವುದಾಗಿ ಎಐಸಿಸಿ ನಾಯಕ ರಾಹುಲ್‌ಗಾಂಧಿ ಹಾಗೂ ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ಭರವಸೆ ನೀಡಿದ್ದರು. ಅದರಂತೆ ರಾಜ್ಯದಲ್ಲಿ ಮತ್ತೆ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದಿದ್ದು, ಸಂತ್ರಸ್ತ ಕುಟುಂಬಸ್ಥರು ಸರ್ಕಾರಿ ನೌಕರಿಯನ್ನು ಎದುರು ನೋಡುತ್ತಿದ್ದಾರೆ.

ಮೇ 2, 2021ರಂದು ರಾತ್ರಿ ಜಿಲ್ಲಾಸ್ಪತ್ರೆಯಲ್ಲಿದ್ದ ಆಕ್ಸಿಜನ್ ಪ್ರಮಾಣ ಕಡಿಮೆಯಾಗತೊಡಗಿತ್ತು. 10.30ರ ಸುಮಾರಿಗೆ ಆಕ್ಸಿಜನ್ ಸಂಪೂರ್ಣವಾಗಿ ಖಾಲಿಯಾಯಿತು. ಈ ಪ್ರಕರಣದಲ್ಲಿ 36 ಮಂದಿ ಸಾವನ್ನಪ್ಪಿದ್ದರು. ಈ ವಿಚಾರ ತಿಳಿದ ತಕ್ಷಣವೇ ಚಾಮರಾಜ ನಗರಕ್ಕೆ ಆಗಮಿಸಿದ ಅಂದಿನ ವಿಪಕ್ಷ ನಾಯಕ ಸಿದ್ದರಾಮಯ್ಯ ಹಾಗೂ ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ಅವರು ಮೃತಪಟ್ಟ 36 ಮಂದಿಯ ಕುಟುಂಬಸ್ಥರನ್ನು ಭೇಟಿ ಮಾಡಿ, ಸಾಂತ್ವನ ಹೇಳಿ, ಎಲ್ಲಾ ಕುಟುಂಬಗಳಿಗೆ ತಲಾ ಒಂದು ಲಕ್ಷ ರೂ. ಪರಿಹಾರ ನೀಡುವ ಮೂಲಕ ಮಾನವೀಯತೆ ಮೆರೆದಿದ್ದರು.



ಚಾಮರಾಜನಗರ ಆಕ್ಸಿಜನ್ ದುರಂತದಲ್ಲಿ ಸಾವೀಗೀಡಾದವರ ಕುಟುಂಬಸ್ಥರಿಗೆ 2021ರಲ್ಲಿ ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಲಕ್ಷ ರೂ.ಗಳ ಪರಿಹಾರದ ಚೆಕ್‌ನ್ನು ನೀಡಿದ್ದರು.

ರಾಹುಲ್‌ಗಾಂಧಿ ಅಭಯ: ಕಳೆದ ವರ್ಷ ಅಕ್ಟೋಬರ್ 1ರಲ್ಲಿ ಜಿಲ್ಲೆಯ ಗುಂಡ್ಲುಪೇಟೆ ಮೂಲಕ ರಾಜ್ಯ ಪ್ರವೇಶಿಸಿದ ಭಾರತ್ ಜೋಡೋ ಯಾತ್ರೆಯ ನೇತೃತ್ವ ವಹಿಸಿದ್ದ ರಾಹುಲ್‌ಗಾಂಧಿ ಅವರು ಅಂದು ಮಧ್ಯಾಹ್ನ ತಾಲೂಕಿನ ವೀರನಪುರ ಕ್ರಾಸ್ ಬಳಿ ಆಕ್ಸಿಜನ್ ದುರಂತದಲ್ಲಿ ಮೃತಪಟ್ಟವರ ಕುಟುಂಬಸ್ಥರ ಸಂಕಷ್ಟ ಆಲಿಸಿ, 'ಕಾಂಗ್ರೆಸ್ ಪಕ್ಷ ನಿಮ್ಮೊಂದಿಗೆ ಇದೆ. ಪಕ್ಷದಿಂದ ನಿಮಗೆ ಏನೆಲ್ಲಾ ಸಹಾಯ ಮಾಡಲು ಸಾಧ್ಯ ಅದನ್ನೆಲ್ಲಾ ಮಾಡುತ್ತೇವೆ. ಮುಂದೆ ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ಕೂಡಲೇ ಎಲ್ಲಾ ಕುಟುಂಬಗಳ ಒಬ್ಬ ಸದಸ್ಯರಿಗೆ ಸರ್ಕಾರಿ ನೌಕರಿ ಕೊಡಿಸಲಾಗುವುದು' ಎಂದು ಭರವಸೆ ನೀಡಿದ್ದರು.

ಡಿ.ಕೆ. ಶಿವಕುಮಾರ್ ಭರವಸೆ: ಜನವರಿ 26ರಂದು ಚಾಮರಾಜನಗರದಲ್ಲಿ ನಡೆದ ಪ್ರಜಾಧ್ವನಿ ಯಾತ್ರೆಯ ಬಹಿರಂಗ ಸಮಾರಂಭದಲ್ಲಿ ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ಮಾತನಾಡಿ, ಜಿಲ್ಲೆಯಲ್ಲಿ ಆಕ್ಸಿಜನ್ ದುರಂತದಿಂದ 36 ಮಂದಿ ಮೃತಪಟ್ಟಿದ್ದಾರೆ. ಈ ಸಂಬಂಧ ರಾಜ್ಯದಲ್ಲಿ ಅಧಿಕಾರದಲ್ಲಿದ್ದ ಬಿಜೆಪಿ ಸರ್ಕಾರ ಸೂಕ್ತ ತನಿಖೆಯನ್ನು ಮಾಡಲಿಲ್ಲ. ಅಲ್ಲದೇ ಮೃತಪಟ್ಟವರ ಕುಟುಂಬಕ್ಕೆ ಸರಿಯಾಗಿ ಪರಿಹಾರವನ್ನೂ ನೀಡಲಿಲ್ಲ. ಆದರೆ, ನಮ್ಮ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ಕೂಡಲೇ ದುರಂತದಲ್ಲಿ ಮೃತಪಟ್ಟವರ ಕುಟುಂಬ ಸದಸ್ಯರಿಗೆ ನಗರದ ಸರ್ಕಾರಿ ಆಸ್ಪತ್ರೆಯ ಲ್ಲಿಯೇ ನೌಕರಿ ಕೊಡಿಸುವ ಜೊತೆಗೆ, ದುರಂತಕ್ಕೆ ಕಾರಣರಾದ ಅಧಿಕಾರಿಗಳ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದ್ದರು.

ಪ್ರಸ್ತುತ ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷ ಸ್ಪಷ್ಟ ಬಹುಮತದೊಂದಿಗೆ ಅಧಿಕಾರಕ್ಕೆ ಬಂದಿದ್ದು, ಎಐಸಿಸಿ ಮಾಜಿ ಅಧ್ಯಕ್ಷರು ಹಾಗೂ ಡಿ.ಕೆ. ಶಿವಕುಮಾರ್ ನೀಡಿದ ಭರವಸೆಯನ್ನು ಕಾಂಗ್ರೆಸ್ ಸರ್ಕಾರ ಈಡೇರಿಸುವುದೇ ಕಾದು ನೋಡಬೇಕಿದೆ.

ನೌಕರಿ ಸಿಗುವ ಭರವಸೆ

ನನಗೆ ಇಬ್ಬರು ಮಕ್ಕಳು. ನನ್ನ ಪತಿ ಆಕ್ಸಿಜನ್ ದುರಂತದಲ್ಲಿ ಮೃತಪಟ್ಟ ನಂತರ ಕುಟುಂಬ ನಿರ್ವಹಣೆ ಕಷ್ಟವಾಯಿತು. ಈ ವೇಳೆ ಕಾಂಗ್ರೆಸ್‌ನವರು ಒಂದು ಲಕ್ಷ ಪರಿಹಾರ ನೀಡಿದರು. ಆದರೆ, ರಾಜ್ಯ ಸರ್ಕಾರ ಮಾತ್ರ ಒಂದು ರೂಪಾಯಿ ಕೂಡ ಪರಿಹಾರ ನೀಡಲಿಲ್ಲ ಎಂದು ಬಿಸಲವಾಡಿ ಗ್ರಾಮದ ನಿವಾಸಿ ಹಾಗೂ ದುರಂತದಲ್ಲಿ ಮೃತಪಟ್ಟ ಸಿದ್ದನಾಯಕ ಅವರ ಪತ್ನಿ ಜ್ಯೋತಿ ತಿಳಿಸಿದರು.

ಸುತ್ತೂರು ಮಠದಿಂದ ಮಕ್ಕಳಿಗೆ ಉಚಿತ ಶಿಕ್ಷಣ ದೊರೆಯಿತು. ಈಗ ಮಗ ಎಸ್‌ಎಸ್‌ಎಸ್‌ಸಿ ಯಲ್ಲಿ ಅತ್ಯುನ್ನತ ದರ್ಜೆಯಲ್ಲಿ ತೇರ್ಗಡೆಯಾಗಿದ್ದಾನೆ. ಆತನಿಗೆ ಮುಂದಿನ ಶಿಕ್ಷಣ ಕೊಡಿಸಲು ಸಾಧ್ಯವಾಗುತ್ತಿಲ್ಲ. ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದರೆ ನಮಗೆ ಸರ್ಕಾರಿ ನೌಕರಿ ಕೊಡಿಸುವ ಭರವಸೆ ನೀಡಿದ್ದರು. ಅದರಂತೆ ಸರ್ಕಾರ ಬಂದಿದ್ದು, ನಮಗೆ ನೌಕರಿ ನೀಡಿದರೆ, ನಮ್ಮ ಮಕ್ಕಳಿಗೆ ಉತ್ತಮ ಶಿಕ್ಷಣ ಕೊಡಿಸುವ ಜೊತೆಗೆ ಕುಟುಂಬ ನಿರ್ವಹಣೆಗೆ ಸಹಾಯವಾಗುತ್ತದೆ ಎಂದು ಮನವಿ ಮಾಡಿದರು.

ಸುವರ್ಣಾವತಿಯಲ್ಲಿ ಮೇ 26ಕ್ಕೆ ಜಲಸಾಹಸ ಕ್ರೀಡೆ

ಚಾಮರಾಜನಗರ, ಮೇ 23– ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ವತಿಯಿಂದ ಜಲ ಸಾಹಸ ಕ್ರೀಡೆಯನ್ನು ಮೇ 26ರಂದು ಬೆಳಿಗ್ಗೆ 9 ಗಂಟೆಗೆ ಸುವರ್ಣಾವತಿ ಜಲಾಶಯದಲ್ಲಿ ನಡೆಸುತ್ತಿದ್ದು ಸಾರ್ವಜನಿಕರು, ಯುವ ಜನರು, ಶಾಲಾ ಕಾಲೇಜು ವಿದ್ಯಾರ್ಥಿಗಳು ಭಾಗವಹಿಸಲು ಅವಕಾಶ ಕಲ್ಪಿಸಲಾಗಿದೆ.

ಚಾಮರಾಜನಗರ ಜಿಲ್ಲೆಯ ಐದು ತಾಲೂಕುಗಳ ಶಾಲಾ ಕಾಲೇಜು ವಿದ್ಯಾರ್ಥಿಗಳು, ಯುವ ಸಂಘಗಳ ಯುವಜನರು ಹಾಗೂ ಸಾರ್ವಜನಿಕರು ಜಲಸಾಹಸ ಕ್ರೀಡೆಯಲ್ಲಿ ಭಾಗವಹಿಸಬಹುದು. ಆಸಕ್ತರು ಮೇ 26ರಂದು ಬೆಳಗ್ಗೆ 9 ಗಂಟೆಗೆ ಸುವರ್ಣಾವತಿ ಜಲಾಶಯದ ಬಳಿ ಹಾಜರಾಗಬೇಕು. ಭಾಗವಹಿಸುವವರಿಗೆ ಊಟೋಪಹಾರ ವ್ಯವಸ್ಥೆ ಹಾಗೂ ಯಾವುದೇ ಪ್ರಯಾಣ ಭತ್ಯೆಯನ್ನು ಇಲಾಖೆಯಿಂದ ನೀಡಲಾಗುವುದಿಲ್ಲ. ಮಾಹಿತಿಗಾಗಿ ದೂ. ಸಂಖ್ಯೆ: 08226–224932, ಮೊ.ಸಂಖ್ಯೆ: 9880211027, 9844160841 ಅನ್ನು ಸಂಪರ್ಕಿಸುವಂತೆ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕರಾದ ಆರ್. ಅನಿತಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ

ಪ್ರಕೃತಿ ವಿಕೋಪ ತಡೆಗೆ ಸನ್ನದ್ಧರಾಗಿ: ಅಧಿಕಾರಿಗಳಿಗೆ ಡಿಸಿ ಸೂಚನೆ



ಚಾಮರಾಜನಗರ, ಮೇ 23– ಮಳೆ, ಪ್ರವಾಹ ಸೇರಿದಂತೆ ಪ್ರಕೃತಿ ವಿಕೋಪದಿಂದ ಉಂಟಾಗಬಹುದಾದ ಪರಿಣಾಮಗಳನ್ನು ಸಮರ್ಥವಾಗಿ ಎದುರಿಸಲು ಜಿಲ್ಲೆಯಲ್ಲಿ ಪೂರ್ವ ಸಿದ್ಧತೆಯೊಂದಿಗೆ ಅಧಿಕಾರಿಗಳು ಸನ್ನದ್ಧರಾಗಿರಬೇಕೆಂದು ಜಿಲ್ಲಾಧಿಕಾರಿ ಡಿ.ಎಸ್. ರಮೇಶ್ ಸೂಚಿಸಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿಂದು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಈಗಾಗಲೇ ಜಿಲ್ಲೆಯಾದ್ಯಂತ ಮಳೆ ಪ್ರಾರಂಭವಾಗಿದೆ. ಮಳೆಯಿಂದ ಆಗಬಹುದಾದ ಹಾನಿ ಬಗ್ಗೆ ಅಧಿಕಾರಿಗಳಿಗೆ ಪೂರ್ಣ ಮಾಹಿತಿ ಇರಬೇಕು. ಯಾವ ಪ್ರದೇಶ ಮಳೆ, ಪ್ರಕೃತಿ ವಿಕೋಪದಿಂದ ಬಾಧಿತವಾಗಲಿದೆ ಎಂಬ ಬಗ್ಗೆ ಪೂರ್ಣ ವಿವರ ಹೊಂದಿರಬೇಕು. ಮಳೆಯಿಂದ ಸಂಭವಿಸಬಹುದಾದ ಗಂಭೀರ ಪರಿಸ್ಥಿತಿ ಎದುರಿಸುವ ನಿಟ್ಟಿನಲ್ಲಿ ಪೂರ್ವ ಸಿದ್ಧತೆ ಕೈಗೊಂಡಿರಬೇಕು ಎಂದು ಜಿಲ್ಲಾಧಿಕಾರಿ ತಿಳಿಸಿದರು.

ಈಗಾಗಲೇ ಜಿಲ್ಲೆಯಲ್ಲಿ ಸುರಿದಿರುವ ಮಳೆಯಿಂದ ಹಾನಿಗೀಡಾಗಿರುವ ತೋಟಗಾರಿಕೆ, ಕೃಷಿ ಬೆಳೆ ಹಾನಿ ಬಗ್ಗೆ ಕಂದಾಯ, ತೋಟಗಾರಿಕೆ, ಕೃಷಿ ಇಲಾಖೆ ಅಧಿಕಾರಿಗಳು ಜಂಟಿಯಾಗಿ ಸ್ಥಳ ಪರಿಶೀಲಿಸಿ ಬೆಳೆನಷ್ಟ ಅಂದಾಜು ವರದಿ ಸಲ್ಲಿಸಬೇಕು. ಮನೆಗಳಿಗೆ ಹಾನಿಯಾಗಿದ್ದಲ್ಲಿ ಆ ಕುರಿತು ಕೂಡಲೇ ವರದಿ ನೀಡಬೇಕು. ಮಳೆ ಸಂಬಂಧಿ ಸಂತ್ರಸ್ತರಿಗೆ ಪರಿಹಾರ ನೀಡುವಲ್ಲಿ ವಿಳಂಬ ಮಾಡಬಾರದು ಎಂದು ಜಿಲ್ಲಾಧಿಕಾರಿಯವರು ತಾಕೀತು ಮಾಡಿದರು.

ಜಿಲ್ಲಾ ತುರ್ತು ನಿರ್ವಹಣಾ ಕೇಂದ್ರವು ದಿನದ 24 ಗಂಟೆಯೂ ಕಾರ್ಯ ನಿರ್ವಹಿಸಬೇಕು. ಇದೇ ರೀತಿ ತಾಲೂಕು ಮಟ್ಟದಲ್ಲಿಯೂ ತುರ್ತು ನಿರ್ವಹಣಾ ಕೇಂದ್ರಗಳು ಸಹಾಯವಾಣಿ ಮೂಲಕ ಜನರ ನೆರವಾಗಬೇಕು. ಎಲ್ಲಿಯೇ ಮಳೆ ಸಂಬಂಧಿ ವಿಪತ್ತು ಮಾಹಿತಿ ಬಂದಲ್ಲಿ ತುರ್ತು ಕಾರ್ಯಾಚರಣೆ ನಡೆಸಬೇಕು. ಪರಿಹಾರ ಕಾರ್ಯಗಳಿಗೆ ಚುರುಕಾಗಿ ಸ್ಪಂದಿಸಬೇಕು ಎಂದರು.

ಮಳೆ ಪ್ರಮಾಣ ಜಾಸ್ತಿಯಾಗಿ ಜಲಾಶಯಗಳಿಂದ ಹೆಚ್ಚು ನೀರು ಬಿಡುಗಡೆಯಾದರೆ ಕೊಳ್ಳೇಗಾಲ ಭಾಗದ ಕೆಲ ಗ್ರಾಮಗಳು ಪ್ರವಾಹ ಭೀತಿ ಎದುರಿಸಬೇಕಾಗುತ್ತದೆ. ಇಂತಹ ಗ್ರಾಮಗಳನ್ನು ಈ ಹಿಂದೆಯೂ ಗುರುತಿಸಿ ಅಗತ್ಯ ಕ್ರಮ ಕೈಗೊಳ್ಳಲಾಗಿದೆ. ಈ ಬಾರಿಯೂ ಸಹ ಪ್ರವಾಹ ಎದುರಾ ದಲ್ಲಿ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಈಗಿನಿಂದಲೇ ಕೈಗೊಳ್ಳಬೇಕು. ಜಿಲ್ಲೆಯಲ್ಲಿರುವ ಕೆರೆಗಳ ಸಂರಕ್ಷಣೆ ಆಗಬೇಕು. ಅಗ್ನಿಶಾಮಕ, ತುರ್ತು ಸೇವೆಗಳ ಇಲಾಖೆ ಸ್ವಯಂ ಸೇವಕ ರೊಂದಿಗೆ ಸನ್ನದ್ಧರಾಗಿರಬೇಕು. ರಕ್ಷಣಾ ಸಲಕರಣೆಗಳನ್ನು ಕ್ರೋಢೀಕರಿಸಿ ಸುಸ್ಥಿತಿಯಲ್ಲಿಟ್ಟುಕೊಳ್ಳಬೇಕು ಎಂದು ಜಿಲ್ಲಾಧಿಕಾರಿಯವರು ನಿರ್ದೇಶನ ನೀಡಿದರು. ವಿಪತ್ತು ಪರಿಸ್ಥಿತಿ ನಿರ್ವಹಣೆಗೆ ಪ್ರವಾಹ ಬಾಧಿತವಾಗ ಬಹುದಾದ ಆಯಾ ಗ್ರಾಮಗಳಲ್ಲಿ ಸಮಿತಿ ರಚಿಸಿರಬೇಕು. ಸ್ವಯಂ ಸೇವಕರ ರಕ್ಷಣಾ ತಂಡಗಳಿಗೆ ಸೂಕ್ತ ತರಬೇತಿ ಹಮ್ಮಿಕೊಂಡು ಸಜ್ಜುಗೊಳಿಸಬೇಕು. ಸಂತ್ರಸ್ತ ಪ್ರದೇಶಗಳಲ್ಲಿ ಅಗತ್ಯ ಬಿದ್ದರೆ ಕಾಳಜಿ ಕೇಂದ್ರ, ವೈದ್ಯಕೀಯ ಸೌಲಭ್ಯ, ಸಂತ್ರಸ್ತ ರಿಗೆ ಆರ್ಥಿಕ ನೆರವು ನೀಡಲು ಎಲ್ಲ ಅವಶ್ಯಕ ಮುಂಜಾಗ್ರತಾ ಕ್ರಮಗಳಿಗೆ ಸಿದ್ಧರಾಗಿರಬೇಕೆಂದರು.

ಮಳೆ ಸಂದರ್ಭದಲ್ಲಿ ನಗರ ಹಾಗೂ ಗ್ರಾಮಾಂತರ ಪ್ರದೇಶಗಳಲ್ಲಿ ಚರಂಡಿಗಳಲ್ಲಿ ನೀರು ತುಂಬಿ ಜನವಸತಿ ಪ್ರದೇಶಗಳಿಗೆ ನುಗ್ಗುವ ಸಾಧ್ಯತೆ ಇರುತ್ತದೆ. ಹೀಗಾಗಿ ಮಳೆ ನೀರು ಸರಾಗವಾಗಿ ಹರಿಯಲು ಚರಂಡಿ, ಕಾಲುವೆ, ಸೇತುವೆ, ಕಲ್ವರ್ಟ್‌ಗಳಲ್ಲಿರುವ ಹೂಳು ತೆಗೆದು ಸ್ವಚ್ಛಗೊಳಿಸಬೇಕು. ತಗ್ಗು ಪ್ರದೇಶಗಳಲ್ಲಿ ನಿಂತ ನೀರನ್ನು ಹೊರಹಾಕಲು ಅಗತ್ಯವಿರುವ ವ್ಯವಸ್ಥೆ ಮಾಡ ಬೇಕು. ವಿದ್ಯುತ್ ಸರಬರಾಜು ಇಲಾಖೆ ವಿದ್ಯುತ್ ತಂತಿ ಹಾದು ಹೋಗುವ ಮಾರ್ಗಗಳಲ್ಲಿ ಮಳೆ ಗಾಳಿಗೆ ಯಾವುದೇ ಅನಾಹುತ ಸಂಭವಿಸದಂತೆ ನಿಗಾ ವಹಿಸಬೇಕೆಂದು ಜಿಲ್ಲಾಧಿಕಾರಿ ಡಿ.ಎಸ್. ರಮೇಶ್ ಅವರು ಸೂಚನೆ ನೀಡಿದರು.

240 ದಿನಗಳಾದರೂ ಮಾಹಿತಿ ನೀಡದ ಕೊಳ್ಳೇಗಾಲ ಸಿಡಿಪಿಓಗೆ 25 ಸಾವಿರ ರೂ. ದಂಡ

ಕೊಳ್ಳೇಗಾಲ, ಮೇ 23– ಮಾಹಿತಿ ಕೋರಿ ಅರ್ಜಿ ಸಲ್ಲಿಸಿ 240 ದಿನ ಸಂದರೂ ಮಾಹಿತಿ ನೀಡದ ಹಿನ್ನೆಲೆ ಮಾಹಿತಿ ಹಕ್ಕು ಆಯೋಗದ ಪ್ರಾಧಿಕಾರದ ನ್ಯಾಯಾಧೀಶರು ಕೊಳ್ಳೇಗಾಲ ಸಿಡಿಪಿಓ ನಾಗೇಶ್ ಅವರಿಗೆ 25 ಸಾವಿರ ರೂ. ದಂಡ ವಿಧಿಸಿ ಆದೇಶಿಸಿದ್ದಾರೆ.

ಅಂಗನವಾಡಿ ಕಾರ್ಯಕರ್ತೆ ಹರ್ಷಿತಾ ಎಂಬುವರು ಮಂಗಲದ ಅಂಗನವಾಡಿ ಹಾಗೂ ಜಿ.ವಿ. ಗೌಡ ಕಾಲೇಜು ಎರಡು ಕಡೆಯೂ ಕೆಲಸ ಮಾಡುತ್ತಿರುವ ಬಗ್ಗೆ ಕೊಳ್ಳೇಗಾಲ ಪಟ್ಟಣದ ಕಲ್ಲು ಬಾವಿ ಬೀದಿಯ ಶಿವರಾಜ್ ಎಂಬುವರು ಮಾಹಿತಿ ಕೋರಿದ್ದರು. ಇದಕ್ಕೆ ಸಿಡಿಪಿಓ ಸ್ಪಂದಿಸದ ಹಿನ್ನೆಲೆ ಜಿಲ್ಲಾ ಆಯೋಗಕ್ಕೆ 2022ರ ಫೆ.1 ರಂದು ಮೇಲ್ಮನವಿ ಸಲ್ಲಿಸಿದ್ದು, ಮೇಲ್ಮನವಿ ಪ್ರಾಧಿಕಾರವೂ ಸಹಾ ಮಾಹಿತಿ ನೀಡುವಲ್ಲಿ ವಿಫಲವಾದ ಹಿನ್ನೆಲೆ 2022ರ ಜೂ.14ರಂದು ಆಯೋಗಕ್ಕೆ ದೂರು ಸಲ್ಲಿಸಿ ಈ ಪ್ರಕರಣ ಗಂಭೀರ ಸ್ವರೂಪದ್ದಾಗಿದ್ದು, ಕಾರ್ಯಕರ್ತೆ ಹರ್ಷಿತ 2 ಕಡೆ ಸಂಬಳ ಪಡೆಯುತ್ತಿದ್ದಾರೆ. ಸರ್ಕಾರದ ಅನುದಾನ ದುರ್ಬಳಕೆಯಾಗುತ್ತಿದೆ. ಅಕ್ರಮ ಮುಚ್ಚಿ ಹಾಕಲು ಮಾಹಿತಿ ನೀಡುತ್ತಿಲ್ಲ ಎಂದು ಆಯೋಗ ನಡೆಸಿದ ವಿಚಾರಣೆ ವೇಳೆ ದೂರುದಾರರು ವಿವರಣೆ ಸಲ್ಲಿಸಿದ್ದರು.

ಈ ಸಂಬಂಧ ಆಯೋಗದ ನ್ಯಾಯಾಧೀಶರು ಗಂಭೀರ ಸ್ವರೂಪದ ಪ್ರಕರಣ ಇದಾಗಿದ್ದು, ನೀವು ಮಾಹಿತಿದಾರರಿಗೆ 240 ದಿನಗಳಾದರೂ ಮಾಹಿತಿ ನೀಡಿಲ್ಲ, ಇದನ್ನೇ ಪರಿಗಣಿಸಿ ನಿಮಗೆ 25 ಸಾವಿರ ರೂ. ದಂಡವನ್ನು ಏಕೆ ವಿಧಿಸಬಾರದು ಎಂದು ನೋಟಿಸ್ ನೀಡಿ, ಲಿಖಿತ ಸಮಜಾಯಿಷಿ ಕೋರಿದ್ದರೂ ಸಹಾ ಬೇಜವಾಬ್ದಾರಿತನ ಪ್ರದರ್ಶಿಸಿದ ಹಿನ್ನೆಲೆ ಜುಲೈ 6ಕ್ಕೆ ಪ್ರಕರಣದ ವಿಚಾರಣೆ ಮುಂದೂಡಿ, ನಾಗೇಶ್ ಅವರಿಗೆ 25 ಸಾವಿರ ದಂಡ ವಿಧಿಸಲಾಗಿದೆ. ಈ ಸಂಬಂಧ ಜುಲೈ 6 ವಿಚಾರಣೆಯಲ್ಲಿ ದಾಖಲಾತಿ ಸಲ್ಲಿಸುವಂತೆ ಮತ್ತು ಅರ್ಜಿದಾರರಿಗೆ ಮಾಹಿತಿ ಒದಗಿಸುವಂತೆ ಆಯೋಗದ ನ್ಯಾಯಾಧೀಶರು ಮಹತ್ವದ ಆದೇಶ ಹೊರಡಿಸಿದ್ದಾರೆ.

ಮೈಸೂರು ಮಿತ್ರ ಬುಧವಾರ 24 ಮೇ 2023

ಒಂದನೇ ಪುಟದಿಂದ

ಎಲ್ಲಾ ಮುನ್ನೆಚ್ಚರಿಕಾ ಕ್ರಮ ಕೈಗೊಳ್ಳಿ

ಕಚೇರಿಯಲ್ಲೇ ಕುಳಿತು ಕೆಲಸ ಮಾಡಿದರೆ ಆಗದು. ಫೀಲ್ಡ್‌ಗೆ ಹೋಗಬೇಕು. ಕುಳಿತಲ್ಲೇ ಕುಳಿತು ಪರಿಣಾಮಕಾರಿಯಾಗಿ ಮುನ್ನೆಚ್ಚರಿಕೆ ಕ್ರಮಗಳನ್ನು ತೆಗೆದುಕೊಳ್ಳಲು ಸಾಧ್ಯವಾಗದು. ಅದಕ್ಕೇ ಮುಂಚಿತವಾಗಿ ಸಭೆ ಕರೆಯಲಾಗಿದೆ ಎಂದರು.

ಯಾವುದೇ ಕಾರಣಕ್ಕೂ ಕರ್ತವ್ಯ ಲೋಪ ಆಗಬಾರದು. ಬೇಜವಾಬ್ದಾರಿತನದಿಂದ ಅನಾಹುತಗಳಾದರೆ ಸರ್ಕಾರ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುವುದು. ನೆಪ ಹೇಳಿಕೊಂಡು ಪರಿಹಾರ ಕ್ರಮ ವಿಳಂಬ ಮಾಡುವುದು ಸರಿಯಲ್ಲ. ಯಾವುದೇ ಕಾರಣಕ್ಕೆ ಲೋಪ ಆಗಬಾರದು. ಲೋಪ ಎಸಗಿದರೆ ಕಠಿಣ ಕ್ರಮ ಕೈಗೊಳ್ಳಲಾಗುವುದು. ಜನರು ಸರ್ಕಾರ ದಿಂದ ಬದಲಾವಣೆ ಬಯಸಿದ್ದಾರೆ. ಸರ್ಕಾರಕ್ಕೆ ಹೊಸ ಇಮೇಜ್ ಕೊಡಲೇಬೇಕು. ಜನರ ನಿರೀಕ್ಷೆಗೆ ತಕ್ಕಂತೆ ಕೆಲಸ ಮಾಡುವ ಸರ್ಕಾರ ಬಂದಿದೆ ಎಂಬ ಸಂದೇಶ ಹೋಗಬೇಕು. ಜಿಲ್ಲಾಧಿಕಾರಿಗಳು, ಸಿಇಓಗಳದ್ದು ಜವಾಬ್ದಾರಿಯುತ ಸ್ಥಾನ. ಜೊತೆಗೆ ಪೊಲೀಸ್ ವರಿಷ್ಠಾಧಿಕಾರಿಗಳ ಹೊಣೆಯೂ ಪ್ರಮುಖವಾದದ್ದು. ಆಲಸ್ಯ ಬಿಟ್ಟು ಕೆಲಸ ಮಾಡಿ. ಬಹಳ ಜಿಲ್ಲಾಧಿಕಾರಿಗಳು ತಾಲೂಕುಗಳಿಗೆ ಭೇಟಿ ನೀಡಿರುವುದಿಲ್ಲ. ಇನ್ನು ಮುಂದೆ ಇಂತಹುದಕ್ಕೆ ಅವಕಾಶವಿಲ್ಲ. ಜಿಲ್ಲಾಧಿಕಾರಿಗಳು ಕಡ್ಡಾಯವಾಗಿ ಕ್ಷೇತ್ರ ಭೇಟಿ ಮಾಡಬೇಕು. ಕಳೆದ ಕೆಲವು ವರ್ಷಗಳಿಂದ ಪ್ರವಾಹ ನೋಡುತ್ತಾ ಇದ್ದೀರಿ. ಹವಾಮಾನ ಇಲಾಖೆ ಸಂಪರ್ಕಿಸಿ ಮುನ್ಸೂಚನೆ ಅರಿತು ಕೆಲಸ ಮಾಡಿ. ಪ್ರವಾಹ ನಿಯಂತ್ರಣಕ್ಕೆ ಅಗತ್ಯ ಸಲಕರಣೆಗಳನ್ನು ಸಿದ್ಧಪಡಿಸಿಟ್ಟುಕೊಳ್ಳಿ. ಪ್ರವಾಹ ಬರುವ ಪ್ರದೇಶಗಳಲ್ಲಿ ಮುನ್ನೆಚ್ಚರಿಕೆ ತೆಗೆದುಕೊಳ್ಳಿ, ಬೆಳೆಹಾನಿ ಮಾಹಿತಿ ಇರಬೇಕು. ಅನುದಾನ ಅಗತ್ಯವಿದ್ದಲ್ಲಿ ಮನವಿ ಸಲ್ಲಿಸಿ ಬಿಡುಗಡೆ ಮಾಡಿಸಿಕೊಳ್ಳಬೇಕು ಎಂಬ ನಿರ್ದೇಶನ ನೀಡಿದರು.

ಸೌರಭ್, ಪೂಜಾ, ಡಾ.ಭಾನುಪ್ರಕಾಶ್‌ಗೆ ರ್‍ಯಾಂಕ್

ತರಬೇತಿಯಲ್ಲಿರುವ ಮೈಸೂರಿನ ಕೆ.ಸೌರಭ್(29 ವರ್ಷ) ಇದೀಗ 260ನೇ ರ್‍ಯಾಂಕ್ ಪಡೆದು ಇಂಡಿಯನ್ ಫಾರಿನ್ ಸರ್ವೀಸ್ ನಡಿ ಕಾರ್ಯನಿರ್ವಹಿಸಲು ಉತ್ಸುಕರಾಗಿದ್ದಾರೆ. ಇವರು ವಿಜಯನಗರದ ಮೂರನೇ ಹಂತದಲ್ಲಿರುವ ಮೈಸೂರು ವಿಶ್ವವಿದ್ಯಾಲಯದ ಬಯೋಕೆಮಿಸ್ಟ್ರಿ ಪ್ರಾಧ್ಯಾಪಕ ಡಾ.ಕೆ.ಕೆಂಪರಾಜು ಹಾಗೂ ಕರ್ನಾಟಕ ರಾಜ್ಯ ಮುಕ್ತ ವಿಶ್ವ ವಿದ್ಯಾಲಯದ ಪ್ರಾಧ್ಯಾಪಕಿ ಡಾ.ಎಂ.ಜಾನಕಿ ದಂಪತಿ ಪುತ್ರ. ಸಿಎಫ್‌ಟಿಆರ್‌ಐ ಶಾಲೆಯಲ್ಲಿ 10ನೇ ತರಗತಿ ವರೆಗೆ ಕಲಿತ ಇವರು, ಎಸ್‌ವಿಇಐ ಸಂಸ್ಥೆಯಲ್ಲಿ ಪದವಿಪೂರ್ವ ಶಿಕ್ಷಣ ಪಡೆದಿದ್ದಾರೆ. ನಂತರ ಎಸ್‌ಜೆಸಿಇ ಎಲೆಕ್ಟ್ರಾನಿಕ್ಸ್ ಅಂಡ್ ಕಮ್ಯುನಿಕೇಷನ್‌ನಲ್ಲಿ ಇಂಜಿ ನಿಯರಿಂಗ್ ಮುಗಿಸಿ, ಬೆಂಗಳೂರಿನ ಬಿಎಂಎಸ್ ಕಾಲೇಜಿನಲ್ಲಿ ಪವರ್ ಎಲೆಕ್ಟ್ರಾನಿಕ್ಸ್‌ನಲ್ಲಿ ಎಂಟೆಕ್ ಪದವಿ ಪಡೆದಿದ್ದಾರೆ. ಓದಿನ ನಂತರ ನವದೆಹಲಿಯಲ್ಲಿ ಒಂದು ವರ್ಷ ಯುಪಿಎಸ್‌ಸಿ ಪರೀಕ್ಷೆಗೆ ತರಬೇತಿ ಪಡೆದು ನಂತರ ಮನೆಯಲ್ಲೇ ಅಧ್ಯಯನ ನಡೆಸಿದ್ದರು. 'ಮೈಸೂರು ಮಿತ್ರ'ನೊಂದಿಗೆ ಕೆ.ಸೌರಭ್ ಮಾತನಾಡಿ, 2019ರಲ್ಲಿ ಮೊದಲ ಪ್ರಯತ್ನದಲ್ಲಿ ವಿಫಲನಾದೆ. 2ನೇ ಪ್ರಯತ್ನದಲ್ಲಿ 725ನೇ ರ್‍ಯಾಂಕ್‌ನೊಂದಿಗೆ ಇಂಡಿಯನ್ ಫಾರೆಸ್ಟ್ ಸರ್ವೀಸ್ ಹಾಗೂ ಇಂಡಿಯನ್ ಪೋಸ್ಟಲ್ ಸರ್ವೀಸ್‌ಗೆ ಆಯ್ಕೆಯಾದೆ. ರ್‍ಯಾಂಕ್ ಉತ್ತಮಗೊಳಿಸಿಕೊಳ್ಳಲು ಮೂರನೇ ಪ್ರಯತ್ನ ಮಾಡಿದೆ ಆದರೆ ಅದರಲ್ಲಿ ವಿಫಲನಾದೆ. ಹಾಗಾಗಿ ಇಂಡಿಯನ್ ಫಾರೆಸ್ಟ್ ಸರ್ವೀಸ್ ತರಬೇತಿಗೆ ಸೇರಿದೆ. ತರಬೇತಿ ಅವಧಿಯಲ್ಲೇ ನಾಲ್ಕನೇ ಬಾರಿ ಪರೀಕ್ಷೆ ಬರೆದು 260ನೇ ರ್‍ಯಾಂಕ್ ಪಡೆದಿದ್ದೇನೆ. ಈ ರ್‍ಯಾಂಕ್‌ಗೆ ಐಎಎಸ್, ಐಎಫ್‌ಎಸ್ ಸಿಗಬಹುದು. ಆದರೆ ನನ್ನ ಆಯ್ಕೆಯ ಇಂಡಿಯನ್ ಫಾರಿನ್ ಸರ್ವೀಸ್‌ಗೆ ಸೇರುತ್ತೇನೆ. ಜಾಗತಿಕ ಮಟ್ಟದಲ್ಲಿ ಭಾರತದ ಗತ್ತು ಹೆಚ್ಚಾಗುತ್ತಿದೆ. ವಿವಿಧ ಕ್ಷೇತ್ರಗಳಲ್ಲಿ ಅಗ್ರಪಂಕ್ತಿಯಲ್ಲಿ ಮುನ್ನುಗ್ಗುತ್ತಿದೆ. ಹಾಗೆಂಯೇ ರಾಜತಾಂತ್ರಿಕತೆ ಕೆಲಸವೇ ವಿಭಿನ್ನ ಹಾಗೂ ಸವಾಲು. ಹಾಗಾಗಿ ನಾನು ಈ ಸೇವೆ ಆಯ್ಕೆ ಮಾಡಿಕೊಂಡಿದ್ದೇನೆ ಎಂದು ತಮ್ಮ ಇಂಗಿತ ವ್ಯಕ್ತಪಡಿಸಿದ್ದಾರೆ.

ಅಮ್ಮನ ಕನಸು ನನಸು ಮಾಡಿದರು: ಯುಪಿಎಸ್‌ಸಿ ಪರೀಕ್ಷೆಯಲ್ಲಿ 390ನೇ ರ್‍ಯಾಂಕ್ ಪಡೆಯುವ ಮೂಲಕ ಎಂ.ಪೂಜಾ, ತಮ್ಮ ತಾಯಿಯ ಕನಸನ್ನು ನನಸು ಮಾಡಿದ್ದಾರೆ. ಇವರು ಕುವೆಂಪುನಗರ ನಿವಾಸಿ, ಖಾಸಗಿ ಕಂಪನಿ ಉದ್ಯೋಗಿ ಮುಕುಂದರಾವ್ ಹಾಗೂ ಎಂ.ಪದ್ಮಾವತಿ ದಂಪತಿ ಪುತ್ರಿ. ಕುವೆಂಪುನಗರ ಕಾವೇರಿ ಶಾಲೆಯಲ್ಲಿ 10ನೇ ತರಗತಿವರೆಗೆ ಓದಿದ ಇವರು, ಮರಿಮಲ್ಲಪ್ಪ ಕಾಲೇಜಿನಲ್ಲಿ ಪಿಯುಸಿ, ನಂತರ ಗೋಕುಲಂನ ವಿದ್ಯಾವರ್ಧಕ ಇಂಜಿನಿಯರಿಂಗ್ ಕಾಲೇಜಿನಲ್ಲಿ ಪದವಿ ಪಡೆದಿದ್ದಾರೆ. ಖಾಸಗಿ ಸಂಸ್ಥೆಯಲ್ಲಿ ಉದ್ಯೋಗಿಯಾಗಿದ್ದ ಇವರು ಕೆಲ ತಿಂಗಳಲ್ಲೇ ಕೆಲಸ ಬಿಟ್ಟು ಯುಪಿಎಸ್‌ಸಿ ಪರೀಕ್ಷೆಗೆ ತಯಾರಿ ನಡೆಸಿದರು. ಮೊದಲ ಪ್ರಯತ್ನ ವಿಫಲವಾದರೂ 2ನೇ ಪ್ರಯತ್ನದಲ್ಲಿ ಗುರಿ ಸಾಧಿಸಿದ್ದಾರೆ. 'ಮೈಸೂರು ಮಿತ್ರ'ನೊಂದಿಗೆ ಪೂಜಾ ಮಾತನಾಡಿ, ಯಾವುದೇ ಪರೀಕ್ಷೆ ಎದುರಿಸಬೇಕಾದರೆ ಗುರಿ, ಶಿಸ್ತು, ಶ್ರದ್ಧೆ ತುಂಬಾ ಮುಖ್ಯ. ಯಾವುದೇ ಕೋಚಿಂಗ್ ಕ್ಲಾಸಿಗೆ ಹೋಗದೆ 390ನೇ ರ್‍ಯಾಂಕ್ ಪಡೆದಿರುವುದರಿಂದ ಖುಷಿ ಹೆಚ್ಚಾಗಿದೆ. ಮೊದಲ ಪ್ರಯತ್ನ ವಿಫಲವಾಗಿದ್ದರಿಂದ ಈ ಬಾರಿ ಸಾಕಷ್ಟು ಪುಸ್ತಕಗಳನ್ನು ಅಧ್ಯಯನ ಮಾಡಿ ನನ್ನದೆ ನೋಟ್ಸ್ ತಯಾರಿಸಿಕೊಂಡಿದ್ದೆ. ಇದು ತುಂಬಾ ಪ್ರಯೋಜನಕ್ಕೆ ಬಂತು. ತಂದೆ–ತಾಯಿ ನನಗಿಂತ ಮೊದಲೇ ಪತ್ರಿಕೆಗಳನ್ನು ಓದಿ ಪ್ರಮುಖ ಅಂಶಗಳ ಬಗ್ಗೆ ನನ್ನೊಂದಿಗೆ ಚರ್ಚಿಸುತ್ತಿದ್ದರು. ಈ ಮೂಲಕ ನನ್ನ ವಿಶ್ವಾಸ ಹೆಚ್ಚಿಸಿದರು. ನನಗಿಂತ ನನ್ನ ತಾಯಿಗೆ ತುಂಬಾ ವಿಶ್ವಾಸವಿತ್ತು. ನಾಗರಿಕ ಸೇವೆಗೆ ಸೇರಬೇಕೆನ್ನುವುದು ನನ್ನ ತಾಯಿಯ ಕನಸಾಗಿತ್ತು. ಅದನ್ನು ನಾನು ನನಸು ಮಾಡಿದ್ದೇನೆ. ನಾನು ತಾಂತ್ರಿಕ ವಿದ್ಯಾರ್ಥಿನಿಯಾದರೂ ಸಮಾಜಶಾಸ್ತ್ರ ವಿಷಯ ತೆಗೆದುಕೊಂಡಿದ್ದೆ. ಸಂದರ್ಶನಕ್ಕೆ ಹೋಗುವಾಗ ರಾಜ್‌ಕುಮಾರ್ ಅಕಾಡೆಮಿ ಹಾಗೂ ಇನ್ಸೈಟ್ಸ್ ಆನ್ ಇಂಡಿಯಾದ ಸಹಕಾರ ಪಡೆದೆ. 2020 ಡಿಸೆಂಬರ್‌ನಿಂದ ತಯಾರಿ ಆರಂಭಿಸಿದೆ. 2021ರ ಮೊದಲ ಪ್ರಯತ್ನ ವಿಫಲವಾಯಿತು. 2022ರಲ್ಲಿ ತೇರ್ಗಡೆಯಾಗಿದ್ದೇನೆ. ಐಎಎಸ್ ಅಥವಾ ಐಪಿಎಸ್ ಹುದ್ದೆ ಸಿಗುವ ನಿರೀಕ್ಷೆ ಇದೆ ಎಂದು ನುಡಿದರು.

ಅಂಗನವಾಡಿ ಶಿಕ್ಷಕಿ ಪುತ್ರ: ಯುಪಿಎಸ್‌ಸಿ ಪರೀಕ್ಷೆಯಲ್ಲಿ 448ನೇ ರ್‍ಯಾಂಕ್ ಪಡೆದಿರುವ ಡಾ.ಜೆ.ಭಾನುಪ್ರಕಾಶ್ ವೈದ್ಯ ವೃತ್ತಿಯೊಂದಿಗೆ ಸತತ ಪರಿಶ್ರಮದಿಂದ ಗುರಿ ಸಾಧಿಸಿದ್ದಾರೆ. ಇವರು ಮೂಲತಃ ಕೆ.ಆರ್.ನಗರ ತಾಲೂಕು, ಹೆಬ್ಬಾಳು ಹೋಬಳಿ, ಕೆಸ್ತೂರು ಕೊಪ್ಪಲು ಗ್ರಾಮದ ನಿವಾಸಿ ಜಯರಾಮೇಗೌಡ ಹಾಗೂ ಗಿರಿಜಮ್ಮ ದಂಪತಿ ಪುತ್ರ. ಮೈಸೂರಿನ ಖಾಸಗಿ ಕಂಪನಿಯಲ್ಲಿದ್ದ ಜಯರಾಮೇಗೌಡರು ನಿವೃತ್ತಿ ನಂತರ ಸ್ವಗ್ರಾಮದಲ್ಲಿ ಕೃಷಿಕರಾಗಿದ್ದಾರೆ. ತಾಯಿ ಗಿರಿಜಮ್ಮ ಮೈಸೂರಿನ ಬೆಳವಾಡಿಯಲ್ಲಿ ಅಂಗನವಾಡಿ ಶಿಕ್ಷಕಿಯಾಗಿದ್ದಾರೆ. 1ರಿಂದ 5ನೇ ತರಗತಿವರೆಗೆ ಬೆಳವಾಡಿಯಲ್ಲಿ ಸರ್ಕಾರಿ ಪ್ರಾಥಮಿಕ ಶಾಲೆಯಲ್ಲಿ ಓದಿದ ಭಾನುಪ್ರಕಾಶ್, ನವೋದಯ ಪರೀಕ್ಷೆಯಲ್ಲಿ ಉತ್ತೀರ್ಣರಾಗಿ 6ರಿಂದ 12ನೇ ತರಗತಿವರೆಗೆ ಚಾಮರಾಜನಗರದ ಹೊಂಡರಬಾಳಿನ ಜವಾಹರ್ ನವೋದಯ ವಿದ್ಯಾಲಯದಲ್ಲಿ ಶಿಕ್ಷಣ ಪಡೆದರು. ಬಳಿಕ ಮಂಡ್ಯ ಇನ್ಸ್ಟಿಟ್ಯೂಟ್ ಆಫ್ ಮೆಡಿಕಲ್ ಸೈನ್ಸ್‌ನಲ್ಲಿ ಎಂಬಿಬಿಎಸ್ ಹಾಗೂ ಹುಬ್ಬಳ್ಳಿಯ ಕಿಮ್ಸ್‌ನಲ್ಲಿ ಎಂ.ಡಿ (ಪಿಡಿಯಾಟ್ರಿಕ್ಸ್) ಪದವಿ ಪಡೆದಿದ್ದಾರೆ. ಕೋವಿಡ್ ಸಂದರ್ಭದಲ್ಲಿ 2 ವರ್ಷ ಬೆಂಗಳೂರಿನ ಎಂವಿಜೆ ಮೆಡಿಕಲ್ ಕಾಲೇಜಿನಲ್ಲಿ, ಸದ್ಯ ಸಿದ್ಧಾರ್ಥ ವೈದ್ಯಕೀಯ ವಿಜ್ಞಾನ ಕಾಲೇಜಿನಲ್ಲಿ ಸಹಾಯಕ ಪ್ರಾಧ್ಯಾಪಕರಾಗಿ ಸೇವೆ ಸಲ್ಲಿಸುತ್ತಿದ್ದಾರೆ. ವೃತ್ತಿಯ ಜೊತೆಗೆ ಶ್ರದ್ಧೆಯಿಂದ ಓದಿ, ಸ್ವಯಂ ತಯಾರಿಯೊಂದಿಗೆ ಮೂರನೇ ಪ್ರಯತ್ನದಲ್ಲಿ ತಮ್ಮ ಗುರಿ ಸಾಧಿಸಿದ್ದಾರೆ. 'ಮೈಸೂರು ಮಿತ್ರ'ನೊಂದಿಗೆ ಸಂತಸ ಹಂಚಿಕೊಂಡ ಡಾ.ಜೆ.ಭಾನುಪ್ರಕಾಶ್, ಪೋಷಕರು ಹಾಗೂ ಪತ್ನಿ ಡಾ.ಚೈತ್ರಾ ಪ್ರೋತ್ಸಾಹ ಹಾಗೂ ಸಹಕಾರವೇ ಈ ಸಾಧನೆಗೆ ಕಾರಣ. ವಿವಾಹವಾದ ಬಳಿಕ ನಾನು ಯುಪಿಎಸ್‌ಸಿ ಪರೀಕ್ಷೆ ತಯಾರಿ ಆರಂಭಿಸಿದೆ. ಮೊದಲೆರಡು ಪ್ರಯತ್ನದಲ್ಲಿ ಪ್ರಿಲಿಮ್ಸ್ ಕೂಡ ಆಗಿರಲಿಲ್ಲ. 3ನೇ ಪ್ರಯತ್ನದಲ್ಲಿ 448ನೇ ರ್‍ಯಾಂಕ್ ದಕ್ಕಿರುವುದು ತುಂಬಾ ಸಂತೋಷ ತಂದಿದೆ. ಕೋವಿಡ್ ಸಂದರ್ಭದಲ್ಲಿ ಕೆಲಸ ಮಾಡುವಾಗ ನಾಗರಿಕ ಸೇವಾ ಅಧಿಕಾರಿಯಾದರೆ ಸಮಾಜಕ್ಕೆ ಸಾಕಷ್ಟು ಕೆಲಸ ಮಾಡಬಹುದು ಎಂದೆನಿಸಿತು. ವಿವಾಹವಾಯ್ತು, ಮಗ ಅಥರ್ವ ಹುಟ್ಟಿದ. ವೃತ್ತಿ, ಸಾಂಸಾರಿಕ ಜವಾಬ್ದಾರಿಗಳೊಂದಿಗೆ ತಯಾರಿ ನಡೆಸಿದೆ. ಸಂಜೆ 5 ಗಂಟೆಗೆ ಮನೆಗೆ ಬಂದು ನಿತ್ಯ 4ರಿಂದ 5 ಗಂಟೆ ಅಭ್ಯಾಸ ನಡೆಸಿದ್ದೆ. ಮುಖ್ಯ ಪರೀಕ್ಷೆಯಲ್ಲಿ ತೇರ್ಗಡೆಯಾದ ನಂತರ ಡಾ.ರಾಜ್‌ಕುಮಾರ್ ಅಕಾಡೆಮಿ, ಮ್ಯಾನಿಫೆಸ್ಟ್ ಅಕಾಡೆಮಿ ಹೀಗೆ ಹಲವು ಅಕಾಡೆಮಿಗಳ ಮೂಲಕ ಅಣಕು ಸಂದರ್ಶನದಲ್ಲಿ ಭಾಗಿಯಾಗಿದ್ದೆ. ಐಪಿಎಸ್ ಹುದ್ದೆ ಸಿಗಬಹುದು. ಸೇವೆಗೆ ಸೇರಿ ಐಎಎಸ್‌ಗೆ ಮತ್ತೆ ಪ್ರಯತ್ನಿಸುತ್ತೇನೆ ಎಂದು ತಿಳಿಸಿದರು.


UPSC 2022 ಫಲಿತಾಂಶ: ಇಶಿತಾ ಕಿಶೋರ್ ಟಾಪರ್, ಟಾಪ್ ನಾಲ್ಕರಲ್ಲೂ ಯುವತಿಯರು

ನವದೆಹಲಿ, ಮೇ 23– UPSC 2022ರ ಪರೀಕ್ಷೆಯಲ್ಲಿ ಇಶಿತಾ ಕಿಶೋರ್ ಟಾಪರ್ ಆಗಿದ್ದಾರೆ. ಭಾರತದ ಅತ್ಯಂತ ಕಠಿಣ ಪರೀಕ್ಷೆಗಳಲ್ಲಿ ಒಂದಾದ UPSC CSE ಪರೀಕ್ಷೆಯ ಫಲಿತಾಂಶಗಳನ್ನು ಇಂದು ಪ್ರಕಟಿಸಲಾಗಿದೆ. ಈ ಪರೀಕ್ಷೆಯಲ್ಲಿ ಹುಡುಗಿಯರು ಉನ್ನತ 4 ಹುದ್ದೆಗಳಲ್ಲಿ ರ್‍ಯಾಂಕ್ ಗಳಿಸಿದ್ದಾರೆ. ಇಶಿತಾ ಕಿಶೋರ್ ಹೊರತುಪಡಿಸಿ, ಗರಿಮಾ ಲೋಹಿಯಾ ಎರಡನೇ ಸ್ಥಾನದಲ್ಲಿದ್ದಾರೆ, ಉಮಾ ಹರ್ಥಿ ಎನ್ ಮೂರನೇ ಮತ್ತು ಸ್ಮೃತಿ ಮಿಶ್ರಾ ನಾಲ್ಕನೇ ಸ್ಥಾನದಲ್ಲಿದ್ದಾರೆ. ಯೂನಿಯನ್ ಪಬ್ಲಿಕ್ ಸರ್ವಿಸ್ ಕಮಿಷನ್ (ಯುಪಿಎಸ್‌ಸಿ) ಮಂಗಳವಾರ ನಾಗರಿಕ ಸೇವಾ ಪರೀಕ್ಷೆಯ (ಯುಪಿಎಸ್‌ಸಿ ಸಿಎಸ್‌ಇ 2022) ಅಂತಿಮ ಫಲಿತಾಂಶವನ್ನು ಪ್ರಕಟಿಸಿದೆ. IAS ಪರೀಕ್ಷೆಯಲ್ಲಿ ಕಾಣಿಸಿಕೊಂಡ ಅಭ್ಯರ್ಥಿಗಳು UPSCಯ ಅಧಿಕೃತ ವೆಬ್‌ಸೈಟ್ www.upsc.gov.inನಲ್ಲಿ ಅಂತಿಮ ಫಲಿತಾಂಶವನ್ನು ಪರಿಶೀಲಿಸಬಹುದು.

ಪರೀಕ್ಷೆಯ ಅಂತಿಮ ಫಲಿತಾಂಶದಲ್ಲಿ ಒಟ್ಟು 933 ಅಭ್ಯರ್ಥಿಗಳು ನೇಮಕಾತಿಗೆ ಆಯ್ಕೆಯಾಗಿದ್ದಾರೆ. ಈ ಪೈಕಿ 345 ಅಭ್ಯರ್ಥಿಗಳು ಮೀಸಲಾತಿ ರಹಿತ, 99 ಇಡಬ್ಲ್ಯೂಎಸ್, 263 ಒಬಿಸಿ, 154 ಎಸ್‌ಸಿ ಮತ್ತು 72 ಎಸ್‌ಟಿ ವರ್ಗದವರು. 178 ಅಭ್ಯರ್ಥಿಗಳ ಮೀಸಲು ಪಟ್ಟಿಯನ್ನೂ ಸಿದ್ಧಪಡಿಸಲಾಗಿದೆ. ಐಎಎಸ್ ಹುದ್ದೆಗಳ ಆಯ್ಕೆಗೆ 180 ಅಭ್ಯರ್ಥಿಗಳನ್ನು ಶಾರ್ಟ್‌ಲಿಸ್ಟ್ ಮಾಡಲಾಗಿದೆ. 1. ಇಶಿತಾ ಕಿಶೋರ್, 2. ಗರಿಮಾ ಲೋಹಿಯಾ, 3. ಉಮಾ ಹಾರ್ಥಿ ಎನ್, 4. ಸ್ಮೃತಿ ಮಿಶ್ರಾ, 5. ಮಯೂರ್ ಹಜಾರಿಕಾ, 6. ಆಭರಣ ನವ್ಯಾ ಜೇಮ್ಸ್, 7. ವಾಸಿಂ ಅಹ್ಮದ್ ಭಟ್, 8. ಅನಿರುದ್ಧ್ ಯಾದವ್, 9. ಕನಿಕಾ ಗೋಯಲ್ 10. ರಾಹುಲ್ ಶ್ರೀವಾಸ್ತವ್.

ಹೆಚ್.ಡಿ.ಕೋಟೆ ಪೊಲೀಸರಿಂದ ಕೇರಳದ ಮೂವರ ಬಂಧನ

18 ಕೋಟಿ ರೂ. ಮೌಲ್ಯದ 9.8 ಕೆಜಿ ತಿಮಿಂಗಿಲದ ವಾಂತಿ ಜಪ್ತಿ





ಮೈಸೂರು, ಮೇ 23(ಆರ್‌ಕೆ)–ಮಿಂಚಿನ ಕಾರ್ಯಾಚರಣೆ ನಡೆಸಿ ಕೇರಳ ಮೂಲದ ಮೂವರನ್ನು ಬಂಧಿಸಿರುವ ಹೆಚ್.ಡಿ. ಕೋಟೆ ಠಾಣೆ ಪೊಲೀಸರು, 18 ಕೋಟಿ ರೂ. ಬೆಲೆ ಬಾಳುವ ಆಂಬರ ಗ್ರೀಸ್ (ತಿಮಿಂಗಿಲದ ವಾಂತಿ) ಅನ್ನು ವಶಪಡಿಸಿಕೊಂಡಿದ್ದಾರೆ.

ಕೇರಳದ ಕೊಚ್ಚಿ ಮತ್ತು ಕಣ್ಣೂರಿನವರಾದ ಹಸೀಫ್ ಮಗ ಅಜೀತ್, ಅಲಿಕುಂಜು ಮಗ ಇಲಿಯಾಸ್ ಹಾಗೂ ಕುನ್ಹಿಕೋಯಾ ಬಂಧಿತ ಸ್ಮಗ್ಲರ್‌ಗಳಾಗಿದ್ದಾರೆ. ಸೆನ್ ಪೊಲೀಸ್ ಠಾಣೆ ಸಬ್ ಇನ್ಸ್‌ಪೆಕ್ಟರ್ ಪುರುಷೋತ್ತಮ ಅವರು ನೀಡಿದ ಖಚಿತ ಮಾಹಿತಿ ಆಧರಿಸಿ ಹೆಚ್.ಡಿ. ಕೋಟೆ ಠಾಣೆ ಇನ್ಸ್‌ಪೆಕ್ಟರ್ ಶಬ್ಬೀರ್ ಹುಸೇನ್ ಹಾಗೂ ಸಿಬ್ಬಂದಿ ಕಾರ್ಯಾಚರಣೆ ನಡೆಸಿ, ಮೇ 20ರಂದು ರಾತ್ರಿ ಹೆಚ್.ಡಿ.ಕೋಟೆ ಹ್ಯಾಂಡ್‌ಪೋಸ್ಟ್ ಬಳಿ ಆರೋಪಿಗಳನ್ನು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ ಎಂದು ಎಸ್ಪಿ ಸೀಮಾ ಲಾಟ್ಕರ್ ತಿಳಿಸಿದ್ದಾರೆ.

ಮೈಸೂರಿನ ಎಸ್ಪಿ ಕಚೇರಿಯ ಸಭಾಂಗಣದಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾಹಿತಿ ನೀಡಿದ ಅವರು, ಬಂಧಿತರಿಂದ 18 ಕೋಟಿ ರೂ. ಮೌಲ್ಯದ 1 ಕೆಜಿ 821 ಗ್ರಾಂ ಆಂಬರ ಗ್ರೀಸ್ ಅನ್ನು ವಶಪಡಿಸಿಕೊಳ್ಳಲಾಗಿದೆ ಎಂದರು.

ಕೇರಳದ ಕೊಚ್ಚಿನ್ ಸಮುದ್ರದಿಂದ ತಿಮಿಂಗಿಲದ ವಾಂತಿಯನ್ನು ಮಾರುತಿ ಸ್ವಿಫ್ಟ್ (ಕೆಎ 03, ಎನ್‌ಜಿ 7138) ಕಾರಿನಲ್ಲಿ ಸಾಗಿಸಲಾಗುತ್ತಿದೆ ಎಂಬ ಮಾಹಿತಿ ಆಧರಿಸಿ ದಾಳಿ ನಡೆಸಿದಾಗ ಸ್ಮಗ್ಲರ್‌ಗಳು ಸಿಕ್ಕಿಬಿದ್ದರು. ಬೆಲೆ ಬಾಳುವ ಅಪರೂಪದ ಆಂಬರ ಗ್ರೀಸ್ ಅನ್ನು ಬೇರೆಡೆ ಮಾರಾಟ ಮಾಡಲು ಸಾಗಿಸುತ್ತಿದ್ದರು ಎಂಬುದು ವಿಚಾರಣೆಯಿಂದ ತಿಳಿದುಬಂದಿದೆ ಎಂದು ಅವರು ಮಾಹಿತಿ ನೀಡಿದರು.

ಬಂಧಿತ ಮೂವರ ಪೈಕಿ ಇಬ್ಬರು ಹಡಗಿನಲ್ಲಿ ಕೆಲಸ ಮಾಡುವವರಾಗಿದ್ದು, ಮತ್ತೋರ್ವ ತಿಮಿಂಗಿಲದ ವಾಂತಿಯನ್ನು ಮಾರಾಟ ವ್ಯವಹಾರ ಕುದುರಿಸುವವನಾಗಿದ್ದಾನೆ. ಸಮುದ್ರದಲ್ಲಿ ಸಿಗುವ ಈ ಅಪರೂಪದ ವಸ್ತುವನ್ನು ಸೆಂಟ್ ತಯಾರಿಸಲು ಹಾಗೂ ಸಾಂಪ್ರದಾಯಿಕ ಔಷಧಿ ತಯಾರಿಕೆಗೆ ಬಳಸಲಾಗುತ್ತಿದ್ದು, ಆಂಬರ ಗ್ರೀಸ್‌ಗೆ ವಿದೇಶದಲ್ಲೂ ಭಾರೀ ಬೇಡಿಕೆ ಇದೆ.

ವನ್ಯಜೀವಿ ಸಂರಕ್ಷಣಾ ಕಾಯ್ದೆ 1972ರ ಸೆಕ್ಷನ್ 2, 39, 44, 48, 51, 57 ಮತ್ತು 58ರಡಿ ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು, ಆರೋಪಿಗಳನ್ನು ನ್ಯಾಯಾಲಯಕ್ಕೆ ಹಾಜರುಪಡಿಸಲಾಗಿದ್ದು, ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ. ಇನ್ಸ್‌ಪೆಕ್ಟರ್ ಶಬ್ಬೀರ್ ಹುಸೇನ್, ಸಬ್‌ಇನ್ಸ್‌ಪೆಕ್ಟರ್ (ಸೆನ್ ಪೊಲೀಸ್ ಠಾಣೆ) ಪುರುಷೋತ್ತಮ, ಸಿಬ್ಬಂದಿಗಳಾದ ಮಹದೇವಸ್ವಾಮಿ, ಸೈಯದ್ ಕಬೀರುದ್ದೀನ್, ಮೋಹನ್, ಸುನೀಲ್, ಯೋಗೇಶ್, ಕಿರಣ್‌ಕುಮಾರ್, ರಿತೀಶ್‌ಕುಮಾರ್, ಎಸ್.ಮಂಜುನಾಥ್ ಈ ಪತ್ತೆ ಕಾರ್ಯಾಚರಣೆಯಲ್ಲಿ ಭಾಗವಹಿಸಿದ್ದರು.

ಡಾ.ಹೆಚ್.ಸಿ.ಮಹದೇವಪ್ಪಗೆ ಸಚಿವ ಸ್ಥಾನ ಕೊಡಿ



ಮೈಸೂರು,ಮೇ 23(ಪಿಎಂ)– ದಲಿತ ಸಮುದಾಯದ ಹಿರಿಯ ಮತ್ತು ಪ್ರಬುದ್ಧ ರಾಜಕಾರಣಿ, ಮಾಜಿ ಸಚಿವರೂ ಆದ ಟಿ.ನರಸೀಪುರ ಕ್ಷೇತ್ರದಿಂದ ಶಾಸಕರಾಗಿ ಆಯ್ಕೆಯಾದ ಡಾ.ಹೆಚ್.ಸಿ.ಮಹದೇವಪ್ಪ ಅವರಿಗೆ ಸಚಿವ ಸ್ಥಾನ ನೀಡಬೇಕೆಂದು ಅಹಿಂದ ಒಕ್ಕೂಟ ಒತ್ತಾಯಿಸಿದೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಮಂಗಳವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಒಕ್ಕೂಟದ ಮುಖಂಡ ಜವರಪ್ಪ, ಹಳೇ ಮೈಸೂರು ಭಾಗದ ದಲಿತ ಸಮುದಾಯದ ಹಿರಿಯ ರಾಜಕಾರಣಿ ಡಾ.ಹೆಚ್.ಸಿ.ಮಹದೇವಪ್ಪ ಬಹುತ್ವದ ಸಿದ್ಧಾಂತಕ್ಕೆ ಕಟೀಬದ್ಧರಾಗಿ ನಾಲ್ಕು ದಶಕಗಳ ಕಾಲ ಮೌಲ್ಯಯುತ ರಾಜಕಾರಣ ಮಾಡಿಕೊಂಡು ಬಂದವರು. ನಿರಂತರವಾಗಿ ಮನುವಾದ ವಿರೋಧಿಸಿದ ಮಹದೇವಪ್ಪ, ಬಿಜೆಪಿ ಆಹ್ವಾನ ತಿರಸ್ಕರಿಸಿ ಪಕ್ಷ ನಿಷ್ಠೆ ಮೆರೆದವರು. ಆರೋಗ್ಯ ಸಚಿವರು, ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರಾಗಿ ಹಲವು ಪ್ರಥಮಗಳಿಗೆ ಕಾರಣರಾಗಿ ಮಾದರಿಯಾದವರು ಎಂದರು.

2013ರಲ್ಲಿ ಅಸ್ತಿತ್ವಕ್ಕೆ ಬಂದ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರದಲ್ಲಿ ಲೋಕೋಪಯೋಗಿ ಸಚಿವರಾಗಿ ರಾಜ್ಯಾದ್ಯಂತ 41,993 ಕಿ.ಮೀ. ಗುಣಮಟ್ಟದ ರಸ್ತೆ, 715 ಸೇತುವೆ ಮತ್ತು 1,829 ವಿವಿಧ ಸರ್ಕಾರಿ ಕಟ್ಟಡಗಳನ್ನು ನಿರ್ಮಿಸುವ ಮೂಲಕ ಇತಿಹಾಸ ಸೃಷ್ಟಿಸಿದರು. ಜೊತೆಗೆ ಮೈಸೂರು ಜಿಲ್ಲಾ ಉಸ್ತುವಾರಿ ಸಚಿವರಾಗಿ ಹಲವಾರು ಅಭಿವೃದ್ಧಿ ಯೋಜನೆಗಳಿಗೆ ನಾಂದಿ ಹಾಡಿದರು. ಡಾ.ಹೆಚ್.ಸಿ.ಮಹದೇವಪ್ಪ ಅವರಿಗೆ ಸಚಿವ ಸ್ಥಾನ ನೀಡಿ ಅವರ ಶಕ್ತಿ ಮತ್ತು ಮುತ್ಸದ್ದಿತನವನ್ನು ಕಾಂಗ್ರೆಸ್ ಹೈಕಮಾಂಡ್ ಮತ್ತು ಮುಖ್ಯಮಂತ್ರಿ ಸಿದ್ದರಾಮಯ್ಯ ಬಳಸಿಕೊಳ್ಳಬೇಕು ಎಂದು ಒತ್ತಾಯಿಸಿದರು.

ದಲಿತ ಸಮುದಾಯದವರಿಗೆ ಮುಖ್ಯಮಂತ್ರಿ ಸ್ಥಾನ ನೀಡುವಂತೆ ಏಕೆ ಒತ್ತಾಯಿಸುತ್ತಿಲ್ಲ ಎಂಬ ಪ್ರಶ್ನೆಗೆ ಪ್ರತಿಕ್ರಿಯಿಸಿದ ಮಹೇಶ್ ಸೋಸಲೆ, ಈ ಹಿಂದೆ ಮುಖ್ಯಮಂತ್ರಿ ಆಗಿದ್ದ ವೇಳೆ ಸಿದ್ದರಾಮಯ್ಯನವರು ದಲಿತ ಸಮುದಾಯದ ಶ್ರೇಯೋಭಿವೃದ್ಧಿಗೆ ಹಲವು ಯೋಜನೆ ಜಾರಿಗೊಳಿಸಿದರು. ಈಗಲೂ ಅವರು ಅದನ್ನು ಮುಂದುವರೆಸುವ ವಿಶ್ವಾಸವಿದೆ. ಅವರ ಮುಖೇನವೇ ದಲಿತ ಸಮುದಾಯದ ವರು ಮುಖ್ಯಮಂತ್ರಿ ಆಗುವ ವಿಶ್ವಾಸವಿದೆ ಎಂದು ತಿಳಿಸಿದರು. ಒಕ್ಕೂಟದ ಮುಖಂಡ ರಾದ ಮೊಯಿನ್ ಖಾನ್, ಉತ್ತನಹಳ್ಳಿ ಶಿವಣ್ಣ, ಮಹೇಶ್ ಕುಮಾರ್ ಗೋಷ್ಠಿಯಲ್ಲಿದ್ದರು.

ಮುಖ್ಯಶಿಕ್ಷಕರಿಂದ ವಿದ್ಯಾರ್ಥಿಗಳ ಮೇಲೆ ದೌರ್ಜನ್ಯ ಆರೋಪ



ಮೈಸೂರು,ಮೇ 23(ಪಿಎಂ)– ಮೈಸೂರಿನ ಎನ್‌ಆರ್ ಮೊಹಲ್ಲಾದ ಖಾಸಗಿ ಅನುದಾನಿತ ಪ್ರೌಢಶಾಲೆಯೊಂದರಲ್ಲಿ ಮುಖ್ಯಶಿಕ್ಷಕರು ಕ್ಷುಲ್ಲಕ ಕಾರಣಗಳಿಗೆ ವಿದ್ಯಾರ್ಥಿಗಳಿಗೆ ಹೊಡೆದು, ನಿಂದಿಸುವ ಮೂಲಕ ದೌರ್ಜನ್ಯ ನಡೆಸುತ್ತಿದ್ದಾರೆ ಎಂದು ಮೈಸೂರು ಡಿವಿಷನ್ ಕ್ಯಾಥೋಲಿಕ್ ಕ್ರಿಶ್ಚಿಯನ್ ಅಸೋಸಿಯೇಷನ್ (ಎಂಡಿಸಿಸಿಎ) ಅಧ್ಯಕ್ಷ ಜೆ.ಸ್ಟೀಫನ್ ಸುಜೀತ್ ಆರೋಪಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಮಂಗಳವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ದಲಿತ ಮತ್ತು ಮುಸ್ಲಿಂ ಸಮುದಾಯದ ಮಕ್ಕಳೇ ಹೆಚ್ಚಿನ ಸಂಖ್ಯೆಯಲ್ಲಿ ಈ ಶಾಲೆಯಲ್ಲಿ ವ್ಯಾಸಂಗ ಮಾಡುತ್ತಿದ್ದಾರೆ. ಇಲ್ಲಿನ ಮುಖ್ಯಶಿಕ್ಷಕರ ವರ್ತನೆಯಿಂದ ಮಕ್ಕಳು ಶಾಲೆಗೆ ಹೋಗಲು ಭಯಪಡುವ ಸನ್ನಿವೇಶ ಸೃಷ್ಟಿಯಾಗಿದೆ. ಈ ಮುಖ್ಯಶಿಕ್ಷಕರನ್ನು ಅಮಾನತುಗೊಳಿಸಲು ಸಾರ್ವಜನಿಕ ಶಿಕ್ಷಣ ಇಲಾಖೆ ಉಪನಿರ್ದೇಶಕರು, ಬಿಇಓ ಅವರು ಶೀಘ್ರ ಕ್ರಮ ವಹಿಸಬೇಕು. ಇಲ್ಲವಾದರೆ ತೀವ್ರತರ ಹೋರಾಟ ನಡೆಸಬೇಕಾಗುತ್ತದೆ ಎಂದು ಎಚ್ಚರಿಸಿದರು. ಎಂಡಿಸಿಸಿಎ ಕಾರ್ಯಕಾರಿ ಸಮಿತಿ ಸದಸ್ಯರಾದ ಬಾರ್ಬರಾ ಬೇಯರ್, ಮರಿಯಾ ಫ್ರಾನ್ಸಿಸ್, ಸೈಮನ್, ವಿದ್ಯಾರ್ಥಿಯೊಬ್ಬರ ಪೋಷಕ ಗೇಬ್ರಿಯಲ್ ಗೋಷ್ಠಿಯಲ್ಲಿದ್ದರು.

ಕುನೋ ರಾಷ್ಟ್ರೀಯ ಉದ್ಯಾನ: ಚಿರತೆ ಮರಿ ಸಾವು

ಮೂರು ತಿಂಗಳಲ್ಲಿ 3 ವಯಸ್ಕ ಚಿರತೆಗಳು ಮರಣ



ಮಧ್ಯಪ್ರದೇಶ, ಮೇ 23– ಕುನೋ ರಾಷ್ಟ್ರೀಯ ಉದ್ಯಾನವನದಿಂದ ಮತ್ತೊಂದು ದುರಂತ ಸುದ್ದಿ ಹೊರಬಿದ್ದಿದೆ. ನಮೀಬಿಯಾದಿಂದ ತರಲಾದ ಚಿರತೆಯ ಮರಿಯೊಂದು ಸಾವನ್ನಪ್ಪಿದೆ ಎಂದು ವರದಿಯಾಗಿದೆ. ಸಾವಿನ ಪ್ರಕರಣವನ್ನು ಖಚಿತಪಡಿಸಿಕೊಳ್ಳಲು ಅರಣ್ಯ ಇಲಾಖೆ ಅಧಿಕಾರಿಗಳು ಪ್ರಯತ್ನಿಸುತ್ತಿದ್ದಾರೆ.

ಉದ್ಯಾನವನದಲ್ಲಿದ್ದ ಹೆಣ್ಣು ಚಿರತೆ ಮರಿಯೊಂದು ಸಾವನ್ನಪ್ಪಿದ್ದು, ಪ್ರಧಾನಿ ನರೇಂದ್ರ ಮೋದಿ ಅವರ ಮಹತ್ವಾಕಾಂಕ್ಷೆಯ ಚಿರತೆ ಸ್ಥಳಾಂತರ ಕಾರ್ಯಕ್ರಮ ಸರಣಿ ಸಾವಿನಿಂದ ಬೆಚ್ಚಿ ಬೀಳಿಸಿದೆ.

ಅಧಿಕಾರಿಗಳ ಪ್ರಕಾರ ಇದೇ ಮೊದಲ ಬಾರಿಗೆ ಚಿರತೆ ಮರಿ ಸಾವನ್ನಪ್ಪಿದೆ. ಕುನೋ ರಾಷ್ಟ್ರೀಯ ಉದ್ಯಾನದಲ್ಲಿ ಈಗ 17 ವಯಸ್ಕ ಮತ್ತು ಅರೆ ವಯಸ್ಕ ನಮೀಬಿಯನ್ ಮತ್ತು ದಕ್ಷಿಣ ಆಫ್ರಿಕಾದ ಚೀತಾಗಳು, ನಮೀಬಿಯಾದ ತಾಯಿಗೆ ಜನಿಸಿದ ಮೂರು ಮರಿಗಳು ಉಳಿದಿವೆ. ರಾಷ್ಟ್ರೀಯ ಉದ್ಯಾನವನದಲ್ಲಿ ಈಗಾಗಲೇ ಮೂರು ಚಿರತೆಗಳು ಸಾವನ್ನಪ್ಪಿದ್ದು, ಕುನೊ ಆಡಳಿತದ ಮೇಲೆ ಟೀಕೆಗಳು ವ್ಯಕ್ತವಾಗುತ್ತಿವೆ.

ಈ ವರ್ಷ ಮಾರ್ಚ್‌ನಲ್ಲಿ ನಮೀಬಿಯಾದ ಹೆಣ್ಣು ಚಿರತೆ ಸಾಶಾ ಮೂತ್ರಪಿಂಡದ ಕಾಯಿಲೆಯಿಂದ ಸಾವನ್ನಪ್ಪಿದ್ದಾಗ ಕುನೋ ರಾಷ್ಟ್ರೀಯ ಉದ್ಯಾನವನದಲ್ಲಿ ಚಿರತೆಯ ಸಾವಿನ ಸರಣಿ ಪ್ರಾರಂಭವಾಯಿತು. ನಂತರ, ಏಪ್ರಿಲ್ 23 ರಂದು, ಉದಯ್ ಎಂಬ ಹೆಸರಿನ ದಕ್ಷಿಣ ಆಫ್ರಿಕಾದ ಗಂಡು ಚಿರತೆ ಹೃದಯದ ಶ್ವಾಸಕೋಶದ ವೈಫಲ್ಯದಿಂದ ಸಾವನ್ನಪ್ಪಿತು. ಆದಾದ 16 ದಿನಗಳ ನಂತರ ದಕ್ಷಿಣ ಆಫ್ರಿಕಾದ ಹೆಣ್ಣು ಚಿರತೆ ದಕ್ಷಾ ಸಾವನ್ನಪ್ಪಿರುವುದಾಗಿ ವರದಿಯಾಗಿತ್ತು.

ಪ್ರಧಾನಿ ನರೇಂದ್ರ ಮೋದಿ ಸೆಪ್ಟೆಂಬರ್ 17, 2022 ರಂದು ತಮ್ಮ ಜನ್ಮದಿನದ ಸಂದರ್ಭದಲ್ಲಿ ನಮೀಬಿಯಾದಿಂದ ತಂದ ಎಂಟು ಚಿರತೆಗಳನ್ನು ಕುನೋ ರಾಷ್ಟ್ರೀಯ ಉದ್ಯಾನವನದಲ್ಲಿ ಬಿಡುಗಡೆ ಮಾಡಿದ್ದರು. ನಂತರ, ದಕ್ಷಿಣ ಆಫ್ರಿಕಾದಿಂದ ಇನ್ನೂ 12 ಚಿರತೆಗಳನ್ನು ತರಲಾಯಿತು ಮತ್ತು ಫೆಬ್ರವರಿ 18 ರಂದು ಕುನೋ ರಾಷ್ಟ್ರೀಯ ಉದ್ಯಾನವನಕ್ಕೆ ಪುನರ್ವಸತಿ ಮಾಡಲಾಯಿತು.

ಆಶ್ರಯ ಯೋಜನೆಯಡಿ ನಿವೇಶನ ಮಂಜೂರಾದರೂ ಹಸ್ತಾಂತರಿಸದ ಆರೋಪ



ಮೈಸೂರು,ಮೇ 23(ಪಿಎಂ)– ಸರ್ಕಾರದ ಆಶ್ರಯ ಯೋಜನೆಯಡಿ ತಮ್ಮ ತಂದೆಯವರಿಗೆ ಮಂಜೂರಾಗಿರುವ ನಿವೇಶನವನ್ನು ತಮ್ಮ ಸುಪರ್ದಿಗೆ ನೀಡುತ್ತಿಲ್ಲ ಎಂದು ಎನ್‌ಆರ್ ಮೊಹಲ್ಲಾ ನಿವಾಸಿ ಮೊಹಮ್ಮದ್ ಸುಕ್ಲೈನ್ ಅಹಮದ್ ಆರೋಪಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಮಂಗಳವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಆಶ್ರಯ ಯೋಜನೆಯಡಿ ಸರ್ಕಾರಿ ಆದೇಶ ಸಂಖ್ಯೆ ಹೆಚ್‌ಯುಡಿ 535 ಕೆಹೆಚ್‌ಬಿ 91ರ ಅನ್ವಯ ಮೈಸೂರು ತಾಲೂಕಿನ ನಾಚನಹಳ್ಳಿ ಗ್ರಾಮದಲ್ಲಿ ಸರ್ವೇ ನಂ. 181ರಲ್ಲಿ 30*40 ವಿಸ್ತೀರ್ಣದ ನಿವೇಶನ (ನಿವೇಶನ ಸಂಖ್ಯೆ 147) ನನ್ನ ತಂದೆ ಅಬ್ದುಲ್ ಗಫಾರ್ ಅವರಿಗೆ ಮಂಜೂರಾಗಿತ್ತು. ತಂದೆಯವರ ನಿಧನದ ನಂತರ ನನ್ನ ಹೆಸರಿಗೆ ಖಾತೆ ಮತ್ತು ಕಂದಾಯ ವರ್ಗಾಯಿಸಿಕೊಂಡು 2022–23ರವರೆಗೂ ಖಾತೆ ಮತ್ತು ಕಂದಾಯದ ಶುಲ್ಕ ಪಾವತಿ ಮಾಡಿದ್ದೇನೆ. ಆದರೆ ಈವರೆಗೂ ನಿವೇಶನವನ್ನು ಹಸ್ತಾಂತರ ಮಾಡಿಲ್ಲ ಎಂದು ದೂರಿದರು.

ಉಚಿತ ಸಾಮೂಹಿಕ ಉಪನಯನ

ಮೈಸೂರು, ಮೇ 23– ಶ್ರೀ ಕೃಷ್ಣ ಟ್ರಸ್ಟ್ ಮತ್ತು ಶ್ರೀ ಕೃಷ್ಣ ಮಿತ್ರ ಮಂಡಳಿ ವತಿಯಿಂದ ಮೇ 29 ಸೋಮವಾರದಂದು ತ್ರಿಮತಸ್ಥ ಬ್ರಾಹ್ಮಣ ವಟುಗಳಿಗೆ ಉಚಿತ ಸಾಮೂಹಿಕ ಉಪನಯನವನ್ನು, ಸರಸ್ವತಿಪುರಂನಲ್ಲಿರುವ ಶ್ರೀ ಕೃಷ್ಣಧಾಮದಲ್ಲಿ ಆಯೋಜಿಸಲಾಗಿದೆ. ಆಸಕ್ತರು ದೂ. 0821 2544004 ಸಂಪರ್ಕಿಸಲು ಕೋರಲಾಗಿದೆ.

ಪ್ರವೇಶಾತಿ ಸಮಯದಲ್ಲೇ ಶುಲ್ಕ ಪಾವತಿಗೆ ಒತ್ತಾಯ

ಎಸ್‌ಎಫ್‌ಐ ಪ್ರತಿಭಟನೆ



ಮೈಸೂರು,ಮೇ 23(ಪಿಎಂ)– ಕಾಲೇಜು ಪ್ರವೇಶಾತಿ ಸಮಯದಲ್ಲೇ ಶುಲ್ಕ ಪಾವತಿಸುವಂತೆ ಪರಿಶಿಷ್ಟ ಜಾತಿ ಮತ್ತು ಪಂಗಡದ ವಿದ್ಯಾರ್ಥಿಗಳಿಗೆ ಒತ್ತಾಯಿಸುವ ಮೂಲಕ ಹಲವು ಪದವಿ ಕಾಲೇಜು ಆಡಳಿತ ಮಂಡಳಿಗಳು ಸರ್ಕಾರದ ಆದೇಶ ಉಲ್ಲಂಘಿಸುತ್ತಿವೆ ಎಂದು ಆರೋಪಿಸಿ ಭಾರತ ವಿದ್ಯಾರ್ಥಿ ಫೆಡರೇಷನ್ (ಎಸ್‌ಎಫ್‌ಐ) ವತಿಯಿಂದ ಮಂಗಳವಾರ ಪ್ರತಿಭಟನೆ ನಡೆಸಲಾಯಿತು.

ಮೈಸೂರಿನ ಪಡುವಾರಹಳ್ಳಿಯಲ್ಲಿರುವ ಸಮಾಜ ಕಲ್ಯಾಣ ಇಲಾಖೆಯ ಕಚೇರಿ ಎದುರು ಜಮಾಯಿಸಿದ ಪ್ರತಿಭಟನಾಕಾರರು, ಪ್ರಥಮ ವರ್ಷದ ಪದವಿಗೆ ಪ್ರವೇಶಾತಿ ಆರಂಭವಾಗಿದ್ದು, ಖಾಸಗಿ ಕಾಲೇಜುಗಳು ಮಾತ್ರವಲ್ಲದೇ ಸರ್ಕಾರಿ ಕಾಲೇಜುಗಳಲ್ಲಿಯೂ ಬಹುತೇಕ ಕಡೆಗಳಲ್ಲಿ ಪ್ರವೇಶಾತಿ ಸಮಯದಲ್ಲೇ ಶುಲ್ಕ ಪಾವತಿಸುವಂತೆ ಪರಿಶಿಷ್ಟ ಜಾತಿ ಮತ್ತು ಪಂಗಡದ ವಿದ್ಯಾರ್ಥಿಗಳನ್ನು ಒತ್ತಾಯಿಸಲಾಗುತ್ತಿದೆ. ಆ ಮೂಲಕ ಸರ್ಕಾರದ ಆದೇಶ ಉಲ್ಲಂಘಿಸಲಾಗುತ್ತಿದೆ ಎಂದು ದೂರಿದರು.

ವಿದ್ಯಾರ್ಥಿವೇತನ ಬಂದ ಬಳಿಕ 7 ದಿನಗಳ ಒಳಗೆ ಪರಿಶಿಷ್ಟ ಜಾತಿ ಮತ್ತು ಪಂಗಡದ ವಿದ್ಯಾರ್ಥಿಗಳು ಕಾಲೇಜಿನ ಪ್ರವೇಶಾತಿ ಶುಲ್ಕ ಪಾವತಿಸಲು ಸರ್ಕಾರ ಅವಕಾಶ ಕಲ್ಪಿಸಿ, ಪ್ರವೇಶಾತಿ ವೇಳೆಯಲ್ಲಿ ಶುಲ್ಕ ಪಾವತಿಗೆ ಒತ್ತಾಯಿಸುವಂತಿಲ್ಲ ಎಂದು ಆದೇಶ ಹೊರಡಿಸಿದೆ. ಆದಾಗ್ಯೂ ಮೈಸೂರು ನಗರ ಸೇರಿದಂತೆ ಜಿಲ್ಲೆಯಾದ್ಯಂತ ಪ್ರವೇಶಾತಿ ವೇಳೆಯಲ್ಲೇ ಶುಲ್ಕ ಪಾವತಿಸುವಂತೆ ಒತ್ತಡ ಹೇರಲಾಗುತ್ತಿದೆ ಎಂದು ಆರೋಪಿಸಿದರು.

ಕಾಲೇಜುಗಳ ಆಡಳಿತ ಮಂಡಳಿಯ ಇಂತಹ ನಡೆಯಿಂದ ಹಲವು ವಿದ್ಯಾರ್ಥಿಗಳು ವಿದ್ಯಾಭ್ಯಾಸದಿಂದ ವಂಚಿತರಾಗುತ್ತಿದ್ದಾರೆ. ಈ ಸಂಬಂಧ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿದರು. ಭಾರತ ವಿದ್ಯಾರ್ಥಿ ಫೆಡರೇಷನ್ ಮೈಸೂರು ಜಿಲ್ಲಾಧ್ಯಕ್ಷ ವಿಜಯ್‌ಕುಮಾರ್, ಕಾರ್ಯದರ್ಶಿ ಡಿ.ಅಭಿ, ಸಂಘಟನೆಯ ಮುಖಂಡರಾದ ಲಿಖಿತಾ, ಪ್ರಜ್ವಲ್, ಭರತ್ ಮತ್ತಿತರರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

ಬ್ಯಾಂಕುಗಳಲ್ಲಿ 2,000 ರೂ ಮುಖಬೆಲೆಯ ನೋಟುಗಳ ವಿನಿಮಯ ಪ್ರಕ್ರಿಯೆ ಆರಂಭ



ಮೈಸೂರು, ಮೇ 23(ಆರ್‌ಕೆ)– 2,000 ರೂ. ಮುಖ ಬೆಲೆಯ ನೋಟುಗಳನ್ನು ವಿನಿಮಯ ಮಾಡಿಕೊಳ್ಳುವ ಅಥವಾ ಗ್ರಾಹಕರ ಬ್ಯಾಂಕ್ ಖಾತೆಗೆ ಡೆಪಾಸಿಟ್ ಮಾಡುವ ಪ್ರಕ್ರಿಯೆ ಮಂಗಳವಾರದಿಂದ ಆರಂಭವಾಗಿದೆ.

ರಿಸರ್ವ್ ಬ್ಯಾಂಕ್ ಆಫ್ ಇಂಡಿಯಾ (ಆರ್‌ಬಿಐ) 2,000 ರೂ. ಮುಖ ಬೆಲೆಯ ನೋಟುಗಳ ಚಲಾವಣೆಯನ್ನು ಸ್ಥಗಿತಗೊಳಿಸಿರುವುದರಿಂದ ಜನರ ಬಳಿ ಇರುವ ಈ ನೋಟುಗಳನ್ನು ವಿನಿಮಯ ಮಾಡಿಕೊಳ್ಳುವ ಹಾಗೂ ಅವರ ಬ್ಯಾಂಕ್ ಖಾತೆಗಳಿಗೆ ಜಮಾ ಮಾಡುವಂತೆ ತಿಳಿಸಿರುವುದರಿಂದ ಇಂದಿನಿಂದ ಈ ಪ್ರಕ್ರಿಯೆ ಆರಂಭವಾಗಿದೆ.

ಈ ನೋಟುಗಳನ್ನು ಹೊಂದಿರುವವರು ಬ್ಯಾಂಕ್‌ಗಳಲ್ಲಿ ವಿನಿಮಯ ಮಾಡಿಕೊಳ್ಳುತ್ತಿದ್ದಾರೆ. ಇಲ್ಲವೇ ತಮ್ಮ ಬ್ಯಾಂಕ್ ಖಾತೆಗೆ ಜಮಾ ಮಾಡಿ ನಂತರ ವಿತ್‌ಡ್ರಾ ಮಾಡುತ್ತಿದ್ದಾರೆ. ಎಸ್‌ಬಿಐನಲ್ಲಿ ಒಮ್ಮೆಗೇ 20,000 (2,000 ರೂ.ಗಳ 10 ನೋಟುಗಳು) ರೂ.ಗಳ ವಿನಿಮಯಕ್ಕೆ ಅವಕಾಶ ಕಲ್ಪಿಸಲಾಗಿದೆ. ನೋಟುಗಳನ್ನು ಕೊಟ್ಟು ಬೇರೆ ಮುಖಬೆಲೆ ನೋಟುಗಳನ್ನು ಪಡೆಯಲು ಅವಕಾಶವಿದೆ. 2,000 ರೂ. ಬೆಲೆಯ ನೋಟುಗಳನ್ನು ಬೇರೆ ಯಾರೂ ತೆಗೆದುಕೊಳ್ಳುತ್ತಿಲ್ಲವಾದ್ದರಿಂದ ಜನರು ಬ್ಯಾಂಕ್ ಖಾತೆಗೇ ಜಮಾ ಮಾಡಬೇಕಾಗಿದೆ.

ಮೈಸೂರಿನ ಎಸ್‌ಬಿಐ, ಕೆನರಾ, ಐಓಬಿಯಂತಹ ಹಲವು ಬ್ಯಾಂಕ್ ಬ್ರಾಂಚ್‌ಗಳಿಗೆ ಹೋಗಿ ಜನರು ಚಲಾವಣೆ ರದ್ದಾಗಿರುವ 2,000 ರೂ. ಮುಖ ಬೆಲೆಯ ನೋಟುಗಳನ್ನು ಸ್ಥಳದಲ್ಲೇ ವಿನಿಮಯ ಮಾಡಿಕೊಳ್ಳುವ ಇಲ್ಲವೇ ತಮ್ಮ ಖಾತೆಗೆ ಜಮಾ ಮಾಡುತ್ತಿದ್ದುದು ಕಂಡು ಬಂದಿತು. ಬ್ಯಾಂಕ್ ಸಿಬ್ಬಂದಿ ಸಹ ಗ್ರಾಹಕರಿಗೆ ಸಹಕರಿಸುತ್ತಿದ್ದಾರೆ.



ರಾಜ್ಯದ ಅಭಿವೃದ್ಧಿಗೆ ವರುಣ ಕೊಡುಗೆ ಅಪಾರ: ಎಂ.ಬಿ.ಪಾಟೀಲ್

ಸುತ್ತೂರು, ಮೇ 23– ರಾಜ್ಯದ ಅಭಿವೃದ್ಧಿಗೆ ವರುಣ ಕ್ಷೇತ್ರದ ಕೊಡುಗೆ ಅಪಾರ ಎಂದು ನೂತನ ಸಚಿವ ಎಂ.ಬಿ.ಪಾಟೀಲ್ ತಿಳಿಸಿದರು.

ಮೈಸೂರಿನಿಂದ ಸುತ್ತೂರಿಗೆ ಆಗಮಿಸುವ ಮಾರ್ಗ ಮಧ್ಯ ವರುಣ ಗ್ರಾಮಸ್ಥರು ನೀಡಿದ ಸನ್ಮಾನ ಸ್ವೀಕರಿಸಿ ಮಾತನಾಡಿದ ಅವರು, ರಾಜ್ಯದ ಅಭಿವೃದ್ಧಿಗಾಗಿ ವರುಣ ಕ್ಷೇತ್ರದ ಜನತೆ ಸಿದ್ದರಾಮಯ್ಯರಂತಹ ದಕ್ಷ ಆಡಳಿತಗಾರರನ್ನು ಆಯ್ಕೆ ಮಾಡಿ ರಾಜ್ಯಕ್ಕೆ ಅಪಾರ ಕೊಡುಗೆ ನೀಡಿದ್ದಾರೆ. ಈ ಹಿಂದೆ ಮುಖ್ಯಮಂತ್ರಿಯಾಗಿದ್ದ ಸಿದ್ದರಾಮಯ್ಯನವರು ಹಲವು ಜನಪರ ಯೋಜನೆಗಳನ್ನು ಜಾರಿಗೊಳಿಸುವ ಮೂಲಕ 5 ವರ್ಷ ಉತ್ತಮ ಆಡಳಿತ ನೀಡಿದ್ದಾರೆ. ಈ ಕಾರಣದಿಂದಲೇ ಈ ಬಾರಿಯು ಕ್ಷೇತ್ರದ ಮತದಾರರು ಸಿದ್ದರಾಮಯ್ಯನವರನ್ನು ಆಯ್ಕೆ ಮಾಡಿದ್ದು, 2ನೇ ಬಾರಿಗೆ ಮುಖ್ಯಮಂತ್ರಿಯಾಗಿದ್ದಾರೆ. ಸಿದ್ದರಾಮಯ್ಯನವರು ಚುನಾವಣಾ ಪೂರ್ವದಲ್ಲಿ ಕಾಂಗ್ರೆಸ್ ಪಕ್ಷ ಘೋಷಿಸಿದ್ದ 5 ಗ್ಯಾರಂಟಿಗಳನ್ನು ಈಡೇರಿಸುವ ಜೊತೆಗೆ ಈ ಬಾರಿಯೂ ಹಲವು ಜನಪರ ಯೋಜನೆಗಳನ್ನು ಜಾರಿಗೊಳಿಸುವ ಮೂಲಕ ದಕ್ಷ ಆಡಳಿತ ನೀಡಲಿದ್ದಾರೆ ಎಂದು ತಿಳಿಸಿದರು.

ಇದೇ ವೇಳೆ ಗ್ರಾಮಸ್ಥರು, ಕಾಂಗ್ರೆಸ್ ಮುಖಂಡರು, ಕಾರ್ಯಕರ್ತರು ನೂತನ ಸಚಿವ ಎಂ.ಬಿ.ಪಾಟೀಲ್ ಅವರನ್ನು ಆತ್ಮೀಯವಾಗಿ ಸನ್ಮಾನಿಸಿದರು. ಈ ವೇಳೆ ಕೆಪಿಸಿಸಿ ಕಾರ್ಯದರ್ಶಿ ಮರಿಸ್ವಾಮಿ ಮಹೇಶ್, ಗ್ರಾಮದ ಮುಖಂಡರಾದ ಮಹದೇವಪ್ಪ ಶಂಭುಲಿಂಗಪ್ಪ ಹಾಲನಹಳ್ಳಿ ಮಟ್ಟಸ್ವಾಮಿ, ನಜರ್‌ಬಾದ್ ನಟರಾಜು, ಮುದ್ದುಮಾದೇಗೌಡ ಸೇರಿದಂತೆ ಗ್ರಾಮದ ಮುಖಂಡರು, ಕಾರ್ಯಕರ್ತರು ಹಾಜರಿದ್ದರು.

ಭಾರೀ ಗಾಳಿ ಮಳೆ: ಹಾರಿಹೋದ ಅಂಗಡಿ ಮಳಿಗೆಗಳ ಚಾವಣಿ

ಲಕ್ಷಾಂತರ ರೂ. ನಷ್ಟ: ಪರಿಹಾರಕ್ಕೆ ಒತ್ತಾಯ

ಚುಂಚನಕಟ್ಟೆ, ಮೇ 23– ಸೋಮವಾರ ಸಂಜೆ ಸುರಿದ ಭಾರೀ ಗಾಳಿ ಮಳೆಗೆ ಅಂಗಡಿ ಮಳಿಗೆಗಳ ಚಾವಣಿ ಹಾರಿಹೋಗಿ ಲಕ್ಷಾಂತರ ರೂ. ನಷ್ಟ ಸಂಭವಿಸಿರುವ ಘಟನೆ ಹನಸೋಗೆ ಗ್ರಾಮದಲ್ಲಿ ನಡೆದಿದೆ. ಇಲ್ಲಿನ ಹನಸೋಗೆ–ರಾಮನಾಥಪುರ ಮುಖ್ಯರಸ್ತೆಯಲ್ಲಿರುವ ರೇಖಾಪ್ರಕಾಶ್ ಅವರಿಗೆ ಸೇರಿದ 5 ಅಂಗಡಿ ಮಳಿಗೆಗಳ ಚಾವಣಿ ಹಾರಿಹೋಗಿದ್ದು ಲಕ್ಷಾಂತರ ರೂ. ನಷ್ಟ ಸಂಭವಿಸಿದೆ. ಸೋಮವಾರ ಸಂಜೆ 5 ಗಂಟೆ ವೇಳೆ ಆರಂಭವಾದ ಭಾರೀ ಬಿರುಗಾಳಿ ಮಳೆಗೆ ರೇಖಾಪ್ರಕಾಶ್ ಅವರಿಗೆ ಸೇರಿದ ಅಂಗಡಿ ಮಳಿಗೆಗಳಿಗೆ ಹಾಕಲಾಗಿದ್ದ ಶೀಟುಗಳು ಹಾರಿಹೋಗಿದ್ದು, ಅದೃಷ್ಟವಶಾತ್ ಯಾವುದೇ ಪ್ರಾಣಾಪಾಯವಾಗಿಲ್ಲ. ಆದರೆ ಮಳಿಗೆಗಳಲ್ಲಿದ್ದ ಪಶು ಆಹಾರದ ಚೀಲಗಳು



ಸೇರಿದಂತೆ ಇನ್ನಿತರ ವಸ್ತುಗಳು ಮಳೆಗೆ ಆಹುತಿಯಾಗಿದೆ. ಇದರಿಂದ ಸುಮಾರು 4 ಲಕ್ಷ ರೂ. ನಷ್ಟ ಸಂಭವಿಸಿದೆ ಎನ್ನಲಾಗಿದೆ. ರೇಖಾ ಅವರ ಪತಿ ಪ್ರಕಾಶ್ ಇತ್ತೀಚೆಗೆ ಮರಣ ಹೊಂದಿದ್ದು, ಮಳಿಗೆ ನಿರ್ಮಾಣಕ್ಕೆ ಸುಮಾರು 5 ಲಕ್ಷ ರೂ. ಸಾಲ ಮಾಡಿದ್ದಾರೆ. ಹೀಗಾಗಿ ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳು ಸೂಕ್ತ ಪರಿಹಾರ ಕಲ್ಪಿಸಬೇಕು ಎಂದು ಟಿಎಪಿಸಿಎಂಎಸ್ ಮಾಜಿ ನಿರ್ದೇಶಕ ಎಸ್.ಟಿ ಕೀರ್ತಿ ಒತ್ತಾಯಿಸಿದ್ದಾರೆ.

ದರ್ಶನ್, ಮಹದೇವಪ್ಪಗೆ ಸಚಿವ ಸ್ಥಾನ ನೀಡಲು ಒತ್ತಾಯ



ಮಲ್ಲುಂಡಿ, ಮೇ 23– ಶಾಸಕರಾದ ದರ್ಶನ್ ಧ್ರುವನಾರಾಯಣ್ ಹಾಗೂ ಹೆಚ್.ಸಿ.ಮಹದೇವಪ್ಪನವರಿಗೆ ಸಚಿವ ಸ್ಥಾನ ನೀಡುವಂತೆ ಕ್ಷೇತ್ರದ ಕಾಂಗ್ರೆಸ್ ಮುಖಂಡರು ಒತ್ತಾಯಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ರೈತ ಸಂಘದ ಜಿಲ್ಲಾಧ್ಯಕ್ಷ ದುಗ್ಗಹಳ್ಳಿ ಶಿವನಾಗಪ್ಪ, ಈ ಬಾರಿಯ ಚುನಾವಣೆಯಲ್ಲಿ ಭರ್ಜರಿ ಜಯಗಳಿಸಿರುವ ದರ್ಶನ್ ಧ್ರುವನಾರಾಯಣ್ ಹಾಗೂ ಈ ಹಿಂದೆ ಸಚಿವರಾಗಿದ್ದ ವೇಳೆ ಹೆಚ್ಚು ಅನುದಾನ ನೀಡಿ ನಂಜನಗೂಡು ಕ್ಷೇತ್ರದ ಅಭಿವೃದ್ಧಿಗೆ ಶ್ರಮಿಸಿದ ಡಾ.ಹೆಚ್.ಸಿ.ಮಹದೇವಪ್ಪ ಇವರಿಬ್ಬರಿಗೂ ಸಚಿವ ಸ್ಥಾನ ನೀಡಬೇಕು ಎಂದು ಆಗ್ರಹಿಸಿದರು.

ಮಾಜಿ ಸಂಸದ ದಿ.ಆರ್.ಧ್ರುವನಾರಾಯಣ್ ಕ್ಷೇತ್ರದ ಅಭಿವೃದ್ಧಿ ಬಗ್ಗೆ ಕನಸು ಕಂಡಿದ್ದರು. ಆದರೆ ಇಂದು ನಮ್ಮಿಂದ ದೂರವಾಗಿದ್ದಾರೆ. ಹೀಗಾಗಿ ಅವರ ಪುತ್ರ ದರ್ಶನ್‌ಗೆ ಸಚಿವ ಸ್ಥಾನ ನೀಡಿದರೇ ರಾಜ್ಯ ಸೇರಿದಂತೆ ಕ್ಷೇತ್ರದ ಅಭಿವೃದ್ಧಿಗೆ ಶ್ರಮಿಸುವ ಮೂಲಕ ತಂದೆ ಆಸೆ ಈಡೇರಿಸಲಿದ್ದಾರೆ. ಆದ್ದರಿಂದ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಇವರಿಬ್ಬರಿಗೂ ಸಚಿವ ಸ್ಥಾನ ನೀಡಬೇಕು ಎಂದು ಒತ್ತಾಯಿಸಿದರು. ಸುದ್ದಿಗೋಷ್ಠಿಯಲ್ಲಿ ಗುತ್ತಿಗೆದಾರ ಮಡಿಕೆಹುಂಡಿ ಶಿವಣ್ಣ, ಶಿವಮಲ್ಲಪ್ಪ, ಲಕ್ಷ್ಮೀನಾರಾಯಣ, ಮಹದೇವಶೆಟ್ಟಿ, ಪ್ರಸನ್ನ ಕುಮಾರ್, ಶಂಕರನಾಯ್ಕ, ನರಸಿಂಹಸ್ವಾಮಿ, ಅಬ್ದುಲ್ ಸಾಬ್ ಸೇರಿದಂತೆ ಇತರರಿದ್ದರು.

ನಾಳೆ ವಿದ್ಯುತ್ ವ್ಯತ್ಯಯ

ಹೆಚ್.ಡಿ.ಕೋಟೆ, ಮೇ 23– ಕೋಟೆ ಮತ್ತು ಯರಹಳ್ಳಿ–ಹ್ಯಾಂಡ್‌ಪೋಸ್ಟ್ ವಿದ್ಯುತ್ ವಿತರಣಾ ಕೇಂದ್ರಗಳಲ್ಲಿ ತ್ರೈಮಾಸಿಕ ನಿರ್ವಹಣಾ ಕಾರ್ಯ ಹಮ್ಮಿಕೊಂಡಿರುವುದರಿಂದ ಮೇ 25 ರಂದು ಬೆಳಗ್ಗೆ 10 ರಿಂದ ಸಂಜೆ 6 ರವರೆಗೆ ಪಟ್ಟಣ, ಮೇಟಿಕುಪ್ಪೆ, ಚಕ್ಕೋಡನಹಳ್ಳಿ, ಭೀಮನಹಳ್ಳಿ, ಹಿರೇಹಳ್ಳಿ, ಅಣ್ಣೂರು, ಪಡುವಕೋಟೆ, ಸವ್ವೆ, ನಾಗನಹಳ್ಳಿ ಮತ್ತು ಚಿಕ್ಕಕೆರೆಯೂರು, ಹೈರಿಗೆ, ಹೆಬ್ಬಲಗುಪ್ಪೆ ಮತ್ತು ನೂರಲಕುಪ್ಪೆ ಗ್ರಾಪಂ ವ್ಯಾಪ್ತಿಯ ಗ್ರಾಮಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಸಹಾಯಕ ಕಾರ್ಯ ನಿರ್ವಾಹಕ ಇಂಜಿನಿಯರ್ ಕೆ.ಚಂದು ಕುಮಾರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹಿರಿಯ ಪತ್ರಕರ್ತೆ ಸಾರಾ ಜಾಕೋಬ್ NDTVಗೆ ರಾಜೀನಾಮೆ



ನವದೆಹಲಿ: ಎನ್‌ಡಿಟಿವಿಯ ಹಿರಿಯ ಪತ್ರಕರ್ತೆ ಸಾರಾ ಜಾಕೋಬ್ ಅವರು ಸುದ್ದಿ ವಾಹಿನಿಯೊಂದಿಗಿನ ಎರಡು ದಶಕಗಳ ತಮ್ಮ ಸಂಬಂಧ ಕಡಿದುಕೊಂಡಿದ್ದು, ರಾಜೀನಾಮೆ ನೀಡಿದ್ದಾರೆ. ಎನ್ ಡಿಟಿವಿ ತೊರೆಯುವ ನಿರ್ಧಾರ ಪ್ರಕಟಿಸಿದ ಸಾರಾ, "ಕಳೆದ ರಾತ್ರಿ, ನಾನು ಎನ್‌ಡಿಟಿವಿಗೆ ರಾಜೀನಾಮೆ ನೀಡಿದ್ದೇನೆ. ಭಾರತದ ಶ್ರೇಷ್ಠ ಮಾಧ್ಯಮ ಸಂಸ್ಥೆಯೊಂದನ್ನು ಸ್ಥಾಪಿಸಿದ್ದಕ್ಕಾಗಿ ಡಾ.(ಪ್ರಣೋಯ್) ರಾಯ್ ಮತ್ತು ರಾಧಿಕಾ ರಾಯ್ ಅವರಿಗೆ ಧನ್ಯವಾದಗಳು" ಎಂದು ಹೇಳಿದ್ದಾರೆ.

ಮಹದೇವಪ್ಪಗೆ ಸಚಿವ ಸ್ಥಾನ ನೀಡಲು ದಸಂಸ ಆಗ್ರಹ



ತಿ.ನರಸೀಪುರ, ಮೇ 23– ಸಂವಿಧಾನ ರಕ್ಷಿಸುವ ನಿಟ್ಟಿನಲ್ಲಿ ರಾಜ್ಯಾದ್ಯಂತ ಹೋರಾಟ ಮಾಡುವ ಮೂಲಕ ಡಾ.ಬಿ.ಆರ್.ಅಂಬೇಡ್ಕರ್ ಅವರ ತತ್ವ, ಸಿದ್ಧಾಂತಗಳನ್ನು ಮೈಗೂಡಿಸಿಕೊಂಡು ರಾಜ್ಯದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬರಲು ಕೊಡುಗೆ ನೀಡಿರುವ ಶಾಸಕ ಡಾ.ಹೆಚ್.ಸಿ.ಮಹದೇವಪ್ಪ ಅವರಿಗೆ ಸಚಿವ ಸ್ಥಾನ ನೀಡುವಂತೆ ದಲಿತ ಸಂಘರ್ಷ ಸಮಿತಿ ಜಿಲ್ಲಾ ಸಂಚಾಲಕ ಸೋಸಲೆ ಶಶಿಕಾಂತ್ ಒತ್ತಾಯಿಸಿದ್ದಾರೆ.

ಪಟ್ಟಣದ ಡಾ.ಬಿ.ಆರ್.ಅಂಬೇಡ್ಕರ್ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಹಿಂದೆ ಮಹದೇವಪ್ಪನವರು ಆರೋಗ್ಯ ಸಚಿವರಾಗಿದ್ದ ವೇಳೆ ತಾಲೂಕು ಮಟ್ಟದಲ್ಲಿ ಉತ್ತಮ ಆಸ್ಪತ್ರೆಗಳನ್ನು ನಿರ್ಮಿಸಿದರು. ಲೋಕೋಪಯೋಗಿ ಸಚಿವರಾಗಿದ್ದ ವೇಳೆ ರಾಜ್ಯಾದ್ಯಂತ ಉತ್ತಮ ರಸ್ತೆಗಳನ್ನು ನಿರ್ಮಾಣ ಮಾಡಿ ಪ್ರಶಂಸೆಗೆ ಒಳಗಾಗಿದ್ದರು. ಸಚಿವ ಸ್ಥಾನವನ್ನು ಉತ್ತಮವಾಗಿ ನಿರ್ವಹಿಸಿ ಅನುಭವವಿರುವ ಮಹದೇವಪ್ಪನವರಿಗೆ ಮೊದಲ ಹಂತದಲ್ಲೇ ಸಚಿವ ಸ್ಥಾನ ನೀಡಬೇಕಿತ್ತು. ಆದರೆ ಕಾರಣಾಂತರಗಳಿಂದ ನೀಡಿಲ್ಲ. ಕೂಡಲೇ ಅವರನ್ನು ಸಚಿವ ಸಂಪುಟಕ್ಕೆ ಸೇರಿಸಿಕೊಳ್ಳಬೇಕು. ಇಲ್ಲದಿದ್ದರೆ, ದಲಿತ ಸಮುದಾಯ ಸಿದ್ದರಾಮಯ್ಯನವರ ಮೇಲೆ ಅನುಮಾನ ಪಡುವ ಪರಿಸ್ಥಿತಿ ನಿರ್ಮಾಣವಾಗಲಿದೆ. ಚುನಾವಣೆ ವೇಳೆ ವಿಪಕ್ಷಗಳು ಸಿದ್ದರಾಮಯ್ಯನವರನ್ನು ದಲಿತ ವಿರೋಧಿ ಎಂದು ಬಿಂಬಿಸಿದ್ದವು. ಆದರೂ ದಲಿತ ಸಮುದಾಯ ಸಿದ್ದರಾಮಯ್ಯನವರನ್ನು ಬೆಂಬಲಿಸುವ ಜೊತೆಗೆ ರಾಜ್ಯದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬರಲು ತಮ್ಮದೇ ಆದ ಕೊಡುಗೆ ನೀಡಿದೆ. ಹೀಗಾಗಿ ದಲಿತ ಸಮುದಾಯಕ್ಕೆ ಸೇರಿದ ಡಾ.ಹೆಚ್.ಸಿ.ಮಹದೇವಪ್ಪನವರಿಗೆ ಸಚಿವ ಸ್ಥಾನ ನೀಡಬೇಕು ಎಂದು ಒತ್ತಾಯಿಸಿದರು.

ಶಾಸಕ ಡಾ.ಹೆಚ್.ಸಿ.ಮಹದೇವಪ್ಪನವರು ದಲಿತ ಸಂಘಟನೆಗಳ ಹೋರಾಟಕ್ಕೆ ಬೆಂಬಲ ಕೊಟ್ಟ ಫಲವಾಗಿ ದಸಂಸ ಕಾಂಗ್ರೆಸ್ ಬೆಂಬಲಿಸಿದೆ. ಚುನಾವಣೆ ವೇಳೆ ಕಾಂಗ್ರೆಸ್‌ನ ಕೆಲವು ಪ್ರಭಾವಿ ನಾಯಕರನ್ನು ಸೋಲಿಸಬೇಕೆಂದು ಬಿಜೆಪಿ ಮತ್ತು ಆರ್‌ಎಸ್‌ಎಸ್ ಪಿತೂರಿ ಮಾಡಿತ್ತು. ವರುಣದಲ್ಲಿ ದಲಿತ ಸಮುದಾಯದ ಮತಗಳನ್ನು ವಿಭಜಿಸುವ ಕೆಲಸ ನಡೆದಿತ್ತು. ಅಲ್ಲದೇ ದಲಿತ ಸಮುದಾಯದ ಡಾ.ಭಾರತೀ ಶಂಕರ್ ಅವರನ್ನು ವರುಣದಲ್ಲಿ ಜೆಡಿಎಸ್ ಅಭ್ಯರ್ಥಿ ಮಾಡಲಾಗಿತ್ತು. ಆ ಮೂಲಕ ಸಿದ್ದರಾಮಯ್ಯರನ್ನು ಸೋಲಿಸಬೇಕೆಂಬ ಪಿತೂರಿ ನಡೆದಿತ್ತು. ತಿ.ನರಸೀಪುರದಲ್ಲಿ ಜೆಡಿಎಸ್ ಮತ್ತು ಬಿಜೆಪಿ ಹೊಂದಾಣಿಕೆ ಮಾಡಿಕೊಳ್ಳುವ ನಿಟ್ಟಿನಲ್ಲಿ ಮಹದೇವಪ್ಪ ಪರ ಅಪಪ್ರಚಾರ ಮಾಡಲಾಗಿತ್ತು. ಇದೆಲ್ಲವನ್ನು ಮನಸ್ಸಿನಲ್ಲಿಟ್ಟುಕೊಂಡು ದಸಂಸ ಕಾಂಗ್ರೆಸ್ ಗೆಲ್ಲಿಸಲು ತೀರ್ಮಾನಿಸಿತ್ತು. ನಿರೀಕ್ಷೆಯಂತೆ ಕಾಂಗ್ರೆಸ್ ಅಧಿಕಾರಕ್ಕೆ ಬಂದು ಸಿದ್ದರಾಮಯ್ಯ ಮುಖ್ಯಮಂತ್ರಿಯಾಗಿರುವುದು ಸಂತಸ ತಂದಿದೆ. ಒಟ್ಟಾರೆ ಮಹದೇವಪ್ಪನವರಿಗೆ ಸಚಿವ ಸ್ಥಾನ ನೀಡುವಂತೆ ಅವರು ಮನವಿ ಮಾಡಿದರು.

ಗೋಷ್ಠಿಯಲ್ಲಿ ಮುಖಂಡರಾದ ಸೋಸಲೆ ರಾಜಶೇಖರ್, ನಂಜುಂಡಯ್ಯ, ನಿಂಗರಾಜು, ಕೊಳತ್ತೂರು ಮಹದೇವಸ್ವಾಮಿ, ಗ್ರಾಪಂ ಮಾಜಿ ಅಧ್ಯಕ್ಷ ತೇಜು, ಶಾಂತರಾಜು, ಮಹದೇವ, ಜಗದೀಶ್, ಸುರೇಶ್, ಮಹೇಶ್, ರಾಜಪ್ಪ ಹಾಜರಿದ್ದರು.

ಸ್ವಾವಲಂಬನೆ ಮೂಲಕ ಮಹಿಳೆಯರ ಆರ್ಥಿಕ ಸುಧಾರಣೆ

ಸರಗೂರು, ಮೇ 23– ಮಹಿಳೆಯರು ಸ್ವಾವಲಂಬನೆ ಮೂಲಕ ಆರ್ಥಿಕ ಸುಧಾರಣೆ ಕಾಣಬಹುದು ಎಂದು ಸ್ವಾಮಿ ವಿವೇಕಾನಂದ ಯೂತ್ ಮೂವ್‌ಮೆಂಟ್ ಕಾರ್ಯನಿರ್ವಹಣಾಧಿಕಾರಿ ಎಸ್.ಸವಿತಾ ತಿಳಿಸಿದರು.

ಸ್ವಾಮಿ ವಿವೇಕಾನಂದ ಯೂತ್ ಮೂವ್‌ಮೆಂಟ್ ಅಂಗ ಸಂಸ್ಥೆಯಾದ ವಿವೇಕ ಗ್ರಾಮೀಣ ಜೀವನಾಧಾರ ಕೇಂದ್ರ ಕೆಂಚನಹಳ್ಳಿ ವತಿಯಿಂದ ಬಿ.ಮಟಕೆರೆಯಲ್ಲಿ ಮೈಂಡ್ ಟ್ರೀ ಫೌಂಡೇಶನ್ ಸಹಯೋಗದೊಂದಿಗೆ 3 ತಿಂಗಳ ಕಾಲ ನಡೆದ ಟೈಲರಿಂಗ್–ಫ್ಯಾಷನ್ ಡಿಸೈನಿಂಗ್ ಕೌಶಲ್ಯಾಭಿವೃದ್ಧಿ ತರಬೇತಿಯಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ ಪ್ರಮಾಣ ಪತ್ರ ವಿತರಿಸಿ ಅವರು ಮಾತನಾಡಿದರು.

ಹೆಣ್ಣು ಕಲಿತರೆ ಶಾಲೆಯೊಂದು ತೆರೆದಂತೆ. ತಾಯಿಯೇ ಮೊದಲ ಗುರು. ಹೀಗಾಗಿ ಹೆಣ್ಣು ಸಮಾಜದಲ್ಲಿ ಏನನ್ನಾದರೂ ಸಾಧಿಸುವ ಸಾಮರ್ಥ್ಯ ಹೊಂದಿದ್ದಾಳೆ. ಈ ತರಬೇತಿಯಿಂದ ಪ್ರತಿಯೊಬ್ಬ ಮಹಿಳೆಯರು ಸ್ವಾವಲಂಬಿಗಳಾಗುವ ಮೂಲಕ ಆರ್ಥಿಕ ಸುಧಾರಣೆ ಕಾಣಬಹುದು ಎಂದರು.

ಬಿ.ಮಟಕೆರೆ ಗ್ರಾಪಂ ಉಪಾಧ್ಯಕ್ಷ ದೇವದಾಸ್ ಪ್ರಮಾಣ ಪತ್ರದ ಪ್ರಾಮುಖ್ಯತೆ ಮತ್ತು ಸರ್ಕಾರದಿಂದ ಸಿಗುವ ಸೌಲಭ್ಯಗಳ ಕುರಿತು ಮಾತನಾಡಿ, ಗ್ರಾಮೀಣ ಹೆಣ್ಣು ಮಕ್ಕಳು ಸ್ವಾವಲಂಬಿಗಳಾಗಿ ಬದುಕಲು ಫ್ಯಾಷನ್ ಡಿಸೈನಿಂಗ್ ತರಬೇತಿ ಸಹಕಾರಿಯಾಗಲಿದೆ. ಇಲ್ಲಿ ಕಲಿತ ಕೌಶಲಗಳು ಯಾರ ಹಂಗಿಲ್ಲದೇ ಕುಟುಂಬ ನಿರ್ವಹಣೆ ಮಾಡಲು ಸಹಾಯವಾಗಲಿದೆ. ಇಂತಹ ತರಬೇತಿಯನ್ನು ಗ್ರಾಮೀಣ ಜನರಿಗೆ ನೀಡುತ್ತಿರುವ ಸಂಸ್ಥೆಗೆ ಧನ್ಯವಾದ ತಿಳಿಸುತ್ತೇನೆ ಎಂದರು.



ಕಾರ್ಯಕ್ರಮದಲ್ಲಿ ಪ್ರಥಮ 14, ದ್ವಿತೀಯ 2 ಹಾಗೂ ತೃತೀಯ ದರ್ಜೆಯಲ್ಲಿ ಓರ್ವ ಸೇರಿದಂತೆ ಉತ್ತೀರ್ಣರಾದ ಒಟ್ಟು 17 ಮಂದಿಗೆ ಪ್ರಮಾಣ ಪತ್ರ ವಿತರಿಸಲಾಯಿತು. ಈ ವೇಳೆ ಪಿ.ಡಿ.ನಾಯಕ್, ಪ್ರಸನ್ನ, ಉಮೇಶ್ ಬಿ.ಎನ್, ನಾಗೇಂದ್ರ ಹಾಗೂ ಶಿಕ್ಷಕಿ ಸೌಮ್ಯ ಮಲ್ಲೇಶ್ ನಾಯಕ ಇತರರಿದ್ದರು.

ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನ

ನಂಜನಗೂಡು, ಮೇ 23– ರಾಜ್ಯ ಸರ್ಕಾರಿ ನೌಕರರ ಸಂಘ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿಯಲ್ಲಿ ಸಾಧನೆಗೈದ ಸರ್ಕಾರಿ ನೌಕರರ ಮಕ್ಕಳಿಂದ ಪ್ರತಿಭಾ ಪುರಸ್ಕಾರಕ್ಕೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಿದೆ. ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿಯಲ್ಲಿ ಶೇ.90ಕ್ಕಿಂತ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳು ಅಗತ್ಯ ದಾಖಲಾತಿಗಳೊಂದಿಗೆ https://bit.my/ksgeapp ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ ಎಂದು ತಾಲೂಕು ರಾಜ್ಯ ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ರಂಗಸ್ವಾಮಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗೆ ಮೊ.9379955892 ಸಂಪರ್ಕಿಸಬಹುದು.

ಕಾಮಗಾರಿಗಳ ಪಟ್ಟಿ ಕೊಟ್ಟರೆ ಪೂರ್ಣಗೊಳಿಸಲಾಗುವುದು

ಮಾಜಿ ಶಾಸಕ ಅಶ್ವಿನ್ ಬೀದಿಗಿಳಿದು ಹೋರಾಡಬೇಕಿಲ್ಲ: ಸುನೀಲ್ ಬೋಸ್

ತಿ.ನರಸೀಪುರ, ಮೇ 23– ಎಂ.ಅಶ್ವಿನ್ ಕುಮಾರ್ ಅವರು ಶಾಸಕರಾಗಿದ್ದ ವೇಳೆ ಕೈಗೊಂಡಿರುವ ಕಾಮಗಾರಿಗಳ ಪಟ್ಟಿ ಕೊಟ್ಟರೆ ಕಾಂಗ್ರೆಸ್ ಸರ್ಕಾರದ ಅವಧಿಯಲ್ಲಿ ಪೂರ್ಣಗೊಳಿಸಲಾಗುವುದು. ಅದಕ್ಕಾಗಿ ಮಾಜಿ ಶಾಸಕರು ಬೀದಿಗಿಳಿದು ಹೋರಾಡಬೇಕಾದ ಅಗತ್ಯವಿಲ್ಲ ಎಂದು ಯುವ ಮುಖಂಡ ಸುನೀಲ್ ಬೋಸ್ ತಿರುಗೇಟು ನೀಡಿದರು.

ಪಟ್ಟಣದ ಕಾಂಗ್ರೆಸ್ ಕಚೇರಿಯಲ್ಲಿ ಮಂಗಳವಾರ ಕಾರ್ಯಕರ್ತರು ಹಾಗೂ ಮುಖಂಡರಿಗೆ ಹಮ್ಮಿಕೊಂಡಿದ್ದ ಕೃತಜ್ಞತಾ ಸಭೆಯಲ್ಲಿ ಮಾತನಾಡಿದ ಅವರು, ಮಾಜಿ ಶಾಸಕ ಎಂ.ಅಶ್ವಿನ್ ಕುಮಾರ್ ಚುನಾವಣೆ ಪೂರ್ವದಲ್ಲಿ ಕಾಂಗ್ರೆಸ್ ನೀಡಿರುವ ಭರವಸೆಗಳನ್ನು ಈಡೇರಿಸಬೇಕು. ಅಲ್ಲದೇ ಪ್ರಗತಿಯಲ್ಲಿರುವ ಕಾಮಗಾರಿಗಳನ್ನು ಪೂರ್ಣಗೊಳಿಸಬೇಕು. ಇಲ್ಲದಿದ್ದರೆ ಹೋರಾಟ ಮಾಡುತ್ತೇನೆ ಎಂದಿದ್ದಾರೆ. ಪ್ರತಿಭಟನೆ ಬದಲು ಅವರು ಯಾವ್ಯಾವ ಇಲಾಖೆಯಿಂದ ಯಾವಾಗ, ಎಷ್ಟು ಅನುದಾನ ತಂದಿರುವ ಅಭಿವೃದ್ಧಿಯ ಪಟ್ಟಿ ಕೊಟ್ಟರೆ ಪೂರ್ಣಗೊಳಿಸಿಯೇ ಬಿಡೋಣವೆಂದು ಲೇವಡಿ ಮಾಡಿದರು.


ಲೋಕೋಪಯೋಗಿ ಸಚಿವರಾಗಿದ್ದ ಡಾ.ಹೆಚ್.ಸಿ.ಮಹದೇವಪ್ಪ ಅವರು ಮಂಜೂರು ಮಾಡಿದ್ದ ನೂರಾರು ಕೋಟಿ ಅನುದಾನವನ್ನು 5 ವರ್ಷಗಳ ಕಾಲ ಅವರಿಗೆ ಇಷ್ಟ ಬಂದಂತೆ ಅಭಿವೃದ್ಧಿಗೆ ಬಳಕೆ ಮಾಡಿಕೊಂಡರು. ಕಾಂಗ್ರೆಸ್ ಸರ್ಕಾರದ ಹಣವನ್ನು ಯಾವ್ಯಾವ ಅಭಿವೃದ್ಧಿಗೆ ಉಪಯೋಗ ಮಾಡಿಕೊಂಡಿದ್ದಾರೆ ಎಂಬುದನ್ನು ಜಿಪಂ ಕುಡಿಯುವ ನೀರು ಹಾಗೂ ನೈರ್ಮಲ್ಯ ಉಪ ವಿಭಾಗದ ಎಇಇ ಬಂದು ಅವರನ್ನು ಮತ್ತೆ ಕರೆಸಿಕೊಂಡರೆ ಗೊತ್ತಾಗುತ್ತದೆ. ಅಭಿವೃದ್ಧಿ ಮಾಹಿತಿ ಕೇಳಿದರೆ ಬಾಯ್ಬಿಡದ ಮಾಜಿ ಶಾಸಕರು ಚುನಾವಣೆ ಮುಗಿದ ಬಳಿಕ ಹೊಸದೊಂದು ವರಸೆ ತೆಗೆದಿದ್ದಾರೆ ಎಂದು ಟೀಕಿಸಿದರು.

ಸಾಮೂಹಿಕ ನಾಯಕತ್ವದ ಗೆಲುವು: ರಾಜ್ಯ ಹಾಗೂ ಕ್ಷೇತ್ರದಲ್ಲಿ ಕಾರ್ಯಕರ್ತರು ಮತ್ತು ಮುಖಂಡರ ಸಾಮೂಹಿಕ ನಾಯಕತ್ವದಿಂದಾಗಿ ಕಾಂಗ್ರೆಸ್ ಪಕ್ಷಕ್ಕೆ ಗೆಲುವಾಗಿದೆ. ನರಸೀಪುರದಲ್ಲಿ ಮಹದೇವಪ್ಪ ಗೆದ್ದವರೇ, ನಾನು ಗೆಲ್ಲಿಸಿದ್ದೇನೆ ಅನ್ನುವುದಕ್ಕಿಂತ ಕಾರ್ಯಕರ್ತರು ಮತ್ತು ಮುಖಂಡರು ಸಮನ್ವಯತೆ ಕಾಯ್ದುಕೊಂಡು ಸಾಮೂಹಿಕವಾಗಿ ಹೋರಾಟ ಮಾಡಿದ್ದರಿಂದ ಅಭೂತಪೂರ್ವ ಗೆಲುವು ಸಿಕ್ಕಿದೆ ಎಂದು ಸಂತಸ ವ್ಯಕ್ತಪಡಿಸಿದರು.

ಹಗಲಿರುಳು ದುಡಿದ ಪಕ್ಷದ ನಿಷ್ಠಾವಂತ ಕಾರ್ಯಕರ್ತರಿಗೆ ಪ್ರಾಮುಖ್ಯತೆ ನೀಡಲಾಗುವುದು. ಕಳ್ಳೇತ್ತುಗಳು ನುಸುಳಲು ಅವಕಾಶವಿಲ್ಲ. ಬೂತ್ ಮಟ್ಟದಲ್ಲಿ ಸರ್ಕಾರದ ಅಭಿವೃದ್ಧಿ ಹಾಗೂ ಯೋಜನೆಗಳನ್ನು ಅನುಷ್ಠಾನಗೊಳಿಸುತ್ತೇವೆ. ಸಚಿವ ಸಂಪುಟ ರಚನೆಯಾದ ಬಳಿಕ ಮತದಾರರಿಗೆ ಕೃತಜ್ಞತೆ ಸಲ್ಲಿಸಲು ದೊಡ್ಡ ಮಟ್ಟದ ಕಾರ್ಯಕ್ರಮ ಹಮ್ಮಿಕೊಳ್ಳಲಾಗುವುದು. ಯಾವುದೇ ಕಾರಣಕ್ಕೂ ಸಣ್ಣ ಪುಟ್ಟ ಭಿನ್ನಾಭಿಪ್ರಾಯಗಳಿಗೆ ಆಸ್ಪದ ನೀಡದೆ ಈಗಿರುವ ಒಗ್ಗಟ್ಟನ್ನು ಕಾಪಾಡಿಕೊಳ್ಳಬೇಕು ಎಂದು ಮನವಿ ಮಾಡಿದರು.

ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಎಂ.ಡಿ.ಬಸವರಾಜು ಮಾತನಾಡಿ, ವಿಧಾನಸಭಾ ಚುನಾವಣೆ ಮಾದರಿ ಮುಂದಿನ ಲೋಕಸಭೆ ಹಾಗೂ ಜಿಪಂ ಮತ್ತು ತಾಪಂ ಚುನಾವಣೆಯನ್ನು ಗೆಲ್ಲಲು ಸನ್ನದ್ಧರಾಗಬೇಕು. ಅಭಿವೃದ್ಧಿ ಮತ್ತು ಯೋಜನೆಗಳ ಮಂಜೂರಾತಿ ಸಂದರ್ಭ ಗೆಲುವಿನ ರೂವಾರಿಗಳಾಗಿರುವ ಪಕ್ಷದ ಕಾರ್ಯಕರ್ತರಿಗೆ ಮೊದಲ ಆದ್ಯತೆ ನೀಡಬೇಕು. ಬಾಂಧವ್ಯದ ನೆಪದಲ್ಲಿ ಬರುವವರನ್ನು ಸಾಧ್ಯವಾದಷ್ಟು ದೂರ ಇಡಬೇಕು ಎಂದು ತಿಳಿಸಿದರು.

ಸಭೆಯಲ್ಲಿ ಬನ್ನೂರು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಚನ್ನಕೇಶವ, ಪಿಕಾರ್ಡ್ ಬ್ಯಾಂಕ್ ಮಾಜಿ ಅಧ್ಯಕ್ಷ ಎಂ.ಎಸ್.ಶಿವಮೂರ್ತಿ, ಪಿಎಸಿಸಿಎಸ್ ಅಧ್ಯಕ್ಷ ಎಂ.ಪರಶಿವಮೂರ್ತಿ, ಮಾಜಿ ಅಧ್ಯಕ್ಷ ಎ.ಬಿ.ಮಂಜುನಾಥ್, ಕುಮಾರ್, ಎನ್.ನಿಂಗಯ್ಯ, ಮುಖಂಡರಾದ ಹಿರಿಯೂರು ನವೀನ್, ಕೇತಹಳ್ಳಿ ರಾಜಣ್ಣ, ಸಿದ್ಧಶೆಟ್ಟಿ, ಲಕ್ಷ್ಮೀನಾರಾಯಣ, ಸ್ವಾಮಿಗೌಡ, ಸಿ.ಮಹದೇವ ಹಾಗೂ ಇನ್ನಿತರರಿದ್ದರು.



ಕಾಂಗ್ರೆಸ್ ಹೈಕಮಾಂಡ್ ಸೂಚಿಸಿದರೆ ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಚಾಮರಾಜನಗರ ಕ್ಷೇತ್ರದಿಂದ ಸ್ಪರ್ಧಿಸಲು ಸಿದ್ಧನಿದ್ದೇನೆ. ಉಪ ಚುನಾವಣೆ ಮತ್ತು ವಿಧಾನಸಭಾ ಚುನಾವಣೆಯಲ್ಲಿ ಸ್ಪರ್ಧಿಸಲು ಅವಕಾಶ ವಂಚಿತನಾಗಿರುವ ಬಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ತಿಳಿದಿದ್ದು, ಲೋಕಸಭಾ ಚುನಾವಣೆಯಲ್ಲಾದರೂ ನನ್ನನ್ನು ಕಣಕ್ಕಿಳಿಯಲು ಅವಕಾಶ ಕಲ್ಪಿಸುತ್ತಾರೆಂಬ ವಿಶ್ವಾಸವಿದೆ.

- ಸುನೀಲ್ ಬೋಸ್

ಸಾಲಬಾಧೆ: ರೈತ ಆತ್ಮಹತ್ಯೆ

ಹುಣಸೂರು, ಮೇ 23– ಸಾಲಬಾಧೆ ತಾಳಲಾರದೇ ರೈತರೊಬ್ಬರು ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ತಾಲೂಕಿನ ಉಡುವೆಪುರ ಗ್ರಾಮದಲ್ಲಿ ನಡೆದಿದೆ.




ಗ್ರಾಮದ ನಿವಾಸಿ ಲೇ.ಗಿರಿಗೌಡರ ಪುತ್ರ ಯಾಲಕ್ಕಿಗೌಡ(65) ಮೃತಪಟ್ಟವರು. ಮೃತರಿಗೆ 3 ಎಕರೆ ಜಮೀನಿದ್ದು, ಹೊಗೆಸೊಪ್ಪು, ಶುಂಠಿ ಬೆಳೆ ಬೆಳೆದಿದ್ದರು. ಅಲ್ಲದೇ ತಂಬಾಕು ಬ್ಯಾರನ್ ಹೊಂದಿದ್ದಾರೆ. ಕೃಷಿಗಾಗಿ ಪಿರಿಯಾಪಟ್ಟಣ ತಾಲೂಕಿನ ಪಂಚವಳ್ಳಿ ಐಓಬಿ ಬ್ಯಾಂಕ್‌ನಲ್ಲಿ 12 ಲಕ್ಷ, 6 ಲಕ್ಷ ರೂ. ಕೈ ಸಾಲ ಮಾಡಿಕೊಂಡಿದ್ದರು. ಮಾಡಿದ ಸಾಲ ತೀರಿಸಲಾಗದೇ ಮನನೊಂದಿದ್ದ ಯಾಲಕ್ಕಿಗೌಡ ಸೋಮವಾರ ಬೆಳಗ್ಗೆ ಮನೆಯಲ್ಲಿ ಯಾರೂ ಇಲ್ಲದ ವೇಳೆ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ಪುತ್ರ ಕೆಂಪರಾಜು ಹುಣಸೂರು ಗ್ರಾಮಾಂತರ ಠಾಣೆ ದೂರು ನೀಡಿದ್ದಾರೆ. ಹನಗೋಡು ಆಸ್ಪತ್ರೆಯಲ್ಲಿ ಮರಣೋತ್ತರ ಪರೀಕ್ಷೆ ನಡೆಸಿದ ಬಳಿಕ ವಾರಸುದಾರರಿಗೆ ಒಪ್ಪಿಸಲಾಯಿತು. ಕಂದಾಯ, ಕೃಷಿ ಇಲಾಖೆ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದರು.

ಹೆಚ್‌ಸಿಎಂಗೆ ಸಚಿವ ಸ್ಥಾನ ನೀಡಲು ಮನವಿ

ಬನ್ನೂರು, ಮೇ 23– ಶಾಸಕ ಡಾ.ಹೆಚ್.ಸಿ.ಮಹದೇವಪ್ಪನವರಿಗೆ ಸಚಿವ ಸ್ಥಾನ ನೀಡುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಕಾಂಗ್ರೆಸ್ ವರಿಷ್ಠರಿಗೆ ಬನ್ನೂರು ಪುರಸಭಾ ಮಾಜಿ ಅಧ್ಯಕ್ಷ ಹಾಗೂ ಕಾಂಗ್ರೆಸ್ ಹಿರಿಯ ಮುಖಂಡ ಡಿ.ಪದ್ಮನಾಭ ಮನವಿ ಮಾಡಿದ್ದಾರೆ. ಕ್ಷೇತ್ರದ ಜನ ಮಹದೇವಪ್ಪ ಮಂತ್ರಿಯಾಗುತ್ತಾರೆ. ಸಾಕಷ್ಟು ಅಭಿವೃದ್ಧಿಯಾಗುತ್ತದೆ ಎಂದು ಮಹದೇವಪ್ಪನವರನ್ನು ಗೆಲ್ಲಿಸಿದ್ದಾರೆ. ಕ್ಷೇತ್ರದ ಮತದಾರರ ಭಾವನೆ ಹುಸಿ ಆಗದಂತೆ ಕಾಂಗ್ರೆಸ್ ವರಿಷ್ಠರು ಗಮನ ಹರಿಸಬೇಕು. ಕೆಪಿಸಿಸಿ ಅಧ್ಯಕ್ಷ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಚುನಾವಣಾ ಪ್ರಚಾರ ವೇಳೆ ಬನ್ನೂರಿಗೆ ಆಗಮಿಸಿದಾಗ ಮಹದೇವಪ್ಪನವರನ್ನು ಗೆಲ್ಲಿಸಿ ಸಚಿವರಾಗುತ್ತಾರೆ. ಕ್ಷೇತ್ರ ಮತ್ತಷ್ಟು ಅಭಿವೃದ್ಧಿ ಹೊಂದಲಿದೆ ಎಂದು ಭರವಸೆ ನೀಡಿದ್ದರು. ಪ್ರಥಮ ಸಂಪುಟದಲ್ಲೇ ಅವರು ಸಚಿವರಾಗಬೇಕಾಗಿತ್ತು. ಆದರೆ ಸಾಧ್ಯವಾಗಿಲ್ಲ. ಹೀಗಾಗಿ ಅವರಿಗೆ ಸಚಿವ ಸ್ಥಾನ ನೀಡುವ ಜೊತೆಗೆ ಮೈಸೂರು ಜಿಲ್ಲಾ ಉಸ್ತುವಾರಿ ಸಚಿವರನ್ನಾಗಿ ನೇಮಕ ಮಾಡಬೇಕೆಂದು ಮನವಿ ಮಾಡಿದ್ದಾರೆ.





ನಂಜನಗೂಡು ವಿಧಾನಸಭಾ ಕ್ಷೇತ್ರದ ಶಾಸಕ ದರ್ಶನ್ ಧ್ರುವನಾರಾಯಣ್ ಸಚಿವರಾಗಿ ಆಯ್ಕೆ ಆದ ಸತೀಶ್ ಜಾರಕಿಹೊಳಿ ಅವರನ್ನು ಅಭಿನಂದಿಸಿದರು. ಈ ವೇಳೆ ಮಾಜಿ ಶಾಸಕ ಕಳಲೆ ಕೇಶವಮೂರ್ತಿ, ವಾಲ್ಮೀಕಿ ಅಭಿವೃದ್ಧಿ ನಿಗಮದ ಮಾಜಿ ಅಧ್ಯಕ್ಷ ಎಸ್.ಸಿ.ಬಸವರಾಜು, ಬ್ಯಾಂಕ್ ನಿರ್ದೇಶಕ ಎಸ್.ಆರ್.ರವಿಕುಮಾರ್ ಉಪಸ್ಥಿತರಿದ್ದರು.



JOB VACANCY

For manufacturing company in hebbal industrial area.


ACCOUNTS EXECUTIVE

- Candidate must be a Commerce Graduate.
- Minimum 3 years of experience in handling all account activities.
(experience in the manufacturing industry is preferred).

Interested candidates are requested to send their CV to the following address
Email: innovativehr589@gmail.com

ಪ್ಲಾಸ್ಟಿಕ್ ಬಳಕೆ ನಿಷೇಧಿಸಿ
ಪರಿಸರವನ್ನು ಕಾಪಾಡಿ

2nd YEAR FOND REMEMBRANCE



Smt. MANISHA JINDAL
W/o PRADEEP KUMAR
26.11.1974 - 24.05.2021

Today is the ANNIVERSARY of the day that we lost you and for a time it felt as though our life has ended too. And though we are full of sadness that you are no longer here, your influence still guides us and we still feel you near. Missing you so much.... And love you more than life..

From your grieving children
BARATH JINDAL & DINKY JINDAL

Kottakkal ayurveda

Vaidyaratnam P.S. Varier's
ARYA VAIDYA SALA, KOTTAKKAL

BRANCH CLINIC & PHARMACY


PDR Atrium, Jayalakshmi Vilas Road
Chamarajapupram, Near Ramaswamy Circle
(Adjacent to Hotel Airlines) MYSURU - 570 005, Karnataka
Tel. 0821-2331062/63 E-mail: mysorebr@aryavaidyasala.com

Open from 9.30 am to 6:00 pm SUNDAY HOLIDAY
Consultation Absolutely Free of Cost

Dr. Ullas K.V. BAMS
Senior Physician & Branch Manager

Consultation Timings
9.30 am to 1 pm & 1.30 pm to 5.30 pm

Facilities
- WhatsApp Video Consultation 0821 233 1063
- Post Covid Treatment
- Swarnabinduprasham for Kids On Every Pushya Nakshatra
- Door Delivery of Medicines
- Post Natal Medication



ಸಹಾಯಕ ನಿರ್ದೇಶಕರು (ಗ್ರೇಡ್-1) ರವರ ಕಛೇರಿ, ಸಮಾಜ ಕಲ್ಯಾಣ ಇಲಾಖೆ

ಮಿನಿವಿಧಾನಸೌಧ, ನಂಜನಗೂಡು ತಾಲ್ಲೂಕು, ಮೈಸೂರು ಜಿಲ್ಲೆ-571301,
Email:tswonanjangud@gmail.com | ದೂರವಾಣಿ ಸಂಖ್ಯೆ: 08221-227876

ಪತ್ರಿಕಾ ಪ್ರಕಟಣೆ

ವಿಷಯ:- ಸರ್ಕಾರಿ ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿ ನಿಲಯ, ನಂಜನಗೂಡು ಟೌನ್-2, ವಿದ್ಯಾರ್ಥಿ ನಿಲಯದ ನಿರ್ವಹಣೆ ಸಂಬಂಧ 100 ವಿದ್ಯಾರ್ಥಿಗಳ ಸಂಖ್ಯಾಬಲಕ್ಕೆ ಕಟ್ಟಡವನ್ನು ಬಾಡಿಗೆಗೆ ನೀಡುವ ಬಗ್ಗೆ.

ಸಹಾಯಕ ನಿರ್ದೇಶಕರು (ಗ್ರೇಡ್-1) ರವರ ಕಛೇರಿ, ಸಮಾಜ ಕಲ್ಯಾಣ ಇಲಾಖೆ, ನಂಜನಗೂಡು ತಾಲ್ಲೂಕು ವ್ಯಾಪ್ತಿಯ ನಂಜನಗೂಡು ಪಟ್ಟಣದಲ್ಲಿ ನಿರ್ವಹಣೆ ಮಾಡಲಾಗುತ್ತಿರುವ ಸರ್ಕಾರಿ ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿ ನಿಲಯ, ನಂಜನಗೂಡು ಟೌನ್ -2, ವಿದ್ಯಾರ್ಥಿ ನಿಲಯದ ನಿರ್ವಹಣೆಗಾಗಿ 100 ವಿದ್ಯಾರ್ಥಿನಿಯರ ವಾಸ್ತವ್ಯಕ್ಕೆ ಅನುಕೂಲ ಇರುವಂತಹ ಅಂದಾಜು 3600 ಚದರ ಅಡಿ ವಿಸ್ತೀರ್ಣದ ಕಟ್ಟಡವನ್ನು ಮಾಸಿಕ ಬಾಡಿಗೆ ಆಧಾರದ ಮೇಲೆ ಪಡೆಯಲು ಅರ್ಜಿ ಆಹ್ವಾನಿಸಿದ್ದು, ನಂಜನಗೂಡು ಪಟ್ಟಣದಲ್ಲಿ ಸ್ವಂತ ಕಟ್ಟಡವನ್ನು ಹೊಂದಿರುವ ಆಸಕ್ತಿಯುಳ್ಳ ಕಟ್ಟಡದ ಮಾಲೀಕರು ದಿನಾಂಕ:23.05.2023 ರಿಂದ ದಿನಾಂಕ:02.06.2023 ರವರೆಗೆ ಈ ಕಛೇರಿಯಿಂದ ಅರ್ಜಿಗಳನ್ನು ಪಡೆದು ದಾಖಲಾತಿಗಳೊಂದಿಗೆ ದಿನಾಂಕ: 02.06.2023 ರಂದು ಮಧ್ಯಾಹ್ನ 2-00 ಗಂಟೆಯೊಳಗೆ ಸಹಾಯಕ ನಿರ್ದೇಶಕರು (ಗ್ರೇಡ್-1) ರವರ ಕಛೇರಿ, ಸ.ಕ.ಇ, ಮಿನಿವಿಧಾನಸೌಧ, ಕೊಠಡಿ ಸಂಖ್ಯೆ:32 ರಲ್ಲಿ ಸಲ್ಲಿಸಬಹುದಾಗಿರುತ್ತದೆ. ಪ್ರಕಟಣೆಗೆ ಸಂಬಂಧಿಸಿದ ಷರತ್ತು, ನಿಬಂಧನೆಗಳು ಹಾಗೂ ವಿವರಗಳನ್ನು ಕಚೇರಿ ವೇಳೆಯಲ್ಲಿ ಸಂಪರ್ಕಿಸಿ ಮಾಹಿತಿಯನ್ನು ತಿಳಿಯಬಹುದಾಗಿದೆ.

ಸಹಿ/- ಸಹಾಯಕ ನಿರ್ದೇಶಕರು (ಗ್ರೇಡ್-1)
ಸಮಾಜ ಕಲ್ಯಾಣ ಇಲಾಖೆ, ನಂಜನಗೂಡು ತಾಲ್ಲೂಕು

ದಿ ಹೆರಿಟೇಜ್‌ಕ್ಲಬ್ (ರಿ)

816/274, 'ಸಿ' ಬ್ಲಾಕ್, ವಿಜಯನಗರ 3ನೇ ಹಂತ, ಮೈಸೂರು–570 030
: 0821-2412377, 95912 28966,
Email: heritageclubmys@gmail.com, www.heritageclubmys.in

ಕ್ಯಾಂಟೀನ್ ಗುತ್ತಿಗೆ ಟೆಂಡರ್ ಪ್ರಕಟಣೆ

ದಿ ಹೆರಿಟೇಜ್ ಕ್ಲಬ್(ರಿ) ಮೈಸೂರು ಇಲ್ಲಿ ವೆಜ್ ಮತ್ತು ನಾನ್‌ವೆಜ್ ಆಹಾರ ಪದಾರ್ಥಗಳನ್ನು ತಯಾರಿಸಿ, ಸರಬರಾಜು ಮಾಡಲು ಹೋಟೆಲ್ ಮತ್ತು ಕ್ಲಬ್‌ಗಳಲ್ಲಿ ಕ್ಯಾಂಟೀನ್ ಗುತ್ತಿಗೆ ನಿರ್ವಹಿಸಿ ಅನುಭವವಿರುವವರಿಂದ ಕ್ಯಾಂಟೀನ್ ನಿರ್ವಹಣೆ ಮಾಡಲು ಟೆಂಡರ್ ಕರೆಯಲಾಗಿದೆ. ಆಸಕ್ತ ವ್ಯಕ್ತಿಗಳು ಪ್ರಕಟಣೆಯ ದಿನಾಂಕದಿಂದ ಏಳು ದಿವಸದೊಳಗಾಗಿ ಕ್ಲಬ್ ಕಛೇರಿಯಲ್ಲಿ ಟೆಂಡರ್ ಸಲ್ಲಿಸುವುದು. ಟೆಂಡರ್‌ಗೆ ಸಂಬಂಧಿಸಿದ ಹೆಚ್ಚಿನ ಮಾಹಿತಿಯನ್ನು ಕ್ಲಬ್ ಕಛೇರಿಯಲ್ಲಿ ಪಡೆಯುವುದು.

ಹೆಚ್.ಆರ್. ಮೂರ್ತಿ
ಕಾರ್ಯದರ್ಶಿ

BADEN POWELL PUBLIC SCHOOL

(Affiliated to the CBSE, New Delhi, Affl No. 830093)
Sri Jayachamarajendra Scouts and Guides Bhavan Campus, Behind D.C. Office, Mysuru-570005
A Project of : Karnataka State Bharath Scouts and Guides City District Trust (R), Mysuru-570005
Website : www.bppschool.ac.in, Email Id : principal@bppschool.ac.in | Ph : 0821-2420160

Dedicated to Excellence Since 1992

BPPS Congratulates its Outstanding Performers ! 100% PASS

Result Highlights : Pass% : 100 | Highest% : 96.8 | Above 90% : 5 | 80 – 90% : 11 | 60 – 80% : 39 | 50 – 60% : 19 | Below 50 - 2



Sishhirra Suresh KHN - 96.8% | Anantha Vishnu P Bhat - 96.6% | S Shreyas 93% | Akshobhya M 92.2% | Abhay Kumar Anand 90.4%
Skandan R Thelkar 89.4% | Anchal V Jain 89% | Pragathi Mondeeri S 88.2% | Monisha Gangadikar L 88% | Sheema Faiza 87.2%
Moksh Jain 86% | Chiranthana A 84.6% | Chethan Kumar 84.4% | Dhruv Singh 82.2% | S Kasturi 80.6% | Latha P Nayak 80.2%

Sri P Vishwanath, Hon. President | Dr. K B Gurumurthy, Hon. Secretary | Sri Abdul Jameel, Hon. Treasurer | Sri Radhakrishnan T M, Principal

